ಮೈಸೂರು ಮಿತ್ರ

ಮೈಸೂರು–ಮಂಡ್ಯ–ಚಾಮರಾಜನಗರ–ಕೊಡಗು–ಹಾಸನ

ಬೆಳಗಿನ ಪ್ರಾದೇಶಿಕ ದಿನಪತ್ರಿಕೆ

ಮಾರ್ಚ್ 4 ಮಂಗಳವಾರ 2025

ಸಂಪುಟ: 45 | ಸಂಚಿಕೆ: 314 | ಪುಟಗಳು: 12

₹4

ಮೈಸೂರು ಸುದ್ದಿ: ದೂರವಾಣಿ: 2496520/21/26/27/28 ಜಾಹೀರಾತು: 2496522/23
ನಗರ ಕಚೇರಿಗಳು: ಕೆ.ಆರ್.ಸರ್ಕಲ್, ವಿಶ್ವೇಶ್ವರಯ್ಯ ಕಟ್ಟಡ Ph: 2431774, ಡಿ.ದೇವರಾಜ ಅರಸು ರಸ್ತೆ, Ph: 2428695
ಸುದ್ದಿ ಜಾಹೀರಾತಿಗಾಗಿ–ಮಂಡ್ಯ: 8762960325, ಚಾಮರಾಜನಗರ: 9242265657, ಕೊಡಗು: 9731469871

ಸುದ್ದಿ, ಫೋಟೋಗೆ: news@mysurumithra.com
ಜಾಹೀರಾತು: ad@mysurumithra.com, website: www.mysurumithra.com



ಬಜೆಟ್ ಅಧಿವೇಶನ ಆರಂಭ

● ಸರ್ಕಾರದ ಕಾರ್ಯವೈಖರಿ ಹಾಡಿ ಹೊಗಳಿದ ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋಟ್ ● ಸರ್ಕಾರದ ಮೇಲಿನ ಭ್ರಷ್ಟಾಚಾರ ಪ್ರಕರಣಗಳ ತನಿಖೆ ತಾರ್ಕಿಕ ಅಂತ್ಯ ಕಾಣುವ ಹಂತದಲ್ಲಿವೆ ● ನೌಕರರ ವರ್ಗಾವಣೆಗೆ ಕೌನ್ಸಿಲಿಂಗ್; ಮಧ್ಯವರ್ತಿ ರಹಿತ ಸವಲತ್ತು ವಿತರಣೆ



ವಿಧಾನಮಂಡಲದ ಉಭಯ ಸದನಗಳ ಸದಸ್ಯರನ್ನು ಉದ್ದೇಶಿಸಿ ಮಾತನಾಡಿದ ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋಟ್

ಬೆಂಗಳೂರು, ಮಾ. 3(ಕೆಎಂಶಿ)–ಸರ್ಕಾರದ ಮಟ್ಟದಲ್ಲಿ ನಡೆದಿದ್ದ ಭ್ರಷ್ಟಾಚಾರ ಪ್ರಕರಣಗಳ ತನಿಖೆಗಳು ತಾರ್ಕಿಕ ಅಂತ್ಯ ಕಾಣುವ ಹಂತಕ್ಕೆ ಬಂದಿವೆ ಎಂದಿರುವ ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋಟ್, ಆಡಳಿತದಲ್ಲಿ ಪಾರದರ್ಶಕತೆ ತರುವಲ್ಲಿ ಕೆಲಸ ಮಾಡುತ್ತಿದೆ ಎಂದು ಹಾಡಿ ಹೊಗಳಿದ್ದಾರೆ.

ವಿಧಾನಮಂಡಲದ ಉಭಯ ಸದನಗಳ ಸದಸ್ಯರನ್ನು ಉದ್ದೇಶಿಸಿ ಮಾತನಾಡಿದ ಅವರು, ಕಳೆದ ಒಂದು ವರ್ಷದಲ್ಲಿ ತಮ್ಮ ಸರ್ಕಾರ ಕೈಗೊಂಡಿರುವ ಕಾರ್ಯಕ್ರಮಗಳನ್ನು ಜನರ ಮುಂದಿಟ್ಟರು. ವಿವಿಧ ಇಲಾಖೆಗಳಲ್ಲಿ ಅಧಿಕಾರ, ನೌಕರರ ವರ್ಗಾವಣೆಗಳಿಗಾಗಿ ಕೌನ್ಸಿಲಿಂಗ್ ವ್ಯವಸ್ಥೆ ಜಾರಿಗೆ ತರುವ ಜೊತೆಗೆ ಸರ್ಕಾರದ ಸವಲತ್ತುಗಳನ್ನು ಮಧ್ಯವರ್ತಿ ರಹಿತವಾಗಿ ನೀಡಲು ಕ್ರಮ ವಹಿಸಲಾಗಿದೆ ಎಂದಿದ್ದಾರೆ. ರಾಜ್ಯದ ಅಭಿವೃದ್ಧಿ ವೇಗ ಚುರುಕುಗೊಳಿಸುವುದರಲ್ಲಿ ಮತ್ತು ಸರ್ಕಾರದ ಹಣಕಾಸು ವ್ಯವಸ್ಥೆ ಇನ್ನಷ್ಟು ಸದೃಢಗೊಳಿಸುವಲ್ಲಿ ನನ್ನ ಸರ್ಕಾರ ಯಶಸ್ವಿಯಾಗಿದೆ ಎಂಬುದನ್ನು ಹೆಮ್ಮೆಯಿಂದ ಹೇಳಲು ಬಯಸುತ್ತೇನೆ.

ಗ್ಯಾರಂಟಿ ಯೋಜನೆಗಳ ಅನುಷ್ಠಾನದಿಂದ ರಾಜ್ಯ ಅಭಿವೃದ್ಧಿಯಲ್ಲಿ ಹಿಂದೆ ಬೀಳುತ್ತದೆ ಮತ್ತು ಹಣಕಾಸು ವ್ಯವಸ್ಥೆ ಹದಗೆಡುತ್ತದೆ ಎಂಬ ಕೆಲವರ ಭವಿಷ್ಯ ಸುಳ್ಳು ಮಾಡಿ ಸರ್ಕಾರದ ಆರ್ಥಿಕ ಪರಿಸ್ಥಿತಿ ಸುಭದ್ರವಾಗಿದೆ ಎಂಬುದನ್ನು ತೋರ್ಪಡಿಸಿದ್ದಾರೆ. ■ 6ನೇ ಪುಟಕ್ಕೆ

ಮೈಸೂರು ವಿಮಾನ ನಿಲ್ದಾಣ ವಿಸ್ತರಣೆ; ಮಡಿಕೇರಿಯಲ್ಲಿ ಭೂಸ್ವಾಧೀನ...

ಮೈಸೂರು ವಿಮಾನ ನಿಲ್ದಾಣ ವಿಸ್ತರಣೆಯನ್ನು 319 ಕೋಟಿ ರೂ. ವೆಚ್ಚದಲ್ಲಿ, ರಾಯಚೂರು ವಿಮಾನ ನಿಲ್ದಾಣವನ್ನು 219 ಕೋಟಿ ರೂ. ವೆಚ್ಚದಲ್ಲಿ ಅಭಿವೃದ್ಧಿಪಡಿಸಲು ಕ್ರಮ ಕೈಗೊಂಡಿದೆ. ಧರ್ಮಸ್ಥಳ, ಮಡಿಕೇರಿ ಮತ್ತು ಚಿಕ್ಕಮಗಳೂರಿನಲ್ಲಿ ವಿಮಾನ ನಿಲ್ದಾಣ ಅಭಿವೃದ್ಧಿಗೆ ಭೂಮಿ ಗುರುತಿಸುವಿಕೆ ಮತ್ತು ಭೂಸ್ವಾಧೀನ ಪ್ರಕ್ರಿಯೆ ಕಾರ್ಯ ನಡೆಯುತ್ತಿದೆ.

ಹಿಂದಿನ ಸರ್ಕಾರಕ್ಕಿಂತ ಕಾಂಗ್ರೆಸ್ ಸರ್ಕಾರದಲ್ಲಿ ಕಮಿಷನ್ ದಂಧೆ ಹೆಚ್ಚಿದೆ

● ಕರ್ನಾಟಕ ಗುತ್ತಿಗೆದಾರರ ಸಂಘದ ಅಧ್ಯಕ್ಷ ಮಂಜುನಾಥ್ ಆರೋಪ ● ಬಾಕಿ ಬಿಲ್ ಪಾವತಿ; ಕಮಿಷನ್ ದಂಧೆಗೆ ಕಡಿವಾಣ ಹಾಕುವಂತೆ ಮುಖ್ಯಮಂತ್ರಿ ಸಿದ್ದರಾಮಯ್ಯರಿಗೆ ದೂರು ● ತಪ್ಪಿದರೆ ರಾಜ್ಯಪಾಲರು, ಎಐಸಿಸಿ ಅಧ್ಯಕ್ಷರಿಗೆ ದೂರು ನೀಡುವ ಎಚ್ಚರಿಕೆ



ಮಂಜುನಾಥ್

ಬೆಂಗಳೂರು, ಮಾ.3(ಕೆಎಂಶಿ)–ಬಾಕಿ ಬಿಲ್ ಪಾವತಿಸಿ, ಕಮಿಷನ್‌ಗೆ ಕಡಿವಾಣ ಹಾಕಿ ಇಲ್ಲದಿದ್ದರೆ, ರಾಜ್ಯಪಾಲರು ಮತ್ತು ಎಐಸಿಸಿ ಅಧ್ಯಕ್ಷರಿಗೆ ದೂರು ನೀಡಬೇಕಾಗುತ್ತದೆ ಎಂದು ಕರ್ನಾಟಕ ಗುತ್ತಿಗೆದಾರರ ಸಂಘ ಇಂದಿಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಎಚ್ಚರಿಕೆ ನೀಡಿದೆ.

ತಮ್ಮ ಬೇಡಿಕೆಗಳಿಗೆ ಸಂಬಂಧಿಸಿದಂತೆ ಗುತ್ತಿಗೆದಾರರ ಸಂಘದ ಪದಾಧಿಕಾರಿಗಳು ಇಂದು ಮಧ್ಯಾಹ್ನ ಮುಖ್ಯಮಂತ್ರಿ ಅವರನ್ನು ಭೇಟಿ ಮಾಡಿ, ಬಾಕಿ ಪಾವತಿಗೆ ಸಂಬಂಧಿಸಿದಂತೆ ಮೂರು ಬೇಡಿಕೆಗಳನ್ನು ಇಟ್ಟಿದ್ದಾರೆ.

ಮುಖ್ಯಮಂತ್ರಿ ಭೇಟಿ ನಂತರ ಸುದ್ದಿಗಾರರೊಂದಿಗೆ ಮಾತನಾಡಿದ ಸಂಘದ ಅಧ್ಯಕ್ಷ ಮಂಜುನಾಥ್, ಕಳೆದ ಸರ್ಕಾರಕ್ಕಿಂತ ಕಾಂಗ್ರೆಸ್ ■ 6ನೇ ಪುಟಕ್ಕೆ

ಅವರೇಳಿದಷ್ಟು ಆಗಲ್ಲ; ಒಂದಷ್ಟು ಬಾಕಿ ಕೊಡ್ತೇನೆ

ಯಾರಿಗಾದರೂ ದೂರು ಕೊಡಲಿ...



ಗುತ್ತಿಗೆದಾರರ ಅಧ್ಯಕ್ಷರ ಭೇಟಿ ನಂತರ ಸುದ್ದಿಗಾರರೊಂದಿಗೆ ಮಾತನಾಡಿದ ಮುಖ್ಯಮಂತ್ರಿ, ಅವರು ಹೇಳಿದಂತೆ ಹಣ ಬಿಡುಗಡೆ ಸಾಧ್ಯವಿಲ್ಲ. ರಾಜ್ಯದ ಆರ್ಥಿಕ ಪರಿಸ್ಥಿತಿ ನೋಡಿಕೊಂಡು ಒಂದಷ್ಟು ಹಣ ಬಿಡುಗಡೆ ಮಾಡಲಾಗುವುದು. ಬಜೆಟ್ ಮಂಡನೆ ನಂತರ ಸಮಸ್ಯೆ ಪರಿಹರಿಸುವುದಾಗಿ ತಿಳಿಸಿದ್ದೇನೆ. ಅವರು ನೀಡಿರುವ ಗಡುವಿನಲ್ಲಿ 15,000 ಕೋಟಿ ರೂ. ನೀಡಲು ಸಾಧ್ಯವಿಲ್ಲ ■ 6ನೇ ಪುಟಕ್ಕೆ





ಗಾಲ್ಫ್ ಕ್ಲಬ್‌ನಲ್ಲಿ ಅಕ್ರಮವಾಗಿ ಕಟ್ಟಡ ನಿರ್ಮಾಣ; ಕಾನೂನು ಕ್ರಮಕ್ಕೆ ಎಂಆರ್‌ಸಿ ನಿರ್ಧಾರ



ನಿಯಮಾವಳಿ ಉಲ್ಲಂಘಿಸಿ ಗಾಲ್ಫ್ ಕ್ಲಬ್‌ನಲ್ಲಿ ನಿರ್ಮಾಣವಾಗುತ್ತಿರುವ ಕಟ್ಟಡ.

ಮೈಸೂರು, ಮಾ.3– ಮೈಸೂರು ರೇಸ್ ಕ್ಲಬ್ (ಎಂಆರ್‌ಸಿ) ಅಧೀನದಲ್ಲಿ ಬರುವ ಜಯಚಾಮರಾಜ ಒಡೆಯರ್ ಗಾಲ್ಫ್ ಕ್ಲಬ್(ಜೆಡಬ್ಲ್ಯೂಜಿಸಿ)ನಲ್ಲಿ ನಿಯಮಾವಳಿ ಧಿಕ್ಕರಿಸಿ ಕಟ್ಟಡ ನಿರ್ಮಾಣ ಸಂಬಂಧ ಕಾನೂನು ಕ್ರಮ ಕೈಗೊಳ್ಳುವುದಾಗಿ ಮೈಸೂರು ರೇಸ್‌ಕ್ಲಬ್ ಅಧ್ಯಕ್ಷ ಜಿ. ವೆಂಕಟೇಶ್ ತಿಳಿಸಿದ್ದಾರೆ.



ಜಿ. ವೆಂಕಟೇಶ್

ಗಾಲ್ಫ್ ಆಟಗಾರರ ಅನುಕೂಲಕ್ಕಾಗಿ, ಹಾಲಿ ಇರುವ ಶೌಚಾಲಯ ಕಟ್ಟಡ ಶಿಥಿಲಗೊಂಡಿದ್ದು, ಅದರ ನವೀಕರಣ ಮಾಡುವುದಾಗಿ ಹೇಳಿ ಬಳಿಕ, ಹಳೆಯ ಕಟ್ಟಡವನ್ನು ಬಹುತೇಕ ಕೆಡುವಿ ಹಾಕಿ, ಹೊಸದಾಗಿ ಎರಡು ಮಹಡಿಯ ಕಟ್ಟಡವನ್ನು ನಿಯಮಾವಳಿಗಳನ್ನು ಧಿಕ್ಕರಿಸಿ ನಿರ್ಮಿಸಲಾಗಿದೆ.

ಲೋಕೋಪಯೋಗಿ (ಪಿಡಬ್ಲ್ಯೂಡಿ) ಇಲಾಖೆ ಇದಕ್ಕೆ ಅನುಮೋದನೆ ನೀಡಿದ್ದರೂ, ಕಟ್ಟಡ ನಿರ್ಮಾಣಕ್ಕೆ ಸಂಬಂಧಿಸಿದಂತೆ ಮೈಸೂರು ಮಹಾನಗರ ಪಾಲಿಕೆಯ ಅನುಮತಿ ಅವಶ್ಯವಾಗಿದೆ. ಆದರೆ, ಪಾಲಿಕೆ ಅನುಮತಿ, ನಕ್ಷೆ ಅನುಮೋದನೆಯೂ ಇಲ್ಲದೆ ಕಟ್ಟಡ ನಿರ್ಮಾಣ ಮಾಡುತ್ತಿರುವುದು ಕಾನೂನು ಧಿಕ್ಕರಿಸಿದಂತಾಗಿದೆ. ಈ ಸಂಬಂಧ ಜಿಲ್ಲಾಧಿಕಾರಿಗಳು ಹಾಗೂ ಮೈಸೂರು ಮಹಾನಗರ ಪಾಲಿಕೆಯ ಆಯುಕ್ತರ ಗಮನಕ್ಕೂ ತರಲಾಗಿದೆ.

ಅಲ್ಲದೆ, ಇಂತಹ ಕಾನೂನುಬಾಹಿರ ಕಟ್ಟಡ ನಿರ್ಮಾಣದ ವಿರುದ್ಧ ಮೈಸೂರು ನ್ಯಾಯಾಲಯದಲ್ಲಿ ತಡೆಯಾಜ್ಞೆ ಕೋರಿ ಅರ್ಜಿ ಸಲ್ಲಿಸಲಾಗಿದೆ. ಮಾ.14ಕ್ಕೆ ಅದರ ಮುಂದಿನ ವಿಚಾರಣೆ ನಡೆಯಲಿದೆ ಎಂದು ವೆಂಕಟೇಶ್ 'ಮೈಸೂರು ಮಿತ್ರ' ನಿಗೆ ತಿಳಿಸಿದ್ದಾರೆ.

ಲೋಕೋಪಯೋಗಿ ಇಲಾಖೆ, ಮೈಸೂರು ರೇಸ್ ಕ್ಲಬ್‌ಗೆ ಈ ಜಾಗವನ್ನು ಗುತ್ತಿಗೆ ನೀಡಿದ್ದು, ಗುತ್ತಿಗೆ ಕರಾರಿನಲ್ಲಿ ಗಾಲ್ಫ್ ಆಟಕ್ಕೆ ಉತ್ತೇಜನ ಹಾಗೂ ಅನುಕೂಲ ಮಾಡಿಕೊಡಬೇಕು ಎಂದು ಹೇಳಲಾಗಿತ್ತು. ಅದರಂತೆ ಮೈಸೂರು ರೇಸ್ ಕ್ಲಬ್, ಗಾಲ್ಫ್ ಆಡುವುದಕ್ಕೆ ಅವಕಾಶ ಮಾಡಿಕೊಟ್ಟಿದೆ. ಜೊತೆಗೆ ಮೂಲ ಸೌಕರ್ಯಕ್ಕೆ ಅವಕಾಶ ಕಲ್ಪಿಸಿದೆ. ಇದುವರೆಗೆ ಆಸ್ತಿ ತೆರಿಗೆ, ಲೋಕೋಪಯೋಗಿ ಇಲಾಖೆಗೆ ಬಾಡಿಗೆ, ವಿದ್ಯುತ್ ಶುಲ್ಕ ಇವೆಲ್ಲವನ್ನೂ ಎಂಆರ್‌ಸಿಯೇ ಭರಿಸುತ್ತಾ ಬಂದಿದೆ. ಇಷ್ಟಾದರೂ ರಾಜಕೀಯ ಪ್ರಭಾವ ಬಳಸಿ ಗಾಲ್ಫ್ ಕ್ಲಬ್‌ನವರು ನಿಯಮ ಬಾಹಿರವಾಗಿ ಕಟ್ಟಡ ನಿರ್ಮಾಣ ಮಾಡುತ್ತಿರುವುದು ಸರಿಯಲ್ಲ ಎಂದು ಅವರು ಅಭಿಪ್ರಾಯಪಟ್ಟರು.

"ಮೈಸೂರಿನ ಜಯಚಾಮರಾಜ ಒಡೆಯರ್ ಗಾಲ್ಫ್‌ಕ್ಲಬ್‌ನಲ್ಲಿ ಕಟ್ಟಡ ನಿರ್ಮಾಣ ಸಂಬಂಧ ಉನ್ನತ ಮಟ್ಟ (ಹೈ ಲೆವೆಲ್) ದಲ್ಲಿ ಮಾತುಕತೆ ಆಗಿದೆ. ಸರ್ಕಾರದ ಮಟ್ಟದಲ್ಲಿ ಕಾನೂನಾತ್ಮಕವಾಗಿ ಪತ್ರ ವ್ಯವಹಾರವೂ ಆಗಿದೆ. ಈ ಕಟ್ಟಡ ನಿರ್ಮಾಣ ಮಾಡಿರುವ ಬಗ್ಗೆ ಯಾವುದೇ ವಿವಾದವಿಲ್ಲ. ಮೈಸೂರು ರೇಸ್ ಕ್ಲಬ್ ಹಾಗೂ ಗಾಲ್ಫ್ ಕ್ಲಬ್‌ನವರು ಒಟ್ಟಾಗಿ ಲೋಕೋಪಯೋಗಿ ಇಲಾಖೆಯ ಪೂರ್ವಾನುಮತಿ ಪಡೆದೆ ಕಟ್ಟಡ ನಿರ್ಮಿಸಿದ್ದಾರೆ.

-ಹರೀಶ್, ಎಕ್ಸಿಕ್ಯೂಟಿವ್ ಇಂಜಿನಿಯರ್(ಬಿಲ್ಡಿಂಗ್ ವಿಭಾಗ), ಲೋಕೋಪಯೋಗಿ ಇಲಾಖೆ

"ಮೈಸೂರು ನಗರ ಪಾಲಿಕೆ ಆಯುಕ್ತನಾಗಿ ಇತ್ತೀಚಿಗೆ ಅಧಿಕಾರ ಸ್ವೀಕಾರ ಮಾಡಿರುವೆ. ಗಾಲ್ಫ್‌ಕ್ಲಬ್‌ನಲ್ಲಿ ಯಾವ ಕಟ್ಟಡ ನಿರ್ಮಿಸಿದ್ದಾರೆ, ಅದರ ವಿಚಾರವೇನು ಎಂಬ ಬಗ್ಗೆ ಸದ್ಯಕ್ಕೆ ನನಗೆ ಮಾಹಿತಿ ಇಲ್ಲ. ಈ ಬಗ್ಗೆ ಸಂಬಂಧಿಸಿದ ಅಧಿಕಾರಿಗಳಿಂದ ಮಾಹಿತಿ ಪಡೆದು ನಾಳೆ ವಿವರ ನೀಡುವೆ.

-ಶೇಕ್ ತನ್ವೀರ್ ಆಸೀಫ್, ಮೈಸೂರು ನಗರಪಾಲಿಕೆ ಆಯುಕ್ತ, ಮೈಸೂರು.

ಕಂಡಕಂಡಲ್ಲಿ ಬೆಂಕಿ ಹೊತ್ತಿಸುವವರ ವಿರುದ್ಧ ಕಾನೂನು ಕ್ರಮಕ್ಕೆ ಡಿಸಿಗೆ ಅರಣ್ಯ ಇಲಾಖೆ ಪತ್ರ

ಮೈಸೂರು, ಮಾ.3(ಆರ್‌ಕೆ)– ಕಳೆದ ಒಂದು ತಿಂಗಳಿಂದ ಬಿಸಿಲಿನ ತಾಪಮಾನ ಹೆಚ್ಚಾಗಿ ಈ ಬೇಸಿಗೆಯಲ್ಲಿ ಕಸದ ರಾಶಿ, ಒಣಗಿದ ಹುಲ್ಲು ಹಾಗೂ ಇನ್ನಿತರ ತ್ಯಾಜ್ಯಗಳಿಗೆ ಬೆಂಕಿ ಹೊತ್ತಿಸುವುದು ಕಾನೂನು ಪ್ರಕಾರ ಅಪರಾಧವಾಗಿದೆ.

ಇತ್ತೀಚೆಗೆ ಮೈಸೂರು ನಗರ ಮತ್ತು ಜಿಲ್ಲೆಯಾದ್ಯಂತ ತಾಪಮಾನ ತಾರಕಕ್ಕೇರಿದ್ದು, ಕಳೆದ 15 ದಿನದ ಹಿಂದಷ್ಟೇ ಚಾಮುಂಡಿಬೆಟ್ಟದ ಅರಣ್ಯ ಪ್ರದೇಶಕ್ಕೆ ಬೆಂಕಿ ಬಿದ್ದು, ಹತ್ತಾರು ಎಕರೆ ಪ್ರದೇಶದ ಗಿಡ ಮರಗಳು ಹಾಗೂ ಹುಲ್ಲಿನ ಪೊದೆಗಳು ಮತ್ತು ಸಣ್ಣಪುಟ್ಟ ಕ್ರಿಮಿ ಕೀಟಗಳು ನಾಶವಾಗಿದ್ದನ್ನು ಗಂಭೀರವಾಗಿ ಪರಿಗಣಿಸಿರುವ ಅರಣ್ಯ ಇಲಾಖೆ ಅಧಿಕಾರಿಗಳು ಈ ರೀತಿ ಕಂಡಕಂಡಲ್ಲಿ ಬೆಂಕಿ ಹೊತ್ತಿಸುವವರ ವಿರುದ್ಧ ಕಾನೂನು ರೀತಿಯ ಕ್ರಮ ಕೈಗೊಳ್ಳುವಂತೆ ಮೈಸೂರು ಜಿಲ್ಲಾಧಿಕಾರಿಗಳಿಗೆ ಪತ್ರ ಬರೆದಿದ್ದಾರೆ.

ಇತ್ತೀಚೆಗಷ್ಟೇ ವಿದ್ಯಾರಣ್ಯಪುರಂನ ಸೀವೇಜ್ ಫಾರಂನಲ್ಲೂ ಬೆಂಕಿ ಕಾಣಿಸಿಕೊಂಡು ನೂರಾರು ಎಕರೆ ಒಣಗಿದ ತ್ಯಾಜ್ಯ ನಾಶವಾಗಿ, ಅದರಿಂದ ಹೊರಬಂದ ಹೊಗೆಯಿಂದಾಗಿ ವಿದ್ಯಾರಣ್ಯಪುರಂ, ಗುಂಡೂರಾವ್‌ನಗರ, ಗೌರಿಶಂಕರನಗರ, ಬಂಡೀಪಾಳ್ಯ ಸೇರಿದಂತೆ ಸುತ್ತಲಿನ ನಿವಾಸಿಗಳಿಗೆ ಆರೋಗ್ಯದ ಸಮಸ್ಯೆಗಳು ಕಾಣಿಸಿಕೊಂಡಿದ್ದವು. ಅಲ್ಲದೆ ರಿಂಗ್ ರಸ್ತೆ, ದೊಡ್ಡ ದೊಡ್ಡ ಖಾಲಿ ನಿವೇಶನಗಳು ಹಾಗೂ ರಸ್ತೆಬದಿಯಲ್ಲಿ ಅನಧಿಕೃತವಾಗಿ ಸುರಿಯುವ ಕಸದ ರಾಶಿಗೂ ಕಿಡಿಗೇಡಿಗಳು ಬೆಂಕಿ ಹೊತ್ತಿಸುತ್ತಿರುವುದರಿಂದ ಸುತ್ತಮುತ್ತಲಿನ ನಿವಾಸಿಗಳಿಗೆ ಅಪಾಯ ತಂದೊಡ್ಡುವುದಲ್ಲದೆ, ಪರಿಸರವೂ ಮಲಿನವಾಗುತ್ತಿರುವುದು ಕಂಡುಬಂದಿದೆ.

ಬೆಂಕಿ ಕಾಣಿಸಿಕೊಂಡ ಮಾಹಿತಿ ತಿಳಿಯುತ್ತಿದ್ದಂತೆಯೇ ಅಗ್ನಿಶಾಮಕ ದಳದ ಸಿಬ್ಬಂದಿ ಸ್ಥಳಕ್ಕೆ ಧಾವಿಸಿ, ಕಾರ್ಯಾಚರಣೆ ನಡೆಸಿ ಬೆಂಕಿ ನಂದಿಸುವ ಕಾರ್ಯ ನಡೆಸುತ್ತಾರೆ. ಬೇಸಿಗೆ ಕಾಲದಲ್ಲಿ ಅರಣ್ಯ ಪ್ರದೇಶ, ಒಣಗಿದ ಹುಲ್ಲುಗಾವಲುಗಳಲ್ಲದೆ ನಗರ ಪ್ರದೇಶಗಳಲ್ಲೂ ಅಲ್ಲಲ್ಲಿ ಆಗಿಂದಾಗ್ಗೆ ಬೆಂಕಿ ಆಕಸ್ಮಿಕಗಳು ಸಂಭವಿಸುತ್ತಿರುವುದರಿಂದ ಮೈಸೂರು ನಗರ ಮತ್ತು ಜಿಲ್ಲೆಯಾದ್ಯಂತ ಇರುವ ಅಗ್ನಿಶಾಮಕ ಠಾಣೆ ಸಿಬ್ಬಂದಿ ಎಚ್ಚರದಿಂದಿದ್ದು, ವಾಹನಗಳು ಹಾಗೂ ಸಲಕರಣೆಗಳನ್ನು ಸುಸ್ಥಿತಿಯಲ್ಲಿ ನಿರ್ವಹಣೆ ಮಾಡಿ ಬೆಂಕಿ ನಂದಿಸುವ ಕಾರ್ಯಾಚರಣೆ ಮಾಡಬೇಕಾಗುತ್ತದೆ.



> "ಸಾಮಾನ್ಯವಾಗಿ ಬೇಸಿಗೆ ಕಾಲದಲ್ಲಿ ಹೆಚ್ಚು ಬೆಂಕಿ ಅವಘಡಗಳು ಸಂಭವಿಸುತ್ತವೆ. ನಾವು ದಿನದ 24 ಗಂಟೆಯೂ ಕಟ್ಟೆಚ್ಚರದಿಂದಿದ್ದು, ಆ ರೀತಿಯ ದೂರವಾಣಿ ಕರೆಗಳು ಬಂದ ತಕ್ಷಣ ಬೆಂಕಿ ನಂದಿಸುವ ವಾಹನ ಹಾಗೂ ಸಲಕರಣೆಗಳೊಂದಿಗೆ ಸ್ಥಳಕ್ಕೆ ತೆರಳಿ ಕಾರ್ಯಾಚರಣೆ ಮಾಡುವ ಮೂಲಕ ಬೆಂಕಿ ಕೆನ್ನಾಲಿಗೆ ಇತರ ಸ್ಥಳಗಳಿಗೆ ಹರಡದಂತೆ ತಡೆಯುತ್ತೇವೆ. ಆದರೆ ಬಹುತೇಕ ಜನರೇ ಕೆಲವು ಒಣಗಿದ ಪ್ರದೇಶಗಳಿಗೆ ಬೆಂಕಿ ಹೊತ್ತಿಸುವುದರಿಂದ ಇಂತಹ ಅವಘಡಗಳು ಸಂಭವಿಸುತ್ತಿರುವುದು ಇತ್ತೀಚೆಗೆ ಕಂಡುಬರುತ್ತಿದೆ. ಆದ್ದರಿಂದ ಸಾರ್ವಜನಿಕರು ಈ ಕುರಿತು ಹೆಚ್ಚಿನ ಜಾಗೃತವಾಗಿರಬೇಕು. ಯಾವುದೇ ಕಾರಣಕ್ಕೂ ರಸ್ತೆಬದಿ ಕಸದ ರಾಶಿ ಹುಲ್ಲಿನ ಮೆದೆ, ಅರಣ್ಯ ಪ್ರದೇಶ ಅಥವಾ ಜಮೀನುಗಳಲ್ಲಿ ಬೆಳೆದು ನಿಂತ ಕಬ್ಬು ಹಾಗೂ ಇನ್ನಿತರ ಬೆಳೆಗಳಿಗೆ ಬೆಂಕಿ ಹೊತ್ತಿಸುವುದನ್ನು ತಡೆಯಬೇಕು. **–ಗುರುರಾಜ್, ಜಿಲ್ಲಾ ಅಗ್ನಿಶಾಮಕ ಅಧಿಕಾರಿ**

> "ಆಕಸ್ಮಿಕವಾಗಿ ಬೆಂಕಿ ತಗುಲುವುದಕ್ಕಿಂತ ಜನರೇ ಕೆಲವು ಒಣಗಿದ ಪ್ರದೇಶ, ಕಾಡು, ರೈತರ ಜಮೀನುಗಳು ಹಾಗೂ ಇತರ ಸ್ಥಳಗಳಿಗೆ ಗೊತ್ತಿದ್ದೂ ಬೆಂಕಿ ಹಚ್ಚುವುದರಿಂದ ಸಂಭವಿಸುವ ಅವಘಡಗಳೇ ಹೆಚ್ಚಾಗುತ್ತಿದೆ. ಬೆಂಕಿ ಅವಘಡಗಳಿಂದಾಗಿ ಮನುಷ್ಯ ಮತ್ತು ಪ್ರಾಣಿಗಳ ಜೀವಕ್ಕೆ ಹಾನಿಯಾಗುವುದಲ್ಲದೆ, ಕಾಡಿನ ಅರಣ್ಯ ಸಂಪತ್ತು ನಾಶವಾಗುತ್ತದೆ. ಅಲ್ಲದೆ, ಬೆಂಕಿಯಿಂದ ಉಂಟಾಗುವ ದಟ್ಟ ಹೊಗೆಯಿಂದಾಗಿ ಪರಿಸರ ಹಾನಿಯಾಗುವುದಲ್ಲದೆ, ಮನುಷ್ಯರು ಮತ್ತು ಪ್ರಾಣಿಗಳ ಆರೋಗ್ಯಕ್ಕೂ ತೊಂದರೆಯಾಗುತ್ತದೆಯಾದ್ದರಿಂದ ಸಾರ್ವಜನಿಕರು ಇಂತಹ ತ್ಯಾಜ್ಯಗಳಿಗೆ ಬೆಂಕಿ ಹೊತ್ತಿಸುವುದರ ಬಗ್ಗೆ ಜಾಗೃತಿಯಿಂದಿದ್ದು, ಇತರರಿಗೂ ತಿಳುವಳಿಕೆ ಮೂಡಿಸಬೇಕು. ಒಂದು ವೇಳೆ ಬೆಂಕಿ ಹೊತ್ತಿಸುತ್ತಿರುವುದು ಸಿಸಿ ಕ್ಯಾಮರಾಗಳಿಂದ ಹಾಗೂ ಇನ್ನಿತರ ಸಾಕ್ಷಿಗಳಿಂದ ಕಂಡುಬಂದಲ್ಲಿ ಅಂತಹವರ ವಿರುದ್ಧ ಪ್ರಕರಣ ದಾಖಲಿಸಿ ಕಾನೂನು ರೀತಿಯ ಕ್ರಮ ಜರುಗಿಸಬೇಕಾಗುತ್ತದೆ. **–ಡಾ.ರಮೇಶ್‌ಕುಮಾರ್, ಮೈಸೂರು ವಿಭಾಗದ ಹುಲಿ ಯೋಜನೆ ನಿರ್ದೇಶಕ**

ಸಿದ್ದರಾಮಯ್ಯ ಇರೋವರೆಗೂ ಅವರ ಸ್ಥಾನ ಕಿತ್ತುಕೊಳ್ಳುವುದು ಕಷ್ಟ

ಗದಗ: ಸಿದ್ದರಾಮಯ್ಯ ಇರೋವರೆಗೂ ಅವರ ಸ್ಥಾನ ಕಿತ್ತುಕೊಳ್ಳುವುದು ಕಷ್ಟ, ಹಾಲುಮತ ಸಮಾಜಕ್ಕೆ ಅಧಿಕಾರ ಬಂದರೆ ಸುಲಭವಾಗಿ ಕಿತ್ತುಕೊಳ್ಳಲು ಆಗುವುದಿಲ್ಲ ಎಂದು ಕೋಡಿಮಠದ ಶಿವಾನಂದ ಶಿವಯೋಗಿ ರಾಜೇಂದ್ರ ಸ್ವಾಮೀಜಿ ಭವಿಷ್ಯ ನುಡಿದಿದ್ದಾರೆ.



ಕೋಡಿಮಠ ಶ್ರೀ

ಗದಗನಲ್ಲಿ ಮಾಧ್ಯಮಗಳ ಜೊತೆ ಮಾತನಾಡಿದ ಅವರು, ನಾವು ಹೇಳಿದ್ದು ಕೇವಲ ವ್ಯಕ್ತಿಯ ಚಿಂತನೆ ಅಲ್ಲ, ಸಮಗ್ರ ಭವಿಷ್ಯದ ಚಿಂತನೆ. ವಿಜಯನಗರ ಸಾಮ್ರಾಜ್ಯವನ್ನು ಕಟ್ಟಿದವರು ಹಕ್ಕಬುಕ್ಕರು. ಇವತ್ತಿಗೂ ವಿಜಯನಗರ ಸಾಮ್ರಾಜ್ಯದ ಹೆಸರು ಚಿರಸ್ಥಾಯಿಯಾಗಿದೆ. ಆ ಸಾಮ್ರಾಜ್ಯ ಕೊಡುಗೆ, ನೆನಪು, ಮೈಸೂರು ದಸರಾ ವಿಜಯನಗರ ಸಾಮ್ರಾಜ್ಯದ ಅರಸರುಗಳ ಕೊಡುಗೆ ಅಪಾರ. ಹಕ್ಕ–ಬುಕ್ಕರು ಹಾಲುಮತ ಸಮಾಜದವರು. ಆ ಸಮಾಜಕ್ಕೆ ಅಧಿಕಾರ ಬಂದರೆ ಸುಲಭವಾಗಿ ಕಿತ್ತುಕೊಳ್ಳಲು ಆಗುವುದಿಲ್ಲ ಎಂದರು.

ಸಮಾಜದ ಮೇಲೆ, ರಾಜ್ಯದ ಮೇಲೆ ಒಳ್ಳೆ ಕೆಲಸ ಮಾಡುವ ಜನರಿಗೆ ಕೆಡುಕು ಆಗುವುದು ಕಷ್ಟ, ಆ ದೃಷ್ಟಿಯಿಂದ ಹಾಲುಮತ ಸಮಾಜದ ಸಿದ್ದರಾಮಯ್ಯನವರು ರಾಜ್ಯದ ಅಧಿಕಾರದಲ್ಲಿ ಇದ್ದಾರೆ. ಅವರಿಂದ ಅಧಿಕಾರ ಕಿತ್ತುಕೊಳ್ಳೋದು ಕಷ್ಟ, ವಿಜಯನಗರ ಸಾಮ್ರಾಜ್ಯದ ಉದಾಹರಣೆ ಇಟ್ಟು ಸಾಮಾನ್ಯ ಭವಿಷ್ಯ ಜ್ಞಾನವನ್ನ ಹೇಳಿದ್ದೇನೆ. ಬೇರೆಯವರು ಅದನ್ನೆಲ್ಲಾ ಮಾಡಿಲ್ಲ ಅಂತಾ ಅಲ್ಲ. ಬೇರೆ ಸಮಾಜದವರೂ ಮಾಡಿದ್ದಾರೆ. ಆ ಸಮಾಜದ ಬಗ್ಗೆ ನಮಗೆ ಬೇರೆ ಅಭಿಪ್ರಾಯ ಇಲ್ಲ ಎಂದು ಹೇಳಿದರು. ಸಿದ್ದರಾಮಯ್ಯ 5 ವರ್ಷ ಆಳಿದ್ದಾರೆ. ಯಾರೂ ಅವರ ಸ್ಥಾನ ಕಿತ್ತುಕೊಳ್ಳಲು ಆಗಲಿಲ್ಲ. ಅಲ್ಲಾಳರೊಂಭತ್ತು ಪಟ್ಟ, ಗೊಲ್ಲಾಳರೊಂಭತ್ತು ಪಟ್ಟ, ಅಲ್ಲಾಳ, ಗೊಲ್ಲಾಳ, ಬಲ್ಲಾಳ ಅಂತಾ ಕರೆಯುತ್ತಾರೆ. ಅಲ್ಲಾಳರಾದ ಮಹಮ್ಮದೀಯರು ಈ ದೇಶವನ್ನು 9 ಪಟ್ಟ ಆಳಿದರು. ಬಲ್ಲಾಳರು ಅಂದ್ರೆ ಪಾಳೇಗಾರರು, ಪಾಳೆಪಟ್ಟುಗಳು ಎಲ್ಲರೂ 9 ಪಟ್ಟ ಆಳಿದರು. ಗೊಲ್ಲಾಳರು ಅಂದ್ರೆ ಯದು ವಂಶಸ್ಥರು. ಮೈಸೂರು ಒಡೆಯರು ಇವರೂ 9 ಪಟ್ಟ ಆಳಿದರು. ನಂತರ ಪ್ರಜಾಪ್ರಭುತ್ವದ ಪಟ್ಟ ಬಂತು ಎಂದು ತಿಳಿಸಿದರು.

ಇವತ್ತಿನ ರಾಜಕೀಯ ಚಿಂತನೆ ಮಾಡುವುದಾದರೆ ಸಿದ್ದರಾಮಯ್ಯ ಇರೋವರೆಗೂ ಅವರ ಸ್ಥಾನ ಕಿತ್ತುಕೊಳ್ಳುವುದು ಕಷ್ಟ. ಅವರಿಗೆ ಸಾಮಾಜಿಕ, ಧಾರ್ಮಿಕ ಹಿನ್ನೆಲೆ ದೃಷ್ಟಿಯಿಂದ ಹೇಳಿದ್ದೇವೆ ಹೊರತು ಡಿಕೆಶಿ ಬಗ್ಗೆ, ವೀರಪ್ಪ ಮೊಯ್ಲಿ ಬಗ್ಗೆ ಒಳ್ಳೆ ಅಭಿಪ್ರಾಯವಿದ್ದು ನಮಗೆ ಅವರೂ ಬೇಕಾದವರು ಎಂದರು.

ನಮ್ಮ ಭಾರತೀಯ ಪರಂಪರೆಯಲ್ಲಿ ಸಂಕ್ರಾಂತಿ ಭವಿಷ್ಯ ಹಾಗೂ ಯುಗಾದಿ ಭವಿಷ್ಯ ಅಂತಾರೆ. ಚಂದ್ರನನ್ನು ಆಧಾರವಾಗಿಟ್ಟುಕೊಂಡು ಯುಗಾದಿ ಮೇಲೆ ಮಳೆ, ಬೆಳೆ, ಧಾನ್ಯಗಳು, ರಾಜರ ಬದಲಾವಣೆ, ಯುದ್ಧ ಭೂಮಿ ಎಲ್ಲಾ ಹೇಳ್ತಾರೆ. ಆವಾಗ ಅದನ್ನು ನೋಡಿಕೊಳ್ಳಬೇಕು ಅಂತಾ ನಾನು ಹೇಳಿದ್ದೇನೆ. ಒಕ್ಕಲಿಗರು ಅಂದರೆ ಅನ್ನದಾತರು ಎಂದರ್ಥ ಅವರನ್ನ ಜಗತ್ತೇ ಮರೆಯೋದಿಲ್ಲ. ಇದಕ್ಕೆ ಜಾತಿ ಲೇಪನ ಹಚ್ಚೋದು ಬೇಡ ಒಕ್ಕಲಿಗ ಸಮಾಜಕ್ಕೆ ಜಗತ್ತೇ ಬಾಗಬೇಕು ಎದು ಹೇಳಿದರು.

ರಾಷ್ಟ್ರ ರಾಜಕಾರಣದಲ್ಲಿ ಸುನಾಮಿ ಆಗುತ್ತದೆ. ರಾಷ್ಟ್ರ ರಾಜಕಾರಣದಲ್ಲಿ ರಾಜಕೀಯ ಸುನಾಮಿಯಾಗುವ ಲಕ್ಷಣಗಳು ಬಹಳ ಇದ್ದಾವೆ. ರಾಜ್ಯಕ್ಕೆ ಮಳೆ, ಬೆಳೆ ಕೊರತೆ ಇಲ್ಲ. ಆದ್ರೆ ಪ್ರಕೃತಿ ದೋಷಗಳು, ಹಿಮಪಾತ, ಭೂಕಂಪ, ಸುನಾಮಿಗಳಂತಹ ಘಟನೆಗಳು ನಡೆಯುತ್ತವೆ ಎಂದರು. ಸಿದ್ದರಾಮಯ್ಯ ಅವರು ಐದು ವರ್ಷ ಅಧಿಕಾರ ಪೂರ್ಣಗೊಳಿಸುತ್ತಾರಾ ಎಂಬ ಪ್ರಶ್ನೆಗೆ, ನಾನು ಊರಿಗೆ ಹೋಗಬೇಕಪ್ಪ ಇಲ್ಲಿಂದ ಎಂದು ತಿಳಿಸಿ ತೆರಳಿದರು.

ಎರಡನೇ ದಿನ ದ್ವಿತೀಯ ಪಿಯು ಪರೀಕ್ಷೆಗೆ 459 ಮಂದಿ ಗೈರು

ಮೈಸೂರು, ಮಾ.3(ಆರ್‌ಕೆ)– ಇಂದು ನಡೆದ ದ್ವಿತೀಯ ಪಿಯು ಪರೀಕ್ಷೆ ಗಣಿತ, ವ್ಯವಹಾರ ಅಧ್ಯಯನ ಮತ್ತು ಶಿಕ್ಷಣ ಶಾಸ್ತ್ರ ವಿಷಯದ ಪರೀಕ್ಷೆಗೆ 459 ಮಂದಿ ವಿದ್ಯಾರ್ಥಿಗಳು ಗೈರು ಹಾಜರಾಗಿದ್ದರು.

ಮೈಸೂರು ನಗರದ 27 ಸೇರಿದಂತೆ ಜಿಲ್ಲೆಯಾದ್ಯಂತ 50 ಕೇಂದ್ರಗಳಲ್ಲಿ ಪರೀಕ್ಷೆಗಳು ಸುಲಲಿತವಾಗಿ ನಡೆದಿದ್ದು, ಒಟ್ಟು ನೋಂದಾವಣಿಯಾಗಿದ್ದ 26,330 ವಿದ್ಯಾರ್ಥಿಗಳ ಪೈಕಿ 25,864 ಮಂದಿ ಹಾಜರಾದರೆ, 459 ಮಂದಿ ಗೈರಾದರು. ಗಣಿತ ವಿಷಯದಲ್ಲಿ 14,200 ಮಂದಿ ಪೈಕಿ 14,058 ಮಂದಿ ಹಾಜರಾಗಿ ಪರೀಕ್ಷೆ ಬರೆದಿದ್ದು, 135 ಮಂದಿ ಗೈರಾದರು. ಅದೇ ರೀತಿ ವ್ಯವಹಾರ ಅಧ್ಯಯನ ವಿಷಯದಲ್ಲಿ 12,070 ಮಂದಿ ನೋಂದಣಿ ಯಾಗಿದ್ದು, 11,753 ಮಂದಿ ಹಾಜರಾದರೆ, 317 ಮಂದಿ ಗೈರಾದರು. ಶಿಕ್ಷಣಶಾಸ್ತ್ರವಿಷಯದಲ್ಲಿ ನೋಂದಾಯಿತ 60 ಮಂದಿ ಪೈಕಿ 53 ಮಂದಿ ಹಾಜರಾಗಿ 7 ಮಂದಿ ಪರೀಕ್ಷೆ ಬರೆಯಲಿಲ್ಲ.

ಕ್ಯಾತಮಾರನಹಳ್ಳಿ ಹುಲಿಯಮ್ಮ ಜಾತ್ರೆ ಆರಂಭ



ನಿಶಾನೆ ಮರ ದೇವಾಲಯಕ್ಕೆ ತರುವ ಕಾರ್ಯದೊಂದಿಗೆ 10 ದಿನಗಳ ಜಾತ್ರೆಗೆ ಚಾಲನೆ



ಮೈಸೂರು ಕ್ಯಾತಮಾರನಹಳ್ಳಿ ಹುಲಿಯಮ್ಮ ಜಾತ್ರಾ ಮಹೋತ್ಸವದ ಮೊದಲ ದಿನವಾದ ಸೋಮವಾರ ಅಗ್ರಹಾರದ ಮಧುವನದಿಂದ ಅಡಿಕೆ ಮರವನ್ನು ನಿಷ್ಠೆಯಿಂದ ದೇವಾಲಯಕ್ಕೆ ಸಾಗಿಸಲಾಯಿತು.

ಮೈಸೂರು, ಮಾ.3(ಎಸ್‌ಬಿಡಿ)– ಮೈಸೂರಿನ ಕ್ಯಾತಮಾರನಹಳ್ಳಿ ಹುಲಿಯಮ್ಮ ಜಾತ್ರೆ ಸೋಮವಾರ ಆರಂಭಗೊಂಡಿತು.

ನಿಶಾನೆ ಮರವನ್ನು ದೇವಾಲಯದ ಬಳಿಗೆ ಸಾಂಪ್ರದಾಯಿಕವಾಗಿ ಸಾಗಿಸುವುದರೊಂದಿಗೆ ಹತ್ತು ದಿನಗಳ ವೈಭವದ ಕ್ಯಾತಮಾರನಹಳ್ಳಿ ಹುಲಿಯಮ್ಮ ಜಾತ್ರಾ ಮಹೋತ್ಸವ ಚಾಲನೆಗೊಂಡಿತು.

ಇಂದು ಕ್ಯಾತಮಾರನಹಳ್ಳಿಯಿಂದ ಸಾವಿರಾರು ಭಕ್ತರು ವಾದ್ಯ ಸಹಿತ ಅಗ್ರಹಾರದ ರಾಮಾನುಜ ರಸ್ತೆಯಲ್ಲಿರುವ ಎಲೆ ತೋಟ(ಮಧುವನ)ಕ್ಕೆ ಆಗಮಿಸಿದರು. ತೋಟವನ್ನು ಸುತ್ತುಹಾಕಿದ ಹಿರಿಯರು, ಎತ್ತರವಾದ ಹಾಗೂ ದೇವಿ ಸ್ವರೂಪದಿಂದ ವಾಲುವಂತಹ ಅಡಿಕೆ ಮರವನ್ನು ಗುರುತಿಸಿದರು. ಬಳಿಕ ಅದಕ್ಕೆ ಪೂಜೆ ಸಲ್ಲಿಸಿ, ಕತ್ತರಿಸಲಾಯಿತು. ಮರ ಕೆಳಗೆ ಬೀಳದಂತೆ ಹೊತ್ತುಕೊಂಡು ಹಾಡುತ್ತಾ, ಕುಣಿಯುತ್ತಾ ಮೆರವಣಿಗೆಯಲ್ಲಿ ಸಾಗಿಸಿದರು. ದೇವಾಲಯದ ಮುಂದೆ ಮರಕ್ಕೆ ಪೂಜೆ ಸಲ್ಲಿಸಿ, ಅಲ್ಲಿಯೇ ಮಲಗಿಸಲಾಯಿತು.

ನಾಳೆ(ಮಾ.4) ಗ್ರಾಮದ ಪ್ರತಿ ಮನೆಯ ಮಹಿಳೆಯರೂ ತಂಬಿಟ್ಟು ಆರತಿ ತಂದು, ಹುಲಿಯಮ್ಮನಿಗೆ ತಂಪೆರೆದು ಪೂಜಿಸುತ್ತಾರೆ. ಮಾ.5ರಂದು ಪುಟ್ಟ ಹೆಣ್ಣು ಮಕ್ಕಳು ಹೊಸ ಧಿರಿಸಿನೊಂದಿಗೆ ಬೆಲ್ಲದಾರತಿ ಹೊತ್ತು, ಪ್ರಮುಖ ಬೀದಿಗಳಲ್ಲಿ ಮೆರವಣಿಗೆಯಲ್ಲಿ ಸಾಗಿ, ತಾಯಿ ಹುಲಿಯಮ್ಮಳಿಗೆ ನಮಿಸಲಿದ್ದಾರೆ. 4ನೇ ದಿನ ಮಧುವನದಿಂದ ಸಾಗಿಸಿದ ನಿಶಾನೆ ಮರಕ್ಕೆ ಪೂಜೆ ಸಲ್ಲಿಸಿ, ಸುಣ್ಣ–ಬಣ್ಣ ಬಳಿದು ದೇವಾಲಯದ ಮುಂಭಾಗ ನೆಡಲಾಗುತ್ತದೆ. ಆ ದಿನ ಸಂಜೆ ಹುಲಿಯಮ್ಮ ದೇವಿಗೆ ಕರಕಲು ಸೇವೆ ಕಾರ್ಯಕ್ರಮ ಜರುಗಲಿದೆ.

ಹೀಗೆ ಹತ್ತು ದಿನಗಳ ಕಾಲ ವಿವಿಧ ಪೂಜಾ ಕೈಂಕರ್ಯಗಳೊಂದಿಗೆ ಜರುಗುವ ಹುಲಿಯಮ್ಮನ ಜಾತ್ರೆಗೆ ಗ್ರಾಮ ಸಿಂಗಾರಗೊಂಡಿದೆ. ಮನೆ ಮನೆಯಲ್ಲೂ ಹಬ್ಬದ ಸರಗರ–ಸಂಭ್ರಮ ಮನೆ ಮಾಡಿದೆ. ನೆಂಟರಿಷ್ಟರನ್ನು ಹಬ್ಬಕ್ಕೆ ಆಹ್ವಾನಿಸಿದ್ದಾರೆ. ದೇವಸ್ಥಾನ ಹಾಗೂ ಪ್ರಮುಖ ರಸ್ತೆಗಳನ್ನು ವಿದ್ಯುತ್ ದೀಪಗಳಿಂದ ಅಲಂಕಾರಗೊಳಿಸಲಾಗಿದೆ.

ಪಡುವಾರಹಳ್ಳಿ ಜೋಡಿ ಮಾರಮ್ಮ ಜಾತ್ರೆಯ ಪ್ರಮುಖ ಧಾರ್ಮಿಕ ಆಚರಣೆ ಬಾಯಿ ಬೀಗ ಮೆರವಣಿಗೆ ಸಂಪನ್ನ





ಮೈಸೂರು ಪಡುವಾರಹಳ್ಳಿಯಲ್ಲಿ ಸೋಮವಾರ ಜೋಡಿ ಮಾರಮ್ಮ ಜಾತ್ರೆ ಪ್ರಯುಕ್ತ ಭಕ್ತರು ಬಾಯಿಗೆ ಬೀಗ ಹಾಕಿಸಿಕೊಂಡು ಮೆರವಣಿಗೆಯಲ್ಲಿ ಸಾಗಿದರು.

ಮೈಸೂರು, ಮಾ.3(ಎಸ್‌ಬಿಡಿ)– ಮೈಸೂರಿನ ಪಡುವಾರಹಳ್ಳಿ(ವಿನಾಯಕನಗರ)ಯ ಶ್ರೀ ಜೋಡಿ ಮಾರಮ್ಮ ಜಾತ್ರೆ ಪ್ರಯುಕ್ತ ಸೋಮವಾರ ಬಾಯಿ ಬೀಗ ಮೆರವಣಿಗೆ ಜರುಗಿತು.

ಇಷ್ಟಾರ್ಥ ನೆರವೇರಿಸುವಂತೆ ಜೋಡಿ ಮಾರಮ್ಮ ದೇವಿಗೆ ಸಂಕಲ್ಪ ಮಾಡಿಕೊಂಡಿದ್ದ ಭಕ್ತರು 'ಬಾಯಿ ಬೀಗ' ಸೇವೆ ಸಮರ್ಪಿಸಿದರು. ಮಹಿಳೆಯರು, ಯುವಕರು ಸೇರಿದಂತೆ ಹತ್ತಾರು ಮಂದಿ, ಭಕ್ತಿ ಹಾಗೂ ನಿಷ್ಠೆಯಿಂದ ಬಾಯಿಗೆ ಬೀಗ ಹಾಕಿಸಿಕೊಂಡು ಮೆರವಣಿಗೆಯಲ್ಲಿ ಹೆಜ್ಜೆ ಹಾಕಿದರು. ಮಂಗಳವಾದ್ಯದೊಂದಿಗೆ ಗ್ರಾಮದ ಪ್ರಮುಖ ಬೀದಿಗಳಲ್ಲಿ ಸಾಗಿದ ಮೆರವಣಿಗೆ ದೇವಾಲಯದ ಬಳಿ ಬಂದಾಗ ಬಾಯಿಗೆ ಹಾಕಿದ್ದ ಬೀಗವನ್ನು ತೆಗೆದು, ಹರಕೆ ತೀರಿಸಲಾಯಿತು. ಇದರೊಂದಿಗೆ ಬಾಯಿ ಬೀಗ ಮೆರವಣಿಗೆ ಸಂಪನ್ನಗೊಂಡಿತು.

ಬಾಯಿ ಬೀಗ ಮೆರವಣಿಗೆ ಹಿನ್ನೆಲೆಯಲ್ಲಿ ಎಲ್ಲಾ ಬೀದಿಗಳನ್ನು ಸ್ವಚ್ಛಗೊಳಿಸಲಾಗಿತ್ತು. ಮನೆಗಳ ಮುಂಭಾಗ ನೀರು ಹಾಕಿ, ರಂಗೋಲಿ ಹಾಕಲಾಗಿತ್ತು. ಮೆರವಣಿಗೆ ವೇಳೆ ದೇವಸ್ಥಾನದ ಮುಂಭಾಗ ಸಾಂಪ್ರದಾಯಿಕ ದೊಣ್ಣೆ ವರಸೆ ಪ್ರದರ್ಶಿಸಿದರು. ರಾತ್ರಿ ದೇವಾಲಯದ ಆವರಣದಲ್ಲಿ 'ಸಂಪೂರ್ಣ ರಾಮಾಯಣ' ಪೌರಾಣಿಕ ನಾಟಕ ಪ್ರದರ್ಶನಗೊಂಡಿತು.

ಕಳೆದ ಶುಕ್ರವಾರ ಮಧ್ಯರಾತ್ರಿ ಮಾರಿಗುಡಿಯಲ್ಲಿರುವ ಜೋಡಿ ಮಾರಮ್ಮನ ಶ್ರೀಗಂಧದ ವಿಗ್ರಹಗಳಿಗೆ ಪಂಚಲೋಹದ ಕೊಳಗಗಳ ಧಾರಣೆಯೊಂದಿಗೆ ಜಾತ್ರೆಗೆ ವಿದ್ಯುಕ್ತ ಚಾಲನೆ ದೊರಕಿತ್ತು. ಶನಿವಾರ ಮಧ್ಯರಾತ್ರಿ ಗ್ರಾಮದ ಮಾರಮ್ಮನ ದೇವಸ್ಥಾನದಲ್ಲಿ ವಿವಿಧ ಪೂಜಾ ಕೈಂಕರ್ಯಗಳೊಂದಿಗೆ ವಡ್ಡಬಾಯಿ ಆಚರಣೆ ನೆರವೇರಿತ್ತು. ಭಾನುವಾರ ಮಧ್ಯರಾತ್ರಿ ದೇವಸ್ಥಾನ ಆವರಣದಿಂದ ತಂಪಿನ ಮೆರವಣಿಗೆ ಜರುಗಿತು. ಬಳಿಕ ಗಂಟೆಗೂ ಹೆಚ್ಚು ಕಾಲ ಮಾರಮ್ಮನಿಗೆ ವಿಶೇಷ ಪೂಜಾ ಕೈಂಕರ್ಯ ನೆರವೇರಿಸಲಾಯಿತು. ಇಂದು ಬಾಯಿ ಬೀಗ ಮೆರವಣಿಗೆಯೊಂದಿಗೆ ಮೂರು ದಿನಗಳ ಅದ್ದೂರಿ ಉತ್ಸವಗಳಿಗೆ ತೆರೆಬಿದ್ದಿತು. ಆದಾಗ್ಯೂ, ಮಾರಮ್ಮನಿಗೆ ಧಾರಣೆ ಮಾಡಿರುವ ಕೊಳಗ ತೆಗೆಯುವವರೆಗೂ ವಿಶೇಷ ಪೂಜಾ ಕೈಂಕರ್ಯಗಳು ಮುಂದುವರೆಯುತ್ತವೆ.

ವಿವೇಕಾನಂದರ ನಡೆ–ನುಡಿ ಆದರ್ಶನೀಯ

ಸ್ವಾಮಿ ನಿರ್ಭಯಾನಂದ ಸರಸ್ವತಿ ಅಭಿಮತ



ಮೈಸೂರು, ಮಾ.3(ಎಂಕೆ)– ಸ್ವಾಮಿ ವಿವೇಕಾನಂದರ ನಡೆ–ನುಡಿ, ಚಿಂತನೆ ಎಲ್ಲವೂ ಆದರ್ಶನೀಯ. ವಿವೇಕಾನಂದರೆಂದರೆ ಧೀರತೆ, ಪೌರುಷವಂತಿಕೆ ಎಂದು ವಿಜಯಪುರ ಶ್ರೀ ರಾಮಕೃಷ್ಣ–ವಿವೇಕಾನಂದ ಆಶ್ರಮದ ಅಧ್ಯಕ್ಷ ಸ್ವಾಮಿ ನಿರ್ಭಯಾನಂದ ಸರಸ್ವತಿ ಹೇಳಿದರು.

ಮೈಸೂರು ಶ್ರೀ ರಾಮಕೃಷ್ಣ ಆಶ್ರಮದ ವಾರ್ಷಿಕೋತ್ಸವ ಹಾಗೂ ಭಗವಾನ್ ಶ್ರೀ ರಾಮಕೃಷ್ಣ ಪರಮಹಂಸರ 190ನೇ ಜನ್ಮ ದಿನೋತ್ಸವದ ಪ್ರಯುಕ್ತ ಆಶ್ರಮದ ಸಭಾಂಗಣದಲ್ಲಿ 'ಸ್ವಾಮಿ ವಿವೇಕಾನಂದ –ಸಾರ್ವತ್ರಿಕ ಆದರ್ಶ' ಕುರಿತು ಮಾತನಾಡಿದ ಅವರು, ವಿವೇಕಾನಂದರ ಕುರಿತ ಅಧ್ಯಯನ ಸಮಾಜಕ್ಕೆ ಬಹಳ ಪ್ರಯೋಜನಕಾರಿಯಾಗಿದೆ ಎಂದರು.

ಅಪಾರ ಗುರುಭಕ್ತಿ ಹೊಂದಿದ್ದರಿಂದಲೇ ರಾಮಕೃಷ್ಣ ಪರಮಹಂಸರ ಪ್ರಭಾವ ವಿವೇಕಾನಂದರ ಮೇಲಾಯಿತು. ಸಾಮಾನ್ಯ ನರನನ್ನು ನರೇಂದ್ರನಾಗಿಸಿ, ಮನುಷ್ಯನನ್ನು ಮಹಾ ಮನುಷ್ಯನನ್ನಾಗಿ ಮಾಡಲು ವಿವೇಕಾನಂದರ ಚಿಂತನೆ ಸಹಕಾರಿಯಾಗಿದೆ. ಮನುಷ್ಯನ ಗುರಿಯೇ ಹೋರಾಟ, ನಿರಂತರವಾಗಿ ವಿಕಸಿತನಾಗಬೇಕು. ತನ್ನ ಸಾಮರ್ಥ್ಯವನ್ನು ಅರಿತುಕೊಂಡು ಮುನ್ನಡೆಯಬೇಕು ಎಂಬುದು ವಿವೇಕಾನಂದರ ಸಲಹೆಯಾಗಿದೆ ಎಂದರು.

ಬಾಹ್ಯ ಪ್ರಕೃತಿಯನ್ನು ಮೆಟ್ಟಿ ನಿಲ್ಲುವುದು ವಿಜ್ಞಾನ. ಆಂತರಿಕ ಪ್ರಕೃತಿಯನ್ನು ಮೆಟ್ಟಿ ನಿಲ್ಲುವುದು ಆಧ್ಯಾತ್ಮ. ಬಾಹ್ಯ ಪ್ರಕೃತಿಯನ್ನು ಗೆಲ್ಲಬೇಕಾದರೆ, ಮೊದಲು ಆಂತರಿಕ ಪ್ರಕೃತಿಯನ್ನು ಗೆಲ್ಲಬೇಕು. ತನ್ನನ್ನು ತಾನು ನಿಯಂತ್ರಿಸುವ ಅಥವಾ ನಿಗ್ರಹಿಸುವ ಶಕ್ತಿಯನ್ನು ಮೈಗೂಡಿಸಿಕೊಳ್ಳಬೇಕು. ಸಾಧಿಸುವಂತಹ ಮನುಷ್ಯನಾಗು. ಅಲ್ಪ ಸಾಧನೆಯನ್ನು ಜೀವನದ ಗುರಿಯಾಗಿಟ್ಟುಕೊಳ್ಳಬಾರದು. ಅಲ್ಪ ಗುರಿಯನ್ನು ಇಟ್ಟುಕೊಂಡು ಅಲ್ಪರಾಗಿ ಉಳಿಯುವ ಬದಲು ದೊಡ್ಡ ಗುರಿ ಇಟ್ಟುಕೊಂಡು ಅಲ್ಪ ಸಾಧನೆ ಮಾಡಿದರೂ ಚಿಂತೆಯಿಲ್ಲ ಎಂದು ಮಾರ್ಗದರ್ಶನ ನೀಡಿದ್ದಾರೆ ಎಂದು ತಿಳಿಸಿದರು.

ಮನಸ್ಸನ್ನು ಗೆದ್ದರೆ ಅಥವಾ ನಿಗ್ರಹಿಸಿದರೆ ಜಗತ್ತನ್ನು ಗೆಲ್ಲುವ ಶಕ್ತಿ ಬರಲಿದೆ. ಮನಸ್ಸನ್ನು ನಿಯಂತ್ರಿಸುವ ಮೂಲಕ ಬಾಹ್ಯ ಪ್ರಕೃತಿಯನ್ನು ನಿಯಂತ್ರಿಸಬಹುದಾಗಿದೆ. ಮನುಷ್ಯನಲ್ಲಿ ಶಕ್ತಿ ಉಳಿಯಬೇಕಾದರೆ ಏಕಾತ್ಮವಾಗಿ ನಿಲ್ಲಬೇಕು. ಜೀವನ ಏನೆಂಬುದನ್ನು ಅರ್ಥಮಾಡಿಕೊಂಡು ಸಾಗಿದಾಗ ನಮ್ಮ ಬದುಕು ಸಾರ್ವತ್ರಿಕವಾಗುತ್ತದೆ. ಅಲ್ಪ ಮಾನವನಿಂದ ಮಹಾ ಮಾನವನಾಗಲು ಸಾಧ್ಯ ಎಂದು ತಿಳಿಸಿರುವ ವಿವೇಕಾನಂದರದು ಫಲಪ್ರದ ಮಾರ್ಗವಾಗಿದೆ ಎಂದು ಸ್ಮರಿಸಿದರು.

ಬಟ್ಟೆ ಬ್ಯಾಗ್ ಖರೀದಿಯಲ್ಲಿ ಅಕ್ರಮ ದೂರು

ರೋಹಿಣಿ ಸಿಂಧೂರಿ ವಿರುದ್ಧದ ಅರ್ಜಿ ಮರುಪರಿಶೀಲಿಸುವಂತೆ ಹೈಕೋರ್ಟ್ ಆದೇಶ



ಮೈಸೂರು, ಮಾ. 3(ಜಿಎ)– ಮೈಸೂರಿನ ಹಿಂದಿನ ಜಿಲ್ಲಾಧಿಕಾರಿ ರೋಹಿಣಿ ಸಿಂಧೂರಿಯವರು ಬಟ್ಟೆ ಬ್ಯಾಗ್ ಖರೀದಿಯಲ್ಲಿ ಅಕ್ರಮ ಎಸಗಿದ್ದಾರೆ ಎಂದು ತಾವು ಸಲ್ಲಿಸಿದ ದೂರನ್ನು ಕಾನೂನು ಪ್ರಕಾರ ಮರುಪರಿಶೀಲನೆ ನಡೆಸಿ, ತಿಂಗಳೊಳಗೆ ವರದಿ ಸಲ್ಲಿಸುವಂತೆ ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆಯ ಅಧೀನ ಕಾರ್ಯದರ್ಶಿಯವರಿಗೆ ಹೈಕೋರ್ಟ್ ಆದೇಶ ನೀಡಿದೆ ಎಂದು ವಕೀಲ ಎನ್.ಆರ್. ರವಿಚಂದ್ರೇಗೌಡ ತಿಳಿಸಿದರು.

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯನ್ನುದ್ದೇಶಿಸಿ ಮಾತನಾಡಿದ ಅವರು, ರೋಹಿಣಿ ಸಿಂಧೂರಿ ಜಿಲ್ಲಾಧಿಕಾರಿಯಾಗಿದ್ದ ವೇಳೆ ಪರಿಸರ ಸ್ನೇಹಿ ಬಟ್ಟೆ ಬ್ಯಾಗ್ ಖರೀದಿಯಲ್ಲಿ 7,65,15,816 ರೂ. ಅಕ್ರಮ ಎಸಗಿದ್ದಾರೆ ಎಂದು ತಾವು ಅಂದು ಎಸಿಬಿಗೆ ದೂರು ಸಲ್ಲಿಸಿದ್ದು, ಹೈಕೋರ್ಟ್ ಆದೇಶದಂತೆ ಈ ದೂರನ್ನು ನಂತರ ಲೋಕಾಯುಕ್ತಕ್ಕೆ ವರ್ಗಾಯಿಸಲಾಗಿತ್ತು ಎಂದು ಅವರು ಹೇಳಿದರು.


ಲೋಕಾಯುಕ್ತ ಎಸ್ಪಿಯವರು ತಮ್ಮ ದೂರನ್ನು ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆಯ ಅಧೀನ ಕಾರ್ಯದರ್ಶಿ ಜೇಮ್ಸ್ ತರಕನ್ ಅವರಿಗೆ ರವಾನೆ ಮಾಡಿ, ಎಫ್‌ಐಆರ್ ದಾಖಲಿಸಲು ಪೂರ್ವಾನುಮತಿಗೆ ಪ್ರಸ್ತಾವನೆ ಸಲ್ಲಿಸಿದ್ದರು. ಆದರೆ, ಜೇಮ್ಸ್ ತರಕನ್ ಅವರು, ಪೂರ್ವಾನುಮತಿ ನಿರಾಕರಿಸಲಾಗಿದೆ ಎಂಬ ಹಿಂಬರಹದೊಂದಿಗೆ ಕಡತವನ್ನು ಲೋಕಾಯುಕ್ತ ಎಸ್ಪಿಗೆ ಹಿಂತಿರುಗಿಸಿದ್ದರು.

ಇವರ ವಿರುದ್ಧ ತಾವು ಹೈಕೋರ್ಟ್ ಮೊರೆ ಹೋಗಿದ್ದು, ನ್ಯಾಯಮೂರ್ತಿ ಎಸ್.ಆರ್. ಕೃಷ್ಣಕುಮಾರ್ ಅರ್ಜಿ ವಿಚಾರಣೆ ನಡೆಸಿ, ತಮ್ಮ ಅರ್ಜಿಯ ಬಗ್ಗೆ ಪುನರ್ ಪರಿಶೀಲನೆ ಮಾಡಿ ಒಂದು ತಿಂಗಳೊಳಗೆ ವರದಿ ಸಲ್ಲಿಸುವಂತೆ ಆದೇಶ ನೀಡಿದ್ದಾರೆ ಎಂದು. ರವಿ ಚಂದ್ರೇಗೌಡ ತಿಳಿಸಿದರು. ಸುದ್ದಿಗೋಷ್ಠಿಯಲ್ಲಿ ವಕೀಲ ಸುಧೀರ್ ಉಪಸ್ಥಿತರಿದ್ದರು.

ಹುಣಸೂರು ಬಳಿ ತೋಟದ ಮನೆಯಲ್ಲಿ ವೃದ್ಧ ದಂಪತಿ ಕಗ್ಗೊಲೆ



ಹತ್ಯೆಯಾದ ವೃದ್ಧ ದಂಪತಿ



ಸ್ಥಳ ಪರಿಶೀಲನೆ ನಡೆಸುತ್ತಿರುವ ಪೊಲೀಸ್ ಅಧಿಕಾರಿಗಳು

ಹುಣಸೂರು, ಮಾ. 3– ಹಾಡಹಗಲೇ ವೃದ್ಧ ದಂಪತಿಯನ್ನು ಕಲ್ಲಿನಿಂದ ಜಜ್ಜಿ ಕೊಲೆ ಮಾಡಿರುವ ಘಟನೆ ಹುಣಸೂರು ತಾಲೂಕು ನಾಡಪ್ಪನಹಳ್ಳಿ ಗ್ರಾಮದಲ್ಲಿ ನಡೆದಿದೆ.

ಗ್ರಾಮದ ರಂಗಸ್ವಾಮಿಗೌಡ(72) ಮತ್ತು ಅವರ ಪತ್ನಿ ಶಾಂತಮ್ಮ(65) ಹತ್ಯೆಗೀಡಾದವರಾಗಿದ್ದು, ಈ ದಂಪತಿಯನ್ನು ಯಾವ ಸಮಯದಲ್ಲಿ ಹತ್ಯೆ ಮಾಡಲಾಗಿದೆ ಎಂಬುದು ನಿಖರವಾಗಿ ತಿಳಿದಿಲ್ಲ. ಆದರೆ, ಇಂದು ಸಂಜೆ ಕಾರ್ಮಿಕನೋರ್ವ ಇವರ ಮನೆಗೆ ತೆರಳಿದಾಗ ಹತ್ಯೆಯಾಗಿರುವುದು ಬೆಳಕಿಗೆ ಬಂದಿದೆ.

ರಂಗಸ್ವಾಮಿಗೌಡ ಮತ್ತು ಶಾಂತಮ್ಮ ದಂಪತಿ ತಮ್ಮ ತೋಟದ ಮನೆಯಲ್ಲಿ ವಾಸವಿದ್ದರು. ಇವರ ಪುತ್ರ ದೇವರಾಜು ಗ್ರಾಮ ಪಂಚಾಯಿತಿ ಸದಸ್ಯರಾಗಿದ್ದಾರೆ. ಇಂದು ದೇವರಾಜ್ ತಮ್ಮ ಜಮೀನಿನಲ್ಲಿ ಶುಂಠಿ ಕೀಳಿಸುತ್ತಿದ್ದರು. ಸಂಜೆ ಶುಂಠಿ ತುಂಬಲು ತಮ್ಮ ತಂದೆಯ ಮನೆಯಿಂದ ಕುಕ್ಕೆ ತರುವಂತೆ ಕಾರ್ಮಿಕ ಗಣೇಶ್ ಎಂಬಾತನನ್ನು ಕಳುಹಿಸಿದ್ದಾರೆ.

ರಂಗಸ್ವಾಮಿಗೌಡ ತೋಟದ ಮನೆಗೆ ಗಣೇಶ್ ತೆರಳಿದಾಗ ಈ ಹತ್ಯಾ ಪ್ರಕರಣ ಬೆಳಕಿಗೆ ಬಂದಿದ್ದು, ರಂಗಸ್ವಾಮಿಗೌಡರ ದೇಹ ದನದ ಕೊಟ್ಟಿಗೆಯಲ್ಲಿ ಬಿದ್ದಿದ್ದರೆ, ಶಾಂತಮ್ಮ ಅವರ ದೇಹ ಮನೆಯೊಳಗೆ ಬಿದ್ದಿತ್ತು. ಇವರಿಬ್ಬರನ್ನೂ ತಲೆಯ ಮೇಲೆ ಗುಂಡುಕಲ್ಲು ಎತ್ತಿಹಾಕಿ ಹತ್ಯೆಗೈಯ್ಯಲಾಗಿದೆ.

ವೃದ್ಧ ದಂಪತಿಯ ಕೊಲೆಗೆ ಕಾರಣವೇನು ಎಂಬುದು ಈವರೆಗೂ ತಿಳಿದು ಬಂದಿಲ್ಲ. ವಿಷಯ ತಿಳಿಯುತ್ತಿದ್ದಂತೆಯೇ ಬಿಳಿಕೆರೆ ಪೊಲೀಸ್ ಠಾಣೆ ಇನ್‌ಸ್ಪೆಕ್ಟರ್ ಲೋಲಾಕ್ಷಿ, ಹುಣಸೂರು ಡಿವೈಎಸ್ಪಿ ಗೋಪಾಲಕೃಷ್ಣ, ಜಿಲ್ಲಾ ಎಸ್ಪಿ ವಿಷ್ಣುವರ್ಧನ್ ಘಟನಾ ಸ್ಥಳಕ್ಕೆ ಭೇಟಿ ನೀಡಿದ್ದಾರೆ. ರಾತ್ರಿ ವೇಳೆಗೆ ಬೆರಳಚ್ಚು ತಜ್ಞರು ಮತ್ತು ಶ್ವಾನದಳವನ್ನು ಕರೆಸಲಾಗಿದ್ದು, ಪರಿಶೀಲನೆ ನಡೆಯುತ್ತಿದೆ. ಈ ಸಂಬಂಧ ಬಿಳಿಕೆರೆ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ತಾಲ್ಲೂಕು ಪಂಚಾಯತ್ ತಿ.ನರಸೀಪುರ
ದೂ.ಸಂ.:9480873130 Email: tnptnp36@gmail.com
ಸಂಖ್ಯೆ:ತಾಪಂ:ತಿನಪು/ಹೊ.ಗು.ಸಿಬ್ಬಂದಿ/ಇ–ಟೆಂಡರ್‌ಪ್ರಕಟಣೆ/2024–25
ದಿನಾಂಕ: 01.03.2025

ಪತ್ರಿಕಾ ಪ್ರಕಟಣೆ

2025–26ನೇ ಸಾಲಿಗೆ (ದಿನಾಂಕ:01.04.2025 ರಿಂದ 31.03.2026ರವರೆಗೆ) ತಾಲ್ಲೂಕು ಪಂಚಾಯಿತಿ ತಿ.ನರಸೀಪುರ ಕಛೇರಿಗೆ ಹೊರಗುತ್ತಿಗೆ ಆಧಾರದ ಮೇಲೆ ಸೇವಾಗುತ್ತಿಗೆ ಅಡಿ ಕಂಪ್ಯೂಟರ್ ಅಪರೇಟರ್, ಬೆರಳಚ್ಚುಗಾರರು ಹಾಗೂ ಡಿ ದರ್ಜೆ ನೌಕರರ ಸೇವೆ ಪಡೆಯಲು ಮಾನ್ಯ ಕಾರ್ಯನಿರ್ವಾಹಕ ಅಧಿಕಾರಿಯವರು, ಜಿಲ್ಲಾ ಪಂಚಾಯತ್ ಮೈಸೂರುರವರು ಅನುಮತಿ ನೀಡಿರುವ ಆದೇಶ ಸಂಖ್ಯೆ: ಎ.ಡಿ.ಎಂ(1)/ಇ–38394/2024–25, ದಿನಾಂಕ: 03.02.2025ರ ಮೇರೆಗೆ ಇ–ಪ್ರಕ್ಯೂರ್‌ಮೆಂಟ್ ಮೂಲಕ ಟೆಂಡರ್ ಆಹ್ವಾನಿಸಲಾಗಿದ್ದು, ಹೆಚ್ಚಿನ ಮಾಹಿತಿಗೆ ವೆಬ್ ಸೈಟ್ https//eproc.karnataka.gov.in ಅಥವಾ ದೂರವಾಣಿ ಸಂಖ್ಯೆ 9480873130 ಸಂಪರ್ಕಿಸಲು ತಿಳಿಸಿದೆ. ಇ–ಪ್ರಕ್ಯೂರ್ ಮೆಂಟ್ ಟೆಂಡರ್ ಅರ್ಜಿ ಸಲ್ಲಿಸುವ ದಿ: **04.03.2025** ಟೆಂಡರ್ ಸಲ್ಲಿಸಲು ಕೊನೆಯ ದಿ: **18.03.2025** ಸಮಯ: **12.00** ಪಿ.ಎಂ. ಟೆಂಡರ್ ತೆರೆಯುವ ದಿ: **19.03.2025** ಸಮಯ: **12.00** ಪಿ.ಎಂ. ಸಂಪರ್ಕಿಸಬೇಕಾದ ಕಛೇರಿ ವಿಳಾಸ ತಾಲ್ಲೂಕು ಪಂಚಾಯಿತಿ ತಿ.ನರಸೀಪುರ.

ಸಹಿ/– ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯಿತಿ, ತಿ.ನರಸೀಪುರ
DIPR/DDMYS1379/KSMCA/1008/2024-25

ಫೋ:08226-226536 email : deo.cnagar@gmail.com
ಜಿಲ್ಲಾಧಿಕಾರಿಗಳ ಕಾರ್ಯಾಲಯ
(ಕಂದಾಯ ಇಲಾಖೆ)
ಚಾಮರಾಜನಗರ ಜಿಲ್ಲೆ, ಚಾಮರಾಜನಗರ
ಸಂಖ್ಯೆ:ಎಸ್.ಸಿ.ಟಿ/ಸಿಆರ್/25/2024-25 ದಿನಾಂಕ: 28.02.2025

ಅಲ್ಪಾವಧಿ ಟೆಂಡರ್ ಪ್ರಕಟಣೆ (3ನೇ ಕರೆ)

ಚಾಮರಾಜನಗರ ಜಿಲ್ಲೆಯ ಕಂದಾಯ ಇಲಾಖೆಗೆ ಅವಶ್ಯಕವಿರುವ ಡೆಸ್ಕ್‌ಟಾಪ್ ಕಂಪ್ಯೂಟರ್ ಹಾಗೂ ಪ್ರಿಂಟರ್‌ಗಳನ್ನು ಸರಬರಾಜು ಮಾಡಲು ಕರ್ನಾಟಕ ಸಾರ್ವಜನಿಕ ಸಂಗ್ರಹಣೆಯಲ್ಲಿ ಪಾರದರ್ಶಕ ನಿಯಮ 2000 ಹಾಗೂ ತಿದ್ದುಪಡಿ ನಿಯಮ 2001 ಕ್ಕೆ ಒಳಪಟ್ಟು ನೋಂದಾಯಿತ ಅರ್ಹ ಏಜೆನ್ಸಿದಾರರುಗಳಂದ/ಸಂಸ್ಥೆಗಳಂದ ಕೆಪಿಪಿ. ಪೋರ್ಟಾಲ್ ಮೂಲಕ ಟೆಂಡರ್ ಆಹ್ವಾನಿಸಲಾಗಿದೆ (ಟೆಂಡರ್ ಸಂಖ್ಯೆ: RD/2024-25/IND/0219/Call-3) ಟೆಂಡರ್‌ಗಿಟ್ಟ ಮೊತ್ತ ರೂ.22.35 ಲಕ್ಷಗಳು ಇಎಂಡಿ ಮೊತ್ತ ರೂ.44,700.00ಗಳು, ಆಸಕ್ತಿಯುಳ್ಳ ಏಜೆನ್ಸಿದಾರರು/ ಸರಬರಾಜುದಾರರು ಟೆಂಡರ್ ವಿವರಗಳನ್ನು https://kppp.karnataka.gov.in ವೆಬ್ ಸೈಟ್ ಮೂಲಕ ಪಡೆದುಕೊಂಡು, ನಂತರ ಭರ್ತಿ ಮಾಡಿದ ಟೆಂಡರ್‌ನ್ನು ಆನ್‌ಲೈನ್ ಮೂಲಕ ಸಲ್ಲಿಸತಕ್ಕದ್ದು, ಟೆಂಡರ್‌ಗೆ ಬಿಡ್ ಸಲ್ಲಿಸಲು ಅಂತಿಮ ದಿನಾಂಕ: 10.03.2025 ರ ಬೆಳಗ್ಗೆ 11.00 ಗಂಟೆಯವರೆಗೆ, ತಾಂತ್ರಿಕ ಬಿಡ್ ತೆರೆಯುವ ದಿನಾಂಕ: 11.03.2025ರ ಬೆಳಗ್ಗೆ 11.00 ಗಂಟೆಗೆ ಹೆಚ್ಚಿನ ಮಾಹಿತಿ ಕಾಮಗಾರಿ ನಿಬಂಧನೆ ಹಾಗೂ ಷರತ್ತುಗಳಿಗೆ ಕಛೇರಿ ವೇಳೆಯಲ್ಲಿ ಕೊಠಡಿ ಸಂಖ್ಯೆ: 106, ಜಿಲ್ಲಾಧಿಕಾರಿಗಳ ಕಛೇರಿ, ಚಾಮರಾಜನಗರ ಜಿಲ್ಲೆ ಇಲ್ಲಿ ಸಂಪರ್ಕಿಸಬಹುದಾಗಿದೆ.

ಸಹಿ/–ಜಿಲ್ಲಾಧಿಕಾರಿಚಾಮರಾಜನಗರ ಜಿಲ್ಲೆ, ಚಾಮರಾಜನಗರ
ಸಂ.ವಾಸಾಸಂ.ಇ:ಚಾ.ನಗರ:653:2024.25

ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರ, ಮೈಸೂರು
ಜೆ.ಎಲ್.ಬಿ ರಸ್ತೆ, ಮೈಸೂರು – 570005,
ದೂರವಾಣಿ/ಫ್ಯಾಕ್ಸ್: 0821–2420624
ಸಂಖ್ಯೆ: ಮೈನಪ್ರಾ/ಅಅ/ಪಿಬಿ/ಟಿಎನ್/11/2024–25 ದಿನಾಂಕ:25.02.2025

ಏಕ್ಸ್‌ಪ್ರೆಷನ್ ಆಫ್ ಇಂಟರೆಸ್ಟ್ ಇ–ಟೆಂಡರ್ ಪ್ರಕಟಣೆ

(Expression of Interest)

(ಕರ್ನಾಟಕ ಸರ್ಕಾರದ ಕೆ.ಪಿ.ಪಿ.ಪಿ ಪೋರ್ಟಲ್ ಮುಖಾಂತರ ಮಾತ್ರ)

ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ ಆದ್ಯಾದೇಶ 1999–2000ರ ಪ್ರಕಾರ ಆಕ್ಟ್ 2000 ರ ನಿಯಮದಂತೆ ಸ್ಟಾಂಡರ್ಡ್ ಟೆಂಡರ್ ಡಾಕ್ಯುಮೆಂಟ್ ನಿಯಮದನ್ವಯ ಕೆ.ಪಿ.ಪಿ.ಪಿ ಪೋರ್ಟಲ್ ಮುಖಾಂತರ ರೂ.35.61 ಲಕ್ಷದ ಒಂದು ಸಿವಿಲ್ ಕಾಮಗಾರಿ ಹಾಗೂ ಪ್ರಾಧಿಕಾರದಿಂದ Providing Consultancy services for preparation of DPR under least count selection (LCS)for Construction of Pheripheral Ringroad to Mysuru City in Mysore District(PRR) ಯೋಜನೆಯನ್ನು ಖಾಸಗಿ ಸಾರ್ವಜನಿಕ ಜಂಟಿ ಸಹಭಾಗಿತ್ವದಲ್ಲಿ ಅನುಷ್ಠಾನಗೊಳಿಸಲು ಉದ್ದೇಶಿಸಿದ್ದು, ಆಸಕ್ತ ಅರ್ಹ ಬಿಡ್ಡುದಾರರಿಂದ ಯೋಜನೆಯನ್ನು ಕೈಗೊಳ್ಳಲು ಬಿಡ್ಡುದಾರರಿಂದ ಟೆಂಡರ್ ಆಹ್ವಾನಿಸಲಾಗಿದೆ. ಟೆಂಡರ್ ಸಲ್ಲಿಸಲು ದಿ: 17.03.2025 ರಂದು ಸಂಜೆ 4.00 ಗಂಟೆಯವರೆಗೆ ಸಮಯವನ್ನು ನಿಗಧಿಪಡಿಸಲಾಗಿರುತ್ತದೆ. ಬಿಡ್ ಅನ್ನು ದಿ: 18.03.2025 ರಂದು ಸಂಜೆ 4.30 ಗಂಟೆ ನಂತರ ತೆರಯಲಾಗುವುದು. ಅರ್ಹ ನೋಂದಾಯಿತ ಸಿವಿಲ್ ಮತ್ತು ಸಮಾಲೋಚಕರುಗಳು ಕೆ.ಪಿ.ಪಿ.ಪಿ ಪೋರ್ಟಲ್ http://Kppp.karnataka.gov.in ಮುಖಾಂತರ ನಿಯಮಾವಳಿಯಂತೆ ಟೆಂಡರ್ ಸಲ್ಲಿಸಬಹುದಾಗಿರುತ್ತದೆ. ಹೆಚ್ಚಿನ ವಿವರಗಳಿಗೆ ಈ ಕಛೇರಿಯ ದೂರವಾಣಿ ಸಂಖ್ಯೆ 0821–2420624 ರಿಂದ ಹಾಗೂ ಪ್ರಾಧಿಕಾರದ ವೆಬ್‌ಸೈಟ್ www.mudamysore.gov.in ನಲ್ಲಿ ಪ್ರಕಟಣೆಯ ಮಾಹಿತಿಯನ್ನು ಪಡೆಯಬಹುದು.

ಸಹಿ/– ಅಧೀಕ್ಷಕ ಅಭಿಯಂತರರು
DIPR/DDMYS/1366/KSMCA/ 1009 /2024-25

ನಕ್ಕರೆ ಅದೇ ಸ್ವರ್ಗ

ಓದುವ ಆಸೆಯಿಂದ ಬೆಳಗ್ಗೆ ಬೇಗ ಎದ್ದೆ...
ಓದುವ ಆಸೆಯಿಂದ ಬೆಳಗ್ಗೆ ಬೇಗ ಎದ್ದೆ...
ಆದರೆ, ಆಸೆಯೇ ದುಃಖಕ್ಕೆ ಮೂಲ ಎಂದು ಪುನಃ ಹಾಸಿಗೆಗೆ ಬಿದ್ದೆ!!

–ವಿದ್ಯಾರ್ಥಿ

ಮೈಸೂರು ಮಿತ್ರ

ಮಂಗಳವಾರ, 4 ಮಾರ್ಚ್ 2025

ಸತ್ಯೇನೋತ್ತಭಿತಾ ಭೂಮಿಃ ನ ಹಿ ಸತ್ಯಾತ್ಪರೋ ಧರ್ಮಃ
(ಭೂಮಿಯು ಸತ್ಯದ ಮೇಲೆ ನಿಂತಿದೆ, ಸತ್ಯಕ್ಕಿಂತ ಮಿಗಿಲಾದ ಧರ್ಮವಿಲ್ಲ)

ಸಂಪಾದಕ: ಎಂ.ಗೋವಿಂದೇಗೌಡ *M.A.*

ಅಮೃತ ವಾಹಿನಿ.........

ನಾವು ತೋರಿದ ಪ್ರೀತಿಯನ್ನು ಜನರು ಮರೆತರೂ,
ಪ್ರಾಣಿಗಳು ಮರೆಯುವುದಿಲ್ಲ. – ನುಡಿಮುತ್ತು

ವೇದ ಸುಳ್ಳಾದರೂ ಗಾದೆ ಸುಳ್ಳಾಗದು { ಹಲ್ಲಿದ್ದಾಗ ಕಡಲೆ ತಿನ್ನಬೇಕು,
ಹರೆಯವಿದ್ದಾಗ ಹಣ ಗಳಿಸಬೇಕು

ನಿಮ್ಮ ಪತ್ರಗಳು

ನಟ್ಟು ಬೋಲ್ಟ್ ಟೈಟು ಯಾರದು?

ಮಾನ್ಯರೆ,

'ಸಿನಿಮಾ ರಂಗದವರ ಬಗ್ಗೆ ನನಗೆ ಬಹಳ ಸಿಟ್ಟಿದೆ. ಇಂತಹವರ ನಟ್ಟು ಬೋಲ್ಟು ಟೈಟ್ ಮಾಡೋದು ನನಗೆ ಗೊತ್ತು' ಎಂದಿದ್ದಾರೆ ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್!

ಸಿನಿಮಾ ರಂಗದವರ ನಟ್ಟು ಬೋಲ್ಟು ಟೈಟ್ ಅಥವಾ ಲೂಸ್ ಮಾಡುವ ಸ್ಪ್ಯಾನರ್ ಇರುವುದು ಚಲನಚಿತ್ರ ವೀಕ್ಷಿಸುವ ಅಭಿಮಾನಿಗಳ ಬಳಿಯೇ ಹೊರತು ಉಪಮುಖ್ಯಮಂತ್ರಿಗಳ ಬಳಿಯಲ್ಲ!

ಸಿನಿಮಾ ರಂಗದವರ ನಟ್ಟು ಬೋಲ್ಟು ಟೈಟ್ ಅಥವಾ ಲೂಸ್ ಮಾಡುವವರೂ ಕೂಡಾ ಚಿತ್ರಪ್ರೇಮಿಗಳೇ ಹೊರತು ಡಿಕೆಶಿ ಅಲ್ಲ! ಡಿ.ಕೆ.ಶಿವಕುಮಾರ್ ಅವರ ಕೈಗೆ ಸ್ಪ್ಯಾನರ್ ನೀಡಿರುವುದು ರಾಜ್ಯದ ಮತದಾರರು.

ಸಿನಿಮಾ ರಂಗದವರ ನಟ್ಟು ಬೋಲ್ಟ್ ಟೈಟ್ ಮಾಡಲು ಅದನ್ನು ನೀಡಲಾಗಿಲ್ಲ. ಮತದಾರರು ಆ ಸ್ಪ್ಯಾನರನ್ನು ಡಿಕೆಶಿ ಅವರಿಗೆ ನೀಡಿರುವುದು ಸಮಾಜಘಾತುಕ ಶಕ್ತಿಗಳ ನಟ್ಟು ಬೋಲ್ಟ್ ಟೈಟ್ ಮಾಡಲೆಂದೇ ಹೊರತು ಸಿನಿಮಾ ರಂಗದವರ ನಟ್ಟು ಬೋಲ್ಟ್ ಟೈಟ್ ಮಾಡಲಿಕ್ಕೆಂದಲ್ಲ. ಸಿನಿಮಾ ರಂಗದವರು ಸಮಾಜ ಘಾತುಕರಂತೆ ಅಪರಾಧ ಎಸಗಿದರೆ ನಿರ್ದಾಕ್ಷಿಣ್ಯವಾಗಿ ಅವರ ನಟ್ಟು ಬೋಲ್ಟ್ ಮಾತ್ರವಲ್ಲ ಎಲ್ಲವನ್ನೂ ಟೈಟ್ ಮಾಡಲಿ!

ಕಾನೂನನ್ನು ಕೈಗೆತ್ತಿಕೊಂಡು ಕಾನೂನು ಮತ್ತು ಸುವ್ಯವಸ್ಥೆ ಹದಗೆಡಿಸುವವರ ನಟ್ಟು ಬೋಲ್ಟ್ ಟೈಟ್ ಮಾಡಿದರೆ ಆಡಳಿತ ಯಂತ್ರ ಸರಾಗವಾಗಿ ನಡೆಯುತ್ತದೆ.

ಸಾರ್ವಜನಿಕರ ಪ್ರಾಣ ಹಿಂಡುತ್ತಿರುವ ಭ್ರಷ್ಟ ಅಧಿಕಾರಿಗಳು ಮತ್ತು ಜನಪ್ರತಿನಿಧಿಗಳ ನಟ್ಟು ಬೋಲ್ಟ್ ಟೈಟ್ ಮಾಡಿದರೆ ಪ್ರಜೆಗಳ ಜೀವನ ಸರಾಗವಾಗುತ್ತದೆ. ಭ್ರಷ್ಟರು ಮತ್ತು ಸಮಾಜಘಾತುಕ ಶಕ್ತಿಗಳ ನಟ್ಟು ಬೋಲ್ಟನ್ನು ಟೈಟ್ ಮಾಡುವ ಬದಲಾಗಿ ಸಿನಿಮಾ ರಂಗದವರ ನಟ್ಟು ಬೋಲ್ಟ್ ಟೈಟ್ ಮಾಡಲು ಪ್ರಯತ್ನಿಸಿದರೆ ಆ ಸ್ಪ್ಯಾನರನ್ನು ಬೇರೆಯವರಿಗೆ ಹಸ್ತಾಂತರಿಸುವ ಅಧಿಕಾರ ಖಂಡಿತಾ ಪ್ರಜೆಗಳಿಗಿದೆ!

–ಪಿ.ಜೆ.ರಾಘವೇಂದ್ರ, ನ್ಯಾಯವಾದಿ, ಮೈಸೂರು

ಟಾಯ್ಲೆಟ್ ಫ್ಲಶ್ ಔಟ್ ಮಾಡುವ ಮುನ್ನ ಯೋಚಿಸಿ!

ಮಾನ್ಯರೆ,



ಈಗ ಪಾಶ್ಚಾತ್ಯ ಪದ್ಧತಿಯ ಟಾಯ್ಲೆಟ್‌ಗಳ ಬಳಕೆ ಗಣನೀಯವಾಗಿ ಹೆಚ್ಚಾಗುತ್ತಿದೆ. ಬಳಸಿದ ನಂತರ ಫ್ಲಶ್ ಟ್ಯಾಂಕಿನ ಬಟನ್ ಬೇಗ ಒತ್ತಿ ಹೊರ ಬರುತ್ತೇವೆ. ಆಗ ಫ್ಲಶ್ ಟ್ಯಾಂಕ್ ಪೂರ ಖಾಲಿ. ಸ್ವಲ್ಪ ಯೋಚಿಸಿ, ಪ್ರತಿ ಸಾರಿಯೂ ಫ್ಲಶ್ ಟ್ಯಾಂಕ್ ನೀರನ್ನು ಪೂರ್ಣವಾಗಿ ಖಾಲಿ ಮಾಡುವುದು ಅವಶ್ಯವೇ? ನಿತ್ಯವೂ ಒಂದೆರಡು ಸಲವಾದರೂ ಫ್ಲಶ್ ಟ್ಯಾಂಕ್‌ನ ಅರ್ಧ ಅಥವಾ ಕಾಲು ಭಾಗವನ್ನಷ್ಟೇ ಖಾಲಿ ಮಾಡಿದರೂ ಸಾಕಲ್ಲವೇ? ಬಟನ್ ಅನ್ನು ಸ್ವಲ್ಪವೇ ಒತ್ತಿ ಮೇಲೆತ್ತಿದರೆ ಸಾಕಲ್ಲವೇ?

ಹೀಗೇ ಸುಮ್ಮನೆ ಒಂದು ಅಂದಾಜು ಮಾಡಿ ನೋಡೋಣವೇ? ಬೆಂಗಳೂರಿನಲ್ಲಿ ವಾಸಿಸುವ ಸುಮಾರು ಒಂದು ಕೋಟಿ ಜನರಲ್ಲಿ (ಇದರಲ್ಲಿ ನಿತ್ಯ ಬೆಂಗಳೂರಿಗೆ ಬರುವವರನ್ನು ಸೇರಿಸಿದರೆ ಇನ್ನೂ ಹೆಚ್ಚು) ಕನಿಷ್ಠ ಹತ್ತು ಲಕ್ಷ ಜನ ದಿನದಲ್ಲಿ ಎರಡು ಸಾರಿ ಫ್ಲಶ್ ಟ್ಯಾಂಕಿನ ಅರ್ಧ ಅಥವಾ ಕಾಲು ಭಾಗ ಮಾತ್ರ ನೀರನ್ನು ಉಪಯೋಗಿಸಿದರೆ ಇಪ್ಪತ್ತು ಲಕ್ಷ ಬಾರಿ ಫ್ಲಶ್ ಔಟ್ ಆಗುತ್ತವೆ. ಪ್ರತಿ ಬಾರಿಯೂ ಸುಮಾರು ಐದು ಲೀಟರ್ ನೀರು ಉಳಿತಾಯ ಎಂದು ಅಂದಾಜು ಆದರೂ ಒಂದು ಕೋಟಿ ಲೀಟರ್ ನೀರು ಉಳಿತಾಯವಾಗುತ್ತದೆ. ಒಬ್ಬ ವ್ಯಕ್ತಿಯ ನಿತ್ಯ ಬಳಕೆಗೆ ಸುಮಾರು 100 ಲೀಟರ್ ಸಾಕಾಗುತ್ತದೆ. (ವಿಶ್ವ ಆರೋಗ್ಯ ಸಂಸ್ಥೆಯ ಮಾನದಂಡದಲ್ಲಿ) ಅಂದರೆ ಸರಿಸುಮಾರು ಒಂದು ಲಕ್ಷ ಜನಕ್ಕೆ ಸಾಕಾಗುವಷ್ಟು ನೀರು ಉಳಿತಾಯ! ಇದನ್ನು ಒಂದು ದೊಡ್ಡ ಅಭಿಯಾನವೆಂದೇ ಮಾಡಬಾರದೇಕೆ? ಗಣ್ಯರು ಸೆಲೆಬ್ರಿಟಿಗಳು ಗಮನಿಸಬೇಕು.

ಇನ್ನು ಬೇರೆ ದೊಡ್ಡ ದೊಡ್ಡ ಪಟ್ಟಣಗಳಲ್ಲಿಯೂ ಈ ರೀತಿ ಉಳಿತಾಯ ಮಾಡಿದರೆ? ಅಗಾಧ ಪ್ರಮಾಣದ ನೀರು ಪೋಲಾಗುವುದನ್ನು ಸುಲಭವಾಗಿ ತಪ್ಪಿಸಬಹುದಲ್ಲವೇ? ಅದು ನಮ್ಮ ಕೈ ಬೆರಳಿನಲ್ಲೇ ಇದೆಯಲ್ಲವೇ? ದಿನೇ ದಿನೆ ಅಂತರ್ಜಲ ಮಟ್ಟ ಕುಸಿಯುತ್ತಿರುವಾಗ ಈ ಒಂದು ಪುಟ್ಟ ಕೆಲಸ ಮಾಡಿ ದೊಡ್ಡ ಪುಣ್ಯ ಕಟ್ಟಿಕೊಳ್ಳೋಣವೇ? ಮುಂದಿನ ಸಲ ಟಾಯ್ಲೆಟ್ ಫ್ಲಶ್ ಬಟನ್ ಒತ್ತುವ ಮುನ್ನ ಯೋಚಿಸಿ! **–ಲಕ್ಷ್ಮಣ್ ಗೊಲ್ಲಕಟ್ಟೆ, ಮೈಸೂರು.**

ಹಿಂದಿ ಹೇರಿಕೆ; ಕೇಂದ್ರದ ಧೋರಣೆ ಸರಿಯಲ್ಲ

ಮಾನ್ಯರೆ,

ಕೇಂದ್ರದ 3 ಭಾಷಾ ಸೂತ್ರ ಹಾಗೂ ಎನ್‌ಇಪಿ ಹೇರಿಕೆ ಅಳವಡಿಸಿಕೊಳ್ಳದಿದ್ದರೆ ಎನ್‌ಎಸ್‌ಎ ಅನುದಾನ ನೀಡುವುದಿಲ್ಲ ಎಂದ ಕೇಂದ್ರ ಶಿಕ್ಷಣ ಸಚಿವ ಧರ್ಮೇಂದ್ರ ಪ್ರಧಾನ್ ವಿರುದ್ಧ ತಮಿಳುನಾಡು ಸರ್ಕಾರ ಹಾಗೂ ಜನತೆ ಸೆಟೆದು ನಿಂತಿದೆ. ಅನುದಾನ ಸ್ಥಗಿತ ಬೆದರಿಕೆ, ಪತ್ರಿಕಾ ವರದಿ.(20.2.25.) ಕೇಂದ್ರದ ಭಾಷಾ ನೀತಿ ಖಂಡನೀಯ. ತಮಿಳುನಾಡಿನಲ್ಲಿ ಹಿಂದಿನಿಂದಲೂ ದ್ವಿಭಾಷಾ ಸೂತ್ರವನ್ನು ಪಾಲಿಸಿಕೊಂಡು ಬಂದಿದೆ ಎನ್ನುವುದು ಗಮನಾರ್ಹ. ಆದರೆ ಕರ್ನಾಟಕದಲ್ಲಿ ತ್ರಿಭಾಷಾ ಸೂತ್ರವನ್ನು ಪಾಲಿಸುತ್ತಿದ್ದು ಇಲ್ಲಿ ಖಾಸಗಿ ಶಾಲೆಗಳು ಕನ್ನಡವನ್ನು ದ್ವಿತೀಯ ಅಥವಾ ತೃತೀಯ ಭಾಷೆಯಾಗಿ ಬೋಧಿಸುತ್ತಿರುವುದರಿಂದ ಕನ್ನಡ ಕಲಿಕೆಯಲ್ಲಿ ಮಕ್ಕಳು ಹಿಂದುಳಿಯಲು ಕಾರಣವಾಗಿದೆ. ಎಲ್ಲಾ ಶಾಲೆಗಳಲ್ಲೂ ಕನ್ನಡವನ್ನು ಪ್ರಥಮ ಭಾಷೆಯಾಗಿ ಕಡ್ಡಾಯವಾಗಿ ಬೋಧಿಸುವಂತೆ ಸರ್ಕಾರ ಆದೇಶ ಮಾಡಬೇಕು. ಇಲ್ಲದಿದ್ದರೆ 3 ಭಾಷಾ ಸೂತ್ರ ಹಾಗೂ ಎನ್‌ಇಪಿಯಲ್ಲಿ ಕನ್ನಡ ತನ್ನತನವನ್ನು ಕಳೆದುಕೊಳ್ಳುವ ಎಲ್ಲಾ ಲಕ್ಷಣಗಳಿವೆ. ಕನ್ನಡ ಅಭಿವೃದ್ಧಿ ಪ್ರಾಧಿಕಾರ, ಕನ್ನಡ ಸಂಘಟನೆಗಳು ಕಾರ್ಯೋನ್ಮುಖವಾಗಬೇಕು. ಇಲ್ಲದಿದ್ದರೆ ಸಾಹಿತಿಗಳು, ಜನರು, ಸಂಘಟನೆಗಳು, ಚಿತ್ರರಂಗದವರ 1980ರ ದಶಕದ ಗೋಕಾಕ್ ಹೋರಾಟದ ಫಲಶ್ರುತಿ ಮಣ್ಣಾಗುತ್ತದೆ.

–ಮುಳ್ಳೂರು ಪ್ರಕಾಶ್, ಕನಕದಾಸನಗರ, ಮೈಸೂರು.

ಅಪರಾಧ ಪ್ರಕರಣಗಳಲ್ಲಿ ವಶಪಡಿಸಿಕೊಂಡ ಹಣ, ಚಿನ್ನಾಭರಣ, ಆಯುಧ, ಅಮೂಲ್ಯ ದಾಖಲೆ ಸಂರಕ್ಷಣೆ ಪೊಲೀಸರಿಗೆ ಸವಾಲು!

● ಎಸ್.ಟಿ.ರವಿಕುಮಾರ್


ವಿಜ್ಞಾನ, ತಂತ್ರಜ್ಞಾನ ಬೆಳೆದಂತೆ ಆಧುನಿಕ ಸಮಾಜದಲ್ಲಿ ನಾನಾ ಅಪರಾಧ ಕೃತ್ಯಗಳ ಸಂಖ್ಯೆ ಹೆಚ್ಚಾಗುತ್ತಿವೆ. ಸಮಾಧಾನಕರ ವಿಚಾರವೆಂದರೆ, ಆಧುನಿಕ ತಂತ್ರಜ್ಞಾನವು ಅಪರಾಧ ಪತ್ತೆ, ತಡೆಗೆ ನೆರವಾಗಿರುವುದು.

ಈ ಹಿಂದೆ ವಿಜ್ಞಾನ–ತಂತ್ರಜ್ಞಾನ, ತಂತ್ರಾಂಶ ಇಲ್ಲದಿದ್ದಾಗ ಸಮಾಜದಲ್ಲಿ ಕಾನೂನು ಸುವ್ಯವಸ್ಥೆ ಕಾಯ್ದುಕೊಳ್ಳುವುದು, ಅಪರಾಧ ಕೃತ್ಯಗಳ ತಡೆ ಮತ್ತು ಪ್ರಕರಣಗಳ ಪತ್ತೆ ಕಾರ್ಯವು ವಿಳಂಬ ಮತ್ತು ಕ್ಲಿಷ್ಟಕರವಾಗಿತ್ತು. ತಲೆಮರೆಸಿಕೊಂಡ ಆರೋಪಿಗಳನ್ನು ಪತ್ತೆ ಮಾಡಿ, ಬಂಧಿಸುವುದು ಅತ್ಯಂತ ಸಾಹಸ ಕಾರ್ಯವೇ ಆಗಿತ್ತು.

ಅಪರಾಧ ಕೃತ್ಯಗಳನ್ನು ಭೇದಿಸಿ ಆರೋಪಿಗಳಿಂದ ವಶಪಡಿಸಿಕೊಂಡ, ಜಪ್ತಿ ಮಾಡಿದ ಮಾಲುಗಳ ಸಂತ್ರಸ್ತರಿಗೆ ವಿಲೇವಾರಿಗೆ ನ್ಯಾಯಾಲಯ ಅನುಮತಿ ನೀಡುವವರೆಗೆ ಸುರಕ್ಷಿತವಾಗಿ ಸಂರಕ್ಷಿಸುವುದು, ಪ್ರಕರಣದ ವಿಚಾರಣೆಗೆ ಅಗತ್ಯ ಸಾಕ್ಷ್ಯಾಧಾರವಾಗಿ ನ್ಯಾಯಾಧೀಶರ ಮುಂದೆ ಸಾದರಪಡಿಸುವುದು ಪೊಲೀಸರಿಗೆ ಸವಾಲಾಗಿದೆ.

ಕೃತ್ಯ ನಡೆದ ಸ್ಥಳದಲ್ಲಿ ಇಲ್ಲವೇ ವಶಪಡಿಸಿಕೊಂಡ ಮಾಲುಗಳನ್ನು ಯಥಾವತ್ತಾಗಿ ಸಂರಕ್ಷಿಸುವುದು ತನಿಖಾಧಿಕಾರಿಯ ಪ್ರಮುಖ ಕರ್ತವ್ಯ. ಮನೆ ಕಳವು, ಮಹಿಳೆಯರ ಸರ ಅಪಹರಣ, ದರೋಡೆ, ಕೊಲೆ, ಸುಲಿಗೆ, ಅಪಘಾತಗಳಂತಹ ಪ್ರಕರಣಗಳಲ್ಲಿ ವಶಪಡಿಸಿಕೊಂಡ ಚಿನ್ನ, ಬೆಳ್ಳಿ ಇನ್ನಿತರೆ ಬೆಲೆಬಾಳುವ ಆಭರಣಗಳನ್ನು ಕಾಪಾಡುವುದು ಭಾರತೀಯ ನಾಗರಿಕ ಸುರಕ್ಷಾ ಸಂಹಿತೆ (BNSS) – 2023 ರೀತ್ಯಾ ಅತ್ಯಗತ್ಯವಾಗಿದೆ.

ಸದರಿ ಕಾಯ್ದೆಯ ಕಲಂ 117 ರಲ್ಲಿ ಮಾಲಿನ ಜಪ್ತಿ ಬಗ್ಗೆ ಕಲಂ 118 ರಲ್ಲಿ ವಶಪಡಿಸಿಕೊಂಡ ವಸ್ತುಗಳ ನಿರ್ವಹಣೆ ಬಗ್ಗೆ, ಕಲಂ 119 ರಲ್ಲಿ ಸದರಿ ಮಾಲಿನ ಮಾಲೀಕನಿಗೆ ನೋಟಿಸ್ ನೀಡಿ ಮಾಹಿತಿ ನೀಡುವ ಬಗ್ಗೆ, ಕಲಂ 120 ರಲ್ಲಿ ಲಿಕ್ಕರ್, ದನ–ಕರು, ಕನ್‌ಸ್ಟ್ರಕ್ಷನ್ ಮೆಟೀರಿಯಲ್, ಮಾದಕ ವಸ್ತುಗಳಂತಹ ರೂಪದ ವಸ್ತುಗಳನ್ನು ವಶಪಡಿಸಿಕೊಂಡಾಗ ಪೊಲೀಸರು ಅನುಸರಿಸಬೇಕಾದ ಕ್ರಮಗಳ ಬಗ್ಗೆ ವಿವರಿಸಲಾಗಿದೆ.



ಮೈಸೂರಿನ ನಜರ್‌ಬಾದ್‌ನಲ್ಲಿರುವ ಪೊಲೀಸ್ ಕಮಿಷ್ನರ್ ಕಚೇರಿಯಲ್ಲಿರುವ ನೂತನ ನಾರ್ಕೋಟಿಕ್ ಸ್ಟಾಕ್‌ರೂಂ

> ಅಪರಾಧ ಪ್ರಕರಣಗಳ ಆರೋಪಿಗಳ ಬಂಧಿಸಿ ವಿಚಾರಣೆ ನಡೆಸಿ, ಸ್ಥಳ ಮಹಜರು ಪ್ರಕ್ರಿಯೆ ಪೂರ್ಣಗೊಳಿಸಿ ನ್ಯಾಯಾಧೀಶರ ಮುಂದೆ ಹಾಜರುಪಡಿಸುವವರೆಗೂ ಅವರನ್ನು ಸುರಕ್ಷಿತವಾಗಿ ನೋಡಿಕೊಳ್ಳುವಂತೆಯೇ, ಅವರಿಂದ ವಶಪಡಿಸಿಕೊಂಡ ಮಾಲುಗಳನ್ನು ನ್ಯಾಯಾಲಯದ ಅನುಮತಿ ಮೇರೆಗೆ ವಾರಸುದಾರರಿಗೆ ಹಸ್ತಾಂತರಿಸುವವರೆಗೆ ಬಿಗಿ ಭದ್ರತೆಯಲ್ಲಿ ಸಂರಕ್ಷಿಸಿಡಬೇಕು. ಅದಕ್ಕೆ ಪೊಲೀಸ್ ಇಲಾಖೆಯಲ್ಲಿ ಸೂಕ್ತ ವ್ಯವಸ್ಥೆ ಕಲ್ಪಿಸಲಾಗಿದೆ. ಪೊಲೀಸರು ಎಚ್ಚರ ವಹಿಸಿ ಜವಾಬ್ದಾರಿ ನಿರ್ವಹಿಸಬೇಕಿದೆ.
>
> –ಸೀಮಾ ಲಾಟ್ಕರ್, ಮೈಸೂರು ಪೊಲೀಸ್ ಆಯುಕ್ತರು.



ಸ್ಟೇಷನ್ ಲಾಕರ್

ಅಪರಾಧ ಪ್ರಕರಣಗಳಲ್ಲಿ ವಶಪಡಿಸಿಕೊಂಡ ಮಾಲುಗಳು ಕಡಿಮೆ ಪ್ರಮಾಣದಲ್ಲಿದ್ದರೆ ಪೊಲೀಸ್ ಠಾಣೆಯಲ್ಲಿರುವ ಲಾಕರ್‌ನಲ್ಲಿರಿಸಿ, ಸೀಲ್ ಹಾಕಲಾಗುತ್ತದೆ. ಆ ವೇಳೆ ಸ್ವತ್ತಿನ ಪಟ್ಟಿ (Property Form - PF) ಸಿದ್ಧಪಡಿಸಿ ಮುದ್ದೆಮಾಲ್ ರಿಜಿಸ್ಟರ್ (seized property register) ನಲ್ಲೂ ವಿವರಗಳನ್ನು ಬರೆದು, ಕಾನೂನಾತ್ಮಕವಾಗಿ ವಿಲೇವಾರಿ ಮಾಡುವವರೆಗೆ (till disposal) ಸುರಕ್ಷಿತವಾಗಿರಿಸಿಕೊಳ್ಳುವುದು ಕಡ್ಡಾಯವಾಗಿದೆ.

ಒಂದು ವೇಳೆ ವಶಪಡಿಸಿಕೊಂಡ ಮಾಲು ಭಾರಿ ಪ್ರಮಾಣದಲ್ಲಿದ್ದರೆ, (ಅಮೂಲ್ಯ ದಾಖಲೆಗಳು, ಚಿನ್ನಾಭರಣ, ಬೆಳ್ಳಿ ಪದಾರ್ಥಗಳು ಇತ್ಯಾದಿ) ಅವುಗಳನ್ನು ಜಿಲ್ಲಾಧಿಕಾರಿಗಳ ಅನುಮತಿ ಪಡೆದು ಜಿಲ್ಲಾ ಖಜಾನೆ (District Treasury) ಯಲ್ಲಿ ಸುರಕ್ಷಿತವಾಗಿಟ್ಟು ವಿಲೇವಾರಿ ಮಾಡುವಂತೆ ನ್ಯಾಯಾಧೀಶರು ಅನುಮತಿ ನೀಡುವವರೆಗೆ ಇರಿಸಬೇಕಾಗಿದೆ. ಆದರೆ, ಅವುಗಳ ವಿವರಗಳನ್ನು ಪೊಲೀಸ್ ಠಾಣೆಯ ಪ್ರಕರಣದ ಕಡತ, ಪ್ರಾಪರ್ಟಿ ಫಾರಂ (PF) ಮುದ್ದೆಮಾಲ್ ರಿಜಿಸ್ಟರ್‌ನಲ್ಲಿ ನಮೂದಿಸಬೇಕು. ವಾಹನಗಳಾದರೆ ಅವುಗಳನ್ನು ಪೊಲೀಸ್ ಠಾಣಾ ಆವರಣದಲ್ಲಿರಿಸಿ ಕೋರ್ಟ್ ಪರ್ಮಿಷನ್ ಮೇರೆಗೆ ವಾರಸುದಾರರಿಗೆ ರಿಲೀಸ್ ಮಾಡಬಹುದು.

ಲೋಕಾಯುಕ್ತ ಪೊಲೀಸ್‌ಠಾಣೆಗಳಲ್ಲಿ ವಶಪಡಿಸಿಕೊಂಡ ಸ್ವತ್ತುಗಳು, ದಾಖಲೆ ಪತ್ರಗಳನ್ನು ಆಯಾಯ ಠಾಣೆಯ ಸ್ಟ್ರಾಂಗ್‌ರೂಂನಲ್ಲಿರಿಸಲಾಗುತ್ತದೆ. ಅಬಕಾರಿ ಇಲಾಖೆ ಅಧಿಕಾರಿಗಳು ದಾಳಿ ಮಾಡಿ ವಶಪಡಿಸಿಕೊಂಡ ಲಿಕ್ಕರ್‌ನ ಸ್ಯಾಂಪಲ್‌ಗಳನ್ನು ಎಫ್‌ಎಸ್‌ಎಲ್‌ಗೆ ಕಳುಹಿಸಿ ನೈಜತೆ ಪರೀಕ್ಷಿಸಿಕೊಂಡು ನಕಲಿಯಾಗಿದ್ದರೆ ನಾಶಪಡಿಸಬೇಕು.

ಅಧಿಕಾರಿಗಳು ಅಥವಾ ಪೊಲೀಸರು ವಶಪಡಿಸಿಕೊಂಡ ಶ್ರೀಗಂಧ, ಆನೆದಂತ, ಇತ್ಯಾದಿ ಬೆಲೆ ಬಾಳುವ ಮಾಲುಗಳನ್ನು ವೈಲ್ಡ್‌ಲೈಫ್ ಕಾಯ್ದೆ ಪ್ರಕಾರ ಅರಣ್ಯ ಇಲಾಖೆಯ ಶ್ರೀಗಂಧದ ಕೋಠಿಯಲ್ಲಿ ಸಂರಕ್ಷಿಸಬೇಕಾಗಿದೆ. ಮಾದಕ ವಸ್ತುಗಳಾಗಿದ್ದರೆ ಅವುಗಳನ್ನು ನೋಟಿಫೈಡ್ ಸ್ಥಳಗಳಲ್ಲಿ (ಮೈಸೂರು ನಗರ ಪೊಲೀಸ್ ಕಮಿಷ್ನರ್ ಕಚೇರಿಯ ನಾರ್ಕೋಟಿಕ್ ಸ್ಟಾಕ್‌ರೂಂ) ಮಾತ್ರ ಶೇಖರಿಸಿಡಬೇಕು.

ಯಾವುದೇ ಸ್ಫೋಟಕ ವಸ್ತುಗಳನ್ನು ಪೊಲೀಸರು ಠಾಣೆಗೆ ತರಬಾರದು. ವಿಷಯ ತಿಳಿಯುತ್ತಿದ್ದಂತೆಯೇ ಬಾಂಬ್ ಡಿಟೆಕ್ಷನ್ ಅಂಡ್ ಡಿಸ್ಪೋಸಲ್ ಸ್ಕ್ವಾಡ್(BDDS)ಗೆ ಮಾಹಿತಿ ನೀಡಿ ಸ್ಥಳದಲ್ಲಿ ನುರಿತ ಸಿಬ್ಬಂದಿಗಳಿಂದ ಡಿಸ್ಪೋಸ್ ಮಾಡಬೇಕು. ಆ ವೇಳೆ ಸದರಿ ಪ್ರದೇಶವನ್ನು ನಿರ್ಬಂಧಿಸಿ ಯಾರೂ ಹತ್ತಿರಕ್ಕೆ ಸುಳಿಯದಂತೆ ಎಚ್ಚರ ವಹಿಸಿ ಸ್ಫೋಟಕವಿದ್ದಲ್ಲಿ ನಿಷ್ಕ್ರಿಯಗೊಳಿಸಲಾಗುವುದು.

ಗ್ಯಾಸ್ ಸಿಲಿಂಡರ್, ರಾಸಾಯನಿಕ ವಸ್ತುಗಳನ್ನು ವಶಪಡಿಸಿಕೊಂಡಾಗ ಅಧಿಕೃತ ಗೋದಾಮಿನಲ್ಲಿರಿಸಿ ಪ್ರಕರಣದ ಅಂತಿಮ ವರದಿ ಸಲ್ಲಿಸುವಾಗ ತನಿಖಾಧಿಕಾರಿಗಳು ನ್ಯಾಯಾಲಯಕ್ಕೆ ಸ್ವತ್ತನ್ನು ಹಾಜರುಪಡಿಸಬೇಕು. ಒಂದು ವೇಳೆ ಶಸ್ತ್ರಾಸ್ತ್ರಗಳನ್ನು ವಶಪಡಿಸಿಕೊಂಡಾಗ ಚಿಕ್ಕವುಗಳಾಗಿದ್ದಲ್ಲಿ ಠಾಣಾ ಲಾಕರ್‌ನಲ್ಲೇ ಇರಿಸಿಕೊಳ್ಳಬಹುದು. ದೊಡ್ಡ ಆಕಾರ ಉಳ್ಳವಾಗಿದ್ದಲ್ಲಿ ಅವುಗಳನ್ನು ನಗರ ಸಶಸ್ತ್ರ ಮೀಸಲು ಪಡೆ (City Armed Reserve) ಯ ಆರ್ಮರಿ ಸ್ಟೋರ್‌ನಲ್ಲಿ ಠೇವಣಿ ಇರಿಸಲಾಗುವುದು.

ಹೀಗೆ, ಪೊಲೀಸರು ನಾನಾ ಅಪರಾಧ ಪ್ರಕರಣಗಳಲ್ಲಿ ಜಪ್ತಿ ಮಾಡಿದ ಮಾಲುಗಳನ್ನು ಪ್ರಕರಣ ಇತ್ಯರ್ಥವಾಗುವವರೆಗೂ ಕಾಯಬೇಕಿಲ್ಲ. ನ್ಯಾಯಾಲಯದಿಂದ ಅನುಮತಿ ಪಡೆದು ಯಾವಾಗ ಬೇಕಾದರೂ ಅದರ ವಾರಸುದಾರರಿಗೆ ನೀಡಬಹುದು. ಆದರೆ ಅವರಿಂದ ಇಂಡೆಮ್ನಿಟಿ ಬಾಂಡ್ ಪಡೆಯಬೇಕಾಗುತ್ತದೆ. ಹಲವು ಪ್ರಕರಣಗಳಲ್ಲಿ ತನಿಖಾಧಿಕಾರಿಗಳಿಗೆ ತನಿಖೆ ನಡೆಸಿ ಸಾಕ್ಷ್ಯಾಧಾರಗಳ ಮೂಲಕ ನ್ಯಾಯಾಲಯಕ್ಕೆ ದೋಷಾರೋಪಣಾ (ಚಾರ್ಜ್‌ಶೀಟ್) ಪಟ್ಟಿ ಸಲ್ಲಿಸಿ ಆರೋಪಿಗಳಿಗೆ ಶಿಕ್ಷೆ ವಿಧಿಸುವುದು ಒಂದು ಸವಾಲಾದರೆ, ವಶಪಡಿಸಿಕೊಂಡ ಮಾಲನ್ನು ಸುರಕ್ಷಿತವಾಗಿಟ್ಟು ಕೊಳ್ಳುವುದು ಮತ್ತೊಂದು ಮಹತ್ತರ ಜವಾಬ್ದಾರಿಯಾಗಿದೆ.

ಸಾಂಕ್ರಾಮಿಕ ರೋಗಗಳ ಬಗ್ಗೆ ಸಾರ್ವಜನಿಕರಲ್ಲಿ ಹೆಚ್ಚು ಜಾಗೃತಿ ಮೂಡಿಸಿ: ಡಿಸಿ ಲಕ್ಷ್ಮಿಕಾಂತ ರೆಡ್ಡಿ

ಮೈಸೂರು, ಮಾ.3–ವಿವಿಧ ಖಾಯಿಲೆಗಳ ಬಗ್ಗೆ ಸಾರ್ವಜನಿಕರಲ್ಲಿ ಹೆಚ್ಚು ಜಾಗೃತಿ ಮೂಡಿಸಿ ಮುಂಜಾಗ್ರತೆ ಕ್ರಮವನ್ನು ವಹಿಸಬೇಕೆಂದು ಎಂದು ಜಿಲ್ಲಾಧಿಕಾರಿಗಳಾದ ಜಿ.ಲಕ್ಷ್ಮೀಕಾಂತ ರೆಡ್ಡಿ ಹೇಳಿದರು.

ಡಿಸಿ ಕಚೇರಿ ಸಭಾಂಗಣದಲ್ಲಿ ಹಮ್ಮಿಕೊಳ್ಳಲಾಗಿದ್ದ ಜಿಲ್ಲಾ ಸರ್ವೇಕ್ಷಣಾ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಮಂಗನ ಖಾಯಿಲೆ ಬಗ್ಗೆ ಹೆಚ್ಚು ಎಚ್ಚರಿಕೆ ವಹಿಸಬೇಕು ಈ ಖಾಯಿಲೆ ಬಗ್ಗೆ ಜನರಲ್ಲಿ ಮುಂಜಾಗ್ರತೆ ವಹಿಸಬೇಕೆಂದು ಹೇಳಿದರು. ಕೋಳಿ ಜ್ವರದ ಬಗ್ಗೆ ಹೆಚ್ಚು ಗಮನ ವಹಿಸಬೇಕು ಗ್ರಾಮಪಂಚಾಯಿತಿ ಮಟ್ಟದಿಂದಲೇ ಇದರ ಬಗ್ಗೆ ಮಾಹಿತಿಯನ್ನು ನೀಡುವುದರ ಜೊತೆಗೆ ಜಾಗೃತಿಯನ್ನು ಮೂಡಿಸಿ ಎಂದು ಹೇಳಿದರು.

ಜಿಲ್ಲೆಯ ಆಸ್ಪತ್ರೆಗಳಲ್ಲಿ ಹಾಗೂ ಅರೋಗ್ಯ ಕೇಂದ್ರಗಳಲ್ಲಿ ಸಾಕಷ್ಟು ಪ್ರಮಾಣದ ಔಷಧಿ ದಾಸ್ತಾನುಗಳ ಬಗ್ಗೆ ಇನ್ನೂ ಹೆಚ್ಚು ಕ್ರಮವಹಿಸಿ. ಹೊರ ರಾಜ್ಯದಿಂದ ಬರುವಂತಹ ಸಾಗಾಣಿಕೆ ವಾಹನಗಳ ಬಗ್ಗೆ ಹೆಚ್ಚು ಗಮನ ವಹಿಸಬೇಕು ಎಂದರು.



ಅತಿಸಾರ, ಕರಳುಬೇನೆ, ಕಾಲರಾ, ಅರಿಶಿನ ಕಾಮಾಲೆ, ವಿಷಮಶೀತ ಜ್ವರ, ಇಲಿ ಜ್ವರಗಳ ಬಗ್ಗೆ ತಾಲೂಕು ಮಟ್ಟದಲ್ಲಿ ಎಷ್ಟು ಪ್ರಕರಣಗಳು ದಾಖಲಾಗಿವೆ ಎನ್ನುವುದರ ಬಗ್ಗೆ ಚರ್ಚೆ ನಡೆಸಿದರು. ಕಾಲರಾ ರೋಗದ ಹಾಗೂ ಅತಿಸಾರ ಖಾಯಿಲೆಗಳ ಬಗ್ಗೆ ಗ್ರಾಮೀಣ ಮತ್ತು ನಗರ ಪ್ರದೇಶಗಳಲ್ಲಿ ಹೆಚ್ಚು ಮುಂಜಾಗ್ರತೆ ಕ್ರಮ ವಹಿಸಿ 13 ನಗರ ಸಂಸ್ಥೆಗಲ್ಲಿ ಹೆಚ್ಚು ಗಮನ ವಹಿಸಿ ಟೆಸ್ಟಿಂಗ್‌ಗಳನ್ನು ಮಾಡಿಸುತ್ತಾ ಇರಬೇಕು ಎಂದು ಹೇಳಿದರು.

ಈ ಎಲ್ಲಾ ಕಾರ್ಯಕ್ರಮಗಳು ಈ ತಿಂಗಳೇ ಮಾಡಬೇಕು. ಬೇಸಿಗೆ ಪ್ರಾರಂಭವಾಗುವುದರಿಂದ ಮುಂಬರುವ 3 ತಿಂಗಳ ಒಳಗಾಗಿ ಎಲ್ಲದರ ಬಗ್ಗೆ ಹೆಚ್ಚು ಕ್ರಮ ವಹಿಸಿ ಎಂದರು. H1N1ಮತ್ತು ಕೋವಿಡ್ ಬಗ್ಗೆಯೂ ತಾಲೂಕು ಹಂತದಲ್ಲಿ ಚರ್ಚೆ ನಡೆಸಲಾಯಿತು. ನಾಯಿ ಕಡಿತ ಮತ್ತು ರೇಬೀಸ್ ಖಾಯಿಲೆಯಿಂದ ಎಷ್ಟು ಪ್ರಕರಣಗಳು ದಾಖಲಾಗಿವೆ, ಎಷ್ಟು ಸಾವಿನ ಪ್ರಕರಣಗಳು ಎಷ್ಟು ವಯಸ್ಸಿನವರಲ್ಲಿ ಸಂಭವಿಸಿವೆ, ಏನೆಲ್ಲಾ ಮುಂಜಾಗ್ರತೆ ಕ್ರಮ ವಹಿಸಬೇಕು ಎಂಬುದರ ಬಗ್ಗೆ ಚರ್ಚೆ ನಡೆಸಿದರು. ಹಾವು ಕಡಿತದ ಬಗ್ಗೆಯೂ ತಾಲೂಕು ಮಟ್ಟದಲ್ಲಿ ಎಷ್ಟು ಪ್ರಕರಣ ದಾಖಲಾಗಿದೆ. ಇದರಿಂದ ಎಷ್ಟು ಸಾವಿನ ಪ್ರಕರಣಗಳು ಸಂಭವಿಸಿವೆ ಎಂಬುದರ ಬಗ್ಗೆಯೂ ಚರ್ಚೆ ನಡೆಸಲಾಯಿತು. ಸಭೆಯಲ್ಲಿ ಜಿಪಂ ಸಿಇಓ ಯುಕೇಶ್‌ಕುಮಾರ್ ಇತರರಿದ್ದರು.

ಡಿ.ಬಿ.ಕುಪ್ಪೆ ಅರಣ್ಯದಲ್ಲಿ ಹಿರಿಯ ಐಎಫ್ಎಸ್ ಅಧಿಕಾರಿ ದಿವಂಗತ ಎಸ್.ಮಣಿಕಂದನ್ ಪುತ್ಥಳಿ ಅನಾವರಣ

ಕರ್ತವ್ಯ ನಿರ್ವಹಣೆ ವೇಳೆ ಕಾಡಾನೆ ದಾಳಿಗೆ ಬಲಿಯಾಗಿದ್ದ ದಕ್ಷ ಅಧಿಕಾರಿ

ಮೈಸೂರು,ಮಾ.3(ಎಂಟಿವೈ)– ವಿಶ್ವ ವನ್ಯಜೀವಿ ದಿನಾಚರಣೆ ಹಿನ್ನೆಲೆಯಲ್ಲಿ ಕರ್ತವ್ಯದ ವೇಳೆ ಕಾಡಾನೆ ದಾಳಿಗೆ ಒಳಗಾಗಿ ಮೃತಪಟ್ಟಿದ್ದ ನಾಗರಹೊಳೆ ಹುಲಿ ಸಂರಕ್ಷಿತ ಪ್ರದೇಶದ ನಿರ್ದೇಶಕರಾಗಿದ್ದ ಹಿರಿಯ ಐಎಫ್‌ಎಸ್ ಅಧಿಕಾರಿ ಎಸ್.ಮಣಿಕಂದನ್ ಅವರ ಪುತ್ಥಳಿಯನ್ನು ನಾಗರಹೊಳೆ ಹುಲಿ ಸಂರಕ್ಷಿತ ಪ್ರದೇಶ ಡಿ.ಬಿ.ಕುಪ್ಪೆ ವಲಯದಲ್ಲಿ ಅನಾವರಣಗೊಳಿಸಿ ಗೌರವ ಸಮರ್ಪಿಸಲಾಯಿತು.

ನಾಗರಹೊಳೆ ಹುಲಿ ಸಂರಕ್ಷಿತ ಪ್ರದೇಶದ ಡಿ.ಬಿ.ಕುಪ್ಪೆ ವಲಯದಲ್ಲಿ ಕಾಡಾನೆ ದಾಳಿ ಮಾಡಿದ ಸ್ಥಳದಲ್ಲಿಯೇ ಮಣಿಕಂದನ್ ಅವರ ಪುತ್ಥಳಿ ಪ್ರತಿಷ್ಠಾಪಿಸಿ, ಅದಕ್ಕೆ ಕಾಡಾನೆಗಳಿಂದ ರಕ್ಷಣೆ ನೀಡಲು ರೈಲ್ವೆ ಬ್ಯಾರಿಕೇಡ್ ಅಳವಡಿಸಲಾಗಿದೆ. ಇಂದು ನಡೆದ ವಿಶ್ವವನ್ಯಜೀವಿ ದಿನಾಚರಣೆ ಕಾರ್ಯಕ್ರಮದಲ್ಲಿ ನಾಗರಹೊಳೆಯ ಅಂತರಸಂತೆ, ಡಿ.ಬಿ.ಕುಪ್ಪೆ ಸೇರಿದಂತೆ ವಿವಿಧ ವಲಯಗಳ ಅಧಿಕಾರಿ, ಸಿಬ್ಬಂದಿ ಪಾಲ್ಗೊಂಡು ಮಣಿಕಂದನ್ ಅವರ ಪುತ್ಥಳಿಗೆ ಪುಷ್ಪನಮನ ಸಲ್ಲಿಸಿ ಕಂಬನಿ ಮಿಡಿದರು.

ಮಣಿಕಂದನ್ ಅವರ ಪುತ್ಥಳಿಯನ್ನು ನಾಗರಹೊಳೆ ಹುಲಿ ಸಂರಕ್ಷಿತ ಪ್ರದೇಶದ ನಿರ್ದೇಶಕರಾದ ಪಿ.ಎ.ಸೀಮಾ ಉದ್ಘಾಟಿಸಿ, ಮಾಲಾರ್ಪಣೆ ಮಾಡಿ ಮಾತನಾಡಿದರು. ಕಾಕತಾಳೀಯ ಎಂಬಂತೆ ವಿಶ್ವ ವನ್ಯಜೀವಿ ದಿನಾಚರಣೆ ದಿನವೇ ದಕ್ಷ ಅರಣ್ಯಾಧಿಕಾರಿಯಾಗಿದ್ದ ಮಣಿಕಂದನ್ ಅವರ ಪುಣ್ಯಸ್ಮರಣೆ ದಿನ ಆಚರಿಸುವಂತಾಗಿದೆ. ಮಣಿಕಂದನ್ ಅವರಿಗೆ ಅರಣ್ಯ, ವನ್ಯಜೀವಿ ಸಂರಕ್ಷಣೆ ಬಗ್ಗೆ ಇದ್ದ ಒಲವು ಮತ್ತು ಕಾಳಜಿ ನಮಗೆ ಸ್ಫೂರ್ತಿಯಾಗಬೇಕು. ಅವರ ಸೇವಾ ಬದ್ಧತೆ, ಆದರ್ಶ, ಅರಣ್ಯದ ಹಿತಚಿಂತನೆಗಾಗಿ ಸದಾ ಚಿಂತಿಸುತ್ತಿದ್ದ ಅವರ ಮೌಲ್ಯಗಳನ್ನು ನಮ್ಮ ಜೀವನದಲ್ಲಿ ಅಳವಡಿಸಿಕೊಳ್ಳಬೇಕು. ಅರಣ್ಯ ಪ್ರದೇಶದಲ್ಲಿ ಕರ್ತವ್ಯ ನಿರ್ವಹಿಸುವ ವೇಳೆ ಮಾರ್ಗಸೂಚಿ ನಿಯಮದಂತೆ ಸುತ್ತಮುತ್ತಲಿನ ವಾತಾವರಣದ ಮಾಹಿತಿ ಪಡೆದು ಕರ್ತವ್ಯ ನಿರ್ವಹಿಸಬೇಕು. ಸಿಬ್ಬಂದಿ ನಿಮ್ಮ ಸುರಕ್ಷತೆಗೂ ಗಮನಹರಿಸಬೇಕು. ಅರಣ್ಯ ಹಾಗೂ ವನ್ಯಜೀವಿ ಸಂರಕ್ಷಣೆಯೊಂದಿಗೆ ನಮ್ಮ ಸುರಕ್ಷತೆಯೂ ಮುಖ್ಯ ಎಂದು ಸಲಹೆ ನೀಡಿದರು.



ಡಿ.ಬಿ.ಕುಪ್ಪೆ ವಲಯದಲ್ಲಿ ಹಿರಿಯ ಐಎಫ್‌ಎಸ್ ಅಧಿಕಾರಿ ಮಣಿಕಂದನ್‌ರ ಪುತ್ಥಳಿಯನ್ನು ನಾಗರಹೊಳೆ ಹುಲಿ ಸಂರಕ್ಷಿತ ಪ್ರದೇಶದ ನಿರ್ದೇಶಕಿ ಸೀಮಾ ಉದ್ಘಾಟಿಸಿದರು.

ಮಣಿಕಂದನ್ ಅವರ ನೆನಪು: ನಾಗರಹೊಳೆ ಹುಲಿ ಸಂರಕ್ಷಿತ ಪ್ರದೇಶ ನಿರ್ದೇಶಕರಾಗಿ ಕಾರ್ಯನಿರ್ವಹಿಸುತ್ತಿದ್ದ ಎಸ್.ಮಣಿಕಂದನ್ ಅವರು, ಡಿ.ಬಿ.ಕುಪ್ಪೆ ವಲಯದಲ್ಲಿ ಬೆಂಕಿ ಬಿದ್ದ ಸ್ಥಳ ಪರಿಶೀಲನೆಗೆಂದು ಸಿಬ್ಬಂದಿಗಳೊಂದಿಗೆ 2018ರ ಮಾ.3ರಂದು ಅರಣ್ಯ ಪ್ರದೇಶದಲ್ಲಿ ಕಾಲ್ನಡಿಯಲ್ಲಿ ಹೋಗುವಾಗ ದಟ್ಟ ಪೊದೆಯಲ್ಲಿ ಅವಿತುಕೊಂಡಿದ್ದ ಒಂಟಿ ಸಲಗ ಏಕಾಏಕಿ ದಾಳಿ ಮಾಡಿ, ಮುಂಚೂಣಿಯಲ್ಲಿ ಸಾಗುತ್ತಿದ್ದ ಮಣಿಕಂದನ್ ಅವರನ್ನು ಕೊಂದು ಹಾಕಿತ್ತು. ರಾಜ್ಯ ಮಾತ್ರವಲ್ಲದೇ ದೇಶದಲ್ಲಿಯೇ ಐಎಫ್‌ಎಸ್ ಅಧಿಕಾರಿಯೊಬ್ಬರು ಕ್ಷೇತ್ರ ವೀಕ್ಷಣೆ ಸಂದರ್ಭದಲ್ಲಿ ಆನೆ ದಾಳಿಗೆ ಒಳಗಾಗಿ ಮೃತಪಟ್ಟ ಮೊದಲ ಅಧಿಕಾರಿ ಎನಿಸಿದರು. ಈ ಹಿಂದೆ ವೀರಪ್ಪನ್ ದಾಳಿಗೆ ಐಎಫ್‌ಎಸ್ ಅಧಿಕಾರಿ ಶ್ರೀನಿವಾಸನ್ ಬಲಿಯಾಗಿದ್ದು ಹೊರತುಪಡಿಸಿದರೆ, ಮಣಿಕಂದನ್ ಅವರು ಆನೆ ದಾಳಿಗೆ ಹುತಾತ್ಮರಾಗಿದ್ದಾರೆ. ಬಳ್ಳಾರಿಯಲ್ಲಿ ಡಿಸಿಎಫ್ ಆಗಿ ಅಕ್ರಮ ಗಣಿಗಾರಿಕೆ, ಗಡಿಭಾಗ ಒತ್ತುವರಿ ಸೇರಿದಂತೆ ಅನೇಕ ಕ್ರಮ ಕೈಗೊಂಡು ಹೆಸರು ಗಳಿಸಿದ್ದ ಮಣಿಕಂದನ್ ಸಿಎಫ್ ಆಗಿ ಬಡ್ತಿ ಪಡೆದು ನಾಗರಹೊಳೆ ಹುಲಿ ಸಂರಕ್ಷಿತ ಪ್ರದೇಶದ ನಿರ್ದೇಶಕರಾಗಿ ನಿಯೋಜನೆಗೊಂಡು ಉತ್ತಮ ಕೆಲಸ ಮಾಡುತ್ತಿರುವಾಗಲೇ ಆಕಸ್ಮಿಕ ಘಟನೆಯಿಂದ ಮೃತಪಟ್ಟರು.

ಪುತ್ಥಳಿ: ಮಣಿಕಂದನ್ ಅವರು ಮೃತಪಟ್ಟ ಸ್ಥಳದಲ್ಲಿಯೇ 7ನೇ ವರ್ಷದ ಸ್ಮರಣೆ ಅಂಗವಾಗಿ ಫೈಬರ್‌ನಲ್ಲಿ ಮಣಿಕಂದನ್ ಅವರ ಪುತ್ಥಳಿ ಪ್ರತಿಷ್ಠಾಪಿಸಲಾಗಿದೆ. 4 ಅಡಿ ಅಗಲದ ಫ್ಲಾಟ್‌ಫಾರಂ ಮೇಲೆ 3 ಅಡಿ ಎತ್ತರದ ಮಣಿಕಂದನ್ ಅವರ ಪುತ್ಥಳಿ ನಿರ್ಮಿಸಿ ಪ್ರತಿಷ್ಠಾಪಿಸಲಾಗಿದೆ. ಪುತ್ಥಳಿ ರಕ್ಷಣೆಗೆ ರೈಲ್ವೆ ಬ್ಯಾರಿಕೇಡ್ ಅಳವಡಿಸಲಾಗಿದೆ. ಇದರಿಂದ ಆನೆ ಸೇರಿದಂತೆ ಯಾವುದೇ ಪ್ರಾಣಿಯಿಂದ ಪುತ್ಥಳಿಗೆ ಹಾನಿಯಾಗುವುದಿಲ್ಲ. ಮೈಸೂರಿನ ರಾಹುಲ್ ಎಂಬ ಕಲಾವಿದ ಈ ಪುತ್ಥಳಿಯನ್ನು ನಿರ್ಮಿಸಿದ್ದಾರೆ. ಅಂತರಸಂತೆ ಎಸಿಎಫ್ ಮಧು ಅವರು ಡಿ.ಬಿ.ಕುಪ್ಪೆ ಆರ್‌ಎಫ್‌ಓ ಆಗಿದ್ದಾಗ ಪುತ್ಥಳಿ ನಿರ್ಮಿಸಲು ಕ್ರಮ ಕೈಗೊಂಡಿದ್ದರು.

ಕಾರ್ಯಕ್ರಮದಲ್ಲಿ ಎಸಿಎಫ್‌ಗಳಾದ ಎನ್.ಲಕ್ಷ್ಮಿಕಾಂತ್, ಮಧು, ಅಂತರಸಂತೆ ಆರ್‌ಎಫ್‌ಓ ಎಸ್.ಎಸ್.ಸಿದ್ಧರಾಜು ಸೇರಿದಂತೆ ಇನ್ನಿತರ ಸಿಬ್ಬಂದಿ ಪಾಲ್ಗೊಂಡು ಗೌರವ ನಮನ ಸಲ್ಲಿಸಿದರು.

Printed by T.S. Gopinath, Published by M. Govinde Gowda on behalf of Academy Newspapers Private Limited, 15-C Industrial 'A' Layout, Bannimantap, Mysore-570 015 and Printed at Academy Newspapers Private Limited, 15-C Industrial 'A' Layout, Bannimantap, Mysore-570 015 and Published at 15-C Industrial 'A' Layout, Bannimantap, Mysore-570 015, Editor: M. Govinde Gowda Ph: 2496520 / 2496521 / 2496526 / 2496527 / 2496528. Fax: 0821-2496525. CITY OFFICES: Visveswaraya Building, III Floor, K.R. CIRCLE, MYSORE-570 001, Ph: 2431774 and No. 114, D. DEVARAJ URS ROAD (Opposite Big Bus), MYSORE-570 001. Ph: 2428695. RNI Reg. No. 36581 / 1980 E-mail address: mysoorumithra@gmail.com For advertisements: mysoorumithra@gmail.com

ಮೈಸೂರು ಲಲಿತಮಹಲ್ ಪ್ಯಾಲೆಸ್ ಹೋಟೆಲ್ ಶೀಘ್ರ ಖಾಸಗಿ ತೆಕ್ಕೆಗೆ

ಟೆಂಡರ್ ಪ್ರಕ್ರಿಯೆ ಆರಂಭ; ಮಾರ್ಚ್ 15 ಕೊನೆಯ ದಿನಾಂಕ

- ಸರ್ಕಾರದ ಷರತ್ತುಗಳಿಗೆಲ್ಲಾ ಒಪ್ಪುವ ಕಂಪನಿಗೆ ಗುತ್ತಿಗೆ
- ಫೈನಾನ್ಷಿಯಲ್ ಬಿಡ್, ಟೆಕ್ನಿಕಲ್ ಬಿಡ್ ಅರ್ಹತೆಯೇ ಮಾನದಂಡ
- ಪಾರಂಪರಿಕತೆಗೆ ಧಕ್ಕೆಯಾಗದಂತೆ ನವೀಕರಣಕ್ಕೆ ಅವಕಾಶ



ಬಾಪುಲಿಂಗರಾಜ್ ಅರಸ್

ಮೈಸೂರು, ಮಾ.3– ಮೈಸೂರು ಮಹಾರಾಜರು ನಿರ್ಮಾಣ ಮಾಡಿದಂತಹ ಪಾರಂಪರಿಕ ಶೈಲಿಯ ಲಲಿತ ಮಹಲ್ ಪ್ಯಾಲೆಸ್ ಅನ್ನು ಖಾಸಗಿ ಕಂಪನಿಗೆ ಗುತ್ತಿಗೆ ನೀಡಲು ರಾಜ್ಯ ಸರ್ಕಾರ ನಿರ್ಧರಿಸಿ, ಈಗ ಟೆಂಡರ್ ಪ್ರಕ್ರಿಯೆ ಆರಂಭವಾಗಿದೆ.

ಸದ್ಯ, ಜಂಗಲ್ ಲಾಡ್ಜಸ್ ಅಂಡ್ ರೆಸಾರ್ಟ್ ನಿರ್ವಹಣೆ ಮಾಡುತ್ತಿರುವ ಲಲಿತ ಮಹಲ್ ಪ್ಯಾಲೇಸ್ ಅನ್ನು ಖಾಸಗಿ ಕಂಪನಿಗೆ ಗುತ್ತಿಗೆ ನೀಡಲು ಮುಖ್ಯಮಂತ್ರಿ ಸಿದ್ದರಾಮಯ್ಯ ಅಧ್ಯಕ್ಷತೆಯಲ್ಲಿ ರಾಜ್ಯ ಸಚಿವ ಸಂಪುಟ ಇತ್ತೀಚೆಗೆ ತೀರ್ಮಾನ ಮಾಡಿತ್ತು. ಈ ಹಿನ್ನೆಲೆಯಲ್ಲಿ ಜಂಗಲ್ ಲಾಡ್ಜಸ್ ಅಂಡ್ ರೆಸಾರ್ಟ್ ಜಾಗತಿಕ ಟೆಂಡರ್ ಕರೆದಿದ್ದು, ಮಾರ್ಚ್ 15 ಕೊನೆಯ ದಿನವಾಗಿದೆ. ಟೆಂಡರ್‌ನಲ್ಲಿ ಭಾಗವಹಿಸಿ, ತನ್ನ ಎಲ್ಲಾ ಷರತ್ತು ಪೂರೈಸುವ ಕಂಪನಿಯ ವಶಕ್ಕೆ ಒಪ್ಪಿಸಲು ಸರ್ಕಾರ ನಿರ್ಧರಿಸಿದೆ.

ಆ ಕಂಪನಿಯು ಫೈನಾನ್ಷಿಯಲ್ ಹಾಗೂ ಟೆಕ್ನಿಕಲ್ ಬಿಡ್‌ನಲ್ಲಿ ಅರ್ಹತೆ ಹೊಂದಿದೆಯೇ, ಹಾಗೆಯೇ ಟೆಂಡರ್ ಪಡೆಯುವ ಕಂಪನಿಯ ಹಣಕಾಸು ವಹಿವಾಟು ಸೇರಿದಂತೆ ಹಲವು ವಿಚಾರಗಳನ್ನು ಪರಿಶೀಲನೆ ನಡೆಸಲಾಗುತ್ತದೆ.

ಈ ಹಿಂದೆ ನಿರ್ವಹಣೆ ಮಾಡಿದ್ದಕ್ಕೆ ಸಂಬಂಧಿಸಿದಂತೆ ನಿರಾಕ್ಷೇಪಣಾ ಪತ್ರವನ್ನು ಟೆಕ್ನಿಕಲ್ ಬಿಡ್ ವೇಳೆ ಸಲ್ಲಿಸಬೇಕು. ಈ ಮೂಲಕ ಲಲಿತಮಹಲ್ ಪ್ಯಾಲೇಸ್ ಹೋಟೆಲ್ ನಡೆಸಲು ಈ ಕಂಪನಿ ಅರ್ಹತೆ ಹೊಂದಿದೆಯೇ ಎಂದು ಖಾತರಿಯಾದ ನಂತರ ಗುತ್ತಿಗೆ ಒಪ್ಪಂದ ಪ್ರಕ್ರಿಯೆ ನಡೆಯಲಿದೆ. ರಾಜ್ಯ ಸರ್ಕಾರದ ಇ ಪ್ರೊಕ್ಯೂರ್‌ಮೆಂಟ್‌ನಿಂದಲೇ ಟೆಂಡರ್ ನೀಡುವ ಪ್ರಕ್ರಿಯೆ ಆರಂಭಿಸಿದ್ದು, ಪಾರದರ್ಶಕತೆ ಕಾಯ್ದುಕೊಳ್ಳಲಾಗಿದೆ. ಟೆಂಡರ್‌ನಲ್ಲಿ ಭಾಗವಹಿಸುವ ಕಂಪನಿ 25 ಲಕ್ಷ ರೂಪಾಯಿ ಇಎಂಡಿ ಪಾವತಿ ಮಾಡಬೇಕಿದೆ. ಟೆಂಡರ್ ಮೌಲ್ಯ 3.76 ಕೋಟಿ ಎಂದು ನಮೂದು ಮಾಡಲಾಗಿದೆ.

ಲಲಿತಮಹಲ್ ಪ್ಯಾಲೇಸ್ ಹೋಟೆಲ್ ಅನ್ನು ಈ ಮೊದಲು ಐಟಿಡಿಸಿ (ಭಾರತೀಯ ಪ್ರವಾಸೋದ್ಯಮ ಅಭಿವೃದ್ಧಿ ನಿಗಮ) ನಿರ್ವಹಣೆ ಮಾಡುತ್ತಿತ್ತು. ಅದರ ಗುತ್ತಿಗೆ ಅವಧಿ ಮುಗಿದ ನಂತರ ರಾಜ್ಯ ಸರ್ಕಾರ ಹೋಟೆಲ್ ಅನ್ನು ತನ್ನ ಸುಪರ್ದಿಗೆ ತೆಗೆದುಕೊಂಡಿದೆ. ಹಾಲಿ ಜಂಗಲ್ ಲಾಡ್ಜಸ್ ಅಂಡ್ ರೆಸಾರ್ಟ್ ನಿರ್ವಹಣೆ ಮಾಡುತ್ತಿರುವ ಈ ಹೋಟೆಲ್ ಅನ್ನು ಖಾಸಗಿಯವರಿಗೆ ನೀಡಲು ಈ ಸರ್ಕಾರ ತೀರ್ಮಾನಿಸಿದೆ. ಈ ಮೊದಲು ಲಲಿತಮಹಲ್ ಪ್ಯಾಲೇಸ್ ಅನ್ನು ಟಾಟಾ ಕಂಪನಿಯ ತಾಜ್ ಗ್ರೂಪ್ ಆಫ್ ಹೋಟೆಲ್‌ಗೆ ವಹಿಸಲು ಸರ್ಕಾರದ ಮಟ್ಟದಲ್ಲಿ ಪ್ರಸ್ತಾಪವೂ ಆಗಿತ್ತು. ಆದರೆ ಪಾರಂಪರಿಕ ಶೈಲಿಯ ಈ ಹೋಟೆಲ್ ಸಂರಕ್ಷಣೆ ಸಂಬಂಧ ಹಲವು ಷರತ್ತು ವಿಧಿಸಿದ ಕಾರಣ ತಾಜ್ ಗ್ರೂಪ್ ಒಪ್ಪಂದದಿಂದ ಹಿಂದೆ ಸರಿಯಿತು.

ಮೈಸೂರಿನ ರ‍್ಯಾಡಿಸನ್ ಬ್ಲೂ ಹೋಟೆಲ್ ಅನ್ನು ಗುತ್ತಿಗೆ ಆಧಾರದ ಮೇಲೆ ತಾಜ್ ಗ್ರೂಪ್ ಪಡೆದುಕೊಂಡಿದ್ದು, ಏಪ್ರಿಲ್ 1 ರಿಂದ ತನ್ನ ಸುಪರ್ದಿಗೆ ಪಡೆದುಕೊಳ್ಳಲಿದೆ.

ವಿದೇಶಿಯರಿಗೆ ಅಚ್ಚುಮೆಚ್ಚು: ಮೈಸೂರಿಗೆ ಬರುವ ಬಹುತೇಕ ಪ್ರವಾಸಿಗರು ಇಲ್ಲಿ ವಾಸ್ತವ್ಯ ಹೂಡಲಿದ್ದಾರೆ. ಹೋಟೆಲ್‌ನಲ್ಲಿ ಮೈಸೂರಿನ ಪಾರಂಪರಿಕ ಟಾಂಗಾ ಸವಾರಿ, ಮೈಸೂರು ರೇಷ್ಮೆ ಸೀರೆ ಖರೀದಿಗೆ ವ್ಯವಸ್ಥೆ ಸೇರಿದಂತೆ ಹಲವು ಸೌಲಭ್ಯ ಕಲ್ಪಿಸಲಾಗಿದೆ. ಪ್ಯಾಲೇಸ್ ಹೊರಗೆ ಬಂದರೆ ರಾತ್ರಿ ವೇಳೆ ವಿದ್ಯುತ್ ಬೆಳಕಿನಲ್ಲಿ ಜಗಮಗಿಸುವ ಮೈಸೂರಿನ ವಿಹಂಗಮ ನೋಟ ಕಣ್ಮನ ಸೆಳೆಯಲಿದೆ. ಹಸಿರು ವಾತಾವರಣ, ಚಾಮುಂಡಿಬೆಟ್ಟದ ಮನೋಹರ ದೃಶ್ಯ ಸೇರಿದಂತೆ ಹಲವು ವೈಶಿಷ್ಟ್ಯತೆ ಇರುವ ಪ್ಯಾಲೇಸ್‌ನಲ್ಲಿ ವಾಸ್ತವ್ಯ ಹೂಡುವುದು ಪ್ರತಿಷ್ಠೆಯ ವಿಚಾರವಾಗಿದೆ.

ಭವ್ಯ ಆತಿಥ್ಯಕ್ಕೆ ನಿರ್ಮಾಣ!

ಮೈಸೂರು ಮಹಾರಾಜರಾಗಿದ್ದ ನಾಲ್ವಡಿ ಕೃಷ್ಣರಾಜ ಒಡೆಯರ್ ಅವರು ಬ್ರಿಟಿಷ್ ವೈಸ್‌ರಾಯ್‌ಗೆ ಆತಿಥ್ಯ ನೀಡಲು 1921 ರಲ್ಲಿ ಲಲಿತಮಹಲ್ ಪ್ಯಾಲೇಸ್ ಅನ್ನು ನಿರ್ಮಾಣ ಮಾಡಿದರು. ಭಾರತದ ಅತ್ಯಂತ ಶ್ರೀಮಂತ ಹೋಟೆಲ್‌ಗಳಲ್ಲಿ ಇದು ಕೂಡ ಒಂದು. ಲಲಿತಮಹಲ್ ಪ್ಯಾಲೇಸ್ ಈಗ ಹೋಟೆಲ್ ಆಗಿದ್ದರೂ ರಾಜರ ಆಳ್ವಿಕೆಯ ಅನುಭವವನ್ನು ನೀಡುತ್ತದೆ. ಇದನ್ನು ಪಾರಂಪರಿಕ ಶೈಲಿಯಲ್ಲಿ ನಿರ್ಮಾಣ ಮಾಡಲಾಗಿದ್ದು, ವೈಟ್ ಪ್ಯಾಲೇಸ್ ಎಂದೇ ಪ್ರಖ್ಯಾತವಾಗಿದೆ. ಹೊರಗೆ ಎರಡು ಅತ್ಯಾಕರ್ಷಕ ಆಧಾರ ಸ್ತಂಭ ಹೊಂದಿರುವ ಪ್ಯಾಲೇಸ್, ಮಧ್ಯೆ ಗುಮ್ಮಟಾಕಾರದ ಅದ್ಭುತ ಇಟಾಲಿಯನ್ ಪಲಾರ್ಝೋ ಗೋಪುರವಿದೆ. ಪ್ಯಾಲೇಸ್‌ನಲ್ಲಿ 54 ಭವ್ಯವಾದ ಸೂಟ್‌ಗಳಿವೆ. ಇದರಲ್ಲಿ ವೈಸ್‌ರಾಯ್, ವೈಸ್‌ರಿನ್ ಹಾಗೂ ಡ್ಯೂಪ್ಲೇಕ್ಸ್ ಸೂಟ್‌ಗಳಿವೆ. ತಂಪಾದ ಗಾಳಿ, ಪ್ರತಿ ಕೋಣೆಯಲ್ಲಿ ನೈಸರ್ಗಿಕ ಬೆಳಕು, ಕಣ್ಮನ ಸೆಳೆಯುವ ಬೆಲ್ಜಿಯಂ ಕನ್ನಡಿಗಳಿವೆ. ಲಂಡನ್‌ನ ಸಂತ ಪಾಲ್ಸ್ ಆರಾಧನ ಮಂದಿರದ ವಿನ್ಯಾಸದಲ್ಲಿ ಇದನ್ನು ನಿರ್ಮಾಣ ಮಾಡಲಾಗಿದೆ.

“ಮೈಸೂರಿನ ಲಲಿತಮಹಲ್ ಪ್ಯಾಲೇಸ್ ಹೋಟೆಲ್ ಅನ್ನು 30 ವರ್ಷಗಳಿಗೆ ಗುತ್ತಿಗೆ ನೀಡಲಾಗುತ್ತಿದೆ. ಈ ಸಂಬಂಧ ಟೆಂಡರ್ ಪ್ರಕ್ರಿಯೆ ಆರಂಭವಾಗಿದ್ದು, ಮಾರ್ಚ್ 15 ಟೆಂಡರ್‌ನಲ್ಲಿ ಭಾಗವಹಿಸುವ ಕೊನೆ ದಿನವಾಗಿದೆ. ಟೆಂಡರ್‌ನಲ್ಲಿ ಎಷ್ಟು ಕಂಪನಿ ಭಾಗವಹಿಸಿವೆ ಎಂಬ ಮಾಹಿತಿಯನ್ನು ಈಗಲೇ ಹೇಳಲು ಸಾಧ್ಯವಿಲ್ಲ. ಟೆಂಡರ್ ಪಡೆದ ಕಂಪನಿ ಹೋಟೆಲ್ ಅನ್ನು ನವೀಕರಣ ಮಾಡಬೇಕು. ಜೊತೆಗೆ ನಿರ್ವಹಣೆ ಕೂಡ ಮಾಡಬೇಕು. 30 ವರ್ಷದ ಗುತ್ತಿಗೆಯಲ್ಲಿ ಪ್ರತಿ ವರ್ಷ ರಾಜ್ಯ ಸರ್ಕಾರಕ್ಕೆ ಇಂತಿಷ್ಟು ಲೀಸ್ ಮೊತ್ತ ನೀಡಬೇಕೆಂಬ ಷರತ್ತು ವಿಧಿಸಲಾಗಿದೆ. ಪ್ರತಿ ವರ್ಷ ರಾಜ್ಯ ಸರ್ಕಾರಕ್ಕೆ ನೀಡುವ ಮೊತ್ತ ಹೆಚ್ಚಾಗುತ್ತಾ ಹೋಗಲಿದೆ. ಹೋಟೆಲ್ ಕಟ್ಟಡವನ್ನು ನವೀಕರಣ ಮಾಡಿ, ನಿರ್ವಹಣೆ ಮಾಡುವ ಜವಾಬ್ದಾರಿಯನ್ನು ಟೆಂಡರ್ ಪಡೆಯುವ ಕಂಪನಿ ನಿರ್ವಹಿಸಬೇಕು. ಲಲಿತಮಹಲ್ ಪ್ಯಾಲೇಸ್ ಹೋಟೆಲ್ ಪಾರಂಪರಿಕ ಶೈಲಿಯಲ್ಲಿರುವ ಕಾರಣ ಇದರ ಸೌಂದರ್ಯಕ್ಕೆ ಯಾವುದೇ ರೀತಿಯಲ್ಲೂ ಕಿಂಚಿತ್ತೂ ಧಕ್ಕೆಯಾಗದಂತೆ ನವೀಕರಣ ಮಾಡಬೇಕು. ನವೀಕರಣ ಮಾಡಲು ಪ್ರಾಚ್ಯವಸ್ತು ಇಲಾಖೆಯ ಅನುಮತಿ ಪಡೆಯಲೇಬೇಕು. ಜೊತೆಗೆ ನವೀಕರಣ ಮಾಡುವ ಸಂದರ್ಭದಲ್ಲಿ ಆಗಾಗ್ಗೆ ಇಲಾಖೆಯ ಮಾರ್ಗದರ್ಶನ ಪಡೆಯಬೇಕು ಎಂಬ ಷರತ್ತು ವಿಧಿಸಲಾಗಿದೆ. ಈ ಎಲ್ಲಾ ಷರತ್ತುಗಳಿಗೆ ಒಪ್ಪುವ ಕಂಪನಿಗೆ ಲಲಿತಮಹಲ್ ಪ್ಯಾಲೇಸ್ ಹೋಟೆಲ್ ಅನ್ನು ಗುತ್ತಿಗೆಗೆ ನೀಡಲಾಗುತ್ತದೆ.”

–ಪ್ರಶಾಂತ್ ಸಂಕಿನ ಮಠ್,
ವ್ಯವಸ್ಥಾಪಕ ನಿರ್ದೇಶಕ, ಜಂಗಲ್ ಲಾಡ್ಜಸ್ ಅಂಡ್ ರೆಸಾರ್ಟ್

ಹಾಸನ ಮಿತ್ರ

ಹೋರಾಟದಲ್ಲಿ ಭಾಗವಹಿಸದ ನಟರ ಪ್ರಶ್ನೆ ಮಾಡುವುದು ಸೂಕ್ತವಲ್ಲ

ಡಿ.ಕೆ.ಶಿವಕುಮಾರ್ ಹೇಳಿಕೆಗೆ ಸಂಸದ ಯದುವೀರ್ ಖಂಡನೆ



ಸಂಸದ ಯದುವೀರ್ ಒಡೆಯರ್ ಸುದ್ದಿಗೋಷ್ಠಿಯಲ್ಲಿ ಮಾತನಾಡಿದರು.

ಹಾಸನ, ಮಾ.3– ಸಿನಿಮಾ ನಟರು ಖಾಸಗಿ ಪ್ರಜೆಗಳಾಗಿದ್ದು, ಅವರು ರಾಜಕೀಯ ಪಕ್ಷದ ಹೋರಾಟದಲ್ಲಿ ಭಾಗವಹಿಸಿಲ್ಲ ಎಂದು ಪ್ರಶ್ನೆ ಮಾಡುವುದು ಸೂಕ್ತವಲ್ಲ ಎಂದು ಡಿ.ಕೆ.ಶಿವಕುಮಾರ್ ಹೇಳಿಕೆಗೆ ಮೈಸೂರು–ಕೊಡಗು ಸಂಸದ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್ ಖಂಡಿಸಿದರು.

ನಗರದ ಪ್ರವಾಸಿಮಂದಿರದಲ್ಲಿ ಸೋಮವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಸಿನಿಮಾ ನಟರಿಗೆ ಡಿಸಿಎಂ ಡಿ.ಕೆ.ಶಿವಕುಮಾರ್ ವಾರ್ನಿಂಗ್ ವಿಚಾರವಾಗಿ ಮಾಧ್ಯಮದವರ ಪ್ರಶ್ನೆಯೊಂದಕ್ಕೆ ಉತ್ತರಿಸಿ, ಚಲನಚಿತ್ರ ನಟರು, ಕಲಾವಿದರು ಖಾಸಗಿ ಪ್ರಜೆಗಳಾಗಿದ್ದು, ಹೋರಾಟದಲ್ಲಿ ಪಾಲ್ಗೊಳ್ಳಬೇಕೋ ಬೇಡವೋ ಎಂದು ಅವರು ತೀರ್ಮಾನ ಮಾಡಬೇಕಾಗುತ್ತದೆ. ಚಲನಚಿತ್ರದವರು ಯಾವುದೇ ಪಕ್ಷಕ್ಕೆ ಸೇರಿರಲ್ಲ. ಅವರನ್ನು ಪ್ರತಿಭಟನೆಗೆ ಬಂದಿಲ್ಲ ಎಂದು ಪ್ರಶ್ನೆ ಮಾಡುವುದು ಸೂಕ್ತವಲ್ಲ. ಅಧಿಕಾರದಲ್ಲಿರುವವರು ಸರ್ವಾಧಿಕಾರಿ ಧೋರಣೆ ಮಾಡುವುದು ಕಡಿಮೆ ಮಾಡಬೇಕು. ಅದು ಅವರ ಅಹಂಕಾರವನ್ನು ತೋರಿಸುತ್ತದೆ ಎಂದರು.

ಸುದ್ದಿಗೋಷ್ಠಿಯಲ್ಲಿ ಆಲೂರು–ಸಕಲೇಶಪುರ ಶಾಸಕ ಸಿಮೆಂಟ್ ಮಂಜು, ಕೊಳ್ಳೇಗಾಲ ಮಾಜಿ ಶಾಸಕ ಎಸ್.ಬಾಲರಾಜು, ಬಿಜೆಪಿ ಜಿಲ್ಲಾಧ್ಯಕ್ಷ ಸಿದ್ದೇಶ್ ನಾಗೇಂದ್ರ, ರಾಜ್ಯ ಕಾರ್ಯಾಲಯದ ಕಾರ್ಯದರ್ಶಿ ಪ್ರಶಾಂತ್ ಕುಮಾರ್, ಎಸ್.ಟಿ. ಮೋರ್ಚಾ ರಾಜ್ಯ ಕಾರ್ಯದರ್ಶಿ ಬೆಳ್ಳಿ ಗಂಗಾಧರ್, ವಕೀಲ ಅರುಣ್‌ಕುಮಾರ್, ಸಂಯೋಜಕ ಎಸ್.ಪಿ.ಲಿಂಬ್ಯನಾಯ್ಕ್, ಬಿಜೆಪಿ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಅಮಿತ್ ಶೆಟ್ಟಿ, ಗಿರೀಶ್, ರೇಣುಕುಮಾರ್, ದೇವರಾಜೇಗೌಡ, ಆರ್‌ಪಿಐ. ರಾಜ್ಯಾಧ್ಯಕ್ಷ ಸತೀಶ್, ಎಸ್.ಡಿ.ಚಂದ್ರು, ಪರ್ವತಯ್ಯ ಇತರರು ಉಪಸ್ಥಿತರಿದ್ದರು.

ಬೇಲೂರು ಚನ್ನಕೇಶವ ಸ್ವಾಮಿಯ ಜಾತ್ರೆ ಅದ್ಧೂರಿಯಾಗಿ ನಡೆಸುವಂತೆ ಶಾಸಕರ ಸೂಚನೆ



ಬೇಲೂರು ಶಾಸಕ ಹೆಚ್.ಕೆ.ಸುರೇಶ್ ಮಾತನಾಡುತ್ತಿರುವುದು.

ಬೇಲೂರು,ಮಾ3–ಚನ್ನಕೇಶವ ಸ್ವಾಮಿ ಜಾತ್ರೆ ಮತ್ತು ರಥೋತ್ಸವವು ಯಾವುದೇ ಸಮಸ್ಯೆಗಳಿಲ್ಲದೇ ಅದ್ಧೂರಿಯಾಗಿ ನಡೆಯುವಂತೆ ಅಧಿಕಾರಿಗಳು ಗಮನಹರಿಸಬೇಕು ಎಂದು ಶಾಸಕ ಹೆಚ್.ಕೆ.ಸುರೇಶ್ ಸೂಚಿಸಿದರು.

ಚನ್ನಕೇಶವಸ್ವಾಮಿ ಜಾತ್ರೆ ಮತ್ತು ರಥೋತ್ಸವ ಸಂಬಂಧ ಇಲ್ಲಿನ ಚನ್ನಕೇಶವಸ್ವಾಮಿ ದಾಸೋಹ ಭವನದಲ್ಲಿ ಆಯೋಜಿಸಿದ್ದ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ, ಮಾತನಾಡಿದರು.

ಭಕ್ತಾದಿಗಳಿಗೆ ಸ್ನಾನಕ್ಕೆ ಅನುಕೂಲವಾಗುವಂತೆ ಕಲ್ಯಾಣಿಯ ಹೂಳನ್ನು ತೆಗೆಸಿ, ಶುದ್ಧವಾದ ನೀರನ್ನು ಬಿಡಬೇಕು ಎಂದು ಸಣ್ಣ ನೀರಾವರಿ ಇಲಾಖೆ ಎಂಜಿನಿಯರ್ ಉಮೇಶ್ ಅವರಿಗೆ ಸೂಚಿಸಿದರು.

ದೇಗುಲದ ಸಮೀಪ ಆರೋಗ್ಯ ತಪಾಸಣೆ ಶಿಬಿರ ಆಯೋಜಿಸುವಂತೆ ತಾಲೂಕು ಆರೋಗ್ಯಾಧಿಕಾರಿ ಡಾ.ವಿಜಯ್ ಅವರಿಗೆ ಸೂಚಿಸಿದ ಶಾಸಕ ಸುರೇಶ್, ರಂಗಮಂದಿರ ಬೀಳುವ ಹಂತದಲ್ಲಿದ್ದು, ಅಲ್ಲಿ ಜನರು ನಿಲ್ಲದಂತೆ ಪೊಲೀಸರು ನೋಡಿಕೊಳ್ಳಬೇಕು ಎಂದು ಪೊಲೀಸ್ ಇನ್‌ಸ್ಪೆಕ್ಟರ್ ರೇವಣ್ಣ ಅವರಿಗೆ ಸಲಹೆ ನೀಡಿದರು. ರಸ್ತೆ ಬದಿ ಹಾಕುವ ಅಂಗಡಿಗಳನ್ನು ವೈಕುಂಠ ಬೀದಿಯಿಂದ ಕೆಳಗೆ ಹಾಕಿಸುವಂತೆ ಪುರಸಭೆ ಮುಖ್ಯಾಧಿಕಾರಿ ಸುಜಯ್‌ಕುಮಾರ್ ಅವರಿಗೆ ತಿಳಿಸಿದರು.

ಸಾಲುಮರದ ತಿಮ್ಮಕ್ಕ ಟ್ರಸ್ಟ್ ಅಧ್ಯಕ್ಷ ಬಳ್ಳೂರು ಉಮೇಶ್ ಮಾತನಾಡಿ, ಮರಗಾರರಿಗೆ ಸರಿಯಾದ ಸಮಯಕ್ಕೆ ಮರ ನೀಡಬೇಕು. ಯದ್ನ ಮರಗಾರರು ಮೆರವಣಿಗೆಯಲ್ಲಿ ಬರುವುದರಿಂದ ಕಲಾ ತಂಡಗಳನ್ನು ಒದಗಿಸಿ, ಮೆರುಗು ನೀಡಬೇಕು. ಸೂಕ್ತ ಭದ್ರತೆ ಕಲ್ಪಿಸಬೇಕು ಎಂದು ಒತ್ತಾಯಿಸಿದರು.

ಕಾಂಗ್ರೆಸ್ ಮುಖಂಡ ಬಿ.ಎಂ.ರಂಗನಾಥ್, ಪುರಸಭೆ ಉಪಾಧ್ಯಕ್ಷೆ ಉಷಾ, ತಹಶೀಲ್ದಾರ್ ಎಂ.ಮಮತಾ, ತಾಪಂ ಇಓ ವಸಂತ್‌ಕುಮಾರ್, ದೇಗುಲದ ಕಾರ್ಯನಿರ್ವಹಣಾಧಿಕಾರಿ ಯೋಗೇಶ್, ಪುರಸಭೆ ಮುಖ್ಯಾಧಿಕಾರಿ ಸುಜಯ್ ಕುಮಾರ್, ಪೊಲೀಸ್ ಇನ್‌ಸ್ಪೆಕ್ಟರ್ ರೇವಣ್ಣ, ತಾಲೂಕು ಆರೋಗ್ಯಾಧಿಕಾರಿ ಡಾ.ವಿಜಯ್, ದೇಗುಲದ ಪ್ರಧಾನ ಅರ್ಚಕರಾದ ಶ್ರೀನಿವಾಸ್ ಭಟ್, ನರಸಿಂಹ ಭಟ್ ಇತರರು ಭಾಗವಹಿಸಿದ್ದರು.

ಡಿಐಜಿ ವರ್ತಿಕಾ ಕಟಿಯಾರ್ ಎತ್ತಂಗಡಿ: ಡಿ.ರೂಪಾ ವಿರುದ್ಧ ದೂರು ನೀಡಿದ ಬೆನ್ನಲ್ಲೇ ವರ್ಗಾವಣೆ



ಬೆಂಗಳೂರು: ಐಜಿಪಿ ಡಿ.ರೂಪಾ ವಿರುದ್ಧ ದಾಖಲೆ ಕಳುವು ಆರೋಪ ಮಾಡಿದ್ದ ಡಿಐಜಿ ವರ್ತಿಕಾ ಕಟಿಯಾರ್ ಅವರನ್ನು ದಿಢೀರ್ ವರ್ಗಾವಣೆ ಮಾಡಿ ಆದೇಶ ಹೊರಡಿಸಲಾಗಿದೆ. ಐಜಿಪಿ ಡಿ.ರೂಪಾ ಕೆಳಹಂತದ ಅಧಿಕಾರಿಗಳನ್ನು ಬಳಸಿಕೊಂಡು ತನ್ನ ಕೊಠಡಿಯ ದಾಖಲೆಗಳನ್ನು ಕಳುವು ಮಾಡಿದ್ದು, ನನ್ನ ವಿರುದ್ಧ ಷಡ್ಯಂತ್ರ ನಡೆಯುವ ಸಾಧ್ಯತೆ ಇದೆ ಎಂದು ಆರೋಪಿಸಿ ಡಿಐಜಿ ವರ್ತಿಕಾ ಕಟಿಯಾರ್, ಸರ್ಕಾರದ ಮುಖ್ಯ ಕಾರ್ಯದರ್ಶಿ ಶಾಲಿನಿ ರಜನೀಶ್ ಅವರಿಗೆ ದೂರು ನೀಡಿದ್ದರು. ಇದೀಗ ದೂರು ನೀಡಿದ್ದ ವರ್ತಿಕಾ ಕಟಿಯಾರ್ ಅವರನ್ನು ಸರ್ಕಾರ ವರ್ಗಾವಣೆ ಮಾಡಿ ಆದೇಶ ಹೊರಡಿಸಿದೆ. ಆಂತರಿಕ ಭದ್ರತಾ ವಿಭಾಗದ ಡಿಐಜಿಯಾಗಿದ್ದ ವರ್ತಿಕಾ ಕಟಿಯಾರ್ ಅವರನ್ನು ಸಿವಿ ಡಿಫೆನ್ಸ್ ಮತ್ತು ಹೋಮ್ ಗಾರ್ಡ್ ವಿಭಾಗಕ್ಕೆ ಡಿಐಜಿ ಹಾಗೂ ಹೆಚ್ಚುವರಿ ಕಮಾಂಡೆಂಟ್ ಆಗಿ ವರ್ಗಾವಣೆ ಮಾಡಿ ರಾಜ್ಯ ಸರ್ಕಾರ ಅದೇಶ ಹೊರಡಿಸಿದೆ.

ಇಂದು ರಾಷ್ಟ್ರೀಯ ವಿಜ್ಞಾನ ದಿನಾಚರಣೆ

ಮೈಸೂರು, ಮಾ.3(ಆರ್‌ಕೆ)– ಮೈಸೂರಿನ ಕರ್ನಾಟಕ ರಾಜ್ಯ ಮುಕ್ತ ವಿವಿಯ ಕಾವೇರಿ ಸಭಾಂಗಣದಲ್ಲಿ ನಾಳೆ (ಮಾ.4) ಬೆಳಗ್ಗೆ 11 ಗಂಟೆಗೆ ರಾಷ್ಟ್ರೀಯ ವಿಜ್ಞಾನ ದಿನಾಚರಣೆ ಕಾರ್ಯಕ್ರಮವನ್ನು ಆಯೋಜಿಸಲಾಗಿದೆ. ವಿವಿ ಕುಲಪತಿ ಪ್ರೊ.ಶರಣಪ್ಪ ವಿ ಹಲಸೆ ಅಧ್ಯಕ್ಷತೆಯಲ್ಲಿ ಆಂತರಿಕ ಮತ್ತು ಗುಣಮಟ್ಟ ಆಶ್ವಾಸನಾ ಕೇಂದ್ರ ಹಾಗೂ ಭೌತಶಾಸ್ತ್ರ ಅಧ್ಯಯನ ವಿಭಾಗದಿಂದ ನಡೆಯಲಿರುವ ಕಾರ್ಯಕ್ರಮದಲ್ಲಿ ಹಿರಿಯ ಪ್ರಧಾನ ವಿಜ್ಞಾನಿ ಡಾ.ದಿನೇಶ್ ನಾಗೇಗೌಡ ಮುಖ್ಯ ಅತಿಥಿಗಳಾಗಿ ಭಾಗವಹಿಸುವರು.

ಬೆಳಗಾವಿಯಲ್ಲಿ ರಿಯಲ್ ಎಸ್ಟೇಟ್ ಉದ್ಯಮಿ ಕಿಡ್ನ್ಯಾಪ್ ಪ್ರಕರಣ

ಸಚಿವ ಸತೀಶ್ ಜಾರಕಿಹೊಳಿ ಆಪ್ತೆ ಬಂಧನ

ಬೆಳಗಾವಿ: 5 ಕೋಟಿ ರೂ. ಹಣಕ್ಕಾಗಿ ರಿಯಲ್ ಎಸ್ಟೇಟ್ ಉದ್ಯಮಿ ಕಿಡ್ನ್ಯಾಪ್ ಮಾಡಿದ್ದ ಪ್ರಕರಣಕ್ಕೆ ಸಂಬಂಧಿಸಿದಂತೆ ಸಚಿವ ಸತೀಶ್ ಜಾರಕಿಹೊಳಿ ಆಪ್ತೆಯನ್ನು ಘಟಪ್ರಭಾ ಪೊಲೀಸರು ಬಂಧಿಸಿದ್ದಾರೆ. ಮಂಜುಳಾ ರಾಮಗನಟ್ಟಿ ಬಂಧಿತ ಆರೋಪಿ. ಬಂಧಿತರ ಸಂಖ್ಯೆ ಏಳಕ್ಕೆ ಏರಿದೆ. ಈ ಹಿಂದೆ ಪೊಲೀಸರು ಪ್ರಕರಣದಲ್ಲಿ ಭಾಗಿಯಾಗಿದ್ದ ಆರು ಮಂದಿ ಆರೋಪಿಗಳನ್ನು ಬಂಧಿಸಿದ್ದರು. ಘಟಪ್ರಭಾ ಠಾಣೆ ಪೊಲೀಸರು ಕೇವಲ 24 ಗಂಟೆಯಲ್ಲಿ ಪ್ರಕರಣವನ್ನು ಭೇದಿಸಿದ್ದು, ಅಪಹರಣವಾಗಿದ್ದ ಉದ್ಯಮಿಯನ್ನು ರಕ್ಷಿಸಿದ್ದಾರೆ.



ಫೆ.14ರಂದು ಮೂಡಲಗಿ ತಾಲೂಕಿನ ರಾಜಾಪುರ ಗ್ರಾಮದ ಉದ್ಯಮಿ ಬಸವ ರಾಜ ಅಂಬಿ ಅವರನ್ನು ಆರೋಪಿಗಳು ಕಿಡ್ನ್ಯಾಪ್ ಮಾಡಿದ್ದರು. ಕಿಡ್ನ್ಯಾಪ್ ಮಾಡಿ 5 ಕೋಟಿ ಹಣಕ್ಕೆ ಬೇಡಿಕೆಯಿಟ್ಟಿದ್ದರು. ಪ್ರಕರಣ ಸಂಬಂಧ ಪೊಲೀಸರು 6 ಮಂದಿಯನ್ನು ಬಂಧಿಸಿದ್ದರು.

ತನಿಖೆ ವೇಳೆ ಕಿಡ್ನ್ಯಾಪ್‌ನ ಮಾಸ್ಟರ್ ಪ್ಲ್ಯಾನ್ ಮಾಡಿರುವುದು ಕಿಂಗ್‌ಪಿನ್ ಮಂಜುಳಾ ಎಂಬ ವಿಚಾರ ತಿಳಿದಿದೆ. ಮಂಜುಳಾ ಮಗ ಈಶ್ವರ ರಾಮಗನಟ್ಟಿಯನ್ನು ಪೊಲೀಸರು ಬಂಧಿಸಿ ವಿಚಾರಣೆ ನಡೆಸಿದಾಗ ವಿಚಾರ ಬಹಿರಂಗವಾಗಿದೆ. ಮೂಡಲಗಿ ತಾಲೂಕಿನ ರಾಜಾಪುರ ಗ್ರಾಮದ ಬಸವರಾಜ ಅಂಬಿ (48) ಅವರು ಫೆ.14ರಂದು ರಾತ್ರಿ 11ಗಂಟೆ ಸುಮಾರಿಗೆ ಮನೆಗೆ ಬರುತ್ತಿರುವಾಗ ಅಪಹರಣ ಮಾಡಲಾಗಿತ್ತು. ಮರುದಿನ ಫೆಬ್ರವರಿ 15 ರಂದು ಬಸವರಾಜ ಅಂಬಿ ಅವರ ಪತ್ನಿ ಶೋಭಾಗೆ ಕರೆ ಮಾಡಿದ್ದ ಅಪಹರಣಕಾರರು ಐದು ಕೋಟಿ ಹಣ ನೀಡಿ ನಿನ್ನ ಬಿಡಿಸಿಕೊಂಡು ಹೋಗು ವಂತೆ ಹೇಳಿದ್ದರು. ಮಗ ಮತ್ತು ಸ್ನೇಹಿತರು, ಮಂಜುಳಾ ನೀಡಿದ ಪ್ಲ್ಯಾನ್ ಮೇಲೆ ಕಿಡ್ನ್ಯಾಪ್ ಮಾಡಿ ಹಣಕ್ಕೆ ಬೇಡಿಕೆಯಿಟ್ಟಿರುವುದು ಬೆಳಕಿಗೆ ಬಂದಿದೆ.



ಇಡ್ಲಿ ತಯಾರಿಕೆಯಲ್ಲಿ ಪ್ಲಾಸ್ಟಿಕ್ ಬಳಕೆ: ಮೈಸೂರು ನಗರ ಸೇರಿದಂತೆ ಜಿಲ್ಲೆಯಾದ್ಯಂತ ತಪಾಸಣೆ



“ಗ್ರಾಮೀಣ ಭಾಗದ ಹೋಟೆಲ್‌ಗಳಲ್ಲಿ ಸಾಮಾನ್ಯವಾಗಿ ಪ್ಲಾಸ್ಟಿಕ್ ಬಳಸಿ ಇಡ್ಲಿ ತಯಾರಿಸುವವರ ಸಂಖ್ಯೆ ಬಹಳ ಕಡಿಮೆ. ನಾವು ಪ್ರತಿದಿನ ಎಲ್ಲೆಡೆ ರಸ್ತೆಬದಿ ಫಾಸ್ಟ್‌ಫುಡ್, ಹೋಟೆಲ್‌ಗಳಿಗೆ ಭೇಟಿ ನೀಡಿ, ತಪಾಸಣೆ ನಡೆಸುತ್ತೇವೆ. ಈಗಾಗಲೇ ಹೋಟೆಲ್ ಉದ್ಯಮದವರಿಗೆ ಇದರ ಬಗ್ಗೆ ಜಾಗೃತಿ ಮೂಡಿಸಿದ್ದು, ಸಾರ್ವಜನಿಕರ ಆರೋಗ್ಯದ ಹಿತದೃಷ್ಟಿಯಿಂದ ಅವರು ಪ್ಲಾಸ್ಟಿಕ್ ಬಳಸದೆ ಬಟ್ಟೆ ಬಳಸಿ ಇಡ್ಲಿ ತಯಾರಿಸಲು ಮುಂದಾಗಿದ್ದಾರೆ.” –ಡಾ.ಕಾಂತರಾಜು, ಆರೋಗ್ಯ ಸುರಕ್ಷತಾ ಅಧಿಕಾರಿ, ಮೈಸೂರು ಗ್ರಾಮಾಂತರ ವಿಭಾಗ

ಮೈಸೂರು, ಮಾ.3(ಆರ್‌ಕೆ)– ಇಡ್ಲಿ ತಯಾರಿಕೆಗೆ ಪ್ಲಾಸ್ಟಿಕ್ ಬಳಸಬಾರದೆಂಬ ಸರ್ಕಾರದ ಆದೇಶವನ್ನು ಪರಿಣಾಮಕಾರಿಯಾಗಿ ಜಾರಿಗೆ ತರಲು ಆಹಾರ ಸುರಕ್ಷತೆ ಇಲಾಖೆ ಅಧಿಕಾರಿಗಳು ಮುಂದಾಗಿದ್ದಾರೆ.

ನಿನ್ನೆ (ಭಾನುವಾರ)ಯಿಂದಲೇ ಮೈಸೂರು ನಗರ ವ್ಯಾಪ್ತಿಯ ಆರೋಗ್ಯ ಸುರಕ್ಷಾ ಅಧಿಕಾರಿ ಡಾ.ರವೀಂದ್ರ ಹಾಗೂ ಗ್ರಾಮಾಂತರ ವಿಭಾಗದ ಡಾ.ಕಾಂತ ರಾಜು ನೇತೃತ್ವದ ಅಧಿಕಾರಿಗಳು ಹಾಗೂ ಸಿಬ್ಬಂದಿ ತೀವ್ರ ತಪಾಸಣಾ ಕಾರ್ಯಾಚರಣೆ ಆರಂಭಿಸಿದ್ದು, ಮೊದಲ ದಿನವೇ ಮೈಸೂರು ತಾಲೂಕು ವ್ಯಾಪ್ತಿಯಲ್ಲಿ ಇಡ್ಲಿ ತಯಾರಿಕೆಗೆ ಪ್ಲಾಸ್ಟಿಕ್ ಬಳಸುತ್ತಿದ್ದ ಎಂಟು ಮಂದಿ ವಿರುದ್ಧ ಪ್ರಕರಣ ದಾಖಲಿಸಿ ತಲಾ ಸಾವಿರ ರೂ. ದಂಡ ವಿಧಿಸುತ್ತಿದ್ದಾರೆ. ಕಳೆದ ಶನಿವಾರ ವಷ್ಟೇ ರಾಜ್ಯ ಸರ್ಕಾರವು ಇಡ್ಲಿ ತಯಾರಿಕೆಗೆ ಪ್ಲಾಸ್ಟಿಕ್ ಬಳಸುವಂತಿಲ್ಲ ಎಂಬ ಮಹತ್ವದ ಆದೇಶ ಹೊರಡಿಸಿತ್ತು. ಇದರ ಬೆನ್ನಲ್ಲೇ ಎಚ್ಚೆತ್ತ ಅಧಿಕಾರಿಗಳು ಮರುದಿನದಿಂದಲೇ ಮೈಸೂರು ನಗರ ಮತ್ತು ಜಿಲ್ಲೆಯಾದ್ಯಂತ ಕೆಲ ಹೋಟೆಲ್‌ಗಳು ಹಾಗೂ ರಸ್ತೆಬದಿಯಲ್ಲಿ ತಿಂಡಿ, ಪದಾರ್ಥ ಮಾರುವ ಫಾಸ್ಟ್‌ಫುಡ್‌ಗಳ ಮೇಲೆ ದಾಳಿ ನಡೆಸಿ, ತಪಾಸಣಾ ಕಾರ್ಯ ಆರಂಭಿಸಿದ್ದರು. ಆ ವೇಳೆ ಕೆಲ ಫಾಸ್ಟ್‌ಫುಡ್ ಅಂಗಡಿ ಗಳಲ್ಲಿ ಮಾಲೀಕರು ಇಡ್ಲಿ ಬೇಯಿಸಲು ಅನುವಾಗುವಂತೆ ಪ್ಲಾಸ್ಟಿಕ್ ಬಳಸುತ್ತಿದ್ದುದು ಕಂಡುಬಂದಿತು. ಈ ವೇಳೆ ಸರ್ಕಾರದ ಆದೇಶದ ಬಗ್ಗೆ ಮನವರಿಕೆ ಮಾಡಿ ಕೊಟ್ಟು, ಪ್ಲಾಸ್ಟಿಕ್ ಬಳಸಿದರೆ ಕ್ರಮ ಕೈಗೊಳ್ಳ ಬೇಕಾಗುತ್ತದೆ ಎಂದು ಎಚ್ಚರಿಸಿದ್ದರು.

ಇಂದು ಮೈಸೂರು ನಗರ ವಿಭಾಗದ ಆಹಾರ ಸುರಕ್ಷತಾ ಅಧಿಕಾರಿ ಡಾ.ರವೀಂದ್ರ ನೇತೃತ್ವದಲ್ಲಿ 10 ಮಂದಿ, ಕುಕ್ಕರಹಳ್ಳಿ ಕೆರೆ ಸುತ್ತಮುತ್ತಲಿನ ಪ್ರದೇಶ, ಸರಸ್ವತಿಪುರಂನಲ್ಲಿ ದಾಳಿ ನಡೆಸಿ ಪರಿಶೀಲಿಸಿದರಾದರೂ ಈ ಮೊದಲೇ ಎಚ್ಚೆತ್ತುಕೊಂಡಿದ್ದ ಹೋಟೆಲ್ ಮಾಲೀಕರು ಇಡ್ಲಿ ತಯಾರಿಸಲು ಪ್ಲಾಸ್ಟಿಕ್ ಬದಲು ಬಟ್ಟೆ ಮತ್ತು ಬಾಳೆಎಲೆ ಬಳಸುತ್ತಿದ್ದರು. ಹಾಗಾಗಿ ಇಂದಿನ ಕಾರ್ಯಾಚರಣೆಯಲ್ಲಿ ಯಾವುದೇ ಪ್ರಕರಣ ದಾಖಲಾಗಲಿಲ್ಲ. ಆದರೆ ಪ್ರತಿನಿತ್ಯ ತಪಾಸಣಾ ಕಾರ್ಯ ಮುಂದುವರಿಯಲಿದ್ದು, ಪ್ಲಾಸ್ಟಿಕ್ ತಯಾರಿಕೆಯಿಂದ ಜನರ ಆರೋಗ್ಯದ ಮೇಲೆ ಉಂಟಾಗುವ ಪರಿಣಾಮ ಹಾಗೂ ನಿಯಮ ಉಲ್ಲಂಘಿಸಿದರೆ ಯಾವ ರೀತಿ ಕಾನೂನು ಕ್ರಮ ಜರುಗಿಸಲಾಗುತ್ತದೆ ಎಂಬುದರ ಬಗ್ಗೆ ತಿಳಿವಳಿಕೆ ಪತ್ರವನ್ನೂ ಅಧಿಕಾರಿಗಳು ಹೋಟೆಲ್ ಮಾಲೀಕರಿಗೆ ನೀಡಿದ್ದಾರೆ.

ಪ್ಲಾಸ್ಟಿಕ್ ಬಳಸಿ ಹಬೆಯಲ್ಲಿ ಇಡ್ಲಿ ಬೇಯಿಸುವಾಗ ಪ್ಲಾಸ್ಟಿಕ್ ಶೀಟ್ ಮೆಲ್ಟ್ ಆಗಿ ರಸಾಯನಿಕ ಇಡ್ಲಿ ಜೊತೆ ಸೇರ ಲಿದೆ. ಅದನ್ನು ಸೇವಿಸಿದ ಜನರ ಆರೋಗ್ಯದ ಮೇಲೆ ನಿಧಾನಗತಿಯಲ್ಲಿ ಅಡ್ಡ ಪರಿಣಾಮ ಬೀರಲಿದೆ ಎಂಬುದು ಪ್ರಯೋಗಾಲಯದ ವರದಿಯಿಂದ ದೃಢಪಟ್ಟ ಹಿನ್ನೆಲೆಯಲ್ಲಿ ರಾಜ್ಯ ಸರ್ಕಾರವು ಇದನ್ನು ನಿಷೇಧಿಸಿದ್ದು, ಅದರ ಬದಲಾಗಿ ಶುಭ್ರವಾದ ಬಟ್ಟೆ ಮತ್ತು ಸ್ವಚ್ಛ ಬಾಳೆ ಎಲೆ ಬಳಸಬಹುದೆಂದು ಅಭಿ ಪ್ರಾಯಪಟ್ಟಿದೆ. ಈ ಹಿನ್ನೆಲೆಯಲ್ಲಿ ಅಧಿಕಾರಿಗಳ ಮೂಲಕ ಸರ್ಕಾರದ ಆದೇಶವನ್ನು ಪೂರ್ಣ ಪ್ರಮಾಣದಲ್ಲಿ ಜಾರಿಗೆ ತಂದು ಜನರ ಆರೋಗ್ಯ ಕಾಪಾಡಲು ಕ್ರಮ ಕೈಗೊಳ್ಳಲಾಗಿದೆ.

ಜಿಲ್ಲೆಯಲ್ಲಿ ಬೆಳೆಯುವ ಕಬ್ಬಿಗೆ ತಕ್ಕಂತೆ ಸಕ್ಕರೆ ಕಾರ್ಖಾನೆಗಳಿಲ್ಲ

ಸಮಗ್ರ ಸಾವಯವ ಸುಸ್ಥಿರ ಕೃಷಿ ಜನಜಾಗೃತಿ ಅಭಿಯಾನದಲ್ಲಿ ಮಾಜಿ ಸಿಎಂ ಸದಾನಂದಗೌಡ ವಿಷಾದ

ಮಂಡ್ಯ, ಮಾ.3– ಕೃಷಿಯಲ್ಲಿ ರೈತರಿಗೆ ಹಲವು ಸವಾಲುಗಳಿವೆ ಎಂಬುದಕ್ಕೆ ಮಂಡ್ಯ ಜಿಲ್ಲೆಯಲ್ಲಿ ಯಥೇಚ್ಛವಾಗಿ ಕಬ್ಬು ಬೆಳೆದರೂ ಅದಕ್ಕೆ ತಕ್ಕಂತೆ ಸಮರ್ಪಕ ಕಾರ್ಖಾನೆಗಳಿಲ್ಲದಿರುವುದು ದುರಂತ ಎಂದು ಮಾಜಿ ಮುಖ್ಯಮಂತ್ರಿ ಡಿ.ವಿ.ಸದಾನಂದಗೌಡ ವಿಷಾದಿಸಿದರು.

ಸೋಮವಾರ ನಗರದ ಕರ್ನಾಟಕ ಸಂಘದ ಕೆವಿಎಸ್ ಭವನದಲ್ಲಿ ಸಮಗ್ರ ಸಾವಯವ ಸುಸ್ಥಿರ ಕೃಷಿ ಟ್ರಸ್ಟ್ ಸಹಯೋಗದಲ್ಲಿ ಆಯೋಜಿಸಿದ್ದ ಸಮಗ್ರ ಸಾವಯವ ಸುಸ್ಥಿರ ಕೃಷಿ ಜನ ಜಾಗೃತಿ ಅಭಿಯಾನದ ಸಮಾರೋಪದಲ್ಲಿ ಅವರು ಮಾತನಾಡಿದರು.

ವಿ.ಸಿ ನಾಲೆ ಆಧುನೀಕರಣ ಮಾಡಿದರೆ ಅಲ್ಲಿ 25 ಬಾರಿ ಬಂದು ನಾವೇ ಕಾಮಗಾರಿ ಮಾಡಿದ್ದು ಎಂದು ರಾಜಕಾರಣಿಗಳು ಹೇಳುತ್ತಾರೆ. ಇಲ್ಲಿ ನಿಜವಾಗಿಯೂ ಕಾಮಗಾರಿ ಯಾರು ಮಾಡ್ತಾರೆ? ಎಂಬುದು ಮುಖ್ಯವಾಗುತ್ತದೆ. ಲಿಕ್ಕರ್‌ನಲ್ಲಿ ಬೆಲೆ ಏರಿಕೆಯಾದರೆ ಒಟ್ಟಾಗಿ ಹೋರಾಟ ಮಾಡುತ್ತಾರೆ. ಕಾಮಗಾರಿಗಳ ಕಾಂಟ್ರಾಕ್ಟ್ ಸಿಗದೇ ಇದ್ದರೂ ಲಾಭ ಮಾಡಲಾಗುತ್ತದೆ. ಆದರೆ ದೇಶದಲ್ಲಿ ಶೇ.60ರಷ್ಟು ರೈತರು ಇದ್ದಾರೆ. ಇವರು ಮಾತ್ರ ಯಾವ ಕ್ಷೇತ್ರದಲ್ಲಿಯೂ ಲಾಭ ಮಾಡಲಿಲ್ಲ. ಇವರಿಗೆ ಲಾಭ ಮಾಡಿಯಾದರೂ ನ್ಯಾಯ ಕೊಡಿಸಬೇಕು ಎಂದು ಅಭಿಪ್ರಾಯಪಟ್ಟರು.



ಕಾರ್ಯಕ್ರಮದಲ್ಲಿ ಮಾಜಿ ಮುಖ್ಯಮಂತ್ರಿ ಡಿ.ವಿ.ಸದಾನಂದಗೌಡ ಮಾತನಾಡಿದರು.

ಭೂಮಿ ಬರಡಾಗುತ್ತಿದೆ ಎಂಬುದನ್ನು ರೈತರಿಗೆ ಮನವರಿಕೆ ಮಾಡಿಕೊಡಲು ಹೋರಾಟ ರೂಪಿಸುವುದು ಅಗತ್ಯವಿದೆ. ಉತ್ತರ ಪ್ರದೇಶದಲ್ಲಿ 7 ಫರ್ಟಿಲೈಸರ್ ಕಂಪನಿಗಳನ್ನು ನನ್ನ ಅವಧಿಯಲ್ಲಿ ಮಾಡಲಾಯಿತು. ಫರ್ಟಿಲೈಸರ್‌ಗೆ ಇರುವ ಸಬ್ಸಿಡಿಯನ್ನು ಹೆಚ್ಚು ಮಾಡಲಾಯಿತು. ಆದರೆ ಇದಕ್ಕೆ ಬೇಕಿರುವ ಅಗತ್ಯ ವಸ್ತುಗಳೇ ಸಿಗುತ್ತಿಲ್ಲ. ಹಾಗಾಗಿ ವಿದೇಶದಿಂದ ಆಮದು ಮಾಡಲಾಗುತ್ತಿತ್ತು ಎಂದು ವಿವರಿಸಿದರು.

ನಗರ ಪ್ರದೇಶದಲ್ಲಿ ಕಾರ್ಖಾನೆಗಳು ಬೆಳೆಯುತ್ತಿವೆ ಎನ್ನುವಷ್ಟರಲ್ಲಿ ಗ್ರಾಮೀಣ ಭಾಗದಲ್ಲಿ ಕಾರ್ಖಾನೆಗಳ ನಿರ್ಮಾಣಕ್ಕೆ ಮಾತ್ರ ಯಾರೂ ಮನಸ್ಸು ಮಾಡಲಿಲ್ಲ. ಇದರಿಂದ ಕಾರ್ಖಾನೆ ಅಭಿವೃದ್ಧಿ ಸಾಧ್ಯವಾಗಿಲ್ಲ. ಯಾವ ಭಾಗದಲ್ಲಿ ರೈತರಿಗೆ ಸಹಕಾರ ಇದೆಯೋ ಅಲ್ಲಿ ಪ್ರೋತ್ಸಾಹ ಸಿಗುತ್ತಿಲ್ಲ. ತೋಟಗಾರಿಕೆ ಬೆಳೆ ಸೇರಿದಂತೆ ಇತರೆ ಬೆಳೆಗಳಿಗೆ ಉತ್ತಮ ಬೆಲೆ ಸಿಗುತ್ತಿದೆ. ಇನ್ನುಳಿದಂತೆ ಯಾಂತ್ರೀಕೃತ ಬೇಸಾಯಕ್ಕೆ ಒತ್ತು ನೀಡುವಲ್ಲಿಯೂ ಹಿಂದೆ ಬಿದ್ದಿರುವ ಕಾರಣ ಸಣ್ಣಪುಟ್ಟ ಯಾಂತ್ರೀಕೃತ ಬೆಳೆ ಬೆಳೆಯುತ್ತಿದ್ದೇವೆ ಎಂದು ಕಳವಳ ವ್ಯಕ್ತಪಡಿಸಿದರು.

ಸಮಗ್ರ ಕೃಷಿಕ ರೈತರಿಗೆ ಪ್ರಶಸ್ತಿ ನೀಡಿ ಸನ್ಮಾನಿಸಲಾಯಿತು. ಕಾರ್ಯಕ್ರಮದಲ್ಲಿ ಬುದ್ಧ ಸಮೂಹ ಶಿಕ್ಷಣ ಸಂಸ್ಥೆಯ ಸಂಸ್ಥಾಪಕ ಯಮದೂರು ಸಿದ್ದರಾಜು, ಮೈಕ್ರೋಫೈ ಫೌಂಡೇಷನ್ ಅಧ್ಯಕ್ಷ ಕೆ.ಆರ್.ಹುಲ್ಲು ನಾಚೇಗೌಡ, ಅಖಿಲ ಭಾರತೀಯ ಸಹ ಮಹಿಳಾ ಪ್ರಮುಖ್ ಬಿ.ಆರ್.ರಶ್ಮಿ, ರಾಜ್ಯ ವೈದ್ಯಕೀಯ ಪ್ರಕೋಷ್ಠದ ಸದಾನಂದ, ಟ್ರಸ್ಟ್ ಅಧ್ಯಕ್ಷ ಜೋಗೀಗೌಡ, ಟ್ರಸ್ಟ್‌ನ ಸುಜಾತಮ್ಮ, ಪುಟ್ಟಮ್ಮ, ಮುಖಂಡ ಸಿದ್ದರಾಮಯ್ಯ ಭಾಗವಹಿಸಿದ್ದರು.

> ರೈತರು ತಾವು ಕಟಾವು ಮಾಡಿದ ಭತ್ತ ಸಂಗ್ರಹಣೆ ಮಾಡಲು ಸಾಧ್ಯವಾಗುತ್ತಿಲ್ಲ. ಅದು ಇಲಿ ಹೆಗ್ಗಣಗಳ ಪಾಲಾಗುವ ಭೀತಿ ಇದೆ. ಈ ಸಮಸ್ಯೆಯನ್ನು ಸಂಬಂಧಪಟ್ಟ ಇಲಾಖೆಗಳು ಮತ್ತು ಸರ್ಕಾರ ಕೂಡಲೇ ಖರೀದಿ ಕೇಂದ್ರಗಳ ಮೂಲಕ ಉತ್ತಮ ಬೆಲೆ ನೀಡಿ ಸಮಸ್ಯೆ ಬಗೆಹರಿಸಬೇಕು. ಜೊತೆಗೆ ಭತ್ತ ಕಟಾವು ಮಾಡಿದ ಸಂದರ್ಭದಲ್ಲಿಯೂ ದಲ್ಲಾಳಿಗಳ ಪಾಲಾಗಿ ರೈತರು ನಷ್ಟ ಅನುಭವಿಸುತ್ತಿದ್ದಾರೆ.
> -ಯು.ಸಿ.ಶೇಖರ್, ಆರ್‌ಎಪಿಸಿಎಂಎಸ್ ಅಧ್ಯಕ್ಷ.

ಅನ್ನಸಂತರ್ಪಣೆ ಊಟ ಸೇವಿಸಿದ 60ಕ್ಕೂ ಹೆಚ್ಚು ಮಂದಿ ಅಸ್ವಸ್ಥ

ಪಾಂಡವಪುರ ತಾಲೂಕು ನರಹಳ್ಳಿಯಲ್ಲಿ ಘಟನೆ



ಪಾಂಡವಪುರ ಸಾರ್ವಜನಿಕ ಆಸ್ಪತ್ರೆಗೆ ಮಾಜಿ ಸಚಿವ ಸಿ.ಎಸ್.ಪುಟ್ಟರಾಜು ಭೇಟಿ ನೀಡಿ ಅಸ್ವಸ್ಥಗೊಂಡವರ ಆರೋಗ್ಯ ವಿಚಾರಿಸಿದರು.

ಪಾಂಡವಪುರ: ಅನ್ನಸಂತರ್ಪಣೆಯಲ್ಲಿ ಊಟ ಮಾಡಿದ ಸುಮಾರು 60 ಕ್ಕೂ ಹೆಚ್ಚು ಮಂದಿ ಅಸ್ವಸ್ಥಗೊಂಡಿರುವ ಘಟನೆ ತಾಲೂಕಿನ ನರಹಳ್ಳಿ ಗ್ರಾಮದಲ್ಲಿ ಭಾನುವಾರ ರಾತ್ರಿ ನಡೆದಿದೆ.

ಗ್ರಾಮದ ಶ್ರೀಚನ್ನಬಸವೇಶ್ವರಸ್ವಾಮಿ ದೇವಸ್ಥಾನದಲ್ಲಿ ಗುರುವಾರ ಮತ್ತು ಶುಕ್ರವಾರ ಹಬ್ಬದ ಅಂಗವಾಗಿ ನಡೆದ ಅನ್ನಸಂತರ್ಪಣೆ (ಪರ)ಯಲ್ಲಿ ನೂರಾರು ಮಂದಿ ಆಹಾರಕ್ಕಾಗಿ, ರಾಗಿ ಮುದ್ದೆ ಊಟ ಮಾಡಿದ್ದಾರೆ. ಬಳಿಕ ಶನಿವಾರ ಮುಂಜಾನೆ ಮಂದಿಗೆ ವಾಂತಿ ಭೇದಿ ಕಾಣಿಸಿಕೊಂಡಿದೆ. ಭಾನುವಾರ ಸಂಜೆ ವೇಳೆಗೆ ಅದೇ ಗ್ರಾಮದ ಸುಮಾರು 60ಕ್ಕೂ ಅಧಿಕ ಮಂದಿಗೆ ವಾಂತಿಭೇದಿ ಕಾಣಿಸಿಕೊಂಡು ಅಸ್ವಸ್ಥಗೊಂಡಿದ್ದಾರೆ. ತೀವ್ರ ಅಸ್ವಸ್ಥಗೊಂಡ 24ಕ್ಕೂ ಹೆಚ್ಚು ಮಂದಿಯನ್ನು ಚಿಕಿತ್ಸೆಗಾಗಿ ಪಾಂಡವಪುರ ಆಸ್ಪತ್ರೆಗೆ ದಾಖಲಿಸಲಾಗಿದೆ.

ವಿಷಯ ತಿಳಿದು ಜಿಲ್ಲಾ ಆರೋಗ್ಯಾಧಿಕಾರಿ ಡಾ.ಕೆ.ಮೋಹನ್, ತಹಸೀಲ್ದಾರ್ ಸಂತೋಷ್‌ಕುಮಾರ್, ಇಓ ಲೋಕೇಶ್ ಮೂರ್ತಿ, ತಾಲೂಕು ಆರೋಗ್ಯಾಧಿಕಾರಿ ಡಾ.ಸಿ.ಎ.ಅರವಿಂದ್ ಸೇರಿದಂತೆ ಅಧಿಕಾರಿಗಳ ತಂಡ ನರಹಳ್ಳಿ ಗ್ರಾಮಕ್ಕೆ ತೆರಳಿ ಪರಿಶೀಲಿಸಿ, ಗ್ರಾಮದ ಅಂಬೇಡ್ಕರ್ ಭವನದಲ್ಲಿ ತಾತ್ಕಾಲಿಕ ಚಿಕಿತ್ಸಾ ಕೇಂದ್ರ ಆರಂಭಿಸಿ, ಅಸ್ವಸ್ಥಗೊಂಡಿದ್ದ 30ಕ್ಕೂ ಅಧಿಕ ಮಂದಿಗೆ ಚಿಕಿತ್ಸೆ ಕೊಡಿಸಿದ್ದಾರೆ.

ಈ ವೇಳೆ ಅನ್ನಸಂತರ್ಪಣೆ ಸ್ಥಳಕ್ಕೆ ತೆರಳಿ ಪರಿಶೀಲಿಸಿದ ವೈದ್ಯಾಧಿಕಾರಿಗಳಿಗೆ ಪರ ನಡೆದು 2 ದಿನ ಕಳೆದಿರುವ ಹಿನ್ನೆಲೆಯಲ್ಲಿ ಪರೀಕ್ಷೆ ನಡೆಸಲು ಫುಡ್ ಸ್ಯಾಂಪಲ್ ದೊರೆತ್ತಿಲ್ಲ. ಆದ್ದರಿಂದ ಗ್ರಾಮದಲ್ಲಿ ನೀರಿನ ಮಾದರಿ ಪರೀಕ್ಷೆ ನಡೆಸಿದ್ದಾರೆ. ಗ್ರಾಮದಲ್ಲಿ ಜನರಿಗೆ ಆರೋಗ್ಯದ ಬಗ್ಗೆ ಅರಿವು ಮೂಡಿಸಲಾಗುತ್ತಿದೆ. ಜೊತೆಗೆ ತಾಲೂಕಿನಲ್ಲಿ ಎಲ್ಲೆಲ್ಲಿ ಪರ ನಡೆಸಲಾಗುತ್ತಿದೆಯೋ ಎಲ್ಲಾ ಕಡೆ ತೆರಳಿ ಅರಿವು ಮೂಡಿಸಲಾಗುವುದು ಎಂದರು.

ಮಾಜಿ ಸಚಿವ ಸಿ.ಎಸ್.ಪುಟ್ಟರಾಜು ಭೇಟಿ: ಪಾಂಡವಪುರ ಸಾರ್ವಜನಿಕ ಆಸ್ಪತ್ರೆಗೆ ಮಾಜಿ ಸಚಿವ ಸಿ.ಎಸ್.ಪುಟ್ಟರಾಜು ಭೇಟಿ ನೀಡಿ ಅಸ್ವಸ್ಥಗೊಂಡವರ ಆರೋಗ್ಯ ವಿಚಾರಿಸಿದರು. ಬಳಿಕ ಸರಿಯಾದ ಚಿಕಿತ್ಸೆ ನೀಡಿ, ಹೆಚ್ಚಿನ ಚಿಕಿತ್ಸೆಗೆ ಅಗತ್ಯಬಿದ್ದರೆ ಮಂಡ್ಯ, ಮೈಸೂರಿಗೆ ರವಾನಿಸುವಂತೆಯೂ ವೈದ್ಯರಿಗೆ ಸೂಚನೆ ನೀಡಿದರು.

ಬೆಳಗೊಳ ಪಿಎಸಿಎಸ್‌ಗೆ 11 ನಿರ್ದೇಶಕರ ಆಯ್ಕೆ



ನೂತನವಾಗಿ ಆಯ್ಕೆಯಾದ ನಿರ್ದೇಶಕರನ್ನು ಗ್ರಾಮಸ್ಥರು ಅಭಿನಂದಿಸಿದರು.

ಶ್ರೀರಂಗಪಟ್ಟಣ: ಬೆಳಗೊಳ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘಕ್ಕೆ 11 ಸ್ಥಾನಗಳಿಗೆ ಕಾಂಗ್ರೆಸ್ ಬೆಂಬಲಿತ 6, ಜೆಡಿಎಸ್ ಹಾಗೂ ಬಿಜೆಪಿ ಬೆಂಬಲಿತ ಐವರು ನಿರ್ದೇಶಕರು ಆಯ್ಕೆಯಾಗಿದ್ದಾರೆ.

ಚುನಾವಣೆಯಲ್ಲಿ ಸಾಮಾನ್ಯ ಮಹಿಳಾ ಮೀಸಲು ಕ್ಷೇತ್ರದ ಜೆಡಿಎಸ್ ಬೆಂಬಲಿತ ಸದಸ್ಯೆ ಲಕ್ಷ್ಮಿ (453) ಹಾಗೂ ಕಾಂಗ್ರೆಸ್ ಬೆಂಬಲಿತ ಸದಸ್ಯೆ ಸುಪ್ರಿಯಾ(397), ಹಿಂದುಳಿದ ವರ್ಗ 'ಎ' ಕಾಂಗ್ರೆಸ್ ಬೆಂಬಲಿತ ಸದಸ್ಯ ಶ್ರೀನಿವಾಸ್ ಎಂ.ಎನ್ (230), ಹಿಂದುಳಿದ ವರ್ಗ 'ಬಿ' ಜೆಡಿಎಸ್ ಬೆಂಬಲಿತ ಸದಸ್ಯ ವಾಸು ಬಿ.ಎನ್ (371), ಪರಿಶಿಷ್ಟ ಜಾತಿ ಕಾಂಗ್ರೆಸ್ ಬೆಂಬಲಿತ ಸದಸ್ಯ ಸಿದ್ದರಾಜು (216) ಹಾಗೂ ಸಾಮಾನ್ಯ ಕ್ಷೇತ್ರಕ್ಕೆ ನಡೆದ ಚುನಾವಣೆಯಲ್ಲಿ ಜೆಡಿಎಸ್ ಬೆಂಬಲಿತರಾದ ಪುಟ್ಟಸ್ವಾಮಿ ಬಿ.ಕೆ(359), ನಾಗೇಂದ್ರ ಬಿ.ಡಿ(397), ಚೌಡೇಗೌಡ (393) ಹಾಗೂ ಸಾಮಾನ್ಯ ಕ್ಷೇತ್ರ ಕಾಂಗ್ರೆಸ್ ಬೆಂಬಲಿತ ಜಗದೀಶ್(419), ಹರೀಶ್ ಬಿ.ವಿ(393), ಪರಶುರಾಮ್ ವಿ.ಆರ್ 340 ಮತಗಳನ್ನು ಪಡೆದು ನಿರ್ದೇಶಕರಾಗಿ ಆಯ್ಕೆಯಾಗಿದ್ದಾರೆ ಎಂದು ಚುನಾವಣಾಧಿಕಾರಿ ವಾಸಿಂ ಪಾಷ ಘೋಷಿಸಿದರು.

ಈ ವೇಳೆ ನೂತನ ನಿರ್ದೇಶಕರನ್ನು ವಿವಿಧ ಗ್ರಾಮದ ಮುಖಂಡರು, ಗ್ರಾಮಸ್ಥರು ಶುಭ ಕೋರಿದರು.

ಅಭಿನಂದನೆ, ಡೈರಿ ಬಿಡುಗಡೆ ಸಮಾರಂಭ

ಮಂಡ್ಯ ಋಣ ತೀರಿಸಲು ಪ್ರಾಮಾಣಿಕ ಪ್ರಯತ್ನ: ಬದ್ರುದ್ದೀನ್

ಮಂಡ್ಯ, ಮಾ.3– ಹುಟ್ಟಿದ್ದು ಕರಾವಳಿಯಲ್ಲಾದರೂ ಭಾವನಾತ್ಮಕವಾಗಿ ನನ್ನ ತವರು ಮನೆ ಮಂಡ್ಯ ಜಿಲ್ಲೆಯೇ ಆಗಿದ್ದು, ಜಿಲ್ಲೆ ಋಣ ತೀರಿಸಲು ಪ್ರಾಮಾಣಿಕ ಪ್ರಯತ್ನ ಮಾಡುತ್ತೇನೆ ಎಂದು ಮಾಹಿತಿ ಆಯೋಗದ ಆಯುಕ್ತ ಬದ್ರುದ್ದೀನ್ ಕೆ.ಮಾಣಿ ತಿಳಿಸಿದರು.

ನಗರದ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘ ಹಾಗೂ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘ, ಅಧ್ಯಾಪನ ಟ್ರಸ್ಟ್ ಸಹಯೋಗದಲ್ಲಿ ನಡೆದ ಅಭಿನಂದನೆ ಮತ್ತು ಡೈರಿ ಬಿಡುಗಡೆ ಸಮಾರಂಭದಲ್ಲಿ ಅಭಿನಂದನೆ ಸ್ವೀಕರಿಸಿ ಮಾತನಾಡಿದ ಅವರು, ನಾನು ಮಂಡ್ಯದಲ್ಲಿ ಪತ್ರಕರ್ತನಾಗಿ ಕೆಲಸ ಮಾಡುತ್ತಿದ್ದಾಗ ನನಗೆ ನೀವು ಕೊಟ್ಟ ಪ್ರೋತ್ಸಾಹ ದೊಡ್ಡದು. ಮನೆ ಮಗನಂತೆ ನನಗೆ ಅನ್ನ ನೀಡಿದ್ದೀರಾ. ಇಲ್ಲಿ ನಾನು ಎಲ್‌ಕೆಜಿ ಮಗುವಿನಂತೆ ಕಲಿತು ಬೆಂಗಳೂರಿಗೆ ಹೋದಾಗ ಅಲ್ಲಿ, ಇಲ್ಲಿ ಕಲಿತ ಎಲ್ಲವನ್ನು ಪ್ರಯೋಗ ಮಾಡುತ್ತಾ ಬಂದಿದ್ದರಿಂದ ಯಶಸ್ವಿಯಾಗಿದ್ದೇನೆ ಎಂದು ಸ್ಮರಿಸಿದರು.

ಶಾಸಕ ಪಿ.ರವಿಕುಮಾರ್‌ಗೌಡ ಗಣಿಗ ಮಾತನಾಡಿ, ಪ್ರಸ್ತುತ ಪತ್ರಕರ್ತರಿಗೆ ಸರ್ಕಾರದ ಮಟ್ಟದಲ್ಲಿ ಉನ್ನತ ಹುದ್ದೆಗಳು ಸಿಗುತ್ತಿವೆ. ಇದರಿಂದ ಪತ್ರಕರ್ತರ ಸಮಸ್ಯೆಗಳನ್ನು ಹೇಳಿಕೊಳ್ಳಲು ಸಾಧ್ಯವಾಗಿದೆ ನೂರಾರು ಜನರ ಸಮಸ್ಯೆಗಳ ನಿವಾರಿಸಲು ಪತ್ರಕರ್ತರ ಹುದ್ದೆ ಉನ್ನತವಾಗಿದೆ ಎಂದರು.



ಕಾರ್ಯಕ್ರಮದಲ್ಲಿ ಆಯುಕ್ತ ಬದ್ರುದ್ದೀನ್ ಕೆ.ಮಾಣಿ ಹಾಗೂ ಮಾಧ್ಯಮ ಮಾನ್ಯತಾ ಸಮಿತಿ ಸದಸ್ಯ ಡಿ. ಶಶಿಕುಮಾರ್ ಅವರನ್ನು ಅಭಿನಂದಿಸಲಾಯಿತು.

ಜಿಲ್ಲಾಧಿಕಾರಿ ಡಾ.ಕುಮಾರ ಮಾತನಾಡಿ, ಪತ್ರಿಕಾ ರಂಗ ವಿಶೇಷ ರಂಗವಾಗಿದೆ. ಪತ್ರಕರ್ತರಿಗೆ ಸಮಾಜದಲ್ಲಿನ ಆಗು–ಹೋಗುಗಳನ್ನು ಅತ್ಯಂತ ಕಠೋರವಾಗಿ ಬರೆಯುವಂತಹ ಶಕ್ತಿ ಇರಬೇಕು. ಯಾವುದು ತಪ್ಪು, ಸರಿ ಎಂಬುದನ್ನು ತಿಳಿಸಬೇಕು. ಎಲ್ಲವನ್ನು ನೋಡಿಕೊಂಡು ಕಣ್ಮುಚ್ಚಿ ಕುಳಿತುಕೊಳ್ಳುವುದು ಸರಿಯಲ್ಲ ಎಂದರು.

ಅಧ್ಯಾಪನ ಟ್ರಸ್ಟ್ ಹಾಗೂ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘದ ಸಹಕಾರದೊಂದಿಗೆ ಹೊರ ತಂದಿರುವ ಡೈರಿ ಬಿಡುಗಡೆ ಮಾಡಲಾಯಿತು. ನಂತರ ಮಾಹಿತಿ ಆಯೋಗದ ಆಯುಕ್ತ ಬದ್ರುದ್ದೀನ್ ಕೆ.ಮಾಣಿ ಹಾಗೂ ಮಾಧ್ಯಮ ಮಾನ್ಯತಾ ಸಮಿತಿ ಸದಸ್ಯ ಡಿ. ಶಶಿಕುಮಾರ್ ಅವರನ್ನು ಅಭಿನಂದಿಸಲಾಯಿತು.

ವೇದಿಕೆಯಲ್ಲಿ ರಾಜ್ಯ ಕಾರ್ಯನಿರತ ಪತ್ರಕರ್ತರ ಸಂಘದ ಕಾರ್ಯದರ್ಶಿ ಮತ್ತೀಕೆರೆ ಜಯರಾಂ, ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘದ ಅಧ್ಯಕ್ಷ ಕೆ.ಎನ್.ನವೀನ್ ಕುಮಾರ್, ರಾಜ್ಯ ಕಾರ್ಯದರ್ಶಿ ಸೋಮಶೇಖರ್ ಕೆರಗೋಡು, ಮಾಜಿ ಅಧ್ಯಕ್ಷರಾದ ಕೆ.ಸಿ.ಮಂಜುನಾಥ್, ಬಿ.ಪಿ.ಪ್ರಕಾಶ್, ಪ್ರಧಾನ ಕಾರ್ಯದರ್ಶಿ ಆನಂದ, ಖಜಾಂಚಿ ನಂಜುಂಡಸ್ವಾಮಿ, ರಾಷ್ಟ್ರೀಯ ಮಂಡಳಿ ಸದಸ್ಯ ಜೆ.ಎಂ. ಬಾಲಕೃಷ್ಣ ಸೇರಿದಂತೆ ಮತ್ತಿತರರಿದ್ದರು.

ಮತ್ತೋರ್ವ ಪಾದಯಾತ್ರಿ ಸಾವು



ಕಿಕ್ಕೇರಿ, ಮಾ.3– ಧರ್ಮಸ್ಥಳ ಪಾದಯಾತ್ರೆಗೆ ತೆರಳಿದ್ದ ವೇಳೆ ಹಾಸನದ ಬಳಿ ಖಾಸಗಿ ಬಸ್ ಡಿಕ್ಕಿ ಹೊಡೆದು ತೀವ್ರ ಗಾಯಗೊಂಡು ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದ ಮತ್ತೋರ್ವ ಪಾದಯಾತ್ರಿ ಸಾವನ್ನಪ್ಪಿರುವ ಘಟನೆ ಭಾನುವಾರ ರಾತ್ರಿ ನಡೆದಿದೆ.

ಆನೆಗೊಳ ಗ್ರಾಮದ ಮಂಜೇಗೌಡರ ಪುತ್ರ ದಿನೇಶ್(38) ಸಾವನ್ನಪ್ಪಿದವರು. ಕಳೆದ ವಾರ ಆನೆಗೊಳ ಗ್ರಾಮದಿಂದ ಬಿ.ಸಿ.ಸುರೇಶ್, ಕುಮಾರ್, ದಿನೇಶ್ ಹಾಗೂ ಅಶ್ವಥ್ ಅವರು ಧರ್ಮಸ್ಥಳಕ್ಕೆ ಪಾದಯಾತೆ ತೆರಳಿದ್ದರು. ಈ ವೇಳೆ ಹಾಸನದ ಬಳಿ ಖಾಸಗಿ ಬಸ್ ಡಿಕ್ಕಿ ಹೊಡೆದ ಪರಿಣಾಮ ಸ್ಥಳದಲ್ಲೇ ಬಿ.ಸಿ.ಸುರೇಶ್, ಕುಮಾರ್ ಸಾವನ್ನಪ್ಪಿದ್ದರು. ಅಶ್ವಥ್ ಆಶ್ಚರ್ಯಕರ ರೀತಿ ಪಾರಾಗಿದ್ದರು. ಆದರೆ ದಿನೇಶ್ ತೀವ್ರ ಗಾಯಗೊಂಡು ಹಾಸನದ ಖಾಸಗಿ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದರು. ವೈದ್ಯರ ಸಲಹೆ ಮೇರೆಗೆ ಹೆಚ್ಚಿನ ಚಿಕಿತ್ಸೆಗಾಗಿ ಮೈಸೂರಿನ ಖಾಸಗಿ ಆಸ್ಪತ್ರೆಗೆ ದಾಖಲಿಸಲಾಗಿತ್ತು. ಆದರೆ ಚಿಕಿತ್ಸೆ ಫಲಕಾರಿಯಾಗದೆ ದಿನೇಶ್ ಭಾನುವಾರ ರಾತ್ರಿ ಸಾವನ್ನಪ್ಪಿದ್ದಾರೆ.

ಒಂದನೇ ಪುಟದಿಂದ

ಬಜೆಟ್ ಅಧಿವೇಶನ ಆರಂಭ

ಸಾಮಾಜಿಕ, ಆರ್ಥಿಕ ಮತ್ತು ಸಾಂಸ್ಕೃತಿಕವೂ ಸೇರಿದಂತೆ ಸಮಗ್ರ ಅಭಿವೃದ್ಧಿಗೆ ಹಲವಾರು ಕಾರ್ಯಕ್ರಮಗಳನ್ನು ರೂಪಿಸಿ ಅನುಷ್ಠಾನ ಮಾಡುತ್ತಿದೆ. ಕಳೆದ 19 ತಿಂಗಳ ಆಡಳಿತದಲ್ಲಿ ಗಂಭೀರವಾದ ಕಾನೂನು–ಸುವ್ಯವಸ್ಥೆ ಸಮಸ್ಯೆಗಳು ಉದ್ಭವಿಸಿಲ್ಲ, ಪೊಲೀಸ್ ಠಾಣೆಗಳು ಜನಸ್ನೇಹಿಯಾಗಿ ಕೆಲಸ ಮಾಡುತ್ತಿವೆ ಎಂದು ತಿಳಿಸಿದ್ದಾರೆ.

ರಾಜ್ಯದಲ್ಲಿ ಉತ್ತಮ ಮಳೆಯಾಗಿದೆ, ತೀವ್ರರೂಪದ ಅತಿವೃಷ್ಟಿ, ಅನಾವೃಷ್ಟಿಗಳಿಲ್ಲದೆ ರೈತರ ಕೈಗೆ ಉತ್ತಮ ಫಸಲು ಸಿಕ್ಕಿದೆ. ಮುಂಗಾರು ಮತ್ತು ಹಿಂಗಾರು ಹಂಗಾಮುಗಳಿಂದ ಸುಮಾರು 149 ಲಕ್ಷ ಟನ್‌ಗಳಷ್ಟು ಕೃಷಿ ಉತ್ಪಾದನೆ ನಿರೀಕ್ಷಿಸಲಾಗಿದೆ.

ಕಲ್ಯಾಣ ಕಾರ್ಯಕ್ರಮಗಳಿಂದ ರಾಜ್ಯದ ರೈತ ಕುಟುಂಬಗಳಲ್ಲಿ ಆತ್ಮಹತ್ಯೆಗಳ ಪ್ರಮಾಣ ಗಣನೀಯವಾಗಿ ಕಡಿಮೆಯಾಗಿದೆ, ನನ್ನ ಸರ್ಕಾರ ರಚನೆಯಾದಾಗಿನಿಂದ ತೊಗರಿ ಮತ್ತು ಕೊಬ್ಬರಿ ಬೆಲೆಗಳು ಕುಸಿದಾಗ ರೈತರ ನೆರವಿಗೆ ನಿಂತು ಪ್ರೋತ್ಸಾಹ ಧನ ನೀಡಿದೆ. ಶಿಕ್ಷಣ ಇಲಾಖೆಯಲ್ಲಿ 13,000ಕ್ಕೂ ಹೆಚ್ಚು ಪದವೀಧರ ಶಿಕ್ಷಕರ ಹುದ್ದೆ ಭರ್ತಿ ಮಾಡಲಾಗಿದೆ. ಉನ್ನತ ಶಿಕ್ಷಣ ಇಲಾಖೆಯಲ್ಲಿ 1,088 ಸಹಾಯಕ ಪ್ರಾಧ್ಯಾಪಕರಿಗೆ ನೇಮಕಾತಿ ಆದೇಶ ನೀಡಲಾಗಿದೆ.

522 ಕೆಪಿಎಸ್ ಶಾಲೆಗಳನ್ನು ಪ್ರಾರಂಭಕ್ಕೆ ಕ್ರಮ ಕೈಗೊಳ್ಳಲಾಗುತ್ತಿದೆ, 1,953 ಸರ್ಕಾರಿ ಶಾಲೆಗಳಲ್ಲಿ ಪೂರ್ವ ಪ್ರಾಥಮಿಕ ಶಾಲೆ ಪ್ರಾರಂಭಿಸಿ ನರ್ಸರಿ ಶಾಲೆಗಳನ್ನು ತೆರೆಯಲಾಗಿದೆ, ಅಲ್ಲದೆ, ಮಕ್ಕಳಿಗೆ ರಜಾ ದಿನ ಹೊರತುಪಡಿಸಿ ವಾರದ ಎಲ್ಲಾ ದಿನಗಳಂದು ಸರ್ಕಾರ ಹಾಗೂ ಅಜೀಂ ಪ್ರೇಮ್‌ಜಿ ಫೌಂಡೇಷನ್ ಜಂಟಿಯಾಗಿ ಮೊಟ್ಟೆ ನೀಡುತ್ತಿವೆ.

ಕರ್ನಾಟಕ ಆರ್ಥಿಕತೆಯನ್ನು ಒಂದು ಟ್ರಿಲಿಯನ್ ಡಾಲರ್ ಆರ್ಥಿಕತೆಯಾಗಿ ರೂಪಿಸಲು ಸಮಗ್ರ ಹಾಗೂ ಸಮರ್ಥ ಪ್ರಯತ್ನ ಮಾಡಲಾಗುತ್ತಿದೆ, ಜೊತೆಗೆ ಜನರಿಗೆ ಆರೋಗ್ಯ, ಶಿಕ್ಷಣ, ನೈರ್ಮಲ್ಯ ಹಾಗೂ ಸುಸ್ಥಿರ ಕೃಷಿ ವ್ಯವಸ್ಥೆಯ ರಾಜ್ಯವಾಗಿ ರೂಪಿಸಲು ಸರ್ವಪ್ರಯತ್ನ ಮಾಡುತ್ತಿದೆ.

ಸಮಾಜದ ಆರ್ಥಿಕ ದುರ್ಬಲ ಜನತೆಗೆ ಸಾಲ ವಸೂಲಾತಿ ಕಿರುಕುಳ, ಹಿಂಸೆ ಮತ್ತು ಒತ್ತಡದ ಹಲವಾರು ಘಟನೆಗಳು ಬೆಳಕಿಗೆ ಬಂದ ಹಿನ್ನೆಲೆಯಲ್ಲಿ, ಕಿರು ಸಾಲ ಮತ್ತು ಸಣ್ಣ ಸಾಲ ವಸೂಲಾತಿಯಲ್ಲಿನ ಕಿರುಕುಳ, ಹಿಂಸೆ ಮತ್ತು ಒತ್ತಡ ತಡೆಯುವಲ್ಲಿ ಪರಿಣಾಮಕಾರಿ ಗಂಭೀರ ಕ್ರಮ ಕೈಗೊಳ್ಳಲು ತಪ್ಪಿತಸ್ಥ ವ್ಯಕ್ತಿಗಳಿಗೆ ಕನಿಷ್ಠ 6 ತಿಂಗಳಿಂದ ಗರಿಷ್ಠ 10 ವರ್ಷಗಳವರೆಗೆ ವಿಸ್ತರಿಸಬಹುದಾದ ಸೆರೆವಾಸ ಹಾಗೂ 5 ಲಕ್ಷ ರೂ.ವರೆಗೆ ದಂಡ ವಿಧಿಸಲು ಅವಕಾಶ ಕಲ್ಪಿಸುವ ಸುಗ್ರೀವಾಜ್ಞೆಯನ್ನು ನನ್ನ ಸರ್ಕಾರ ಅನುಷ್ಠಾನಗೊಳಿಸಿದ್ದು, ಶಾಸನಾತ್ಮಕ ಕ್ರಮಗಳಿಗೆ ಸರ್ಕಾರ ಮುಂದಾಗಿದೆ. ಜನವರಿ 2025ರ ಅಂತ್ಯಕ್ಕೆ 20.22 ಲಕ್ಷ ರೈತರಿಗೆ 16,942 ಕೋಟಿ ರೂ. ಬೆಳೆ ಸಾಲ ಮತ್ತು 46,000 ರೈತರಿಗೆ 1442 ಕೋಟಿ ರೂ.ಗಳ ಮಧ್ಯಮಾವಧಿ ಹಾಗೂ ದೀರ್ಘಾವಧಿ ಕೃಷಿ ಸಾಲ ವಿತರಿಸಲಾಗಿದೆ, ಅಲ್ಲದೆ, ಸಹಕಾರ ಸಂಘಗಳಿಗೆ ಬಡ್ಡಿ ಸಹಾಯಧನ ನೀಡಲು 1,451 ಕೋಟಿ ರೂ. ಒದಗಿಸಿ ಖರ್ಚು ಮಾಡಲಾಗಿದೆ.

ಮಾನವ–ವನ್ಯಜೀವಿ ಸಂಘರ್ಷಕ್ಕೆ ತಡೆ: ಮಾನವ–ವನ್ಯಜೀವಿ ಸಂಘರ್ಷ ನಿಯಂತ್ರಣಕ್ಕೆ 2024–25ರ ಸಾಲಿನಲ್ಲಿ 78.9ಕಿ.ಮೀ. ರೈಲ್ವೆ ಬ್ಯಾರಿಕೇಡ್ ಅಳವಡಿಸಲಾಗಿದೆ, ಮಾನವ–ಆನೆ ಸಂಘರ್ಷ ತಡೆಗೆ ಬಂಡೀಪುರದಲ್ಲಿ ತಮಿಳುನಾಡು, ಕೇರಳ, ಆಂಧ್ರ ಪ್ರದೇಶ ರಾಜ್ಯಗಳ ಅರಣ್ಯ ಸಚಿವರು, ಅಧಿಕಾರಿಗಳ ಸಭೆ ಹಾಗೂ ಬೆಂಗಳೂರಿನಲ್ಲಿ ಅಂತಾರಾಷ್ಟ್ರೀಯ ಸಮಾವೇಶವನ್ನು ಯಶಸ್ವಿಯಾಗಿ ನಡೆಸಲಾಗಿದೆ. ನನ್ನ ಸರ್ಕಾರ ಜನರ ವಸತಿ ಸಮಸ್ಯೆ ನಿವಾರಣೆಗೆ ಪ್ರಸಕ್ತ ಆರ್ಥಿಕ ವರ್ಷದಲ್ಲಿ 3.05 ಲಕ್ಷ ಮನೆಗಳನ್ನು 4761.15 ಕೋಟಿ ರೂ. ವೆಚ್ಚದಲ್ಲಿ ನಿರ್ಮಿಸಲು ನೆರವು ನೀಡಿದ್ದು, 4,096 ಎಕರೆ ಜಮೀನಿನಲ್ಲಿ 1.23 ಲಕ್ಷ ನಿವೇಶನಗಳ ಹಂಚಿಕೆಗೆ ಕ್ರಮವಹಿಸಿದೆ.

ಮಹಿಳೆಯರ ಆರ್ಥಿಕ ಸಬಲೀಕರಣ ಹೆಚ್ಚಿಸುವಲ್ಲಿ ಗೃಹಲಕ್ಷ್ಮಿ ಗ್ಯಾರಂಟಿ ಯೋಜನೆಯಡಿ ಕುಟುಂಬದ ಯಜಮಾನಿ ಮಹಿಳೆಗೆ ಪ್ರತಿ ತಿಂಗಳು 2000 ರೂ. ನೀಡಲಾಗುತ್ತಿದೆ, ಸದರಿ ಯೋಜನೆಯಡಿ 1,26,24,547 ಮಹಿಳಾ ಫಲಾನುಭವಿಗಳು ನೋಂದಣಿಯಾಗಿದ್ದು ಯೋಜನೆ ಪ್ರಾರಂಭವಾದಾಗಿನಿಂದ ಈವರೆಗೆ 36,000 ಕೋಟಿ ರೂ. ಫಲಾನುಭವಿಗಳ ಖಾತೆಗೆ ನೇರವಾಗಿ ಜಮಾ ಮಾಡಲಾಗಿದೆ.

ಬೆಂಗಳೂರು ಪೆರಿಫೆರಲ್ ರಿಂಗ್ ರಸ್ತೆ ಭಾಗ–1ರ ಯೋಜನೆಗೆ ಅಗತ್ಯವಿರುವ 27,000 ಕೋಟಿ ರೂ.ಗಳನ್ನು ಹುಡ್ಕೊ ಸಂಸ್ಥೆಯಿಂದ ಸಾಲದ ರೂಪದಲ್ಲಿ ಪಡೆಯಲು ನಿರ್ಧರಿಸಿದ್ದು, ಸಾಲದ ಮೊತ್ತಕ್ಕೆ ಭದ್ರತೆ ನೀಡಲಿದೆ, ಸುಮಾರು 2,565 ಎಕರೆ ಭೂಪ್ರದೇಶ ಸ್ವಾಧೀನಕ್ಕೆ ಉದ್ದೇಶಿಸಿದ್ದು, ಸುಮಾರು 73 ಕಿ.ಮೀ. ಉದ್ದದ ರಸ್ತೆ ನಿರ್ಮಾಣ ಕಾರ್ಯ ಕೈಗೊಳ್ಳಲಾಗುತ್ತಿದೆ.

ನಗರ ಮತ್ತು ಪಟ್ಟಣ ಪ್ರದೇಶಗಳಲ್ಲಿ ಬಹು ದಿನಗಳಿಂದ ಬಾಕಿ ಉಳಿದಿರುವ ಸುಮಾರು 30 ಲಕ್ಷಕ್ಕೂ ಹೆಚ್ಚಿನ ಅನಧಿಕೃತ ಆಸ್ತಿಗಳಿಗೆ ಇ–ಖಾತಾ ನಮೂನೆ 3ಬಿ ನೀಡಲು ಪ್ರಾರಂಭಿಸಲಾಗಿದೆ, ಮುಂದಿನ ದಿನಗಳಲ್ಲಿ ಗ್ರಾಮೀಣ ಪ್ರದೇಶಕ್ಕೂ ಈ ಸೌಲಭ್ಯ ವಿಸ್ತರಿಸಲಾಗುತ್ತದೆ.

ಭೂ ಸುರಕ್ಷಾ: ರೈತರ ಜಮೀನುಗಳಿಗೆ ಸಂಬಂಧಿಸಿದ ದಾಖಲೆಗಳನ್ನು ಸುರಕ್ಷಿತವಾಗಿಡಲು ಕಂದಾಯ ಇಲಾಖೆ 'ಭೂ ಸುರಕ್ಷಾ' ಗ್ಯಾರಂಟಿ ನೀಡುತ್ತಿದ್ದು, ಕಂದಾಯ ಇಲಾಖೆಯಲ್ಲಿನ ದೀರ್ಘಾವಧಿ ಮತ್ತು ಮುಖ್ಯ ದಾಖಲೆಗಳ ಸ್ಕ್ಯಾನಿಂಗ್, ಡಿಜಿಟಲೀಕರಣ, ಇಂಡೆಕ್ಸಿಂಗ್ ಮತ್ತು ಕೆಟಲಾಗಿಂಗ್ ಮಾಡಿ ಜನರಿಗೆ ಭೂ ದಾಖಲೆಗಳು ಸುಲಭವಾಗಿ ಸಿಗುವಂತೆ ಮಾಡಲಾಗುವುದು.

ಈಗಾಗಲೇ 9 ಕೋಟಿ ಪುಟಗಳನ್ನು ಸ್ಕ್ಯಾನ್ ಮಾಡಿ ತಂತ್ರಾಂಶದಲ್ಲಿ ಅಪ್ಲೋಡ್ ಮಾಡಲಾಗಿದೆ, ಕಂದಾಯ ಇಲಾಖೆಯಲ್ಲಿ ಮ್ಯುಟೇಶನ್‌ಗೆ ಸಂಬಂಧಿಸಿದಂತೆ ಜನರು ಅನಾವಶ್ಯಕವಾಗಿ ಅಲೆದಾಡುವುದನ್ನು ತಪ್ಪಿಸಲು ಮುಟೇಶನ್ ಗ್ಯಾರಂಟಿ ನೀಡಲಾಗಿದೆ. ಈ ಮೊದಲು ಖಾತೆ ಬದಲಾವಣೆಗೆ ಸರಾಸರಿ 32 ದಿನಗಳ ಕಾಲಾವಧಿ ಬೇಕಾಗಿತ್ತು, ಆಡಳಿತಕ್ಕೆ ಚುರುಕು ಮುಟ್ಟಿಸಿದ ನಂತರ ಶೇ.67ರಷ್ಟು ಖಾತೆ ಬದಲಾವಣೆಗಳು ಕೆಲವೇ ಗಂಟೆಗಳಲ್ಲಿ ಆಗುತ್ತಿವೆ. ಉಳಿದ ಶೇ.33ರಷ್ಟು ಮ್ಯುಟೇಶನ್‌ಗಳನ್ನು 9 ರಿಂದ 13 ದಿನಗಳಲ್ಲಿ ಮಾಡಲಾಗುತ್ತಿದೆ, ಕಂದಾಯ ನ್ಯಾಯಾಲಯಗಳಲ್ಲಿ ಸಾವಿರಾರು ಪ್ರಕರಣಗಳು 5–10 ವರ್ಷಗಳಿಂದಲೂ ಬಾಕಿ ಉಳಿದಿದ್ದವು. ಮಂಡ್ಯ ಜಿಲ್ಲೆ, ಕೆ.ಆರ್.ಪೇಟೆ ತಾಲ್ಲೂಕು ಐಚನಹಳ್ಳಿ ಹಾಗೂ ಇತರೆ 50 ಕೆರೆಗಳಿಗೆ ನೀರು ತುಂಬಿಸುವ ಏತನೀರಾವರಿ ಯೋಜನೆಯನ್ನು 265.29 ಕೋಟಿ ರೂ. ಮೊತ್ತದಲ್ಲಿ ಕೈಗೊಂಡಿದ್ದು, 1ನೇ ಹಂತದ ಯೋಜನೆ ಪ್ರಾಯೋಗಿಕವಾಗಿ ಚಾಲನೆಗೊಂಡಿದೆ ಎಂದು ರಾಜ್ಯಪಾಲರು ತಮ್ಮ ಭಾಷಣದಲ್ಲಿ ತಿಳಿಸಿದ್ದಾರೆ.

ಕಮಿಷನ್ ದಂಧೆ ಹೆಚ್ಚಿದೆ

ಸರ್ಕಾರದಲ್ಲಿ ಕಮಿಷನ್ ದಂಧೆ ಹೆಚ್ಚಾಗಿದೆ ಎಂದು ಆರೋಪಿಸಿದರು. ಗುತ್ತಿದಾರರು ಮಾಡಿರುವ ಕೆಲಸದ ಬಾಕಿ 30,000 ಕೋಟಿ ರೂ. ಪಡೆಯಲು ಎಷ್ಟೇ ಅಲೆದಾಟ ಮಾಡಿದರೂ ಸಿಗುತ್ತಿಲ್ಲ. ಆದ್ದರಿಂದ, ಏಪ್ರಿಲ್ ಅಂತ್ಯದೊಳಗೆ ಕನಿಷ್ಠ 15,000 ಕೋಟಿ ರೂ. ಬಿಡುಗಡೆ ಮಾಡುವಂತೆ ಮುಖ್ಯಮಂತ್ರಿ ಅವರಲ್ಲಿ ಮನವಿ ಮಾಡಿದ್ದೇವೆ. ಅಧಿಕಾರಿಗಳ ಮಟ್ಟದಲ್ಲಿ ಪರ್ಸೆಂಟೇಜ್ ಕಳೆದ ಸರ್ಕಾರಕ್ಕಿಂತ ಈ ಸರ್ಕಾರದಲ್ಲಿ ಹೆಚ್ಚಾಗಿದೆ. ಅದಕ್ಕೆ ಕಡಿವಾಣ ಹಾಕಿ, ಇಲ್ಲವಾದರೆ, ನಾವು ರಾಜ್ಯಪಾಲರಿಗೆ ದೂರು ನೀಡಬೇಕಾಗುತ್ತದೆ ಎಂದು ಹೇಳಿದ್ದೇವೆ.

ಕಳೆದ ಸರ್ಕಾರದಲ್ಲಿ ಶೇಕಡ 40ರಷ್ಟು ಕಮಿಷನ್ ಆರೋಪ ಮಾಡಿದ್ದೀರಿ, ಅಂದರೆ, ಈ ಸರ್ಕಾರದಲ್ಲಿ ಅದಕ್ಕಿಂತ ಹೆಚ್ಚು ಎನ್ನುತ್ತೀರಿ. ಅದು ಎಷ್ಟು ಎಂಬ ಸುದ್ದಿಗಾರರ ಪ್ರಶ್ನೆಗೆ, ನಾನು, ಅಷ್ಟು, ಇಷ್ಟು ಎಂದು ಹೇಳುವುದಿಲ್ಲ, ಅಧಿಕಾರಿಗಳ ಮಟ್ಟದಲ್ಲಿ ಈ ದಂಧೆ ಹೆಚ್ಚಿದೆ. ಅದನ್ನು ಮುಖ್ಯಮಂತ್ರಿ ಗಮನಕ್ಕೆ ತಂದಿದ್ದೇವೆ.

ಈಗಾಗಲೇ ಸಂಬಂಧಪಟ್ಟ ಸಚಿವರುಗಳ ಗಮನಕ್ಕೆ ತಂದರೂ, ನಮ್ಮ ಕಷ್ಟ ಪರಿಹಾರ ಆಗಿಲ್ಲ, ಕಮಿಷನ್ ದಂಧೆಗೆ ಕಡಿವಾಣ ಬಿದ್ದಿಲ್ಲ. ಅದಕ್ಕಾಗಿಯೇ ನಿಮ್ಮ ಬಳಿ ಬಂದಿದ್ದೇವೆ ಎಂಬುದನ್ನು ಮುಖ್ಯಮಂತ್ರಿ ಅವರಿಗೆ ಮನವರಿಕೆ ಮಾಡಿದ್ದೇವೆ. ನಮ್ಮ ಗಡುವಿನೊಳಗೆ ಪರಿಹಾರ ಸಿಗದಿದ್ದರೆ, ರಾಜ್ಯಪಾಲರಿಗೆ ದೂರು ನೀಡುವುದರ ಜೊತೆಗೆ, ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, ಕಾಂಗ್ರೆಸ್ ಅಧಿನಾಯಕ ರಾಹುಲ್ ಗಾಂಧಿ ಅವರನ್ನು ಭೇಟಿ ಮಾಡಿ ದೂರು ನೀಡುತ್ತೇವೆ ಎಂದರು. ಸಂಘದ ಸದಸ್ಯರುಗಳಿಗೆ ಯಾವ ಯಾವ ಇಲಾಖೆಗಳಲ್ಲಿ ಎಷ್ಟು ಬಾಕಿ ಉಳಿದುಕೊಂಡಿದೆ ಎಂಬ ಮಾಹಿತಿಯನ್ನೂ ನೀಡಿದ್ದೇವೆ. ಸರ್ಕಾರದ ಕಾಮಗಾರಿ ನಡೆಸಲು ಗುತ್ತಿಗೆದಾರರು ಸಾಲ ಪಡೆದು, ಅದರ ಬಡ್ಡಿ ಕಟ್ಟಲಾಗದೆ, ಎಷ್ಟು ಮಂದಿ ಆತ್ಮಹತ್ಯೆಗೆ ಶರಣಾಗಿದ್ದಾರೆ. ಇಂತಹದ್ದಕ್ಕೆ ಕಡಿವಾಣ ಹಾಕಿ ಎಂದು ಸಿದ್ದರಾಮಯ್ಯ ಅವರಲ್ಲಿ ಮನವಿ ಮಾಡಿದ್ದೇವೆ ಎಂದರು.

ಒಂದಷ್ಟು ಬಾಕಿ ಕೊಡ್ತೇನೆ

ಎಂದು ಸ್ಪಷ್ಟಪಡಿಸಿದರು. ಮಂಗಡಪತ್ರದಲ್ಲಿ ಅನುಮತಿ ಪಡೆಯದೆ ಮೌಖಿಕ ಆದೇಶದ ಮೇಲೆ ಕೆಲಸ ಮಾಡಿ, ಬಾಕಿ ನೀಡಿ ಎಂದು ಬಂದರೆ, ಎಲ್ಲಿಂದ ತರುವುದು ಎಂದು ಖಾರವಾಗಿ ಪ್ರಶ್ನಿಸಿದರು. ಬಿಜೆಪಿ ಸರ್ಕಾರದಲ್ಲಿ ಎಲ್ಲವೂ ಈ ರೀತಿಯೇ ನಡೆದಿದೆ. ಈಗ ನಮ್ಮ ಮೇಲೆ ಗೂಬೆ ಕೂರಿಸುವ ಕೆಲಸ ಮಾಡುತ್ತಿದ್ದಾರೆ. ಹಣಕಾಸು ಪರಿಸ್ಥಿತಿ ನೋಡಿ ಒಂದಷ್ಟು ಬಾಕಿ ಕೊಡುತ್ತೇನೆ. ಅವರು ಯಾರಿಗಾದರೂ ದೂರು ಕೊಡಲಿ. ಬಾಕಿ ಬಿಲ್ ಪಾವತಿಗೆ ಹಣ ಕೇಳುತ್ತಿದ್ದಾರೆ ಎಂದರೆ, ಕೊಡಬೇಡಿ, ಹಣ ಕೇಳುವುದೂ, ಕೊಡುವುದೂ ಎರಡೂ ಭ್ರಷ್ಟಾಚಾರದ ವ್ಯಾಪ್ತಿಗೆ ಬರುತ್ತದೆ. ನಿಮಗೆ ಯಾರು ಹಣ ಕೇಳುತ್ತಿದ್ದಾರೆ ಅವರ ಮೇಲೆ ದೂರು ನೀಡಿ, ನಾನಂತೂ ಹಣ ಕೊಡಿ ಎಂಬುದಾಗಿ ಯಾರನ್ನೂ ಎಲ್ಲಿಯೂ ಕೇಳಿಲ್ಲ ಎಂದರು.

ಬಿಜೆಪಿಯನ್ನು ಬುಡಸಮೇತ ಕಿತ್ತೊಗೆಯುವ ತನಕ ಹೋರಾಡಿ

ಯುವ ಕಾಂಗ್ರೆಸ್ ಕಾರ್ಯಕರ್ತರಿಗೆ ಕೆಪಿಸಿಸಿ ವಕ್ತಾರ ಲಕ್ಷ್ಮಣ್ ಕರೆ



ಮೈಸೂರಿನ ಕಾಂಗ್ರೆಸ್ ಭವನದಲ್ಲಿ ಸೋಮವಾರ ಯುವ ಕಾಂಗ್ರೆಸ್ ಚುನಾವಣೆಯಲ್ಲಿ ಗೆಲುವು ಸಾಧಿಸಿದ ಪದಾಧಿಕಾರಿಗಳಿಗೆ ಜಿಲ್ಲಾಧ್ಯಕ್ಷ ಡಾ.ಬಿ.ಜೆ.ವಿಜಯಕುಮಾರ್ ಪ್ರತಿಜ್ಞಾ ವಿಧಿ ಬೋಧಿಸಿದರು.

ಮೈಸೂರು, ಮಾ.3(ಬಿಎಲ್‌ಯು)– ದೇಶದಲ್ಲಿ ಬಿಜೆಪಿಯನ್ನು ಬುಡಸಮೇತ ಕಿತ್ತೊಗೆಯುವ ತನಕ ಯುವ ಕಾಂಗ್ರೆಸ್ ಪದಾಧಿಕಾರಿಗಳು ಹಾಗೂ ಕಾರ್ಯ ಕರ್ತರು ಹೋರಾಟ ಮಾಡಬೇಕು ಎಂದು ಕೆಪಿಸಿಸಿ ವಕ್ತಾರ ಎಂ.ಲಕ್ಷ್ಮಣ್ ಇಂದಿಲ್ಲಿ ಕರೆ ನೀಡಿದ್ದಾರೆ.

ಮೈಸೂರಿನ ಕಾಂಗ್ರೆಸ್ ಭವನದಲ್ಲಿ ಸೋಮವಾರ ಯುವ ಕಾಂಗ್ರೆಸ್ ಚುನಾವಣೆಯಲ್ಲಿ ಜಯ ಗಳಿಸಿದ ಪದಾಧಿಕಾರಿಗಳಿಗೆ ಅಭಿನಂದಿಸಿ ಮಾತನಾಡಿದ ಅವರು, ಉದಯಗಿರಿ ವ್ಯಾಪ್ತಿಯಲ್ಲಿ ನಡೆದ ಗಲಾಟೆಯನ್ನು ಬಿಜೆಪಿ ರಾಜ ಕೀಯ ಲಾಭಕ್ಕಾಗಿ ಬಳಸಿಕೊಂಡಿದೆ ಎಂದು ಆರೋಪಿಸಿದರು. ಸಮಾಜದಲ್ಲಿ ಕೋಮುದ್ವೇಷ ಬಿತ್ತುತ್ತಿರುವ ಬಿಜೆಪಿಯನ್ನು ಬುಡ ಸಮೇತ ಕಿತ್ತೊಗೆಯಬೇಕು. ಈ ಹಿನ್ನೆಲೆಯಲ್ಲಿ ಕಾಂಗ್ರೆಸ್ ಕಾರ್ಯಕರ್ತರು ಪರಿಣಾಮಕಾರಿಯಾಗಿ ಹೋರಾಡಬೇಕು ಎಂದು ಸಲಹೆ ನೀಡಿದರು. ಇದೇ ವೇಳೆ ಮಾತನಾಡಿದ ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಡಾ.ಬಿ.ಜೆ.ವಿಜಯ ಕುಮಾರ್, ಕಾಂಗ್ರೆಸ್ ಕಚೇರಿ ನಮಗೆ ದೇಗುಲವಿದ್ದಂತೆ. ಪ್ರತಿಯೊಬ್ಬರು ಕಾಂಗ್ರೆಸ್ ಕಚೇರಿಗೆ ಭೇಟಿ ನೀಡಿ ತರುವಾಯ ಪಕ್ಷದ ಇತರೆ ಕಾರ್ಯದಲ್ಲಿ ತೊಡಗಬೇಕು ಎಂದು ಸಲಹೆ ನೀಡಿದರು.

ಯುವ ಕಾಂಗ್ರೆಸ್ ಚುನಾವಣೆ ನಡೆಸಿರುವುದು ಬಿಜೆಪಿ ಅಥವಾ ಜೆಡಿಎಸ್ ಪಕ್ಷದ ವಿರುದ್ಧ ಅಲ್ಲ. ಪಕ್ಷದ ಸಂಘಟನೆಯನ್ನು ಮತ್ತಷ್ಟು ಗಟ್ಟಿಗೊಳಿಸಲು ಗೆಲುವು ಸಾಧಿಸಿದ ಪದಾಧಿಕಾರಿಗಳು ಯಾವುದೇ ಭಿನ್ನಾಭಿಪ್ರಾಯ ಇಲ್ಲದೆ ಒಗ್ಗಟ್ಟಿನಿಂದ ಕೆಲಸ ಮಾಡಬೇಕು. ಪಕ್ಷಕ್ಕೆ ನಿಷ್ಠೆಯಿಂದ ಕೆಲಸ ಮಾಡುವವರಿಗೆ ಉತ್ತಮ ಸ್ಥಾನಮಾನ ಸಿಗುತ್ತದೆ ಎಂದು ಭರವಸೆ ನೀಡಿದರು.

ತರುವಾಯ ಮಾತನಾಡಿದ ನಗರ ಕಾಂಗ್ರೆಸ್ ಅಧ್ಯಕ್ಷ ಆರ್.ಮೂರ್ತಿ, ಉತ್ತರ ಪ್ರದೇಶದಲ್ಲಿ ನಡೆದ ಕುಂಭಮೇಳದ ಧಾರ್ಮಿಕ ಕಾರ್ಯವನ್ನು ಬಿಜೆಪಿ ರಾಜಕೀಯ ಲಾಭಕ್ಕಾಗಿ ಬಳಸಿಕೊಂಡಿದೆ. ಸಮಾಜದಲ್ಲಿ ಕೋಮು ಸೌಹಾರ್ದ ಕದಡಿ ಅಶಾಂತಿ ವಾತಾವರಣ ನಿರ್ಮಿಸುವ ಮೂಲಕ ಚುನಾವಣೆಯಲ್ಲಿ ಗೆಲುವು ಸಾಧಿಸುವ ಅಜೆಂಡಾ ಹೊಂದಿದೆ ಎಂದು ಆಪಾದಿಸಿದರು.

ಈ ವೇಳೆ ಯುವ ಕಾಂಗ್ರೆಸ್ ಚುನಾವಣೆಯಲ್ಲಿ ಗೆಲುವು ಸಾಧಿಸಿದ ಪದಾಧಿ ಕಾರಿಗಳಿಗೆ ಪ್ರತಿಜ್ಞಾ ವಿಧಿ ಬೋಧಿಸಲಾಯಿತು. ಕಾಂಗ್ರೆಸ್ ಉಪಾಧ್ಯಕ್ಷ ಹೆಡತಲೆ ಮಂಜುನಾಥ್, ಪ್ರಧಾನ ಕಾರ್ಯದರ್ಶಿ ಶಿವಣ್ಣ, ಎಂ.ಶಿವಪ್ರಸಾದ್, ಈಶ್ವರ್ ಚಕ್ಕಡಿ, ಯುವ ಕಾಂಗ್ರೆಸ್ ಜಿಲ್ಲಾಧ್ಯಕ್ಷ ಚಂದನ್ ಕುಮಾರ್, ಕೆಪಿಸಿಸಿ ಯುವ ಪದಾಧಿಕಾರಿಗಳಾದ ಶಿವಣ್ಣ, ನಜ್ಮಾನ್ ನಜೀರ್, ಸೇವಾದಳದ ಅಧ್ಯಕ್ಷ ಸಾ.ಮಾ. ಯೋಗೇಶ್ ಸೇರಿದಂತೆ ಹಲವರು ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.

ಮಾ.8ರಂದು ಬೃಹತ್ ಉದ್ಯೋಗ ಮೇಳ

ಮೈಸೂರು, ಮಾ.3–ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆ, ಜಿಲ್ಲಾಡಳಿತ ಮತ್ತು ಜಿಲ್ಲಾ ಪಂಚಾಯತ್, ಹಾಗೂ ಮಹಾರಾಜ ಇನ್ಸ್ಟಿಟ್ಯೂಟ್ ಆಫ್ ಟೆಕ್ನಾಲಿಜಿ, ತಾಂಡವಪುರ, ನಂಜನಗೂಡು ತಾಲ್ಲೂಕು ಇವರ ಸಹಯೋಗದಲ್ಲಿ ಮಾರ್ಚ್ 8ರಂದು ಮಹಾರಾಜ ಇನ್ಸ್ಟಿಟ್ಯೂಟ್ ಆಫ್ ಟೆಕ್ನಾಲಿಜಿ, ತಾಂಡವಪುರ ಇಲ್ಲಿ ಉದ್ಯೋಗ ಮೇಳವನ್ನು ಆಯೋಜಿಸಲಾಗಿದೆ.

ಸದರಿ ಉದ್ಯೋಗ ಮೇಳಕ್ಕೆ, ಮೈಸೂರು–ಬೆಂಗಳೂರಿನ ಹೆಸರಾಂತ ಕಂಪನಿಗಳು ತಮ್ಮ ಸಂಸ್ಥೆಯಲ್ಲಿ ಖಾಲಿ ಇರುವ ವಿವಿಧ ಹುದ್ದೆಗಳಿಗೆ ನೇರ ಸಂದರ್ಶನದ ಮೂಲಕ ಆಯ್ಕೆಮಾಡಿಕೊಳ್ಳಲಿದ್ದು, ಜಿಲ್ಲೆಯ ನಿರುದ್ಯೋಗಿ ಅಭ್ಯರ್ಥಿಗಳು ಮಾರ್ಚ್ 8ರಂದು ಬೆಳಗ್ಗೆ 10 ಗಂಟೆಯಿಂದ ಸಂಜೆ 4 ಗಂಟೆಯವರೆಗೆ ಮಹಾರಾಜ ಇನ್ಸ್ಟಿಟ್ಯೂಟ್ ಆಫ್ ಟೆಕ್ನಾಲಿಜಿ, ತಾಂಡವಪುರ, ನಂಜನಗೂಡು ತಾಲ್ಲೂಕು ಇಲ್ಲಿ ಎಸ್.ಎಸ್.ಎಲ್.ಸಿ ಪಾಸು/ಫೇಲು, ಪಿಯುಸಿ/ಪದವಿ/ಐಟಿಐ/ಡಿಪ್ಲೋಮ/ಎಂ.ಬಿ.ಎ/ಸ್ನಾತಕೋತ್ತರ ದಲ್ಲಿ ತೇರ್ಗಡೆ ಹೊಂದಿದ 18 ರಿಂದ 35 ವರ್ಷ ವಯೋಮಿತಿ ಹೊಂದಿರುವ ಪುರುಷ ಮತ್ತು ಮಹಿಳಾ ಅಭ್ಯರ್ಥಿಗಳನ್ನು ಉದ್ಯೋಗ ಮೇಳ ಮೂಲಕ ಆಯ್ಕೆ ಮಾಡಿಕೊಳ್ಳತ್ತಿದ್ದು, ಆಸಕ್ತ ಅಭ್ಯರ್ಥಿಗಳು ವಿದ್ಯಾರ್ಹತೆಯ ಅಂಕಪಟ್ಟಿಗಳ ಜೆರಾಕ್ಸ್ ಪ್ರತಿಗಳು ಮತ್ತು ಆಧಾರ್ ಕಾರ್ಡ್, ಸ್ವ–ವಿವರವುಳ್ಳ 10 ಬಯೋಡೇಟಾ ಪ್ರತಿಗಳೊಂದಿಗೆ, ಮಹಾರಾಜ ಇನ್ಸ್ಟಿಟ್ಯೂಟ್ ಆಫ್ ಟೆಕ್ನಾಲಿಜಿ, ತಾಂಡವಪುರ, ನಂಜನಗೂಡು ತಾಲ್ಲೂಕು ಇಲ್ಲಿ ಹಾಜರಾಗಿ ಇದರ ಸದುಪಯೋಗವನ್ನು ಪಡೆದುಕೊಳ್ಳಬಹುದು. ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಕೌಶಲ್ಯಾಭಿವೃದ್ಧಿ ಅಧಿಕಾರಿಗಳ ಕಾರ್ಯಾಲಯ, ಮೈಸೂರು ಇವರನ್ನು ಕಛೇರಿ ವೇಳೆಯಲ್ಲಿ ಅಥವಾ ದೂ.ಸಂ: 0821–2970815 ನ್ನು ಅಥವಾ ಉದ್ಯೋಗ ವಿನಿಮಯ ಕಛೇರಿ ದೂ.ಸಂ: 8095856846 ಸಂಪರ್ಕಿಸಬಹುದು.

ಇಂದಿನಿಂದ ಬೀದರ್–ಬೆಂಗಳೂರು ರಥಯಾತ್ರೆ

ಮೈಸೂರು, ಮಾ.3(ಜಿಎ)– ಬಂಜಾರರ ಸಮಸ್ಯೆ ಬಗ್ಗೆ ಸರ್ಕಾರದ ಗಮನ ಸೆಳೆಯಲು ಮಾ.4ರಿಂದ 10ರವರೆಗೆ ಬೀದರ್‌ನಿಂದ ಬೆಂಗಳೂರಿನವರೆಗೆ ಸತತ ಏಳು ದಿನಗಳ ರಥಯಾತ್ರೆ ಹಮ್ಮಿಕೊಂಡಿರುವುದಾಗಿ ಗೋರ್ ಸೇನಾ ಜಿಲ್ಲಾಧ್ಯಕ್ಷ ನಂದಾನಾಯಕ್ ತಿಳಿಸಿದರು. ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಈ ರಥಯಾತ್ರೆ ರಾಜ್ಯದ 15 ಜಿಲ್ಲೆ ಒಳಗೊಂಡಂತೆ 1,250 ಕಿಮೀ ಕ್ರಮಿಸಲಿದ್ದು, ಕೊನೆಯಲ್ಲಿ ಫ್ರೀಡಂ ಪಾರ್ಕ್ ತಲುಪಿ ಸಭೆ ನಡೆಯಲಿದೆ. ಸಮುದಾಯದ ಅಭಿವೃದ್ಧಿಗೆ ಸರ್ಕಾರ ಅಗತ್ಯವಾದ ಕ್ರಮ ಕೈಗೊಳ್ಳ ಬೇಕೆಂಬ ಉದ್ದೇಶ ಈ ರಥಯಾತ್ರೆ ನಡೆಸಲಾಗುತ್ತಿದೆ ಎಂದು ತಿಳಿಸಿದರು. ಸುದ್ದಿಗೋಷ್ಠಿಯಲ್ಲಿ ಶಿವು ಬಾವಾಜಿ, ಅನಿಲ್, ಎಚ್.ರಮೇಶ್‌ನಾಯಕ್, ರಾಜೇಶ್ ನಾಯಕ್, ಚಂದ್ರಪ್ರಕಾಶ್ ಮೇಘಾವತ್ ಉಪಸ್ಥಿತರಿದ್ದರು.

ಮೈಸೂರು ಮಿತ್ರ
ಮಂಗಳವಾರ 4 ಮಾರ್ಚ್ 2025

ಯೋಧರಿಗೆ ನಮನ...



ರೋಟರಿ ಮೈಸೂರು ಉತ್ತರ ವತಿಯಿಂದ ಆಯೋಜಿಸಿದ್ದ ಯೋಧರಿಗೆ ನಮನ ಕಾರ್ಯಕ್ರಮದಲ್ಲಿ ನಿವೃತ್ತ ಯೋಧ ಸಿ.ಎನ್.ಉತ್ತಪ್ಪ ಅವರನ್ನು ನಿವೃತ್ತ ಮೇಜರ್ ಜನರಲ್ ಎಸ್.ಜಿ.ಒಂಬತ್ಕೆರೆ ಸನ್ಮಾನಿಸಿದರು. ಈ ವೇಳೆ ರೋಟರಿ ಮೈಸೂರು ಉತ್ತರದ ಮಾಜಿ ಅಧ್ಯಕ್ಷ ಎಸ್.ವಿ.ಗೌಡಪ್ಪ, ರೋಟರಿ ಮೈಸೂರು ಉತ್ತರ ಅಧ್ಯಕ್ಷ ರೊ ಪ್ರಭಾಕರ್, ರೊ ಎಲ್.ಆರ್.ಮಹದೇವಸ್ವಾಮಿ ಮತ್ತಿತರರು ಉಪಸ್ಥಿತರಿದ್ದರು.

ಬೇಸಿಗೆ ವಸ್ತುಪ್ರದರ್ಶನ ಮೈಸೂರಿಗರ ಮನರಂಜಿಸಲು ಸಕಲ ಸಿದ್ಧತೆ

ಕರ್ನಾಟಕ ವಸ್ತುಪ್ರದರ್ಶನ ಪ್ರಾಧಿಕಾರದ ಅಧ್ಯಕ್ಷ ಅಯೂಬ್ ಖಾನ್

ಮೈಸೂರು, ಮಾ. 3– ಕರ್ನಾಟಕ ವಸ್ತುಪ್ರದರ್ಶನ ಪ್ರಾಧಿಕಾರದ ವತಿಯಿಂದ ಮೈಸೂರು ದಸರಾ ವಸ್ತುಪ್ರದರ್ಶನ 2024–25ರ ಸಮಾರೋಪ ಸಮಾರಂಭ ಪಿ.ಕಾಳಿಂಗರಾವ್ ಗಾನ ಮಂಟಪದಲ್ಲಿ ನಡೆಯಿತು.

ಕರ್ನಾಟಕ ವಸ್ತುಪ್ರದರ್ಶನ ಪ್ರಾಧಿಕಾರದ ಅಧ್ಯಕ್ಷ ಅಯೂಬ್ ಖಾನ್, ಸಿಇಓ ಕೆ.ರುದ್ರೇಶ್ ಮತ್ತು ಸಾಂಸ್ಕೃತಿಕ ಸಮಿತಿಯ ಅಧ್ಯಕ್ಷ ರಘುರಾಜೇ ಅರಸ್ ಅವರನ್ನು ಉಪಸಮಿತಿಯ ವತಿಯಿಂದ ಪದಾಧಿಕಾರಿಗಳಾದ ರಾಕೇಶ್‌ಕುಮಾರ್, ರಂಗಸ್ವಾಮಿ (ಪಾಪು) ನೇತೃತ್ವದಲ್ಲಿ ಸನ್ಮಾನಿಸಲಾಯಿತು.

ಈ ವೇಳೆ ಕರ್ನಾಟಕ ವಸ್ತುಪ್ರದರ್ಶನ ಪ್ರಾಧಿಕಾರದ ಅಧ್ಯಕ್ಷ ಅಯೂಬ್ ಖಾನ್ ಮಾತನಾಡಿ, ವರ್ಷಪೂರ್ತಿ ವಸ್ತುಪ್ರದರ್ಶನ ನಡೆಯಬೇಕು ಎನ್ನುವ ಪರಿಕಲ್ಪನೆಯೊಂದಿಗೆ ಈಗಾಗಲೇ ನೂರು ದಿನಗಳ ದಸರಾ ವಸ್ತುಪ್ರದರ್ಶನ ಐವತ್ತು ದಿನಗಳ ಗೃಹಶೋಭೆ ಹಾಗೂ ಖಾಸಗಿ ವಸ್ತುಪ್ರದರ್ಶನಗಳು ಜರುಗಿದ್ದು, 20 ಲಕ್ಷಕ್ಕೂ ಹೆಚ್ಚು ಪ್ರವಾಸಿಗರನ್ನು ಆಕರ್ಷಿಸುವಲ್ಲಿ ಯಶಸ್ವಿಯಾಗಿದೆ. ಸೆಲೆಬ್ರೆಟಿ ಬ್ರಾಂಡ್ ಇವೆಂಟ್ಸ್‌ವರೆಗೂ ವಸ್ತುಪ್ರದರ್ಶನ ಅಂತರರಾಷ್ಟ್ರೀಯ ಮಟ್ಟದಲ್ಲಿ ಆಕರ್ಷಣೆಯಾಗಿದೆ. ಮುಂದಿನ ದಿನಗಳಲ್ಲಿ ಬೆಳಗಾವಿ, ಬಳ್ಳಾರಿ ಸೇರಿದಂತೆ ರಾಜ್ಯದ ವಿವಿಧೆಡೆ ವಸ್ತುಪ್ರದರ್ಶನ ಆಯೋಜಿಸಲಾಗುತ್ತಿದ್ದು, ಈ ಬಾರಿ ಬೇಸಿಗೆಯಲ್ಲಿ 45 ದಿನಗಳ ವಸ್ತುಪ್ರದರ್ಶನ ಆಯೋಜಿಸಿ ಒಂದೇ ಸೂರಿನಡಿಯಲ್ಲಿ ಶಾಪಿಂಗ್ ಮಳಿಗೆಗಳು, ಆಹಾರ ಮಳಿಗೆಗಳು, ಅಮ್ಯೂಸ್‌ಮೆಂಟ್, ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಆಯೋಜಿಸಲಾಗುವುದು ಎಂದರು.

ಪ್ರಾಧಿಕಾರದ ಅಧ್ಯಕ್ಷ ಅಯೂಬ್ ಖಾನ್, ಸಿಇಓ ಕೆ.ರುದ್ರೇಶ್, ಕಾಂಗ್ರೆಸ್ ನಗರಾಧ್ಯಕ್ಷ ಆರ್.ಮೂರ್ತಿ, ಎನ್.ಎಸ್.ಯು.ಐ ರಾಷ್ಟ್ರೀಯ ಪ್ರಧಾನ ಕಾರ್ಯದರ್ಶಿ ನಾಗೇಶ್ ಕರಿಯಪ್ಪ, ಮಾಜಿ ಮಹಾಪೌರರಾದ ಪುರುಷೋತ್ತಮ್, ಭೈರಪ್ಪ, ಪುಷ್ಪಲತಾ ಜಗನ್ನಾಥ್, ಶ್ರೀಕಂಠಯ್ಯ, ಆರೀಫ್ ಹುಸೇನ್, ದಕ್ಷಿಣ ಮೂರ್ತಿ, ಟಿ.ಬಿ ಚಿಕ್ಕಣ್ಣ, ಶಾಂತಕುಮಾರಿ, ಪಾಲಿಕೆ ಮಾಜಿ ಸದಸ್ಯರಾದ ಸೈಯದ್ ಹಜರತ್ ಉಲ್ಲಾ, ಕೆವಿ ಮಲ್ಲೇಶ್, ಫೈರೋಜ್‌ಖಾನ್, ಬ್ಲಾಕ್ ಅಧ್ಯಕ್ಷ ಜಿ.ಸೋಮಶೇಖರ್, ಇಕ್ಬಾಲ್, ರವಿಕುಮಾರ್, ಪ್ರಧಾನ ಕಾರ್ಯದರ್ಶಿ ಸಿಎಸ್.ರಘು, ಒಸಮಾ ಖಾನ್, ಶೌಕತ್ ಅಲಿಖಾನ್, ಪ್ರಸನ್ನಕುಮಾರ್, ಶಾರದಾ ಸಂಪತ್, ರಾಜೇಶ್ವರಿ, ಕೈಸರ್ ಅಹಮದ್, ರಘುರಾಜೇ ಅರಸ್, ರಾಕೇಶ್, ರಂಗಸ್ವಾಮಿ (ಪಾಪು), ಲತಾ ರಂಗನಾಥ್, ಚಂದ್ರಕಲಾ, ಮ್ಯಾನೇಜರ್ ನಂದಕುಮಾರ್, ವೆಂಕಟೇಶ್, ನಿರೂಪಕ ಅಜಯ್ ಶಾಸ್ತ್ರಿ, ಗುರುರಾಜ್ ಇತರರು ಉಪಸ್ಥಿತರಿದ್ದರು.



ಮೈಸೂರು ದಸರಾ ವಸ್ತುಪ್ರದರ್ಶನ 2024–25ರ ಸಮಾರೋಪ ಸಮಾರಂಭದಲ್ಲಿ ಕರ್ನಾಟಕ ವಸ್ತುಪ್ರದರ್ಶನ ಪ್ರಾಧಿಕಾರದ ಅಧ್ಯಕ್ಷ ಅಯೂಬ್ ಖಾನ್, ಸಿಇಓ ಕೆ.ರುದ್ರೇಶ್ ಮತ್ತು ಸಾಂಸ್ಕೃತಿಕ ಸಮಿತಿ ಅಧ್ಯಕ್ಷ ರಘುರಾಜೇ ಅರಸ್ ಅವರನ್ನು ಉಪ ಸಮಿತಿ ವತಿಯಿಂದ ಪದಾಧಿಕಾರಿಗಳಾದ ರಾಕೇಶ್‌ಕುಮಾರ್, ರಂಗಸ್ವಾಮಿ (ಪಾಪು) ನೇತೃತ್ವದಲ್ಲಿ ಸನ್ಮಾನಿಸಲಾಯಿತು.

ಇಂದು ಬೆಂಗಳೂರಲ್ಲಿ ಹೋಂಗಾರ್ಡ್‌ಗಳ ಧರಣಿ

ಮೈಸೂರು,ಮಾ.3(ಪಿಎಂ)– ರಾಜ್ಯಾದ್ಯಂತ ಇರುವ 27 ಸಾವಿರ ಗೃಹರಕ್ಷಕರಿಗೆ ವರ್ಷದ 365 ದಿನಗಳೂ ಕರ್ತವ್ಯ ಸಲ್ಲಿಸಲು ಅವಕಾಶ ನೀಡಬೇಕೆಂದು ಒತ್ತಾಯಿಸಿ ಲೇಬರ್ ರೈಟ್ಸ್ ಫೋರಂ ವತಿಯಿಂದ ಮಾ.4ರಂದು ಬೆಂಗಳೂರಿನ ಫ್ರೀಡಂ ಪಾರ್ಕ್‌ನಲ್ಲಿ ಧರಣಿ ಹಮ್ಮಿಕೊಳ್ಳಲಾಗಿದೆ ಎಂದು ಫೋರಂನ ಸಂಸ್ಥಾಪಕ ಅಧ್ಯಕ್ಷ ಪಾವಗಡ ಶ್ರೀರಾಮ್ ತಿಳಿಸಿದ್ದಾರೆ.

ಮೈಸೂರಿನ ಪಿಡಬ್ಲ್ಯೂಡಿ ವಸತಿ ಗೃಹದ ಸಭಾಂಗಣದಲ್ಲಿ ನಡೆದ ಗೃಹರಕ್ಷಕ ದಳದ ರಕ್ಷಕರು, ಪೋಷಕರು ಹಾಗೂ ಹಿತೈಷಿಗಳ ಸಭೆಯಲ್ಲಿ ಮಾತನಾಡಿದ ಅವರು, ರಾಜ್ಯದ ಎಲ್ಲಾ ಭಾಗಗಳಿಂದ ಈ ಧರಣಿಗೆ ಹೆಚ್ಚಿನ ಸಂಖ್ಯೆಯಲ್ಲಿ ಗೃಹರಕ್ಷಕ ದಳದ ಪೋಷಕರು, ರಕ್ಷಕರು ಬರುತ್ತಿದ್ದು, ಆಂಧ್ರ, ತೆಲಂಗಾಣ ಹಾಗೂ ಗೋವಾದಲ್ಲಿರುವಂತೆ ಕರ್ನಾಟಕದಲ್ಲಿಯೂ ಗೃಹರಕ್ಷಕರಿಗೆ 365 ದಿನಗಳು ಕರ್ತವ್ಯ ನಿರ್ವಹಿಸಲು ಅವಕಾಶ ನೀಡಲು ಒತ್ತಾಯಿಸಲಾಗುವುದು ಎಂದರು.

ವಿವಿಗಳಲ್ಲಿ ಖಾಸಗಿಯವರಿಗೆ ಗುತ್ತಿಗೆ ನೀಡುವ ಬದಲು ಗೃಹರಕ್ಷಕರನ್ನು ನೇಮಿಸಿಕೊಳ್ಳಬೇಕು. ಅಲ್ಲದೆ, ಸರ್ಕಾರಿ ಆಸ್ಪತ್ರೆ, ಪೊಲೀಸ್ ಗಸ್ತು, ಸರ್ಕಾರದ ಐತಿಹಾಸಿಕ ಸ್ಮಾರಕಗಳಲ್ಲಿ ಕರ್ತವ್ಯ ನಿರ್ವಹಿಸಲೂ ಅವಕಾಶ ನೀಡಬೇಕು. ಗೃಹರಕ್ಷಕರಿಗೆ ಕೇವಲ 90 ದಿನಗಳು ಮಾತ್ರವೇ ಕರ್ತವ್ಯ ನಿರ್ವಹಿಸಲು ಅವಕಾಶ ನೀಡಿದ್ದು, 275 ದಿನಗಳು ಅವರು ಕೆಲಸ ಇಲ್ಲದೆ, ಜೀವನ ನಿರ್ವಹಿಸಲು ಕಷ್ಟಪಡುವಂತಾಗಿದೆ ಎಂದು ಬೇಸರ ವ್ಯಕ್ತಪಡಿಸಿದರು.

ಮಾನವ ಹಕ್ಕುಗಳ ಹೋರಾಟಗಾರ ಪ್ರಸನ್ನ ಮಾತನಾಡಿ, ಸಮಾಜಮುಖಿ ಹಾಗೂ ಸೇವಾ ಮನೋಭಾವದಿಂದ ದುಡಿಯುತ್ತಿರುವ ಗೃಹರಕ್ಷಕ ಸಿಬ್ಬಂದಿಯನ್ನು ಕಡೆಗಣಿಸಲಾಗಿದೆ. ಇದು ಅತ್ಯಂತ ಖಂಡನೀಯ ಎಂದರು. ಭೀಮ ಸೇನೆ ಸಂಘಟನೆಯ ಮಂಜುನಾಥ್, ಜಿಲ್ಲಾಧ್ಯಕ್ಷ ಕಾಳೇಗೌಡ, ಮುಖಂಡರಾದ ಚಲುವರಾಜ್ ಸೇರಿದಂತೆ ಹೋಂಗಾರ್ಡ್‌ಗಳು ಹಾಜರಿದ್ದರು.

ಆಸ್ತಿ ತೆರಿಗೆ ಪಾವತಿಸುವ ತಂತ್ರಾಂಶದಲ್ಲಿ ವರ್ಗಾವಣೆ, ಬದಲಾವಣೆ, ತಿದ್ದುಪಡಿ ಅಧಿಕಾರ ವಿಕೇಂದ್ರೀಕರಣ

ಸರ್ಕಾರದ ನಿರ್ದೇಶನದಂತೆ ಮೈಸೂರು ಮಹಾನಗರಪಾಲಿಕೆ ಆಯುಕ್ತರ ಆದೇಶ

ಮೈಸೂರು, ಮಾ. 3(ಆರ್‌ಕೆ)– ಆಸ್ತಿ ತೆರಿಗೆ ಪಾವತಿಸುವ ಆನ್‌ಲೈನ್ ತಂತ್ರಾಂಶದಲ್ಲಿ ಹೊಸದಾಗಿ ಪಿಐಡಿಗಳ ಸೃಜನೆ, ವರ್ಗಾವಣೆ, ಬದಲಾವಣೆ ಹಾಗೂ ತಿದ್ದುಪಡಿ ಮಾಡುವ ಸಂಬಂಧ ಮೈಸೂರು ಮಹಾನಗರ ಪಾಲಿಕೆಯು ಅಧಿಕಾರ ವಿಕೇಂದ್ರೀಕರಣ ಮಾಡಿದೆ.






ಫೆಬ್ರವರಿ 11ರಂದು ಸರ್ಕಾರ ಅಧಿಸೂಚನೆ ನೀಡಿರುವ ಹಿನ್ನೆಲೆಯಲ್ಲಿ ಫೆಬ್ರವರಿ 28ರಂದು ಅಧಿಕೃತ ಜ್ಞಾಪನ ಹೊರಡಿಸಿರುವ ಮೈಸೂರು ಮಹಾನಗರ ಪಾಲಿಕೆ ಆಯುಕ್ತ ಶೇಖ್ ತನ್ವೀರ್ ಆಸಿಫ್, ಸಾರ್ವಜನಿಕರ ಹಿತದೃಷ್ಟಿಯಿಂದ ಆಸ್ತಿ ತೆರಿಗೆ ಪಾವತಿಯ ಆನ್‌ಲೈನ್ ಲೆಕ್ಕಾಚಾರ ತಂತ್ರಾಂಶದಲ್ಲಿ ಹೊಸ ಪಿಐಡಿ ಸೃಜಿಸುವ, ವರ್ಗಾವಣೆ, ತಿದ್ದುಪಡಿ, ಬದಲಾವಣೆಗಳನ್ನು ಮಾಡಲು ಕರ್ನಾಟಕ ಪೌರ ನಿಗಮಗಳ ಅಧಿನಿಯಮ–1976ರ ಪ್ರಕರಣ 66ರಲ್ಲಿ ದತ್ತವಾದ ಅಧಿಕಾರ ಚಲಾಯಿಸಿ ಕೆಲ ಅಧಿಕಾರಿಗಳಿಗೆ ಅವಕಾಶ ನೀಡಿದ್ದಾರೆ.

ಚಾಲ್ತಿ ಆಸ್ತಿ ತೆರಿಗೆ, ಕಟ್ಟಡ ಅಥವಾ ಕಟ್ಟಡರಹಿತ ಆಸ್ತಿಗಳ ಮೇಲಿನ ಲೆವಿ, ಆಸ್ತಿಗಳ ವರ್ಗಾವಣೆ, 'ಎ' ಮತ್ತು 'ಬಿ' ಖಾತೆ ನೋಂದಣಿ, ಡಿಮಾಂಡ್ ನೋಟಿಸ್ ಜಾರಿ, ತೆರಿಗೆ ವಸೂಲಿ, ತೆರಿಗೆ ವಸೂಲಿಗೆ ಅಟಾಚ್‌ಮೆಂಟ್ ವಾರಂಟ್ ಜಾರಿ ಮಾಡುವುದು, ಆಸ್ತಿಗಳ ಜಪ್ತಿ ಮುಟೇಷನ್ ಸೇರಿದಂತೆ ಇನ್ನಿತರ ಪ್ರಕ್ರಿಯೆ ಅನುಮೋದನೆ ನೀಡಲು ಪಾಲಿಕೆ ವಲಯಾಧಿಕಾರಿಗಳು, ಕಂದಾಯ ಉಪಆಯುಕ್ತರು, ಎಸ್ಟೇಟ್ ಅಧಿಕಾರಿಗಳಿಗೆ ಅಧಿಕಾರ ನೀಡಿ ಆದೇಶಿಸಿದ್ದಾರೆ.

ಅಭಿನಂದನೆ...



ವಿಕ್ರಾಂತ್ ಟೈರ್ಸ್ ಲಿಮಿಟೆಡ್ ಉದ್ಯೋಗಿಗಳ ಬಳಕೆದಾರರ ಸಹಕಾರ ಸಂಘಕ್ಕೆ ನಡೆದ ಚುನಾವಣೆಯಲ್ಲಿ 2025–2030ನೇ ಸಾಲಿಗೆ ನಿರ್ದೇಶಕರಾಗಿ ಆಯ್ಕೆಯಾದ ಎಂ.ಆರ್.ಚನ್ನೇಗೌಡ ಅವರನ್ನು ಶಾಸಕ ಕೆ.ಹರೀಶ್‌ಗೌಡ ಅಭಿನಂದಿಸಿದರು. ದಿ ಮೈಸೂರು ಕೋ–ಆಪರೇಟಿವ್ ಬ್ಯಾಂಕ್ ಅಧ್ಯಕ್ಷ ಯೋಗೇಶ್, ರಮೇಶ್ ಹೆಬ್ಬಾಳ್, ಚಂದ್ರು, ಪ್ರತಾಪ್ ಹಾಗೂ ಗುರು ಉಪಸ್ಥಿತರಿದ್ದರು.

ಕೆ.ಶಿವರಾಮ್ ಪುಣ್ಯಸ್ಮರಣೆ...



ಮೈಸೂರಿನ ಕೆ.ಶಿವರಾಮ್ ಬಡಾವಣೆಯಲ್ಲಿ ಅಭಿಮಾನಿಗಳ ಬಳಗದ ವತಿಯಿಂದ ಅವರ ಪುಣ್ಯಸ್ಮರಣೆಯನ್ನು ಅವರ ಭಾವಚಿತ್ರಕ್ಕೆ ಪುಷ್ಪ ನಮನ ಸಲ್ಲಿಸುವ ಮೂಲಕ ಆಚರಿಸಲಾಯಿತು. ಈ ವೇಳೆ ಮಾಜಿ ಶಾಸಕ ಎಂ.ಕೆ.ಸೋಮಶೇಖರ್, ಮಾಜಿ ಮೇಯರ್ ಪುರುಷೋತ್ತಮ್, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಶ್ರೀಧರ್, ಮುಖಂಡರಾದ ಜೆ.ರವಿ, ನಾಗರಾಜು, ಮಹದೇವು, ಸುಶೀಲ, ಛಲವಾದಿ ಶಿವು, ಪ್ರಶಾಂತ್, ಗುಣಶೇಖರ್, ಮಧುರಾಜ್ ಮತ್ತಿತರರು ಉಪಸ್ಥಿತರಿದ್ದರು. ಇದೇ ವೇಳೆ ಸಮಾಜ ಸೇವಕ ಜಯರಾಜ್ ಬಡ ಮಕ್ಕಳಿಗೆ ಪುಸ್ತಕ ಲೇಖನ ಸಾಮಗ್ರಿ ವಿತರಿಸಿದರು.

ಸಿದ್ಧಾರ್ಥ ಸ್ಪೋರ್ಟ್ಸ್ ಕ್ಲಬ್‌ನಲ್ಲಿ ಅಕ್ರಮ ಕಾಮಗಾರಿ; ಆರೋಪ

ಮೈಸೂರು, ಮಾ.3(ಜಿಎ)– ಮೈಸೂರಿನ ಸಿದ್ಧಾರ್ಥ ಸ್ಪೋರ್ಟ್ಸ್ ಕ್ಲಬ್‌ನ ಆಡಳಿತ ಮಂಡಳಿ ಕಾನೂನು ಬಾಹಿರವಾಗಿ ನವೀಕೃತಗೊಂಡಿದ್ದು, ಅಕ್ರಮವಾಗಿ ಕಾಮಗಾರಿ ಮಾಡುತ್ತಿದ್ದಾರೆ ಎಂದು ಸಂಘದ ವಜಾಗೊಂಡ ಚಂದನ್ ಆರೋಪಿಸಿದ್ದಾರೆ.

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, 2019ರಿಂದ 23ರವರೆಗೆ ಇದ್ದ ಆಡಳಿತ ಮಂಡಳಿ ಹಾಗೂ ವ್ಯವಸ್ಥಾಪಕ ಕ್ಲಬ್‌ನ ಹಣವನ್ನು ದುರುಪಯೋಗಪಡಿಸಿಕೊಂಡಿದ್ದರು.

> **“ ಸಂಘದ ಹಣವನ್ನು ದುರುಪಯೋಗ ಮಾಡಿಕೊಂಡಿಲ್ಲ. ಕಾನೂನಿನ ರೀತಿ ಕ್ಲಬ್‌ನ ಕಾಮಗಾರಿ ನಡೆಯುತ್ತಿದೆ. ಸಂಘದ ಬಗ್ಗೆ ನ್ಯಾಯಾಲಯದಲ್ಲಿ ಇದ್ದ ಕೇಸ್ ನಮ್ಮ ಪರವಾಗಿದೆ.**
> –ವೆಂಕಟಪ್ಪ, ಅಧ್ಯಕ್ಷ, ಸಿದ್ಧಾರ್ಥ ಸ್ಪೋರ್ಟ್ಸ್ ಕ್ಲಬ್

ನಂತರ ಹೊಸದಾಗಿ ಬಂದ ಆಡಳಿತ ಮಂಡಳಿಯೂ ಈ ಹಣ ದುರುಪಯೋಗಪಡಿಸಿಕೊಂಡ ಸಂಬಂಧ 2024ರ ಫೆ.25ರಂದು ನಡೆದ ಸರ್ವ ಸದಸ್ಯರ ಸಭೆಯಲ್ಲಿ ಸತ್ಯಶೋಧನಾ ಸಮಿತಿ ರಚಿಸಿರುವುದಾಗಿ ತಿಳಿಸಿ, ಉಪ ಸಮಿತಿ ಮಾಡಿಕೊಂಡು ಹಿಂದಿನ ಆಡಳಿತ ಮಂಡಳಿ ಮತ್ತು ವ್ಯವಸ್ಥಾಪಕ ವಿರುದ್ಧ ದೂರು ದಾಖಲಿಸಿದರು. ಆದರೆ, ಈ ಬಗ್ಗೆ ಕ್ಲಬ್‌ನ ಸದಸ್ಯರಿಗೆ ತಿಳಿಸಲಿಲ್ಲ ಎಂದರು.

ಸಂಘದ ಹಣಕಾಸಿನ ಸಂಬಂಧ ಪ್ರಕರಣ ನಡೆಯುತ್ತಿರುವ ಹಿನ್ನೆಲೆಯಲ್ಲಿ ಸಂಘ ನವೀಕರಣ ಮಾಡಲು ಸಾಧ್ಯವಿಲ್ಲ. ಆದರೆ, ಕಾನೂನುಬಾಹಿರವಾಗಿ ಸಂಘ ನವೀಕರಣ ಮಾಡಿಕೊಂಡಿದ್ದಾರೆ. ಈ ಸಂಬಂಧ ಡಿಆರ್‌ಗೆ ದೂರು ಸಲ್ಲಿಸಿದರೂ ಯಾವುದೇ ಪ್ರಯೋಜನವಾಗಿಲ್ಲ. ಸಂಘದ ಹಣಕಾಸಿನ ಪ್ರಕರಣ ಇರುವ ಮಧ್ಯೆ ಲಕ್ಷಾಂತರ ರೂ. ಹಣ ಖರ್ಚು ಮಾಡಿ ಸಂಘದ ಕಟ್ಟಡದಲ್ಲಿ ನವೀಕರಣ ಕಾಮಗಾರಿ ಮಾಡುತ್ತಿದ್ದಾರೆ ಎಂದು ಆರೋಪಿಸಿದರು.

ಮೈಸೂರಿನ ಹಿತ ಕಾಪಾಡುವ ಬಜೆಟ್ ಮಂಡನೆಗೆ ಮನವಿ

ಮೈಸೂರು,ಮಾ.3(ಜಿಎ)– ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಮೈಸೂರು ನಗರದ ಹಿತದೃಷ್ಟಿಯಿಂದ ಕೂಡಿದ ಬಜೆಟ್ ಮಂಡಿಸಬೇಕೆಂದು ಎಸ್‌ಡಿಪಿಐ ಪದಾಧಿಕಾರಿ ರಫತ್‌ಖಾನ್ ಮನವಿ ಮಾಡಿದರು.

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಸಿಎಂ ಮೈಸೂರಿನವರೇ ಆಗಿರುವುದು ನಮ್ಮೆಲ್ಲರ ಹೆಮ್ಮೆಯ ವಿಷಯ. ಹೀಗಾಗಿ ಮೈಸೂರು ನಗರ ಹಾಗೂ ಜಿಲ್ಲೆಯ ಶಾಶ್ವತ ಅಭಿವೃದ್ಧಿಗೆ ಅಗತ್ಯವಾದ ಕ್ರಮವನ್ನು ಈ ಬಜೆಟ್‌ನಲ್ಲಿ ಕೈಗೊಳ್ಳುವ ನಿರೀಕ್ಷೆಯಿದೆ. ಈ ಬಜೆಟ್‌ನಲ್ಲಿ ಮೈಸೂರಿನ ಪ್ರವಾಸೋದ್ಯಮ ಅಭಿವೃದ್ಧಿಗಾಗಿ ಘೋಷಿಸಿದ ಯೋಜನೆಗಳ ಶೀಘ್ರ ಅನುಷ್ಠಾನಕ್ಕೆ ಅಗತ್ಯವಾದ ಹಣ ನೀಡಬೇಕು. ಚಿತ್ರನಗರಿ ಹಾಗೂ ಕರಕುಶಲ ಕರ್ಮಿಗಳಿಗೆ ಸುಸಜ್ಜಿತ ಮಾರುಕಟ್ಟೆ ನಿರ್ಮಿಸಬೇಕು. ಸಂರಕ್ಷಿತ ಅರಣ್ಯ ಪ್ರದೇಶಗಳಾದ ನಾಗರಹೊಳೆ, ಬಂಡೀಪುರ, ಚಾಮುಂಡಿ ಬೆಟ್ಟ ಮೊದಲಾದವುಗಳನ್ನು ಸಂರಕ್ಷಿಸಿ, ಪ್ರವಾಸೋದ್ಯಮ ಹೆಚ್ಚಿಸಲು ವಿಶೇಷ ಕಾರ್ಯಪಡೆ ರಚಿಸಬೇಕು ಎಂದು ಆಗ್ರಹಿಸಿದರು. ಸುದ್ದಿಗೋಷ್ಠಿಯಲ್ಲಿ ದೇವನೂರು ಪುಟ್ಟನಂಜಯ್ಯ, ತಬ್ರೇಜ್ ಮತ್ತಿತರರು ಉಪಸ್ಥಿತರಿದ್ದರು.

ಪ್ರಶಸ್ತಿ ಪ್ರದಾನ



ಮೈಸೂರಿನ ಎಸ್‌ವಿಜಿ ಸೆಂಟರ್ ಫಾರ್ ಎಕ್ಸಲೆನ್ಸ್ ಗ್ರೂಪ್ ಆಫ್ ಇನ್‌ಸ್ಟಿಟ್ಯೂಷನ್ಸ್‌ನ ಸಂಸ್ಥಾಪಕ, ಮುಖ್ಯಸ್ಥ ವಿಶ್ವನಾಥ ಶೇಷಾಚಲ ಅವರಿಗೆ ಇತ್ತೀಚೆಗೆ ಬೆಂಗಳೂರಲ್ಲಿ ನಡೆದ ಸಮಾರಂಭದಲ್ಲಿ ಸ್ಟಾರ್ ಆಫ್ ಕರ್ನಾಟಕ ಪ್ರಶಸ್ತಿಯನ್ನು ಇಂಧನ ಸಚಿವ ಕೆಜೆ ಜಾರ್ಜ್, ಸಮಾಜ ಸೇವಕ ರವಿ ಪ್ರದಾನ ಮಾಡಿದರು.

ಕಾಲಕಾಲಕ್ಕೆ ಸಂಘಟಿತ–ಅಸಂಘಟಿತ ವಲಯದ ಪಿಂಚಣಿ ಪರಿಷ್ಕರಣೆಗೆ ಆಗ್ರಹ

ಮೈಸೂರು,ಮಾ.3(ಎಸ್‌ಪಿಎನ್)–ಕೇಂದ್ರ ಸರ್ಕಾರ ಕಾಲಕಾಲಕ್ಕೆ ಸಂಘಟಿತ ವಲಯದ ಪಿಂಚಣಿ ಹಾಗೂ ಅಸಂಘಟಿತ ವಲಯದ ಪಿಂಚಣಿಗಳಿಗೆ ಪರಿಷ್ಕರಣೆ ಮಾಡಬೇಕು ಎಂದು ಅಖಿಲ ಭಾರತ ವಿಮಾ ಪಿಂಚಣಿದಾರರ ಸಂಘದ ಪ್ರಧಾನ ಕಾರ್ಯದರ್ಶಿ ಕುನ್ನಿ ಕೃಷ್ಣನ್ ಒತ್ತಾಯಿಸಿದರು.

ಮೈಸೂರು ಕುವೆಂಪುನಗರದ ಗಾನಭಾರತಿ ಸಭಾಂಗಣದಲ್ಲಿ ಆಯೋಜಿಸಿದ್ದ ಅಖಿಲ ಭಾರತ ವಿಮಾ ಪಿಂಚಣಿದಾರರ ಸಂಘದ 9ನೇ ಸಮ್ಮೇಳನದಲ್ಲಿ ಮಾತನಾಡಿದ ಅವರು, ದೇಶದಲ್ಲಿರುವ ಶೇ.56ರಷ್ಟು ಮಂದಿ ಕೃಷಿಯಲ್ಲಿ ತೊಡಗಿಸಿಕೊಂಡ ವೃದ್ಧರಿಗೆ ಇಲ್ಲಿಯವರೆಗೆ ಪಿಂಚಣಿ ಸೌಲಭ್ಯ ಇಲ್ಲ. ಇದರಿಂದ ಇವರ ಜೀವನ ನಿರ್ವಹಣೆ ಕಷ್ಟಕರವಾಗಿದೆ ಎಂದು ಆತಂಕ ವ್ಯಕ್ತಪಡಿಸಿದರು.

ಎಲ್ಲಾ ವಸ್ತುಗಳ ಬೆಲೆ ಗಗನಕ್ಕೇರಿದ್ದರೂ ಈ ಪಿಂಚಣಿ ಮೊತ್ತ ಏರಿಕೆಯಾಗಿಲ್ಲ. ಈ ನಿಟ್ಟಿನಲ್ಲಿ ಕೇಂದ್ರ ಸರ್ಕಾರ ಕ್ರಮ ತೆಗೆದುಕೊಳ್ಳಬೇಕು. ಅಲ್ಲದೆ, ಇಪಿಎಫ್ ಮೂಲಕ ಪಿಂಚಣಿ ವೇತನ ಪಡೆಯುವವರಿಗೆ ತಿಂಗಳಿಗೆ 3,500 ನೀಡಲಾಗುತ್ತಿದೆ. ಈ ಮೊತ್ತವನ್ನು 10 ಸಾವಿರಕ್ಕೆ ಏರಿಕೆ ಮಾಡುವಂತೆ ಮನವಿ ಮಾಡಿದರು.

ಕೇವಲ ಶೇ.1ರಷ್ಟು ತೆರಿಗೆ ಹೆಚ್ಚಳ ಮಾಡಿದರೂ ದೇಶದ ಪ್ರತಿಯೊಬ್ಬರಿಗೂ ಪಿಂಚಣಿ ಸೌಲಭ್ಯ ನೀಡಬಹುದು. ಯಾವುದೇ ಪಿಂಚಣಿ ಇಲ್ಲದವರಿಗೆ ರೈತರು, ಅಸಂಘಟಿತ ಕಾರ್ಮಿಕರು ಸೇರಿದಂತೆ 60 ವರ್ಷ ಮೇಲ್ಪಟ್ಟ ಎಲ್ಲರಿಗೂ ತಿಂಗಳಿಗೆ ಕನಿಷ್ಠ 3,500 ಪಿಂಚಣಿ ನಿಗದಿ ಮಾಡಬಹುದು. 60 ವರ್ಷ ದಾಟಿರುವ ಎಲ್ಲರಿಗೂ ಸಾರ್ವತ್ರಿಕ ಪಿಂಚಣಿ ಸೌಲಭ್ಯವನ್ನು ಕಾರ್ಯರೂಪಕ್ಕೆ ತರಬೇಕು ಎಂದು ಒತ್ತಾಯಿಸಿದರು.

ಸಾಮಾನ್ಯ ಪಿಂಚಣಿದಾರರಾದ ವೃದ್ಧರು, ವಿಧವೆಯರು ಸೇರಿದಂತೆ ಇತರರಿಗೆ ತಿಂಗಳಿಗೆ 500 ರೂ. ಇಪಿಎಫ್ ಪಿಂಚಣಿದಾರರಿಗೆ 3,500 ರೂ. ಪಿಂಚಣಿ ದೊರೆಯುತ್ತಿದೆ. ಇದು ಜೀವನ ಮಟ್ಟಕ್ಕೆ ಹೋಲಿಸಿದರೆ, ಯಾವುದಕ್ಕೂ ಸಾಕಾಗುವುದಿಲ್ಲ. ಆದ್ದರಿಂದ ಇದನ್ನು 10 ಸಾವಿರಕ್ಕೆ ಹೆಚ್ಚಳ ಮಾಡಬೇಕು ಎಂದರು.

ಕೇಂದ್ರ ಸರ್ಕಾರ ಎಲ್ಲ ನಾಗರಿಕರಿಗೂ ಅನ್ವಯವಾಗುವ ಸಾರ್ವತ್ರಿಕ ಪಿಂಚಣಿ ಯೋಜನೆಯನ್ನು ರೂಪಿಸುತ್ತಿದೆ. ಇದರಲ್ಲಿ ಅರ್ಧದಷ್ಟು ಹಣವನ್ನು ಷೇರು ಮಾರುಕಟ್ಟೆಯಲ್ಲಿ ಹೂಡಿಕೆ ಮಾಡಿ, ಅದರಲ್ಲಿ ಬರುವ ಲಾಭಾಂಶದಲ್ಲಿ ಪಿಂಚಣಿ ಕೊಡಲು ಮುಂದಾಗಿದೆ. ಆದರೆ, ಪ್ರಸ್ತುತ ಷೇರು ಮಾರುಕಟ್ಟೆ ಕುಸಿತದಿಂದ ಕೋಟ್ಯಂತರ ರೂ. ನಷ್ಟವಾಗಿದೆ. ಇದೇ ರೀತಿ ಪಿಂಚಣಿ ಹಣವೂ ಮುಳುಗಿ ಹೋಗಲಿದೆ. ಆಗ ಪಿಂಚಣಿದಾರರ ಗತಿ ಏನು? ಎಂಬುದಕ್ಕೆ ಸರ್ಕಾರದ ಬಳಿ ಉತ್ತರವಿಲ್ಲ ಹಾಗಾಗಿ ಹಳೆಯ ಪಿಂಚಣಿ ಯೋಜನೆ ಜಾರಿಗೆ ತರುವಂತೆ ಮನವಿ ಮಾಡಿದರು.

> **“ ನಮ್ಮನ್ನಾಳುವ ಸರ್ಕಾರಗಳು, ಅಸಂಘಟಿತ ಕಾರ್ಮಿಕರ ಜೀವನ ನಿರ್ವಹಣೆ ಕುರಿತು ಯೋಚಿಸುವುದೇ ಇಲ್ಲ. ಅವರು ವೃದ್ಧಾಪ್ಯ ಜೀವನದ ನಿರ್ವಹಣೆಗಾಗಿ ಆರ್ಥಿಕ ನೆರವು ನೀಡುವುದರ ಬಗ್ಗೆ ಯೋಚಿಸದಿರುವುದು ಬೇಸರದ ಸಂಗತಿ. ಇದನ್ನು ದೊರಕಿಸುವ ನಿಟ್ಟಿನಲ್ಲಿ ಅಖಿಲ ಭಾರತ ವಿಮಾ ಪಿಂಚಣಿದಾರರ ಸಂಘ ಹೋರಾಟ ರೂಪಿಸಲಿ.**
> –ಪ್ರೊ. ಸಬಿಹಾ ಭೂಮಿಗೌಡ, ವಿಶ್ರಾಂತ ಕುಲಪತಿ

ವಿಶ್ರಾಂತ ಕುಲಪತಿ ಸಬಿಹಾ ಭೂಮಿಗೌಡ ಮಾತನಾಡಿ, ಅಖಿಲ ಭಾರತ ವಿಮಾ ಪಿಂಚಣಿದಾರರ ಸಂಘದಲ್ಲಿ ಕಾರ್ಯ ಚಟುವಟಿಕೆಗಳಲ್ಲಿ ಮಹಿಳೆಯರಿಗೂ ಸಮಾನ ಸ್ಥಾನಮಾನ ನೀಡಬೇಕು. ನೀತಿ ರೂಪಿಸುವ ಸ್ಥಾನದಲ್ಲಿ ಮಹಿಳೆಯರಿಗೆ ಅವಕಾಶ ನೀಡದಿದ್ದರೆ, ಅದು ಪುರುಷರ ದೌರ್ಜನ್ಯ ಎಂದು ಭಾವಿಸಲಾಗುತ್ತದೆ. ಹಾಗಾಗಿ ಮುಂದಿನ ದಿನಗಳಲ್ಲಿ ಮಹಿಳೆಯರನ್ನೊಳಗೊಂಡ ಸಮಿತಿಗಳು ರೂಪಿತವಾಗಬೇಕು ಎಂದು ಸಂಯೋಜಕರಲ್ಲಿ ಮನವಿ ಮಾಡಿದರು.

ಈ ವೇಳೆ ಅಖಿಲ ಭಾರತ ವಿಮಾ ಪಿಂಚಣಿದಾರರ ಸಂಘದ 9ನೇ ಸಮ್ಮೇಳನದ ಲಾಂಛನ ಬಿಡುಗಡೆಗೊಳಿಸಲಾಯಿತು. ವೇದಿಕೆಯಲ್ಲಿ ಸಂಘಟನೆ ಮುಖಂಡರಾದ ಎನ್.ಪಿ.ಉಮಾಪತಿ, ಎಸ್.ಶ್ರೀಧರ್, ಜಗದೀಶ್, ಬಾಲಾಜಿರಾವ್, ಬಾಲಕೃಷ್ಣ ಮಹೇಶ್, ಮಹದೇವಯ್ಯ, ಭಾಸ್ಕರ್ ಸೋಮಾಯಜಿ, ಚಂದನ, ಸಿ.ಆರ್.ಕೃಷ್ಣಮೂರ್ತಿ, ಸುಬ್ರಹ್ಮಣ್ಯರಾವ್, ಮಾದೇಶ, ಪರಮೇಶ, ವಿಜಯ್, ಮಹೇಂದ್ರ, ವಿನಯ್ ಉಪಸ್ಥಿತರಿದ್ದರು.



ಮೈಸೂರಲ್ಲಿ ನಡೆದ ಕಾರ್ಯಕ್ರಮದಲ್ಲಿ ಅಖಿಲ ಭಾರತ ವಿಮಾ ಪಿಂಚಣಿದಾರರ ಸಂಘದ 9ನೇ ಸಮ್ಮೇಳನದ ಲಾಂಛನ ಬಿಡುಗಡೆಗೊಳಿಸಲಾಯಿತು.

ಕೇರಳದ ಫಾರ್ಮ್‌ಹೌಸ್‌ನಲ್ಲಿ ಹೆಸರಾಂತ ಕಿಡ್ನಿ ಕಸಿ ಡಾಕ್ಟರ್ ಆತ್ಮಹತ್ಯೆ

ಎರ್ನಾಕುಲಂ: ಕೇರಳದ ಪ್ರಸಿದ್ಧ ಮೂತ್ರಪಿಂಡ ಶಾಸ್ತ್ರಜ್ಞ ಮತ್ತು ಹಿರಿಯ ಶಸ್ತ್ರಚಿಕಿತ್ಸಕ ಡಾ. ಜಾರ್ಜ್ ಪಿ ಅಬ್ರಹಾಂ ಅವರು ಎರ್ನಾಕುಲಂ ಜಿಲ್ಲೆಯ ಅವರ ಫಾರ್ಮ್‌ಹೌಸ್‌ನಲ್ಲಿ ಆತ್ಮಹತ್ಯೆ ಮಾಡಿಕೊಂಡಿದ್ದಾರೆ. ಅವರಿಗೆ 74 ವರ್ಷ ವಯಸ್ಸಾಗಿತ್ತು.

ಕೊಚ್ಚಿಯ ಪ್ರಮುಖ ಖಾಸಗಿ ಆಸ್ಪತ್ರೆಯ ನೆಫ್ರಾಲಜಿ ವಿಭಾಗದ ಹಿರಿಯ ಶಸ್ತ್ರಚಿಕಿತ್ಸಕರಾಗಿದ್ದ ಡಾ.ಅಬ್ರಹಾಂ ಭಾನುವಾರ ಸಂಜೆ ತನ್ನ ಸಹೋದರನೊಂದಿಗೆ ನೆಡುಂಬಸ್ಸೆರಿ ಸಮೀಪದ ತುರುತಿಸ್ಸೆರಿಯಲ್ಲಿರುವ ಫಾರ್ಮ್‌ಹೌಸ್‌ಗೆ ಆಗಮಿಸಿದ್ದರು. ತದನಂತರ ತನ್ನ ಸಹೋದರನನ್ನು ಮನೆಗೆ ಬಿಟ್ಟು ಬಂದು, ತಡರಾತ್ರಿ ನೇಣಿಗೆ ಶರಣಾಗಿದ್ದಾರೆ ಎನ್ನಲಾಗಿದೆ. ನೇಣು ಬಿಗಿದುಕೊಂಡಿದ್ದ ಸ್ಥಳದಲ್ಲಿ ಸೂಸೈಡ್ ನೋಟ್ ಪತ್ತೆಯಾಗಿದ್ದು, ತಾವು ವೈದ್ಯಕೀಯ ವೃತ್ತಿ ಮುಂದುವರಿಸಲು ಹೆಣಗಾಡುತ್ತಿರುವುದಾಗಿ ಸೂಸೈಡ್ ನೋಟ್‌ನಲ್ಲಿ ಬರೆದಿಟ್ಟಿದ್ದಾರೆ. ಆರು ತಿಂಗಳ ಹಿಂದೆ ಬೆನ್ನಿನ ಶಸ್ತ್ರಚಿಕಿತ್ಸೆಗೆ ಒಳಗಾದ ನಂತರ ಅವರ ಕೈ ನಡುಕ ಬರುತಿತ್ತು ಎಂದು ವರದಿಗಳು ಹೇಳಿವೆ.




ಡಾ.ಅಬ್ರಹಾಂ ಕಳೆದ 25 ವರ್ಷಗಳಲ್ಲಿ 2,500ಕ್ಕೂ ಹೆಚ್ಚು ಕಿಡ್ನಿ ಕಸಿ ಮಾಡಿದ್ದರು. ಆಸ್ಪತ್ರೆಯ ದಾಖಲೆಗಳ ಪ್ರಕಾರ ಜೀವಂತ ದಾನಿಯೊಬ್ಬರ ಲ್ಯಾಪರೊಸ್ಕೋಪಿಕ್ ಮೂತ್ರಪಿಂಡ ಕಸಿ ನಡೆಸಿದ ವಿಶ್ವದ ಮೂರನೇ ಶಸ್ತ್ರಚಿಕಿತ್ಸಕರಾಗಿದ್ದಾರೆ.

ದೇಶ - ವಿದೇಶ

ಚೀನಾಗೆ ಸಿಕ್ಕಿದೆ ಅಪಾರ ಪ್ರಮಾಣದ ಥೋರಿಯಂ ನಿಕ್ಷೇಪ

ಬೀಜಿಂಗ್: ಚೀನಾ ತನ್ನ ಇಂಧನ ಅಗತ್ಯಗಳನ್ನು ಶಾಶ್ವತವಾಗಿ ಪೂರೈಸಿಕೊಳ್ಳಬಹುದಾದ ಬೃಹತ್ ನಿಧಿಯನ್ನು ಹೊಂದಿದೆ. ಚೀನಾದಲ್ಲಿ ನಡೆದ ರಾಷ್ಟ್ರೀಯ ಸಮೀಕ್ಷೆಯ ಪ್ರಕಾರ ಚೀನಾವು ಅಪಾರ ಪ್ರಮಾಣದ ಥೋರಿಯಂ ನಿಕ್ಷೇಪಗಳನ್ನು ಹೊಂದಿದೆ. ಈ ವಿಕಿರಣಶೀಲ ಲೋಹವು ಜಾಗತಿಕ ಇಂಧನ ಉತ್ಪಾದನೆಯಲ್ಲಿ ಕ್ರಾಂತಿಯನ್ನುಂಟು ಮಾಡುತ್ತದೆ. ಅಲ್ಲದೆ ಪಳೆಯುಳಿಕೆ ಇಂಧನಗಳ ಮೇಲಿನ ಪ್ರಪಂಚದ ಅವಲಂಬನೆಯನ್ನು ಕೊನೆಗೊಳಿಸುತ್ತದೆ ಎಂದು ತಜ್ಞರೊಬ್ಬರು ಹೇಳಿದ್ದನ್ನು ಸೌತ್ ಚೀನಾ ಮಾರ್ನಿಂಗ್ ಪೋಸ್ಟ್ ಉಲ್ಲೇಖಿಸಿದೆ. ಚೀನಾ ಈಗಾಗಲೇ ದೊಡ್ಡ ಪ್ರಮಾಣದ ಥೋರಿಯಂ ನಿಕ್ಷೇಪಗಳನ್ನು ಹೊಂದಿದೆ. ಆದಾಗ್ಯೂ, 2020ರಲ್ಲಿ ನಡೆಸಿದ ಸಮೀಕ್ಷೆಯ ವರ್ಗೀಕೃತ ವರದಿ ಪ್ರಕಾರ ಇದು ವಾಸ್ತವವಾಗಿ ಹಿಂದಿನ ಅಂದಾಜುಗಳಿಗಿಂತ ಹಲವು ಪಟ್ಟು ಹೆಚ್ಚಾಗಿರಬಹುದು. ಇನ್ನರ್ ಮಂಗೋಲಿಯಾದ ಕಬ್ಬಿಣದ ಅದಿರಿನ ಸ್ಥಳದಿಂದ 5 ವರ್ಷಗಳ ಗಣಿಗಾರಿಕೆ ತ್ಯಾಜ್ಯವು 1,000 ವರ್ಷಗಳಿಗೂ ಹೆಚ್ಚು ಕಾಲ ಅಮೆರಿಕದ ದೇಶೀಯ ಇಂಧನ ಬೇಡಿಕೆಗಳನ್ನು ಪೂರೈಸುವಷ್ಟು ಥೋರಿಯಂ ಅನ್ನು ಹೊಂದಿದೆ ಎಂದು ಜನವರಿಯಲ್ಲಿ ಜರ್ನಲ್ ಜಿಯೋಲಾಜಿಕಲ್ ರಿವ್ಯೂನಲ್ಲಿ ಪ್ರಕಟವಾದ ವರದಿ ತಿಳಿಸಿದೆ.




ರಾಮಮಂದಿರ ಸ್ಫೋಟಿಸಲು ಸಂಚು: ಶಂಕಿತ ಉಗ್ರ ಅಬ್ದುಲ್ ರೆಹಮಾನ್ ಬಂಧನ

ಅಹಮದಾಬಾದ್: ಗುಜರಾತ್ ಎಟಿಎಸ್ ನಡೆಸಿದ ಪ್ರಮುಖ ಕಾರ್ಯಾಚರಣೆಯಲ್ಲಿ ಅಯೋಧ್ಯೆ ರಾಮಮಂದಿರದ ಮೇಲೆ ದಾಳಿ ನಡೆಸಲು ಸಂಚು ರೂಪಿಸಿದ್ದ, ಭಯೋತ್ಪಾದಕ ಸಂಘಟನೆಯೊಂದಿಗೆ ಸಂಬಂಧ ಹೊಂದಿದ್ದ ಶಂಕಿತ ಉಗ್ರ 19 ವರ್ಷದ ಅಬ್ದುಲ್ ರೆಹಮಾನ್‌ನನ್ನು ಬಂಧಿಸಲಾಗಿದೆ.

ದಾಳಿ ವೇಳೆ ಪಾಳುಬಿದ್ದ ಮನೆಯೊಂದರಲ್ಲಿ ಎರಡು ಜೀವಂತ ಹ್ಯಾಂಡ್ ಗ್ರೆನೇಡ್‌ಗಳನ್ನು ವಶಪಡಿಸಿಕೊಳ್ಳಲಾಗಿದೆ. ಫರಿದಾಬಾದ್ ಪೊಲೀಸರ ಸಹಾಯದಿಂದ ಎಟಿಎಸ್ ಸಂಪೂರ್ಣ ಶೋಧ ನಡೆಸಿ, ಸಂಭಾವ್ಯ ಭಯೋತ್ಪಾದಕ ದಾಳಿಯನ್ನು ವಿಫಲಗೊಳಿಸಿದೆ. ಮೂಲಗಳ ಪ್ರಕಾರ ಅಯೋಧ್ಯೆ ರಾಮಮಂದಿರದ ಮೇಲೆ ದಾಳಿ ಮಾಡಲು ಪಾಕಿಸ್ತಾನದ ಐಎಸ್‌ಐ ಯೋಜನೆ ರೂಪಿಸಿತ್ತು. ಅಬ್ದುಲ್ ರೆಹಮಾನ್ ಎಂಬಾತನನ್ನು ಬಳಸಿಕೊಂಡು ಗ್ರೆನೇಡ್ ದಾಳಿ ಮಾಡಲು ಸಿದ್ಧತೆ ನಡೆಸಲಾಗಿತ್ತು. ಅಬ್ದುಲ್ ಬಂಧನದಿಂದ ದಾಳಿ ವಿಫಲವಾಯಿತು. ಬಂಧಿತ ಉಗ್ರನಿಗೆ ಅನೇಕ ಜಮಾಅತ್‌ಗಳೊಂದಿಗೆ ಸಂಬಂಧವಿದೆ ಎಂಬ ಮಾಹಿತಿ ಇದೆ. ಅಬ್ದುಲ್ ರೆಹಮಾನ್ ಫೈಜಾಬಾದ್‌ನಲ್ಲಿ ಮಟನ್ ಅಂಗಡಿ ನಡೆಸುತ್ತಿದ್ದ ಮತ್ತು ಆಟೋ ಚಾಲಕನಾಗಿಯೂ ಕೆಲಸ ಮಾಡುತ್ತಿದ್ದನು ಎಂದು ಭದ್ರತಾ ಸಂಸ್ಥೆಗಳು ಮಾಹಿತಿ ನೀಡಿದೆ.

ಚಂದ್ರನ ಮೇಲೆ ಇಳಿದ ಖಾಸಗಿ ಲ್ಯಾಂಡರ್!


ಕೇಪ್‌ಕೆನವೆರಾಲ್: ಅಮೆರಿಕದ ಫೈರ್‌ಫ್ಲೈ ಏರೋಸ್ಪೇಸ್ ಕಂಪೆನಿ ತಯಾರು ಮಾಡಿರುವ ಬ್ಲೂಗೋಸ್ಟ್ ಲ್ಯಾಂಡರ್ ಚಂದ್ರನ ಮೇಲೆ ಸುರಕ್ಷಿತವಾಗಿ ಲ್ಯಾಂಡ್ ಆಗಿದೆ. ಈ ಮೂಲಕ ಬಾಹ್ಯಾಕಾಶ ಕ್ಷೇತ್ರದಲ್ಲಿ ಖಾಸಗಿ ಸಹಭಾಗಿತ್ವಕ್ಕೆ ಹೆಚ್ಚು ಒತ್ತು ಸಿಕ್ಕಿದಂತಾಗಿದೆ. ಕಳೆದ 1 ವರ್ಷದಲ್ಲಿ 2 ಖಾಸಗಿ ಉಪಗ್ರಹಗಳು ಚಂದ್ರನ ಮೇಲೆ ಇಳಿದಂತಾಗಿದೆ. ಇದು ಸ್ವಯಂಚಾಲಿತ ವ್ಯವಸ್ಥೆ ಬಳಸಿಕೊಂಡು ಲ್ಯಾಂಡ್ ಆಗಿದೆ. ಚಂದ್ರನ ಮೇಲೆ ಸುರಕ್ಷಿತವಾಗಿ ಲ್ಯಾಂಡರ್ ಇಳಿಸಿದ ಮೊದಲ ಕಂಪೆನಿ ಎಂಬ ಹೆಗ್ಗಳಿಕೆ ಫೈರ್‌ಫ್ಲೈಗೆ ಸಿಕ್ಕಿದೆ. ಇದಕ್ಕಾಗಿ ಒಟ್ಟು 800 ಕೋಟಿ ರೂ. ವೆಚ್ಚ ಮಾಡಿದ್ದು, ನಾಸಾ ಈ ಲ್ಯಾಂಡರನ್ನು ಉಡಾವಣೆ ಮಾಡಿದೆ. ಚಂದ್ರನ ಮೇಲಿರುವ ಧೂಳನ್ನು ಹೀರಿಕೊಳ್ಳಲುಬೇಕಾಗುವ ವ್ಯಾಕ್ಯೂಮ್ ವ್ಯವಸ್ಥೆ, ಚಂದ್ರನ ಮೇಲ್ಮೈನಿಂದ 3 ಮೀ. ಕೆಳಗಿನ ತಾಪಮಾನ ಅಳೆಯುವ ಸಾಮರ್ಥ್ಯವಿರುವ ಸಾಧನಗಳನ್ನು ಇದರಲ್ಲಿ ಅಳವಡಿಸಲಾಗಿದೆ. ಚಂದ್ರನ ಮೇಲಕ್ಕೆ ಪ್ರವಾಸಿಗರನ್ನು ಕರೆದೊಯ್ಯಲು ಅಮೆರಿಕದ ಹಲವು ಕಂಪೆನಿಗಳು ಯೋಜನೆಗಳನ್ನೂ ರೂಪಿಸುತ್ತಿವೆ. ಅನ್ಯಗ್ರಹ ಲ್ಯಾಂಡಿಂಗ್‌ನಲ್ಲಿ ಖಾಸಗಿ ಕಂಪೆನಿಗಳು ಯಶಸ್ಸು ಸಾಧಿಸುವುದಕ್ಕೆ ಬಲ ನೀಡಲಿದೆ.



ಇಸ್ರೇಲ್‌ಗೆ ನುಸುಳಲು ಯತ್ನಿಸಿದ ಕೇರಳ ವ್ಯಕ್ತಿಯ ತಲೆಗೆ ಗುಂಡಿಟ್ಟ ಜೋರ್ಡಾನ್ ಸೇನೆ


ತಿರುವನಂತಪುರಂ: ಜೋರ್ಡಾನ್ ಗಡಿಯಿಂದ ಇಸ್ರೇಲ್‌ಗೆ ನುಸುಳಲು ಯತ್ನಿಸುತ್ತಿದ್ದ ಕೇರಳದ ಥುಂಬಾ ನಿವಾಸಿ ಥಾಮಸ್ ಗೇಬ್ರಿಯಲ್ ಪೆರೇರಾ ಎಂಬ ವ್ಯಕ್ತಿಯನ್ನು ಗುಂಡಿಕ್ಕಿ ಹತ್ಯೆ ಮಾಡಲಾಗಿದೆ. ತಿರುವನಂತಪುರಂನ ಥುಂಬಾ ಮೂಲದ ಥಾಮಸ್ ಗೇಬ್ರಿಯಲ್ ಅವರು ಪ್ರವಾಸಿ ವೀಸಾದಲ್ಲಿ ಜೋರ್ಡಾನ್‌ಗೆ ಹೋಗಿದ್ದರು. ಆದರೆ ಅಲ್ಲಿಂದ ಅವರು ಅಕ್ರಮವಾಗಿ ಇಸ್ರೇಲ್‌ಗೆ ಪ್ರವೇಶಿಸಲು ಪ್ರಯತ್ನಿಸುತ್ತಿದ್ದಾಗ ಜೋರ್ಡಾನ್ ಸೇನೆಯ ಗುಂಡೇಟಿನಿಂದ ಹತ್ಯೆ ಆಗಿದ್ದಾರೆ. ಗೇಬ್ರಿಯಲ್ ಅವರ ಸಾವನ್ನು ಭಾರತೀಯ ರಾಯಭಾರ ಕಚೇರಿಯು ದೃಢಪಡಿಸಿದೆ. ಫೆ.5 ರಂದು ತನ್ನ ದೂರದ ಸಂಬಂಧಿ ಎಡಿಸನ್ ಎಂಬುವರ ಜೊತೆ 44 ವರ್ಷದ ಥಾಮಸ್ ಇಸ್ರೇಲ್‌ಗೆ ಪ್ರಯಾಣ ಬೆಳೆಸಿದ್ದರು. ಜೊತೆಗೆ ಫೆ.9ರವರೆಗೆ ಥಾಮಸ್ ತಮ್ಮ ಪತ್ನಿ ಕ್ರಿಸ್ಟಿನಾ ಜೊತೆ ಸಂಪರ್ಕದಲ್ಲಿದ್ದು, ತಾನು ಸುರಕ್ಷಿತವಾಗಿದ್ದೇನೆ ಎಂದು ತಿಳಿಸಿದ್ದರು.

ಬಳಿಕ ಪತಿಯೊಂದಿಗೆ ಸಂಪರ್ಕ ಸಾಧ್ಯವಾಗದಿದ್ದಾಗ ಆತಂಕಗೊಂಡ ಪತ್ನಿ ಕ್ರಿಸ್ಟಿನಾ ತಮ್ಮ ಪತಿಯನ್ನು ಪತ್ತೆಹಚ್ಚುವಂತೆ ಅನಿವಾಸಿ ಕೇರಳೀಯರ ವ್ಯವಹಾರಗಳ ಇಲಾಖೆಗೆ ಮನವಿ ಮಾಡಿದ್ದರು. ಇದಾದ ನಂತರದಲ್ಲಿ ಅಂದರೆ ಫೆ.10ರಂದು ಅವರು ಹತ್ಯೆ ಆಗಿದ್ದಾರೆ ಎನ್ನಲಾಗಿದೆ.



ರಷ್ಯಾ ಜತೆ ಕದನ ವಿರಾಮಕ್ಕೆ ಬ್ರಿಟನ್, ಫ್ರಾನ್ಸ್ ಸಾಥ್

ಲಂಡನ್: ರಷ್ಯಾ ಮತ್ತು ಉಕ್ರೇನ್ ನಡುವಿನ ಯುದ್ಧ ನಿಲ್ಲಿಸಲು ರಚಿಸಲಾಗುವ ಕದನ ವಿರಾಮ ಒಪ್ಪಂದಕ್ಕೆ ಸಂಪೂರ್ಣ ಸಹಮತ ಹೊಂದಿರುವುದಾಗಿ ಬ್ರಿಟನ್ ಹಾಗೂ ಫ್ರಾನ್ಸ್ ದೇಶಗಳು ಹೇಳಿವೆ. ಅಲ್ಲದೆ ಇದರ ಬಗ್ಗೆ ಉಕ್ರೇನ್ ಜತೆ ಮಾತನಾಡುವುದಾಗಿ ಉಭಯ ದೇಶಗಳ ನಾಯಕರು ಹೇಳಿದ್ದಾರೆ. ಅಮೆರಿಕ ಅಧ್ಯಕ್ಷ ಟ್ರಂಪ್ ಜತೆ ಜೆಲೆನ್‌ಸ್ಕಿ ಜಗಳ ಮಾಡಿಕೊಂಡು ಬಂದ ಬಳಿಕ ಈ 2 ದೇಶಗಳು ಮಾತುಕತೆಗೆ ಮುಂದಾಗಿರುವುದು ಅಚ್ಚರಿಗೆ ಕಾರಣವಾಗಿದೆ. ನಾವು ಕದನ ವಿರಾಮಕ್ಕೆ ಸಂಬಂಧಿಸಿದಂತೆ ಮೊದಲಿನಿಂದಲೂ ಚಿಂತಿಸುತ್ತಿದ್ದೆವು. ಹೀಗಾಗಿಯೇ ಈಗ ಮಾತುಕತೆಗೆ ಮುಂದಾಗಿದ್ದೇವೆ ಎಂದು ಬ್ರಿಟನ್ ಪ್ರಧಾನಿ ಕೈರ್ ಸ್ಟಾರ್ಮರ್ ಹೇಳಿದ್ದಾರೆ. ರಷ್ಯಾ ವಿರುದ್ಧದ ಯುದ್ಧದಲ್ಲಿ ಉಕ್ರೇನ್‌ಗೆ ನೆರವಾಗಲು ಐರೋಪ್ಯ ಒಕ್ಕೂಟದ ರಾಷ್ಟ್ರಗಳು ನಿರ್ಧರಿಸಿವೆ. ಕದನ ವಿರಾಮಕ್ಕೆ ಸಂಬಂಧಿಸಿದಂತೆ ಯೋಜನೆಗಳನ್ನು ರೂಪಿಸಲು ಬ್ರಿಟನ್ ಪ್ರಧಾನಿ ಕೈರ್ ಸ್ಟಾರ್ಮರ್ ಲಂಡನ್‌ನಲ್ಲಿ ಶೃಂಗಸಭೆಯೊಂದನ್ನು ಆಯೋಜಿಸಿದ್ದರು. ಈ ಸಭೆಯಲ್ಲಿ ಫ್ರೆಂಚ್ ಅಧ್ಯಕ್ಷ ಇಮ್ಯಾನುಯೆಲ್ ಮ್ಯಾಕ್ರನ್, ಇಟಲಿಯ ಪ್ರಧಾನಿ ಜಾರ್ಜಿಯಾ ಮೆಲೋನಿ, ನ್ಯಾಟೋ ಪ್ರಧಾನ ಕಾರ್ಯದರ್ಶಿ ಮಾರ್ಕ್ ರುಟ್ಟೆ ಸೇರಿ ಹಲವು ದೇಶದ ಮುಖ್ಯಸ್ಥರು ಭಾಗಿಯಾಗಿದ್ದರು.



ಕುಶಾಲನಗರ : ಅರೆಭಾಷೆ ಗಡಿನಾಡ ಉತ್ಸವ

ಅರೆಭಾಷಿಕರ ನಿಖರ ಜನಸಂಖ್ಯೆಗಾಗಿ ಜನಗಣತಿ ಅಗತ್ಯ

ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಡಾ.ಪುರುಷೋತ್ತಮ ಬಿಳಿಮಲೆ ಅಭಿಮತ



ಅರೆಭಾಷೆ ಗಡಿನಾಡ ಉತ್ಸವ ಕಾರ್ಯಕ್ರಮವನ್ನು ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಡಾ.ಪುರುಷೋತ್ತಮ ಬಿಳಿಮಲೆ ಉದ್ಘಾಟಿಸಿದರು.

ಕುಶಾಲನಗರ, ಮಾ.3– ಅರೆಭಾಷೆಯು ಸ್ವತಂತ್ರ ಭಾಷೆಯಾಗಿದ್ದು, ತನ್ನದೇ ಆದ ಅಸ್ಮಿತೆ ಹೊಂದಿದೆ. ಆದ್ದರಿಂದ ಅರೆಭಾಷೆ ಮಾತನಾಡುವವರ ನಿಖರ ಜನಸಂಖ್ಯೆ ಹಾಗೂ ಸ್ಥಳನಾಮಗಳ ಬಗ್ಗೆ ಮಾಹಿತಿ ಸಂಗ್ರಹಿಸುವಂತಾಗಬೇಕು ಎಂದು ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಡಾ.ಪುರುಷೋತ್ತಮ ಬಿಳಿಮಲೆ ಅಭಿಪ್ರಾಯಪಟ್ಟರು.

ಕರ್ನಾಟಕ ಅರೆಭಾಷೆ ಸಂಸ್ಕೃತಿ ಮತ್ತು ಸಾಹಿತ್ಯ ಅಕಾಡೆಮಿ ವತಿಯಿಂದ ಕುಶಾಲನಗರ, ಆಲೂರು ಸಿದ್ದಾಪುರ, ಸುಂಟಿಕೊಪ್ಪ, ಗುಡ್ಡೆಹೊಸೂರು, ನಂಜರಾಯಪಟ್ಟಣ, ಚೆಟ್ಟಳ್ಳಿ, ಪಿರಿಯಾಪಟ್ಟಣ, ಸೋಮವಾರಪೇಟೆ ಹಾಗೂ ಯಡವಾರೆ ಗೌಡ ಸಮಾಜಗಳ ಸಹಕಾರದಲ್ಲಿ ಇಲ್ಲಿನ ರೈತ ಸಹಕಾರ ಭವನದಲ್ಲಿ ಭಾನುವಾರ ನಡೆದ ಅರೆಭಾಷೆ ಗಡಿನಾಡ ಉತ್ಸವ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಅವರು ಮಾತನಾಡಿದರು.

ರಾಷ್ಟ್ರದಲ್ಲಿ 230ಕ್ಕೂ ಹೆಚ್ಚು ಸಣ್ಣ ಭಾಷೆಗಳು ಇದ್ದು, ಇವುಗಳನ್ನು ಉಳಿಸಬೇಕು. ಮುಂದಿನ 30 ವರ್ಷದಲ್ಲಿ 172 ಕ್ಕೂ ಹೆಚ್ಚು ಭಾಷೆಗಳು ನಶಿಸುವ ಬಗ್ಗೆ ಮಾಹಿತಿ ಇದೆ ಎಂದು ಡಾ.ಪುರುಷೋತ್ತಮ ಬಿಳಿಮಲೆ ಅವರು ಆತಂಕ ವ್ಯಕ್ತಪಡಿಸಿದರು.

ರಾಷ್ಟ್ರದಲ್ಲಿ ಹಿಂದಿ ಭಾಷೆ ಮಾತನಾಡುವವರ ಸಂಖ್ಯೆ ಶೇ.66ಕ್ಕೂ ಹೆಚ್ಚು ವೇಗವಾಗಿ ಬೆಳವಣಿಗೆ ಆಗುತ್ತಿದೆ. ಆದರೆ ಅರೆಭಾಷೆ, ಕೊಡವ, ಯರವ ಭಾಷೆ ಮಾತನಾಡುವವರ ಸಂಖ್ಯೆ ಕಡಿಮೆ ಆಗುತ್ತಿರುವ ಬಗ್ಗೆ ಅಂಕಿ ಅಂಶಗಳು ಹೇಳುತ್ತಿವೆ. ಆದ್ದರಿಂದ ಸಣ್ಣ ಸಣ್ಣ ಭಾಷೆ ಮಾತನಾಡಬೇಕು. ಮಾತ್ರ ಭಾಷೆ ಉಳಿಸಬೇಕು. ಇದು ಒಂದು ರೀತಿ ದೊಡ್ಡ ಸವಾಲು ಆಗಿದೆ ಎಂದರು.

ಮುಂದಿನ ದಿನಗಳಲ್ಲಿ ಪ್ರಾಥಮಿಕ ಶಾಲೆಗಳ ಸ್ಥಿತಿಗತಿ ಸಮಸ್ಯೆ ಹಾಗೂ ಸವಾಲುಗಳನ್ನು ಎದುರಿಸಬೇಕಿದೆ. ಒಂದು ಕಡೆ ಸರ್ಕಾರಿ ಶಾಲೆ ಮುಚ್ಚುವುದು, ಮತ್ತೊಂದು ಕಡೆ ಇಂಗ್ಲೀಷ್ ಶಾಲೆ ಆರಂಭಿಸುವುದು ಕಂಡು ಬರುತ್ತಿದೆ ಎಂದರು.

ಶಾಸಕರಾದ ಡಾ.ಮಂತರ್ ಗೌಡ ಮಾತನಾಡಿ, ಅರೆಭಾಷೆ ಸಾಹಿತ್ಯ, ಸಂಸ್ಕೃತಿ ಉಳಿಸಿ ಬೆಳೆಸುವಂತಾಗಬೇಕು. ಮುಂದಿನ ಪೀಳಿಗೆಗೆ ಅರೆಭಾಷೆ ಕಲಿಸಬೇಕು ಎಂದರು. ಪ್ರತಿಯೊಬ್ಬರೂ ಅರೆಭಾಷೆ ಮಾತನಾಡುವ ಮೂಲಕ ಭಾಷೆ ಉಳಿಸಲು ಸಾಧ್ಯ. ಆ ನಿಟ್ಟಿನಲ್ಲಿ ಎಲ್ಲರೂ ಒಗ್ಗಟ್ಟಿನಿಂದ ಭಾಷೆ ಬೆಳವಣಿಗೆಗೆ ಶ್ರಮಿಸಬೇಕು ಎಂದರು.

ವಿಧಾನಸಭಾ ಮಾಜಿ ಸಭಾಧ್ಯಕ್ಷ ಕೆ.ಜಿ. ಬೋಪಯ್ಯ ಮಾತನಾಡಿ, ಅರೆಭಾಷೆ ಎಲ್ಲೆಡೆ ಗಟ್ಟಿಯಾಗಿ ಬೆಳೆಯಬೇಕು, ಅರೆಭಾಷೆ ಮೂಲ ಸಂಸ್ಕೃತಿ ಉಳಿಯಬೇಕು ಮತ್ತು ಪಸರಿಸುವಂತಾಗಬೇಕು ಎಂದು ಕರೆ ನೀಡಿದರು.

ಕರ್ನಾಟಕ ಅರೆಭಾಷೆ ಸಂಸ್ಕೃತಿ ಮತ್ತು ಸಾಹಿತ್ಯ ಅಕಾಡೆಮಿ ಅಧ್ಯಕ್ಷ ಸದಾನಂದ ಮಾವಜಿ ಅವರು ಮಾತನಾಡಿ, ಅರೆಭಾಷೆ ಅಕಾಡೆಮಿ ವತಿಯಿಂದ ಸಾಹಿತ್ಯ ಮತ್ತು ಸಂಸ್ಕೃತಿಗೆ ಸಂಬಂಧಿಸಿದಂತೆ ವಿವಿಧ ಚಟುವಟಿಕೆಗಳನ್ನು ಕೈಗೊಳ್ಳಲಾಗಿದೆ ಎಂದರು. ಅರೆಭಾಷಿಕರ ಜನಗಣತಿ ಹಾಗೂ ಸ್ಥಳ ನಾಮ ಸಂಬಂಧ ಅಗತ್ಯ ಕ್ರಮವಹಿಸಲಾಗುವುದು ಎಂದು ಸದಾನಂದ ಮಾವಜಿ ಅವರು ತಿಳಿಸಿದರು.

ಈ ಸಂದರ್ಭ ಕೊಡಗು ಗೌಡ ಸಮಾಜಗಳ ಒಕ್ಕೂಟದ ಅಧ್ಯಕ್ಷ ಸೂರ್ತಲೆ ಸೋಮಣ್ಣ, ಸಾಹಿತ್ಯ ಅಕಾಡೆಮಿಯ ರಿಜಿಸ್ಟ್ರಾರ್ ಚಿನ್ನಸ್ವಾಮಿ, ಸದಸ್ಯ ಸಂದೀಪ್ ಪೂಳಕಂಡ, ಕುಶಾಲನಗರ ಗೌಡ ಸಮಾಜ ಅಧ್ಯಕ್ಷ ಚಿಲ್ಲನ ಗಣಿ ಪ್ರಸಾದ್, ಕುಶಾಲನಗರ ಗೌಡ ಯುವಕ ಸಂಘದ ಅಧ್ಯಕ್ಷ ಕೊಡಗನ ಹರ್ಷ,ಆಲೂರು ಸಿದ್ದಾಪುರದ ದೇವಾಯೀರ ಗಿರೀಶ್, ಶುಂಠಿಕೊಪ್ಪ ಸಮಾಜದ ಕುಂಜಿಲನ ಮಂಜುನಾಥ್, ಗುಡ್ಡೆಹೊಸೂರು ಗೌಡ ಸಮಾಜ ಅಧ್ಯಕ್ಷ ಗುಡ್ಡೆಮನೆ ವಿಶುಕುಮಾರ್, ನಂಜರಾಯ ಪಟ್ಟಣದ ಕೆಮ್ಮಾರನ ಉತ್ತಯ್ಯ ಚೆಟ್ಟಳ್ಳಿ ಸಮಾಜದ ರಾಘವಯ್ಯ ಐಯ್ಯಂಡ್ರ, ಚಿಕ್ಕತ್ತೂರು ಸಮಾಜದ ಚೆರಿಯ ಮನೆ ಮಂದಪ್ಪ, ಕೊಡಗು ಗೌಡ ವಿದ್ಯಾಸಂಘದ ಅಧ್ಯಕ್ಷ ನವೀನ ಅಂಬೆಕ್ಕಲ್ ಮತ್ತಿತರರು ಇದ್ದರು

ಕಾರ್ಯಕ್ರಮಕ್ಕೂ ಮುನ್ನ ಕುಶಾಲನಗರ ಕೊಪ್ಪ ಗಡಿಭಾಗದ ಕಾವೇರಿ ಪ್ರತಿಮೆ ಬಳಿ ಹೊರಟ ಮೆರವಣಿಗೆಗೆ ಕೊಡಗು ಗೌಡ ಸಮಾಜಗಳ ಒಕ್ಕೂಟದ ಅಧ್ಯಕ್ಷ ಸೂರ್ತಲೆ ಸೋಮಣ್ಣ ಚಾಲನೆ ನೀಡಿದರು. ಅಕಾಡೆಮಿ ಸದಸ್ಯ ಸಂಚಾಲಕರಾದ ಪೊನ್ನಚ್ಚನ ಮೋಹನ್ ಸ್ವಾಗತಿಸಿದರು.

ಕೊಡಗಲ್ಲಿ ಬರಿದಾದ ಕಾವೇರಿ ಒಡಲು

ದುಬಾರೆಯಲ್ಲಿ ರಿವರ್ ರ್‍ಯಾಫ್ಟಿಂಗ್ ಸ್ಥಗಿತ

ಪ್ರವಾಸಿಗರಿಗೆ ನಿರಾಸೆ




ದುಬಾರೆಯಲ್ಲಿ ಸ್ಥಗಿತಗೊಂಡಿರುವ ರಿವರ್ ರ್‍ಯಾಫ್ಟಿಂಗ್ ಬೋಟ್‌ಗಳು.

ಮಡಿಕೇರಿ, ಮಾ.3– ಕೊಡಗಿನ ಪ್ರಮುಖ ಪ್ರವಾಸಿ ತಾಣಗಳಲ್ಲಿ ಒಂದಾದ ದುಬಾರೆಯಲ್ಲಿ ಹರಿಯುವ ಕಾವೇರಿ ನದಿ ಸಂಪೂರ್ಣ ಸ್ತಬ್ಧಗೊಂಡಿದೆ. ಈ ಹಿನ್ನೆಲೆಯಲ್ಲಿ ದುಬಾರೆಯಲ್ಲಿ ರಿವರ್ ರ್‍ಯಾಫ್ಟಿಂಗ್ ಕ್ರೀಡೆಯನ್ನು ಸೋಮವಾರದಿಂದ ಸ್ಥಗಿತಗೊಳಿಸಲಾಗಿದೆ. ಹೀಗಾಗಿ ತಾಣಕ್ಕೆ ಬರುವ ಪ್ರವಾಸಿಗರ ಸಂಖ್ಯೆಯಲ್ಲೂ ಇಳಿಕೆಯಾಗಿದೆ. ಪ್ರವಾಸಿಗರ ಮನಕ್ಕೆ ಮುದ ನೀಡುತ್ತಿದ್ದ ರ್‍ಯಾಫ್ಟಿಂಗ್, ಜಲಕ್ರೀಡೆ, ಸ್ಥಗಿತಗೊಂಡ ಕಾರಣ ರ್‍ಯಾಫ್ಟಿಂಗ್ ಬೋಟ್‌ಗಳು ದಡ ಸೇರಿವೆ.

ಕೊಡಗಿನಲ್ಲಿ ಅತ್ಯಧಿಕ ಸಂಖ್ಯೆಯಲ್ಲಿ ಪ್ರವಾಸಿಗರು ಭೇಟಿ ನೀಡುವ ಪ್ರವಾಸಿ ತಾಣವೆಂದರೆ ಅದು ದುಬಾರೆ. ಕಾವೇರಿಯಲ್ಲಿ ನೀರಿದ್ದರೇ ಮಾತ್ರ ದುಬಾರೆ ನೋಡಲು ಚೆಂದ. ಆದರೆ ಸುಡುವ ಬಿಸಿಲಿಗೆ ಕಾವೇರಿಯಲ್ಲಿ ನೀರಿನ ಹರಿವು ಕ್ಷೀಣವಾಗಿರುವುದರಿಂದ ದುಬಾರೆಯಲ್ಲಿ ಪ್ರವಾಸಿಗರ ಸಂಖ್ಯೆ ಗಣನೀಯವಾಗಿ ಕುಸಿತಗೊಂಡಿದೆ. ಈ ಹಿನ್ನೆಲೆಯಲ್ಲಿ ದುಬಾರೆಯಲ್ಲಿ ವ್ಯಾಪಾರೋದ್ಯಮವೂ ಕುಂಠಿತವಾಗಿದ್ದು, ದುಬಾರೆ ಪ್ರವಾಸಿ ತಾಣವನ್ನೇ ನಂಬಿ ಬದುಕು ಕಟ್ಟಿಕೊಂಡವರು ಕಂಗಾಲಾಗುವಂತಾಗಿದೆ. ದುಬಾರೆ ರಿವರ್ ರ್‍ಯಾಫ್ಟಿಂಗ್ ಅನ್ನು ನಂಬಿಕೊಂಡು ಸುಮಾರು 40ಕ್ಕೂ ಅಧಿಕ ಮಂದಿ ರಿವರ್ ರ್‍ಯಾಫ್ಟಿಂಗ್ ಮಾಲೀಕರು, 80 ಮಂದಿ ಆಪರೇಟರ್ಸ್ ಹಾಗೂ ವಿವಿಧ ಬಗೆಯ ತಿನಿಸುಗಳು, ಹಣ್ಣು ಹಂಪಲು, ತಂಪು ಪಾನೀಯ ಅಂಗಡಿಗಳನ್ನಿಟ್ಟುಕೊಂಡು ಸುಮಾರು 50ರಿಂದ 60 ಮಂದಿ ಜೀವನ ಸಾಗಿಸುತ್ತಿದ್ದಾರೆ. ಆದರೆ ಪ್ರವಾಸಿಗರು ಇಲ್ಲದ ಕಾರಣ ಮುಂದೇನು ಅನ್ನೋ ಚಿಂತೆ ವ್ಯಾಪಾರಸ್ಥರನ್ನು ಕಾಡುತ್ತಿದೆ.

ಜೀವಕಳೆಯಿಂದ ಮೈದುಂಬಿರುತ್ತಿದ್ದ ಕಾವೇರಿ ನದಿಯ ಒಡಲು ಬತ್ತಿಹೋಗಿರುವುದನ್ನು ಸಾಕ್ಷೀಕರಿಸುವಂತೆ ಸುತ್ತಲೂ ಬಂಡೆಕಲ್ಲುಗಳು ಗೋಚರಿಸುತ್ತಿವೆ. ಬಂದ ದಾರಿಗೆ ಸುಂಕವಿಲ್ಲವೆಂಬಂತೆ ಬರಿದಾದ ನದಿಯ ಬಂಡೆಕಲ್ಲುಗಳನ್ನು ನೋಡಿ ನಿರಾಶೆಯಿಂದ ಪ್ರವಾಸಿಗರು ಮರಳುವಂತಾಗಿದೆ. ದುಬಾರೆಯಲ್ಲಿ ನಡೆಯುತ್ತಿದ್ದ ರ್‍ಯಾಫ್ಟಿಂಗ್ ಸ್ಥಗಿತಗೊಂಡ ಕಾರಣ ರ್‍ಯಾಫ್ಟಿಂಗ್ ಬೋಟ್‌ಗಳು ದಡದಲ್ಲಿ ಮಕಾಡೆ ಬಿದ್ದಿವೆ.

ಈ ಹಿಂದೆ 2003, 2007 ಮತ್ತು 2015ರಲ್ಲಿ ದುಬಾರೆಯಲ್ಲಿ ಕಾವೇರಿ ನದಿ ಸೊರಗುತ್ತಿದ್ದರೂ ಕೂಡಾ ಹೆಚ್ಚೆಂದರೆ ಒಂದು ವಾರ ಅಥವಾ ಹತ್ತರಿಂದ ಹದಿನೈದು ದಿನಗಳ ಒಳಗೆ ಮಳೆಯಾಗುತ್ತಿದ್ದ ಕಾರಣ ನದಿಯಲ್ಲಿ ನೀರಿರುತ್ತಿತ್ತು. ಆದರೆ, ಈ ವರ್ಷ ಕಾವೇರಿ ನದಿ ಜಲಾನಯನ ಪ್ರದೇಶದಲ್ಲಿ ಮಳೆಯೇ ಬಾರದೆ ವರುಣನ ಅವಕೃಪೆ ಆತಂಕ ಸೃಷ್ಟಿಸಿದೆ. ಪರಿಸ್ಥಿತಿ ಹೀಗೆ ಮುಂದುವರೆದರೆ ಮುಂದಿನ ದಿನಗಳಲ್ಲಿ ಜನ, ಜಾನುವಾರುಗಳು, ಜಲಚರಗಳು, ಪ್ರಾಣಿ ಪಕ್ಷಿಗಳಿಗೆ ಕುಡಿಯುವ ನೀರಿನ ಸಂಕಷ್ಟ ತಲೆದೋರಲಿದೆ. ಮಾರ್ಚ್ ಮೊದಲ ವಾರದಲ್ಲೇ ಬಿಸಿಲಿನ ಬೇಗೆಗೆ ದುಬಾರೆಯಲ್ಲಿ ನೀರಿನ ಪ್ರಮಾಣ ಕುಸಿತ ಕಂಡಿದ್ದು, ಏಪ್ರಿಲ್–ಮೇ ತಿಂಗಳಲ್ಲಿ ಮಳೆ ಸುರಿಯದೇ ಹೋದಲ್ಲಿ ಕಾವೇರಿ ನದಿ ಬತ್ತುವ ಎಲ್ಲಾ ಲಕ್ಷಣಗಳು ಕಂಡು ಬರುತ್ತಿದೆ. ದುಬಾರೆಯ ಕಾವೇರಿ ನದಿಯ ಆಳ ಪ್ರದೇಶದಲ್ಲಿ ನೀರು ಸಂಗ್ರಹವಾಗಿದ್ದು, ನೀರಿಗೆ ಇಳಿಯದಂತೆ ಅರಣ್ಯ ಇಲಾಖೆಯ ರಕ್ಷಣಾ ಸಿಬ್ಬಂದಿಗಳನ್ನು ಸ್ಥಳದಲ್ಲಿ ನಿಯೋಜಿಸಲಾಗಿದೆ.



ದುಬಾರೆಯಲ್ಲಿ ನೀರಿನ ಪ್ರಮಾಣ ಕುಸಿತಗೊಂಡಿರುವುದು.

ವಿರಾಜಪೇಟೆಯಲ್ಲಿ ತ್ರಿಮೂರ್ತಿ ಶಿವಜಯಂತಿ ಮಹೋತ್ಸವ

ವಿರಾಜಪೇಟೆ, ಮಾ.3– ಭಾರತದೇಶ ಹಬ್ಬಗಳ ನಾಡು. ಅದರಲ್ಲಿಯೂ ಶಿವರಾತ್ರಿ ಹಬ್ಬ ಬಹಳ ಶ್ರೇಷ್ಠ ವಿಶಿಷ್ಟವಾದ ಹಬ್ಬವಾಗಿದೆ ಎಂದು ವಿರಾಜಪೇಟೆ ಬ್ರಹ್ಮಾಕುಮಾರಿ ಸೇವಾ ಕೇಂದ್ರದ ಸಂಚಾಲಕರಾದ ಕೋಮಲ ಅಭಿಪ್ರಾಯಪಟ್ಟರು.

ಶಿವರಾತ್ರಿ ಹಬ್ಬದ ಪ್ರಯುಕ್ತ ವಿರಾಜಪೇಟೆ ಅಪ್ಪಯ್ಯಸ್ವಾಮಿ ರಸ್ತೆಯಲ್ಲಿರುವ ಪ್ರಜಾಪಿತ ಬ್ರಹ್ಮಾಕುಮಾರಿ ಈಶ್ವರೀ ವಿಶ್ವವಿದ್ಯಾಲಯ ಸಭಾಂಗಣದಲ್ಲಿ ಆಯೋಜಿಸಲಾಗಿದ್ದ 89ನೇ ತ್ರಿಮೂರ್ತಿ ಶಿವಜಯಂತಿ ಮಹೋತ್ಸವ ಆಚರಣೆ ಕಾರ್ಯಕ್ರಮದಲ್ಲಿ ಜ್ಯೋತಿ ಬೆಳಗಿಸಿದ ಕೋಮಲ ಅವರು ಆಧ್ಯಾತ್ಮಿಕದ ಬಗ್ಗೆ ಮಾತನಾಡಿ, ಮನುಷ್ಯನಿಗೆ ಜೀವನದಲ್ಲಿ ಬದುಕಲು ಎಲ್ಲವೂ ಇದ್ದು ಶಾಂತಿ ನೆಮ್ಮದಿ ಇಲ್ಲವಾದಲ್ಲಿ ಪರಮಾತ್ಮನ ಧ್ಯಾನ ಅಗತ್ಯವಿದೆ. ಭಾರತದಲ್ಲಿ ಶಿವನ ಅವತಾರಣೆ ಕಾರಣ ಭಾರತಭಾಗ್ಯವಿಧಾತ ಎಂದು ಹಾಡುವುದಾಗಿದೆ. ಭಾರತ ದೇಶದಲ್ಲಿಯೇ ಶಿವರಾತ್ರಿಯನ್ನು ಆಚರಿಸುತ್ತಾರೆ. ಜ್ಞಾನ ಸಾಗರ ಪರಮಾತ್ಮನು ಮನುಷ್ಯನಿಗೆ ಜ್ಞಾನದ ಅವಶ್ಯಕತೆ ಇರುವುದನ್ನು ನೀಡಿದ್ದಾನೆ. ಕಲಿಯುಗದಲ್ಲಿ ವಿನಾಶ ಎಂದರೆ ಪ್ರಕೃತಿ ವಿಕೋಪಗಳು, 33 ಕೋಟಿ ದೇವತೆಗಳು ಆದರು ಶ್ರೀಪರಮಾತ್ಮ ಒಬ್ಬನೆ, ಮನುಷ್ಯರು ಕಾಮ, ಕ್ರೋಧ, ಲೋಭ, ಮೋಹಗಳಿಂದ ಕರ್ಮವನ್ನು ಮಾಡುತ್ತಾರೆ ನಂತರ ಪಾಪದ ಶರೀರವನ್ನು ತೊಳೆಯಲು ಅನೇಕ ನದಿಗಳಿಗೆ ತೀರ್ಥಸ್ನಾನಕ್ಕೆಂದು ಹೋಗುತ್ತಾರೆ, ಆತ್ಮವನ್ನು ಪಾವನ ಮಾಡುವ ಶಕ್ತಿ ನೀರಿಗೆ ಇಲ್ಲ. ಪಾಪ ಪುಣ್ಯ ಇರುವುದು ಆತ್ಮದಲ್ಲಿ' ಶರೀರದಲ್ಲಿ ಅಲ್ಲ, ಮನಸ್ಸಿಗೆ ಬೇಕಾಗಿರುವ ಆನಂದ, ಸುಖ,ಶಾಂತಿ, ನೆಮ್ಮದಿಯನ್ನು ನೀಡುವುದು ಶ್ರೀಪರಮಾತ್ಮನಿಂದ ಮಾತ್ರ ಸಾಧ್ಯ, ಎಂದ ಕೋಮಲ ಅವರು ಜೀವನವನ್ನು ಶ್ರೇಷ್ಠಮಾಡಿಕೊಳ್ಳಲು ನೀವು ಮಾಡುವ ಸಾಧನೆಯೊಂದಿಗೆ ದೇವರ ದಯೆ ಕೂಡ ಅಗತ್ಯವಾಗಿದೆ ಎಂದರು.

ಬ್ರಹ್ಮಾಕುಮಾರಿ ವಿಶ್ವವಿದ್ಯಾಲಯ ವಿರಾಜಪೇಟೆ ಸೇವಾಕೇಂದ್ರದ ಡಾ.ರೋಷನ್, ಕರ್ನಲ್ ಕುಂಬಯ್ಯ, ಎನ್.ಎಂ.ಚಂಗಪ್ಪ, ರೂಪ ದೇವಯ್ಯ, ಎಂ.ಎಂ.ದೇವಮ್ಮ, ಬ್ರಹ್ಮಾಕುಮಾರಿಯರು ಪಟ್ಟಣ ಮತ್ತು ಇತರೆಡೆಗಳಿಂದಲೂ ಭಾಗವಹಿಸಿದ್ದರು.



ಇಂದು ಸಾರ್ವಜನಿಕ ದಾಖಲೆಗಳ ನಿರ್ವಹಣೆ ಕುರಿತು ಕಾರ್ಯಾಗಾರ

ಮಡಿಕೇರಿ: ಕೊಡಗು ಜಿಲ್ಲಾಧಿಕಾರಿಗಳ ಕಾರ್ಯಾಲಯ ಹಾಗೂ ಕರ್ನಾಟಕ ರಾಜ್ಯ ಪತ್ರಾಗಾರ ಇಲಾಖೆ, ವಿಭಾಗೀಯ ಪತ್ರಾಗಾರ ಕಚೇರಿ, ಮೈಸೂರು ಇವರ ಸಹಯೋಗದೊಂದಿಗೆ ಸಾರ್ವಜನಿಕ ದಾಖಲೆಗಳ ಅಧಿನಿಯಮ ಮತ್ತು ದಾಖಲೆಗಳ ನಿರ್ವಹಣೆ ಕುರಿತು ಕಾರ್ಯಾಗಾರವು ಮಾ.4 ರಂದು ಬೆಳಗ್ಗೆ 10.30 ಗಂಟೆಗೆ ನಗರದ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ನಡೆಯಲಿದೆ.

ಜಿಲ್ಲಾಧಿಕಾರಿ ವೆಂಕಟ್‌ರಾಜಾ, ಜಿಪಂ ಸಿಇಒ ಆನಂದ್ ಪ್ರಕಾಶ್ ಮೀನಾ, ಹೆಚ್ಚುವರಿ ಜಿಲ್ಲಾಧಿಕಾರಿ ಆರ್.ಐಶ್ವರ್ಯ, ಕರ್ನಾಟಕ ರಾಜ್ಯ ಪತ್ರಾಗಾರ ಇಲಾಖೆ ನಿರ್ದೇಶಕ ಗವಿಸಿದ್ದಯ್ಯ, ಮೈಸೂರು ವಿಭಾಗೀಯ ಪತ್ರಾಗಾರ ಕಚೇರಿಯ ಹಿರಿಯ ಸಹಾಯಕ ನಿರ್ದೇಶಕ ಎಚ್.ಎಲ್.ಮಂಜುನಾಥ ಇತರರು ಪಾಲ್ಗೊಳ್ಳಲಿದ್ದಾರೆ.

ಫುಟ್‌ಬಾಲ್ ಕ್ರೀಡಾಕೂಟಕ್ಕೆ ಚಾಲನೆ



ಚಾಮರಾಜನಗರದ ಡಾ.ಬಿ.ಆರ್.ಅಂಬೇಡ್ಕರ್ ಜಿಲ್ಲಾ ಕ್ರೀಡಾಂಗಣದಲ್ಲಿ ಫುಟ್‌ಬಾಲ್ ಕ್ರೀಡಾಕೂಟಕ್ಕೆ ಶ್ರೀ ವರಮಹಾಲಕ್ಷ್ಮೀ ಸಾಂಸ್ಕೃತಿಕ ಕ್ರೀಡಾ ಸೇವಾ ಸಂಸ್ಥೆ ಅಧ್ಯಕ್ಷ ಜಿ.ಬಂಗಾರು ಚಾಲನೆ ನೀಡಿದರು.

ಚಾಮರಾಜನಗರ, ಮಾ.3– ಕ್ರೀಡೆಯಲ್ಲಿ ಸೋಲು, ಗೆಲುವು ಸಹಜ. ಆದರೆ, ಅನುಭವ ಮುಖ್ಯ ಎಂದು ಶ್ರೀ ವರಮಹಾಲಕ್ಷ್ಮೀ ಸಾಂಸ್ಕೃತಿಕ ಕ್ರೀಡಾ ಸೇವಾ ಸಂಸ್ಥೆ ಅಧ್ಯಕ್ಷ ಜಿ.ಬಂಗಾರು ತಿಳಿಸಿದರು.

ನಗರದ ಡಾ.ಬಿ.ಆರ್.ಅಂಬೇಡ್ಕರ್ ಜಿಲ್ಲಾ ಕ್ರೀಡಾಂಗಣದಲ್ಲಿ ಮ್ಯಾಜಿಕ್ ಬಸ್ ಇಂಡಿಯಾ ಫೌಂಡೇಶನ್‌ನಿಂದ ಆಯೋಜಿಸಿದ್ದ ಫುಟ್‌ಬಾಲ್ ಕ್ರೀಡಾಕೂಟಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು. ಮಕ್ಕಳು ಸಂತೋಷದಿಂದ ಕ್ರೀಡೆಯಲ್ಲಿ ಪಾಲ್ಗೊಳ್ಳುವುದರಿಂದ ದೈಹಿಕವಾಗಿ ಸದೃಢರಾಗಬಹುದು ಎಂದು ಸಲಹೆ ನೀಡಿದರು.

ಮ್ಯಾಜಿಕ್ ಬಸ್ ಸಂಸ್ಥೆಯ ಚಂದ್ರು ಮಾತನಾಡಿ, ಮ್ಯಾಜಿಕ್ ಬಸ್ ಸಂಸ್ಥೆಯು ಸ್ವಯಂ ಸೇವಾ ಸಂಸ್ಥೆಯಾಗಿದ್ದು, ಸಂಸ್ಥೆ ಸಂಸ್ಥಾಪಕರಾದ ಮ್ಯಾಥ್ಯೂ ಸ್ಪೆಸಿ ಅವರು ಮಕ್ಕಳ ಬೆಳವಣಿಗೆಗಾಗಿ ಕ್ರೀಡೆಯನ್ನು ಒಂದು ಮಾಧ್ಯಮವಾಗಿ ಬಳಸಿಕೊಂಡು ಫುಟ್‌ಬಾಲ್ ತರಬೇತಿ ನೀಡಲಾಗುತ್ತಿದ್ದು, ಚಾಮರಾಜನಗರದಲ್ಲಿ 35 ಶಾಲೆಗಳಿಂದ 100 ಮಕ್ಕಳಿಗೆ ಫುಟ್‌ಬಾಲ್ ತರಬೇತಿ ನೀಡಲಾಗುತ್ತಿದೆ ಎಂದರು.

ಈ ವೇಳೆ ಬೆಂಡರವಾಡಿ, ಮೇಗಲಹುಂಡಿ, ನಾಗವಳ್ಳಿ, ಇರಸವಾಡಿ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ ಸೇರಿದಂತೆ ನೂರಾರು ಮಕ್ಕಳು ಪಂದ್ಯಾವಳಿಯಲ್ಲಿ ಭಾಗವಹಿಸಿದ್ದರು. ಕಾರ್ಯಕ್ರಮದಲ್ಲಿ ತರಬೇತುದಾರ ಗೋಪಾಲ್, ಸಂಸ್ಥೆಯ ಪ್ರಮೋದ್, ಪದ್ಮಿನಿ, ರಂಜನ್, ಚೇತನ್, ರವಿ, ತುಳಸಮ್ಮ ಸೇರಿದಂತೆ ಇತರರು ಉಪಸ್ಥಿತರಿದ್ದರು.

ನಾಳೆ, ನಾಳಿದ್ದು ಜಿಲ್ಲಾಮಟ್ಟದ ರಾಜ್ಯ ಸರ್ಕಾರಿ ನೌಕರರ ಕ್ರೀಡಾಕೂಟ

ಚಾಮರಾಜನಗರ, ಮಾ.3– ಪ್ರಸ್ತುತ ಸಾಲಿನ ರಾಜ್ಯ ಸರ್ಕಾರಿ ನೌಕರರ ಜಿಲ್ಲಾಮಟ್ಟದ ಕ್ರೀಡಾಕೂಟ ಹಾಗೂ ಸಾಂಸ್ಕೃತಿಕ ಸ್ಪರ್ಧೆಗಳನ್ನು ಮಾ.5 ಮತ್ತು 6 ರಂದು ನಗರದಲ್ಲಿ ಆಯೋಜಿಸಲಾಗಿದ್ದು, ಈ ಸಂಬಂಧ ಅಗತ್ಯ ಸಿದ್ಧತೆಗಳನ್ನು ಕೈಗೊಳ್ಳುವಂತೆ ಜಿಲ್ಲಾ ಪಂಚಾಯತ್ ಸಿಇಒ ಮೋನಾ ರೋತ್ ಅಧಿಕಾರಿಗಳಿಗೆ ಸೂಚಿಸಿದರು.

ನಗರದ ಜಿಪಂ ಸ್ಥಾಯಿ ಸಮಿತಿ ಸಭಾಂಗಣದಲ್ಲಿಂದು ನಡೆದ 2024–25ನೇ ಸಾಲಿನ ರಾಜ್ಯ ಸರ್ಕಾರಿ ನೌಕರರ ಜಿಲ್ಲಾಮಟ್ಟದ ಕ್ರೀಡಾಕೂಟ ಹಾಗೂ ಸಾಂಸ್ಕೃತಿಕ ಸ್ಪರ್ಧೆಗಳ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಮಾರ್ಚ್ 5 ಮತ್ತು 6 ರಂದು 2 ದಿನಗಳ ಕಾಲ ನಗರದ ಡಾ. ಬಿ.ಆರ್. ಅಂಬೇಡ್ಕರ್ ಜಿಲ್ಲಾ ಕ್ರೀಡಾಂಗಣದಲ್ಲಿ ರಾಜ್ಯ ಸರ್ಕಾರಿ ನೌಕರರ ಜಿಲ್ಲಾಮಟ್ಟದ ಕ್ರೀಡಾಕೂಟ ಹಾಗೂ ಸಾಂಸ್ಕೃತಿಕ ಸ್ಪರ್ಧೆಗಳು ನಡೆಯಲಿವೆ. ಅಲ್ಲದೆ ಮಾರ್ಚ್ 11ರಂದು ಆಯೋಜಿಸಲಾಗಿರುವ ಜಿಲ್ಲಾಮಟ್ಟದ ಮಹಿಳಾ ಕ್ರೀಡಾಕೂಟಗಳ ನಿರ್ವಹಣೆಯಲ್ಲಿ ಯಾವುದೇ ಲೋಪಗಳಾಗದಂತೆ ಕ್ರೀಡಾಕೂಟಗಳನ್ನು ಸಂಘಟಿಸಲು ಅವಶ್ಯ ಸಿದ್ಧತಾ ಕಾರ್ಯಗಳನ್ನು ಕೈಗೊಳ್ಳುವಂತೆ ಅಧಿಕಾರಿಗಳಿಗೆ ತಿಳಿಸಿದರು.

ಕ್ರೀಡಾಕೂಟ ಸ್ಥಳದಲ್ಲಿ ಸ್ವಚ್ಛತೆ ಹಾಗೂ ಕುಡಿಯುವ ನೀರಿನ ವ್ಯವಸ್ಥೆ ಸಮರ್ಪಕವಾಗಿರಬೇಕು. ವೈದ್ಯಕೀಯ ಚಿಕಿತ್ಸಾ ಸೌಲಭ್ಯ ಇರುವಂತೆ ನೋಡಿಕೊಳ್ಳಬೇಕು. ಕ್ರೀಡಾಪಟುಗಳಿಗೆ ಯಾವುದೇ ಅನಾನುಕೂಲಗಳು ಉಂಟಾಗದಂತೆ ಗಮನಹರಿಸಬೇಕು ಎಂದರು.

ಕ್ರೀಡಾಕೂಟ ಹಾಗೂ ಸಾಂಸ್ಕೃತಿಕ ಸ್ಪರ್ಧೆಗಳಿಗೆ ಯಾವುದೇ ಗೊಂದಲಗಳಿಗೆ ಆಸ್ಪದವಾಗದಂತೆ ನುರಿತ ತೀರ್ಪುಗಾರರಾಗಿ ಕಾರ್ಯನಿರ್ವಹಿಸಲು ದೈಹಿಕ ಶಿಕ್ಷಕರ ನಿಯೋಜನೆ ಅಗತ್ಯವಿದೆ. ಕ್ರೀಡಾಕೂಟದ ಅಚ್ಚುಕಟ್ಟು ಆಯೋಜನೆಗೆ ಮುಂದಾಗುವಂತೆ ಜಿಲ್ಲಾ ಪಂಚಾಯತ್ ಸಿಇಒ ಮೋನಾ ರೋತ್ ಅವರು ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚಿಸಿದರು.

ಜಿಪಂ ಮುಖ್ಯ ಯೋಜನಾಧಿಕಾರಿ ದೀಪಾ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಸಹಾಯಕ ನಿರ್ದೇಶಕ ಕೆ.ಸುರೇಶ್, ರಾಜ್ಯ ಸರ್ಕಾರಿ ನೌಕರರ ಸಂಘದ ಜಿಲ್ಲಾಧ್ಯಕ್ಷೆ ರೇಣುಕಾದೇವಿ, ಶಾಲಾ ಶಿಕ್ಷಣ ಇಲಾಖೆ ಉಪನಿರ್ದೇಶಕ ರಾಮಚಂದ್ರ ರಾಜೇ ಅರಸ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕ ಮಂಜುನಾಥ್, ಜಿಲ್ಲಾಮಟ್ಟದ ಅಧಿಕಾರಿಗಳು, ರಾಜ್ಯ ಸರ್ಕಾರಿ ನೌಕರರ ಸಂಘದ ಜಿಲ್ಲಾ ಶಾಖೆಯ ಪದಾಧಿಕಾರಿಗಳು ಸಭೆಯಲ್ಲಿ ಉಪಸ್ಥಿತರಿದ್ದರು.



ನಗರದ ಜಿಪಂ ಸ್ಥಾಯಿ ಸಮಿತಿ ಸಭಾಂಗಣದಲ್ಲಿಂದು ನಡೆದ ರಾಜ್ಯ ಸರ್ಕಾರಿ ನೌಕರರ ಜಿಲ್ಲಾಮಟ್ಟದ ಕ್ರೀಡಾಕೂಟ ಹಾಗೂ ಸಾಂಸ್ಕೃತಿಕ ಸ್ಪರ್ಧೆಗಳ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಜಿಲ್ಲಾ ಪಂಚಾಯತ್ ಸಿಇಒ ಮೋನಾ ರೋತ್ ಮಾತನಾಡಿದರು.

ಇಂದು ಗುಂಡ್ಲುಪೇಟೆಯಲ್ಲಿ ಸಾಹಿತ್ಯ, ವೈದ್ಯ ಪದ್ಧತಿಗೆ ಅಗಸ್ತ್ಯರ ಕೊಡುಗೆ ಕುರಿತ ವಿಚಾರ ಸಂಕಿರಣ

ಚಾಮರಾಜನಗರ, ಮಾ.3– ಚಾಮರಾಜನಗರ ವಿಶ್ವವಿದ್ಯಾನಿಲಯ, ವಿವೇಕಸಿರಿ ಸೇವಾ ಸೌಹಾರ್ದ ಸಹಕಾರ ಸಂಘ ಮತ್ತು ಗುಂಡ್ಲುಪೇಟೆಯ ಜೆಎಸ್‌ಎಸ್ ಕಲಾ ಮತ್ತು ವಾಣಿಜ್ಯ ಕಾಲೇಜಿನ ಸಹಯೋಗದೊಂದಿಗೆ ಭಾರತೀಯ ಭಾಷಾ ಸಮಿತಿ, ಶಿಕ್ಷಣ ಸಚಿವಾಲಯ ಪ್ರಾಯೋಜಕತ್ವದಲ್ಲಿ 'ಭಾರತೀಯ ಭಾಷೆಗಳ ಮೂಲಕ ಭಾರತೀಯ ಜ್ಞಾನ ಪರಂಪರೆ, ಸಾಹಿತ್ಯ ಮತ್ತು ವೈದ್ಯ ಪದ್ಧತಿಗೆ ಅಗಸ್ತ್ಯ ಮುನಿಯವರ ಕೊಡುಗೆ' ವಿಷಯ ಕುರಿತು ಒಂದು ದಿನದ ರಾಷ್ಟ್ರೀಯ ವಿಚಾರ ಸಂಕಿರಣವನ್ನು ಮಾ.4ರಂದು ಬೆಳಗ್ಗೆ 9.30 ಗಂಟೆಗೆ ಗುಂಡ್ಲುಪೇಟೆಯ ಜೆಎಸ್‌ಎಸ್ ಕಲಾ ಮತ್ತು ವಾಣಿಜ್ಯ ಕಾಲೇಜಿನಲ್ಲಿ ಹಮ್ಮಿಕೊಳ್ಳಲಾಗಿದೆ.

ಚಾಮರಾಜನಗರ ವಿಶ್ವವಿದ್ಯಾಲಯದ ಕುಲಪತಿ ಪ್ರೊ.ಎಂ.ಆರ್.ಗಂಗಾಧರ್ ಅಧ್ಯಕ್ಷತೆ ವಹಿಸುವರು. ಮೈಸೂರಿನ ಹಿರಿಯ ವಕೀಲ ಓ.ಶಾಮ್‌ಭಟ್ ಕಾರ್ಯಕ್ರಮ ಉದ್ಘಾಟಿಸುವರು. ನವದೆಹಲಿ ಭಾರತೀಯ ಭಾಷಾ ಸಮಿತಿಯ ಮುಖ್ಯ ಸಂಯೋಜಕ ಪ್ರೊ. ಪವನ್‌ಕುಮಾರ್ ಶರ್ಮಾ ಅವರು ಮುಖ್ಯ ಅತಿಥಿಗಳಾಗಿ ಪಾಲ್ಗೊಳ್ಳುವರು.

ಚಾಮರಾಜನಗರ ವಿವಿ ರಿಜಿಸ್ಟ್ರಾರ್ ಲೋಕನಾಥ್, ರಿಜಿಸ್ಟ್ರಾರ್(ಮೌಲ್ಯಮಾಪನ) ಪ್ರೊ.ವಿ.ಜಿ. ವೆಂಕಟರಮಣ, ವಿಚಾರ ಸಂಕಿರಣ ಸಂಯೋಜಕರು ಹಾಗೂ ಗುಂಡ್ಲುಪೇಟೆಯ ವಿವೇಕಸಿರಿ ಸೇವಾ ಸೌಹಾರ್ದ ಸಹಕಾರಿ ಸಂಘದ ಅಧ್ಯಕ್ಷ ಸ್ವಾಮಿ ಮರುಳಾಪುರ, ವಿಚಾರ ಸಂಕಿರಣ ಸಂಯೋಜಕರು ಹಾಗೂ ಚಾಮರಾಜನಗರ ವಿಶ್ವವಿದ್ಯಾಲಯದ ಪಿಎಂಇಬಿ ನಿರ್ದೇಶಕ ಡಾ.ವಿ.ಜಿ.ಸಿದ್ದರಾಜು, ಜೆಎಸ್‌ಎಸ್ ಕಲಾ ಮತ್ತು ವಾಣಿಜ್ಯ ಕಾಲೇಜು ಪ್ರಾಂಶುಪಾಲೆ ಡಾ.ಪಿ.ಮಹದೇವಮ್ಮ ಅವರು ಉಪಸ್ಥಿತರಿರುವರು.

ಸಂಜೆ 4 ಗಂಟೆಗೆ ಸಮಾರೋಪ ಸಮಾರಂಭ ನಡೆಯಲಿದೆ. ಚಾಮರಾಜನಗರ ವಿವಿ ಕುಲಪತಿ ಪ್ರೊ. ಎಂ.ಆರ್.ಗಂಗಾಧರ್ ಅಧ್ಯಕ್ಷತೆ ವಹಿಸುವರು. ಕೊಡಗು ವಿವಿ ಕುಲಪತಿ ಪ್ರೊ.ಅಶೋಕ್ ಎಸ್.ಆಲೂರ್, ಬೆಂಗಳೂರಿನ ಕನ್ನಡ ಸಾಹಿತ್ಯ ಅಕಾಡೆಮಿಯ ಮಾಜಿ ಅಧ್ಯಕ್ಷ ಡಾ. ಬಿ.ವಿ. ವಸಂತ ಕುಮಾರ್ ಮುಖ್ಯ ಅತಿಥಿಗಳಾಗಿ ಭಾಗವಹಿಸುವರು ಎಂದು ಪ್ರಕಟಣೆ ತಿಳಿಸಿದೆ.

ಮತಭಿಕ್ಷೆಯ ಋಣ ತೀರಿಸಲು ನನ್ನ ಶ್ರಮ ನಿರಂತರ: ಎ.ಆರ್.ಕೃಷ್ಣಮೂರ್ತಿ

ಯಳಂದೂರು, ಮಾ.3– ಕೊಳ್ಳೇಗಾಲ ಮೀಸಲು ವಿಧಾನಸಭಾ ಕ್ಷೇತ್ರದ ಮತದಾರರು ನನಗೆ 1 ಲಕ್ಷಕ್ಕೂ ಅಧಿಕ ಮತಭಿಕ್ಷೆಯನ್ನು ನೀಡಿದ್ದಾರೆ. ಇಲ್ಲಿನ ಮತದಾರರ ಋಣವನ್ನು ತೀರಿಸುವ ನಿಟ್ಟಿನಲ್ಲಿ ಕ್ಷೇತ್ರದ ಸಮಗ್ರ ಅಭಿವೃದ್ಧಿ ಮಾಡುವ ಪರ್ವಕ್ಕೆ ನಾನು ಮುನ್ನುಡಿ ಬರೆಯುತ್ತೇನೆ ಎಂದು ಶಾಸಕ ಎ.ಆರ್. ಕೃಷ್ಣಮೂರ್ತಿ ತಿಳಿಸಿದರು.

ಅವರು ಶನಿವಾರ ತಾಲೂಕಿನ ವಿವಿಧೆಡೆ ರಸ್ತೆ ಚರಂಡಿ ಅಭಿವೃದ್ಧಿ, ಅಂಬೇಡ್ಕರ್ ಸಮುದಾಯ ಭವನದ ಉದ್ಘಾಟನೆ, ಭೂಮಿ ಪೂಜೆ, ಅಂಗನವಾಡಿ ಕೇಂದ್ರದ ಉದ್ಘಾಟನೆ ಸೇರಿದಂತೆ ವಿವಿಧ 15 ಕಾಮಗಾರಿಗಳಿಗೆ ಚಾಲನೆ ನೀಡಿ ಮಾತನಾಡಿದರು.

ತಾಲೂಕಿನ ಕೊಮಾರನಪುರ ಗ್ರಾಮಕ್ಕೆ ಗುಂಬಳ್ಳಿ ಮುಖ್ಯರಸ್ತೆಯಿಂದ ಸಂಪರ್ಕ ಕಲ್ಪಿಸುವ ರಸ್ತೆ ಕಾಮಗಾರಿ ಕಳೆದ 20 ವರ್ಷಗಳಿಂದಲೂ ನನೆಗುದಿಗೆ ಬಿದ್ದಿತ್ತು. ಕಳೆದ ಬಾರಿ ಇದಕ್ಕೆ ಅನುದಾನ ಬಂದಿದ್ದರೂ ಗುತ್ತಿಗೆದಾರನ ನಿರ್ಲಕ್ಷ್ಯದಿಂದ ಈ ಹಣ ವಾಪಸ್ಸಾಗಿತ್ತು. ಮತ್ತೆ ಗ್ರಾಮೀಣಾಭಿವೃದ್ಧಿ ಸಚಿವ ಪ್ರಿಯಾಂಕ್ ಖರ್ಗೆರವರಿಗೆ ಮನವಿ ಮಾಡಿ, ಈ ರಸ್ತೆಗೆ 2 ಕೋಟಿ ರೂ. ಅನುದಾನವನ್ನು ತಂದಿದ್ದು ಇದಕ್ಕೆ ಭೂಮಿ ಪೂಜೆ ಮಾಡಿದ್ದೇನೆ. ಇದೇ ಗ್ರಾಮಕ್ಕೆ ಎಸ್‌ಇಪಿ ಯೋಜನೆಯಡಿಯಲ್ಲಿ 50 ಲಕ್ಷ ರೂ. ವೆಚ್ಚದಲ್ಲಿ ಚರಂಡಿ, ರಸ್ತೆ ಅಭಿವೃದ್ಧಿಗೆ ಮೊದಲ ಕಂತಾಗಿ 16.50 ಲಕ್ಷ ಬಿಡುಗಡೆಯಾಗಿದೆ. ವಡಗೆರೆ ಗ್ರಾಮದ ಅಂಬೇಡ್ಕರ್ ಭವನ ಕಾಮಗಾರಿಗೆ 10 ಲಕ್ಷ ರೂ. ಗೌಡಹಳ್ಳಿ ಗ್ರಾಮದ ಲಿಂಗಾಯಿತ, ಕುರುಬ ಹಾಗೂ ಉಪ್ಪಾರ ಬೀದಿಯ ರಸ್ತೆ, ಚರಂಡಿ ಅಭಿವೃದ್ಧಿಗೆ 50 ಲಕ್ಷ ರೂ. ಗೌಡಹಳ್ಳಿ ಗ್ರಾಮದಲ್ಲಿ ಅಂಬೇಡ್ಕರ್ ಭವನದ ನಿರ್ಮಾಣಕ್ಕೆ 20 ಲಕ್ಷ ರೂ. ಆಲ್ಕೆರೆ ಅಗ್ರಹಾರ ಗ್ರಾಮದ ಅಂಬೇಡ್ಕರ್ ಸಮುದಾಯ ಭವನ ನಿರ್ಮಾಣಕ್ಕೆ 25 ಲಕ್ಷ ರೂ. ಇಲ್ಲಿನ ಅಂಗನವಾಡಿ ಕೇಂದ್ರದ ಭೂಮಿ ಪೂಜೆ, ದೇವರಹಳ್ಳಿ ಗ್ರಾಮದ ಸಿಸಿ ರಸ್ತೆಗೆ 20 ಲಕ್ಷ ರೂ. ಬನ್ನಿಸಾರಿಗೆ ರಸ್ತೆ ಅಭಿವೃದ್ಧಿಗೆ 40 ಲಕ್ಷ ರೂ. ರಾಮಾಪುರ ಗ್ರಾಮದ ಸಿಸಿ ರಸ್ತೆ ಚರಂಡಿಗೆ 40 ಲಕ್ಷ ರೂ. ನೀಡಿದ್ದು ಇಲ್ಲಿನ ಅಂಬೇಡ್ಕರ್ ಭವನದ ಉದ್ಘಾಟನೆ ಹಾಗೂ ಮಿನಿ ಅಂಗನವಾಡಿ ಕೇಂದ್ರದ ಉದ್ಘಾಟನೆಯನ್ನು ಮಾಡಲಾಗಿದೆ.

ನೀರಾವರಿ ಯೋಜನೆ ತಂದು ಕೆರೆಗಳನ್ನು ತುಂಬಿಸುವ ಯೋಜನೆಗೆ 505 ಕೋಟಿ ರೂ.ಗಳ ಕ್ರಿಯಾ ಯೋಜನೆ ತಯಾರು ಮಾಡಿದ್ದು ಇದನ್ನು ಮುಖ್ಯಮಂತ್ರಿಗಳ ಮುಂದೆ ಇಡುತ್ತೇನೆ. ಇದಕ್ಕೆ ಅನುಮೋದನೆಯನ್ನು ಕೊಡಿಸುವಲ್ಲಿ ಶ್ರಮಿಸುತ್ತೇನೆ ಎಂದರು.

ಜಿಲ್ಲಾ ಗ್ಯಾರಂಟಿ ಯೋಜನೆ ಅನುಷ್ಠಾನದ ಅಧ್ಯಕ್ಷ ಎಚ್.ವಿ ಚಂದ್ರು, ಜಿಪಂ ಮಾಜಿ ಉಪಾಧ್ಯಕ್ಷೆ ಜೆ.ಯೋಗೇಶ್, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ತೋಟೇಶ್, ಎಇಇ ಸಂತೋಷ್ ಮಾತನಾಡಿದರು. ಗ್ಯಾರಂಟಿ ಯೋಜನೆಗಳ ತಾಲೂಕು ಅಧ್ಯಕ್ಷ ಕಿನಕಹಳ್ಳಿ ಪ್ರಭುಪ್ರಸಾದ್, ಮಾಂಬಳ್ಳಿ ನಂಜುಂಡಸ್ವಾಮಿ ಗುಂಬಳ್ಳಿ ಗ್ರಾಪಂ ಅಧ್ಯಕ್ಷೆ ಪುಟ್ಟಮಾಧವಿ, ಗೌಡಹಳ್ಳಿ ಗ್ರಾಪಂ ಅಧ್ಯಕ್ಷೆ ವಸಂತ ಉಪಾಧ್ಯಕ್ಷೆ ಭಾಗ್ಯ, ಬೋಧಿರತ್ನ ಬಂತೇಜಿ, ಕಂದಹಳ್ಳಿ ನಂಜುಂಡಸ್ವಾಮಿ, ಕೆಆರ್‌ಐಡಿಎಲ್ ಉಪ ನಿರ್ದೇಶಕ ಚಿಕ್ಕಲಿಂಗಯ್ಯ ನಿರ್ಮಿತಿ ಕೇಂದ್ರ ಜೆಇ ನಂದೀಶ್, ಗುತ್ತಿಗೆದಾರ ಮಂಜುನಾಥ್, ಪಿಎಸ್‌ಐ ಹನುಮಂತ ಉಪ್ಪಾರ್, ಕೃಷಿಕ ಸಮಾಜದ ಅಧ್ಯಕ್ಷ ಗೌಡಹಳ್ಳಿ ರವಿ, ರಂಗರಾಮು, ಮಹಾದೇವ್ ಸೇರಿದಂತೆ ಅನೇಕರು ಇದ್ದರು.



ಯಳಂದೂರು ತಾಲೂಕಿನ ಕೊಮಾರನಪುರ ಗ್ರಾಮದ ರಸ್ತೆ ಅಭಿವೃದ್ಧಿ ಕಾಮಗಾರಿಗೆ ಶಾಸಕ ಎ.ಆರ್.ಕೃಷ್ಣಮೂರ್ತಿ ಶನಿವಾರ ಭೂಮಿಪೂಜೆ ನೆರವೇರಿಸಿದರು.

ಸಾರ್ವಜನಿಕರಿಗೆ ಕಾನೂನು ಅರಿವಿದ್ದರೆ ದೌರ್ಜನ್ಯಗಳ ತಡೆಯಲು ಸಾಧ್ಯ

ಉಪವಿಭಾಗಾಧಿಕಾರಿ ಬಿ.ಆರ್. ಮಹೇಶ್ ಅಭಿಮತ

ಚಾಮರಾಜನಗರ, ಮಾ.3– ಸರ್ಕಾರ ಜಾರಿಗೊಳಿಸಿರುವ ಕಾನೂನುಗಳ ಬಗ್ಗೆ ಸಾರ್ವಜನಿಕರಿಗೆ ಪರಿಣಾಮಕಾರಿ ಅರಿವು ಮೂಡಿಸಿದರೆ ದೌರ್ಜನ್ಯಗಳನ್ನು ತಡೆಯಬಹುದಾಗಿದೆ ಎಂದು ಉಪವಿಭಾಗಾಧಿಕಾರಿ ಬಿ.ಆರ್. ಮಹೇಶ್ ಸಲಹೆ ನೀಡಿದರು.

ನಗರದ ವರನಟ ಡಾ. ರಾಜ್‌ಕುಮಾರ್ ಜಿಲ್ಲಾ ರಂಗಮಂದಿರದಲ್ಲಿ ಚಾಮರಾಜನಗರ ತಾಲೂಕು ಆಡಳಿತ, ತಾಪಂ, ಸಮಾಜ ಕಲ್ಯಾಣ ಇಲಾಖೆ ಹಾಗೂ ಪ್ರಜಾ ಪರಿವರ್ತನಾ ವೇದಿಕೆ ಸಹಯೋಗದಲ್ಲಿ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡಗಳ (ದೌರ್ಜನ್ಯ ಪ್ರತಿಬಂಧ) ಅಧಿನಿಯಮ–1989 ಮತ್ತು ತಿದ್ದುಪಡಿ ಅಧಿನಿಯಮಗಳು ಹಾಗೂ ನಾಗರಿಕ ಹಕ್ಕು ಸಂರಕ್ಷಣಾ ಅಧಿನಿಯಮ ಕುರಿತ ವಿಚಾರ ಸಂಕಿರಣ ಮತ್ತು ಕಾರ್ಯಾಗಾರವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಪರಿಶಿಷ್ಟ ಜಾತಿ, ಪಂಗಡಗಳ ಜನರ ದೌರ್ಜನ್ಯ ತಡೆಯಲು ಸಂವಿಧಾನದ ಹಲವು ಅನುಚ್ಛೇದಗಳಡಿ ಸರ್ಕಾರ ಕಾನೂನುಗಳನ್ನು ರೂಪಿಸಿ ಜಾರಿಗೊಳಿಸಿದ್ದರೂ ದೇಶದ ಹಲವೆಡೆ ಪರಿಶಿಷ್ಟರ ಮೇಲೆ ದೌರ್ಜನ್ಯ ಆಗಾಗ್ಗೆ ಜರುಗುತ್ತಿವೆ. ದೌರ್ಜನ್ಯಗಳನ್ನು ಪರಿಣಾಮಕಾರಿಯಾಗಿ ತಡೆಗಟ್ಟಲು ಗ್ರಾಮ, ತಾಲೂಕು, ಜಿಲ್ಲಾ ಮಟ್ಟದಲ್ಲಿ ಜಾಗೃತಿ ಕಾರ್ಯಾಗಾರಗಳನ್ನು ಹಮ್ಮಿಕೊಂಡು ವ್ಯಾಪಕ ಅರಿವು ಮೂಡಿಸಬೇಕಾದ ಅವಶ್ಯವಿದೆ ಎಂದರು.

ಕಾರ್ಯಕ್ರಮದಲ್ಲಿ ಸಂಪನ್ಮೂಲ ವ್ಯಕ್ತಿಗಳಾಗಿ ಭಾಗವಹಿಸಿದ್ದ ಡಿವೈಎಸ್‌ಪಿ. ಲಕ್ಷ್ಮಯ್ಯ, ಜಿಲ್ಲಾ ವಕೀಲರ ಸಂಘದ ಅಧ್ಯಕ್ಷ ಎಸ್.ನಂಜಯ್ಯ ಹಾಗೂ ಸರ್ಕಾರಿ ಮಹಿಳಾ ಪ್ರಥಮದರ್ಜೆ ಕಾಲೇಜಿನ ಸಹಾಯಕ ಪ್ರಾಧ್ಯಾಪಕರಾದ ಸಿ. ಶೈಲೇಶ್‌ಕುಮಾರ್ ಅವರು ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡಗಳ (ದೌರ್ಜನ್ಯ ಪ್ರತಿಬಂಧ) ಅಧಿನಿಯಮ–1989 ಮತ್ತು ತಿದ್ದುಪಡಿ ಅಧಿನಿಯಮಗಳು ಹಾಗೂ ನಾಗರಿಕ ಹಕ್ಕು ಸಂರಕ್ಷಣಾ ಅಧಿನಿಯಮ ಕುರಿತು ಸವಿವರವಾಗಿ ವಿಷಯ ಮಂಡಿಸಿದರು.

ಟಿ.ನರಸೀಪುರ ತ್ರಿವೇಣಿನಗರದ ನಳಂದ ಬುದ್ಧ ವಿಹಾರದ ಪೂಜ್ಯ ಬಂತೆ ಬೋಧಿರತ್ನ ಅವರು ಕಾರ್ಯಕ್ರಮದ ದಿವ್ಯ ಸಾನ್ನಿಧ್ಯ ವಹಿಸಿ, ಆಶೀರ್ವಚನ ನೀಡಿದರು.

ತಹಸೀಲ್ದಾರ್ ಬಿ.ಗಿರಿಜಾ ಅಧ್ಯಕ್ಷತೆ ವಹಿಸಿದ್ದರು. ಸಮಾಜ ಕಲ್ಯಾಣ ಇಲಾಖೆ ಉಪ ನಿರ್ದೇಶಕ ಎನ್.ಮುನಿರಾಜು ಮಾತನಾಡಿದರು. ಎಚ್.ಎನ್. ನಂಜುಂಡೇಗೌಡ, ಸಿ.ಎಂ.ಕೃಷ್ಣಮೂರ್ತಿ, ಮಹೇಶ್ ಇತರರು ಕಾರ್ಯಾಗಾರದಲ್ಲಿ ಉಪಸ್ಥಿತರಿದ್ದರು.



ವಿಚಾರ ಸಂಕಿರಣ ಮತ್ತು ಕಾರ್ಯಾಗಾರವನ್ನು ಉಪವಿಭಾಗಾಧಿಕಾರಿ ಬಿ.ಆರ್. ಮಹೇಶ್ ಉದ್ಘಾಟಿಸಿದರು.

ಮೈಸೂರು ವಿವಿ ಅಧ್ಯಯನ ವಿಭಾಗಗಳ ನಡುವೆ ಗೋಡೆ ನಿರ್ಮಾಣ ಮಾಡುವಷ್ಟು ಪ್ರಾಧ್ಯಾಪಕರಲ್ಲಿ ವೈಮನಸ್ಸಿದೆ!

● ಮೈಸೂರು ವಿವಿ ಕುಲಪತಿ ಪ್ರೊ.ಎನ್.ಕೆ.ಲೋಕನಾಥ್ ತೀವ್ರ ಬೇಸರ ● ವಿದ್ಯಾರ್ಥಿಗಳಿಗೆ ವಿಶ್ವ ಸಂದೇಶ ಸಾರಬೇಕಾದವರ ಸಣ್ಣತನಕ್ಕೆ ಆತಂಕ; ಅಸಮಾಧಾನ ● ಬಸವೇಶ್ವರರ ಕುರಿತಾದ ಸರಣಿ ಉಪನ್ಯಾಸಕ್ಕೆ ಚಾಲನೆ ನೀಡುವ ವೇಳೆ ಇಂತಹ ವಿಷಾದಕರ ಸಂಗತಿ ಹೊರಹಾಕಿದ ಕುಲಪತಿಗಳು ● ಮೈಸೂರು ವಿವಿಯ ನಾನಾ ವಿಭಾಗಗಳಲ್ಲಿ ಆರು ಸಾವಿರ ವಿದ್ಯಾರ್ಥಿಗಳಿದ್ದಾರೆ; ಆದರೆ ಗ್ರಂಥಾಲಯದಲ್ಲಿ ನೂರು ಜನ ಇರುವುದಿಲ್ಲ



'ವೇದಶಾಸ್ತ್ರ, ಆಗಮ, ಪುರಾಣ ಕುರಿತು ಶರಣ ಚಿಂತನೆಗಳು' ವಿಷಯ ಕುರಿತ ಸರಣಿ ಉಪನ್ಯಾಸ ಮಾಲಿಕೆಗೆ ಕುಲಪತಿ ಪ್ರೊ.ಎನ್.ಕೆ.ಲೋಕನಾಥ್ ಚಾಲನೆ ನೀಡಿದರು.

ಮೈಸೂರು, ಮಾ.3(ಎಸ್‌ಪಿಎನ್)– ವಿವಿ ಪ್ರಾಧ್ಯಾಪಕರ ನಡುವೆ ಸಣ್ಣಪುಟ್ಟ ವಿಷಯಗಳಿಗೂ ವೈಮನಸ್ಸು ಬೆಳೆದಿದೆ. ಒಂದು ವಿಭಾಗದವರು ಮತ್ತೊಂದು ಅಧ್ಯಯನ ಪೀಠದವರು ಬರದಂತೆ ತಡೆಯಲು ಕಾಂಪೌಂಡ್‌ಗಳ ನಿರ್ಮಾಣಕ್ಕೆ ಪ್ರಾಧ್ಯಾಪಕರೇ ಬೇಡಿಕೆ ಮಂಡಿಸುತ್ತಿದ್ದಾರೆ ಎಂದು ಕುಲಪತಿ ಪ್ರೊ.ಎನ್.ಕೆ. ಲೋಕನಾಥ್ ತೀವ್ರ ಬೇಸರ ಹೊರಹಾಕಿದರು.

ಮೈಸೂರು ವಿವಿ ಮಾನಸಗಂಗೋತ್ರಿ ಆವರಣದ ಶ್ರೀ ಬಸವೇಶ್ವರ ಸಾಮಾಜಿಕ ಪರಿಷ್ಕರಣೆ, ಸಂಶೋಧನೆ ಅಧ್ಯಯನ ಹಾಗೂ ವಿಸ್ತರಣಾ ಕೇಂದ್ರದ, ಕುವೆಂಪು ಕನ್ನಡ ಅಧ್ಯಯನ ಸಂಸ್ಥೆ ಸಹಯೋಗದೊಂದಿಗೆ ಏರ್ಪಡಿಸಿದ್ದ ಇಂದಿನಿಂದ (ಸೋಮವಾರ) ಮಾ.20ರವರೆಗೆ ಆಯೋಜಿಸಿರುವ ಸರಣಿ ಉಪನ್ಯಾಸ ಮಾಲಿಕೆ, ಮಹಾಮನೆ ಪಾರಂಭೋತ್ಸವ ಹಾಗೂ 'ವೇದಶಾಸ್ತ್ರ, ಆಗಮ, ಪುರಾಣ ಕುರಿತು ಶರಣ ಚಿಂತನೆಗಳು' ವಿಶೇಷ ಉಪನ್ಯಾಸ ಮಾಲಿಕೆ ಕಾರ್ಯಕ್ರಮವನ್ನು ಶ್ರೀ ಬಸವೇಶ್ವರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡುವ ಮೂಲಕ ಉದ್ಘಾಟಿಸಿದರು.

ವಿದ್ಯಾರ್ಥಿಗಳಿಗೆ ವಿಶ್ವಮಾನವ ಸಂದೇಶದ ಕುರಿತು ಅರಿವು ಮೂಡಿಸಬೇಕಾದ ಮೈಸೂರು ವಿವಿ ಪ್ರಾಧ್ಯಾಪಕರ ನಡುವೆಯೇ ಪರಸ್ಪರ ವಿಶ್ವಾಸ, ಸಮನ್ವಯ ಕೊರತೆ ಎದುರಾಗಿದೆ. ಇದರಿಂದ ಒಂದೊಂದು ಅಧ್ಯಯನ ವಿಭಾಗಗಳ ನಡುವೆ ಗೋಡೆಗಳು ನಿರ್ಮಾಣಗೊಂಡಿವೆ. ಇದನ್ನು ಹೋಗಲಾಡಿಸಲು ಶ್ರೀ ಬಸವೇಶ್ವರ ಚಿಂತನೆ, ಆದರ್ಶ ಅಮೂಲ್ಯ ಎಂದರು.

ತಮ್ಮ ತಮ್ಮ ಕೇಂದ್ರಗಳಿಗೆ ಕಾಂಪೌಂಡ್ ನಿರ್ಮಿಸಲು ಪ್ರಾಧ್ಯಾಪಕರು ಗಲಾಟೆ ಮಾಡುತ್ತಿದ್ದಾರೆ. ಪಕ್ಕದ ವಿಭಾಗದವರು ಬರದಂತೆ ಬೇಲಿ ಹಾಕಲಾಗುತ್ತಿದೆ. ವಿಶ್ವವಿದ್ಯಾನಿಲಯ ಯಾರ ಆಸ್ತಿ, ನಮ್ಮ ನಿವೃತ್ತಿಯ ದಿನಾಂಕ ನಿಗದಿಯಾಗಿದ್ದರೂ ಈ ಬೆಳವಣಿಗೆಗಳು ದುರದೃಷ್ಟಕರ. ಪ್ರಾಧ್ಯಾಪಕರದ್ದೇ ಈ ನಡೆಯಾದರೆ ವಿದ್ಯಾರ್ಥಿಗಳಿಗೆ ವೈಚಾರಿಕತೆ ಹೇಳಿಕೊಡುವವರು ಯಾರು ಎಂದು ಪ್ರಶ್ನಿಸಿದರು.

ಮೈಸೂರು ವಿವಿಯ ನಾನಾ ವಿಭಾಗಗಳಲ್ಲಿ 6 ಸಾವಿರ ವಿದ್ಯಾರ್ಥಿಗಳು ಅಧ್ಯಯನ ಮಾಡುತ್ತಿದ್ದಾರೆ. ಆದರೆ, ವಿವಿ ಗ್ರಂಥಾಲಯಕ್ಕೆ ಭೇಟಿ ನೀಡಿದರೆ ಗಂಭೀರವಾಗಿ ಅಧ್ಯಯನ ನಡೆಸುವ 100 ವಿದ್ಯಾರ್ಥಿಗಳನ್ನು ಕಾಣಲಾಗದು. ಬಹುತೇಕ ಸುಳ್ಳುಗಳಿಂದಲೇ ತುಂಬಿರುವ ಮೊಬೈಲ್‌ನಲ್ಲಿ ವಿದ್ಯಾರ್ಥಿಗಳು ತಲ್ಲೀನರಾಗಿದ್ದಾರೆ. ಇದು ವಿದ್ಯಾರ್ಥಿಗಳಲ್ಲಿ ತಂತ್ರಜ್ಞಾನ ಸೃಷ್ಟಿಸುತ್ತಿರುವ ಅವಾಂತರ ಎಂದು ಬೇಸರ ಹೊರಹಾಕಿದರು.


ಬಸವೇಶ್ವರ ಅಧ್ಯಯನ ಪೀಠ ಬರೀ ಗಂಗೋತ್ರಿಗೆ ಸೀಮಿತವಾಗದೇ ವಿಶ್ವವಿದ್ಯಾನಿಲಯದ ಹೊರಗೂ ಸರಣಿ ಉಪನ್ಯಾಸ ಹಮ್ಮಿಕೊಂಡಿರುವುದು ಶ್ಲಾಘನೀಯ. ಬಸವಣ್ಣ, ಅಲ್ಲಮಪ್ರಭು, ಅಕ್ಕಮಹಾದೇವಿ ಸೇರಿದಂತೆ ಎಲ್ಲಾ ಶರಣ ಚಿಂತನೆಗಳನ್ನು ವಿದ್ಯಾರ್ಥಿಗಳಿಗೆ ಮುಟ್ಟಿಸುವುದು ವಿವಿ ಆದ್ಯ ಕರ್ತವ್ಯ ಎಂದರು.

ಜನರ ನಡುವೆ ಹುಟ್ಟಿದ್ದು 'ಲಿಂಗಾಯತ ಧರ್ಮ': ಹಿರಿಯ ಸಾಹಿತಿ ರಂಜಾನ್ ದರ್ಗಾ ಮಾತನಾಡಿ, ಬಸವ ಧರ್ಮ ಸಂಸಾರ ಧರ್ಮ. ಇದರಲ್ಲಿ ಲೋಕದ ಹಿತ ಅಡಗಿದೆ. ಬೌದ್ಧ ಧರ್ಮ ಕಾಲದಲ್ಲಿ ಲೋಕಾಯುತ ಹುಟ್ಟಿಕೊಂಡಿತು. ಹನ್ನೆರಡನೇ ಶತಮಾನದಲ್ಲಿ ಲಿಂಗಾಯತ ಧರ್ಮ ಹುಟ್ಟಿಕೊಂಡಿತು. ಬಸವ ಧರ್ಮ ಯಾವುದೋ ಅರಮನೆಯಲ್ಲಿ ಇಲ್ಲವೇ ಯಾಗ–ಯಜ್ಞಾದಿಗಳಿಂದ ಹುಟ್ಟಿದ ಧರ್ಮವಲ್ಲ. ಕನ್ನಡಿಗರ ಧರ್ಮ ಎಂದರೆ ಅದು ಲಿಂಗಾಯತ ಧರ್ಮ ಎಂದು ಬಣ್ಣಿಸಿದರು. ವಿಶ್ವಮಾನ್ಯವಾದ ವೈಜ್ಞಾನಿಕ ಚಿಂತನೆಯಿಂದ ರೂಪಿತವಾದದ್ದು ಬಸವ ಧರ್ಮ. ಬಯಲು ತತ್ವದಿಂದ ರೂಪಿತವಾದ ಈ ಧರ್ಮಕ್ಕೆ ಗಡಿರೇಖೆಗಳಿಲ್ಲ. ಬಸವ ಧರ್ಮ ಒಂದು ಜಾತಿಗೆ ಧರ್ಮಕ್ಕೆ ಸೀಮಿತವಾದದ್ದಲ್ಲ. ಇಡೀ ವಿಶ್ವಕ್ಕೆ ಸಂಬಂಧಿಸಿದ್ದು. ಜಾತಿ, ವರ್ಗ, ಲಿಂಗಸಹಿತವಾಗಿ ಯಾವುದೇ ಭೇದಗಳಿಲ್ಲದವು ವಚನಗಳು. ಬಸವ ಧರ್ಮ ಸಂಸಾರ ಧರ್ಮ. ಸಕಲ ಜೀವಾತ್ಮರಿಗೆ ಸೇರಿದ್ದು. ವಿಶ್ವವೇ ಅದರ ಮಹಾಮನೆ ಎಂದರು. ಭಾರತದ 3 ಸಾವಿರ ವರ್ಷಗಳ ಇತಿಹಾಸದಲ್ಲಿ ಹೊರಹಾಕುವ ಮತ್ತು ಒಳಗೊಳ್ಳುವ ಸಂಸ್ಕೃತಿಗಳ ವಿರುದ್ಧ ಸಾಂಸ್ಕೃತಿಕ ಸಂಘರ್ಷ ನಡೆದಿದೆ. ಲೋಕಾಯುತದಿಂದ ಲಿಂಗಾಯತರ ತನಕ ಮುಂದುವರಿದಿದೆ. ಬೌದ್ಧರ ಸಾಹಿತ್ಯ ಸುಡಲಾಯಿತು. 1 ಲಕ್ಷದ 96 ಸಾವಿರ ಶರಣರನ್ನು ಚೆಲ್ಲಾಪಿಲ್ಲಿ ಮಾಡಿ ಕಲ್ಯಾಣದ ಕ್ರಾಂತಿ ತಡೆಯುವ ಪ್ರತಿ ಕ್ರಾಂತಿ ನಡೆದ ಪ್ರಸಂಗಗಳನ್ನು ವಿವರಿಸಿದರು.

> "ಎಲ್ಲ ಜಾತಿಯ ಜನರಲ್ಲಿ ಮನುವಾದಿ ಇದ್ದಾನೆ. ಸಿಖ್, ಜೈನ, ಮುಸ್ಲಿಂ, ಕ್ರೈಸ್ತ ಮತ್ತು ಎಡಗೈ, ಬಲಗೈ ಸೇರಿದಂತೆ ಎಲ್ಲರೊಳಗೂ ಮನುವಾದಿ ಇದ್ದಾನೆ. ಒಳಗು ಶುದ್ಧ, ಹೊರಗೂ ಶುದ್ಧ ಆಗಬೇಕು. ಆತ್ಮ ವಿಮರ್ಶೆ, ಲೋಕ ವಿಮರ್ಶೆಯೂ ಆಗಬೇಕು. ಕಟ್ಟಕಡೆಯ ಮನುಷ್ಯನನ್ನು ಗುರುತಿಸುವುದು ಬಸವ ಧರ್ಮದ ಆಶಯವಾಗಿದೆ.
> –ರಂಜಾನ್ ದರ್ಗಾ, ಹಿರಿಯ ಸಾಹಿತಿ

ಬಸವ ಪೀಠದ ಸಂದರ್ಶಕ ಪ್ರಾಧ್ಯಾಪಕ ಪ್ರೊ.ಅರವಿಂದ ಮಾಲಗತ್ತಿ ಮಾತನಾಡಿ, ವೇದ, ಪುರಾಣ, ಶಾಸ್ತ್ರ, ಆಗಮಗಳ ಕುರಿತು ವಸ್ತುನಿಷ್ಠ ಚಿಂತನೆಯ ಮೂಡಿಸಲು ಸರಣಿ ಉಪನ್ಯಾಸ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ಈ ಲೋಕವನ್ನು ಬಸವಣ್ಣ, ಭಕ್ತಿಲೋಕವನ್ನಾಗಿ ಪರಿವರ್ತಿಸಿದ್ದಾರೆ. ಸತ್ಯದ ಪಥದ ಕಡೆಗೆ ನಡೆಯುವುದೇ ಬಸವ ತತ್ವದ ಸಾರವಾಗಿದೆ. ಎಲ್ಲ ಜಾತಿ, ವರ್ಗಗಳ ಜನರು ಸೇರಿದ್ದರಿಂದ ಕಲ್ಯಾಣದಲ್ಲಿ ಮಹಾಮನೆ ನಿರ್ಮಾಣವಾಯಿತು ಎಂದು ತಿಳಿಸಿದರು. ವೇದಿಕೆಯಲ್ಲಿ ಕುವೆಂಪು ಕನ್ನಡ ಅಧ್ಯಯನ ಸಂಸ್ಥೆ ನಿರ್ದೇಶಕಿ ಪ್ರೊ.ಎನ್.ಕೆ. ಲೋಲಾಕ್ಷಿ, ಕಾರ್ಯಕ್ರಮದ ಸಂಯೋಜಕ ಡಾ.ಮೈಲಹಳ್ಳಿ ರೇವಣ್ಣ ಇದ್ದರು. ಸಂಶೋಧನಾ ವಿದ್ಯಾರ್ಥಿ ಶಭಾನಾ ನಿರೂಪಿಸಿದರು. ಕೆ.ಎಸ್.ಭವತಾರಿಣಿ ವಚನ ವಾಚಿಸಿದರು.

'ಮಿತ್ರ'ನ ಪತ್ರಕ್ಕೆ ಸ್ಪಂದನೆ


ಗಾಜಿನ ಚೂರುಗಳನ್ನು ತೆರವುಗೊಳಿಸುತ್ತಿರುವ ಸಿದ್ಧಾರ್ಥನಗರ ಸಂಚಾರ ಪೊಲೀಸರು

ಮೈಸೂರು, ಮಾ.3(ಎಂಕೆ)– ಮೈಸೂರಿನ ಜ್ಯೋತಿನಗರದಲ್ಲಿರುವ ಪೊಲೀಸ್ ತರಬೇತಿ ಶಾಲೆ(ಕೇಂದ್ರಿಯ ವಿದ್ಯಾಲಯಕ್ಕೆ ಹೋಗುವ ರಸ್ತೆ) ಎದುರಿನ ರಸ್ತೆ ಬದಿಯಲ್ಲಿ ಬಿದ್ದಿದ್ದ ರಾಶಿ ರಾಶಿ ಗಾಜಿನ ಚೂರುಗಳನ್ನು ತೆರವುಗೊಳಿಸಲಾಗಿದೆ.

ಮಾ.3ರ 'ಮೈಸೂರು ಮಿತ್ರ'ನ ನಿಮ್ಮ ಪತ್ರಗಳಲ್ಲಿ ಪ್ರಕಟಗೊಂಡಿದ್ದ ಸಾಮಾಜಿಕ ಕಾರ್ಯಕರ್ತ ಎಂ.ಎನ್.ಧರಣಿ ವೆಂಕಟೇಶ್ ಎಂಬುವರ 'ಪೊಲೀಸ್ ತರಬೇತಿ ಶಾಲೆ ಮುಂದೆ ಬಿದ್ದಿರುವ ಗಾಜಿನ ಚೂರು ತೆರವುಗೊಳಿಸಿ' ಮನವಿಗೆ ಸ್ಪಂದಿಸಿರುವ ಮೈಸೂರು ನಗರ ಪೊಲೀಸರು, ರಸ್ತೆ ಬದಿಯಲ್ಲಿ ಬಿದ್ದಿದ್ದ ಗಾಜಿನ ಚೂರುಗಳನ್ನು ತೆರವುಗೊಳಿಸಿದ್ದಾರೆ. ಪೊಲೀಸ್ ಹಾಗೂ ಚೆಸ್ಕಾಂ ಅಧಿಕಾರಿ ಮತ್ತು ಸಿಬ್ಬಂದಿಗಳ ಕ್ವಾಟ್ರರ್ಸ್ ಇರುವ ರಸ್ತೆ ಮಾರ್ಗ ಇದಾಗಿದ್ದು, ವಾಹನಗಳ ದಟ್ಟಣೆಯೂ ಹೆಚ್ಚಾಗಿದೆ. ಅಪಘಾತ ಹಾಗೂ ಇನ್ನಿತರೆ ತ್ಯಾಜ್ಯಗಳಿಂದ ಕಳೆದ 3–4 ತಿಂಗಳಿಂದ ರಸ್ತೆ ಬದಿಯಲ್ಲಿ ಗಾಜಿನ ಚೂರುಗಳ ರಾಶಿ ಬಿದ್ದಿದ್ದು, ಸಂಚಾರಕ್ಕೆ ತೀವ್ರ ತೊಂದರೆಯಾಗುತ್ತಿತ್ತು.

ನಿಮ್ಮ ಪತ್ರಗಳಲ್ಲಿ ಮನವಿ ಪ್ರಕಟವಾದ ಕೂಡಲೇ ಸ್ಥಳಕ್ಕೆ ಭೇಟಿ ನೀಡಿದ ಸಿದ್ಧಾರ್ಥನಗರ ಸಂಚಾರ ಪೊಲೀಸ್ ಠಾಣೆಯ ಪಿಎಸ್‌ಐ ರಮೇಶ್, ಸಿಬ್ಬಂದಿಗಳಾದ ದೇವೇಂದ್ರ, ರಾಜೇಶ್ ಸ್ವತಃ ಗಾಜಿನ ಚೂರುಗಳನ್ನು ತೆರವುಗೊಳಿಸಿ, ಗುಂಡಿ ಬಿದ್ದಿದ್ದ ಜಾಗವನ್ನು ಸಮತಟ್ಟು ಮಾಡಿದ್ದಾರೆ.

ಕೆಆರ್ ನಗರ ರೇಪ್ ಸಂತ್ರಸ್ತೆ ಕಿಡ್ನ್ಯಾಪ್ ಕೇಸ್: ಹೈಕೋರ್ಟ್ ಮೊರೆ ಹೋದ ಭವಾನಿ ರೇವಣ್ಣ



ಬೆಂಗಳೂರು, ಮಾ.3–ಕೆ.ಆರ್. ನಗರ ಅತ್ಯಾಚಾರ ಸಂತ್ರಸ್ತೆ ಅಪಹರಣ ಪ್ರಕರಣಕ್ಕೆ ಸಂಬಂಧಿಸಿದಂತೆ ಭವಾನಿ ರೇವಣ್ಣ ಹೈಕೋರ್ಟ್ ಮೊರೆ ಹೋಗಿದ್ದಾರೆ. ಪ್ರಕರಣದಲ್ಲಿ ನಿರೀಕ್ಷಣಾ ಜಾಮೀನು ನೀಡುವಾಗ ವಿಧಿಸಿದ್ದ ಷರತ್ತು ಸಡಿಲಿಕೆ ಮಾಡುವಂತೆ ಮನವಿ ಮಾಡಿದ್ದಾರೆ. ಜಾಮೀನು ಮಂಜೂರು ಮಾಡುವ ವೇಳೆ ಬೆಂಗಳೂರು ಬಿಟ್ಟು ಹೊರಗೆ ಹೋಗುವಂತೆ ಇಲ್ಲ. ಹೊರಗೆ ಹೋಗಬೇಕಾದರೆ ನ್ಯಾಯಾಲಯದ ಅನುಮತಿ ಪಡೆಯಬೇಕು ಎಂದು ಷರತ್ತು ವಿಧಿಸಲಾಗಿದೆ. ಕೋರ್ಟ್ ವಿಧಿಸಿದ ಈ ಷರತ್ತನ್ನು ಸಡಿಲಿಕೆ ಮಾಡುವಂತೆ ಮನವಿ ಮಾಡಿದ್ದು, ಹೈಕೋರ್ಟ್ ಅರ್ಜಿ ವಿಚಾರಣೆ ಮುಂದೂಡಿಕೆ ಮಾಡಿದೆ.

ಶಾಸಕರ ಸಂಬಳ ಶೇ.50ರಷ್ಟು ಹೆಚ್ಚಳ

ಬೆಂಗಳೂರು: ಅತ್ತ ರಾಜ್ಯ ಸರ್ಕಾರ ದಿನದಿಂದ ದಿನಕ್ಕೆ ಜನ ಸಾಮಾನ್ಯರಿಗೆ ಬೆಲೆ ಏರಿಕೆ ಬಿಸಿಯನ್ನು ನೀಡುತ್ತಿದೆ. ಮತ್ತೊಂದೆಡೆ ಇದೀಗ ಶಾಸಕರ ಸಂಬಳ ಹೆಚ್ಚಳ ಮಾಡಲು ನಿರ್ಣಯ ಮಾಡಲಾಗಿದೆ. ಕಲಾಪ ಸಲಹಾ ಸಮಿತಿಯಲ್ಲಿ ನಡೆದ ಬಿಸಿಎ ಸಭೆಯಲ್ಲಿ ಶಾಸಕರಿಗೆ ಶೇ.50 ರಷ್ಟು ಸಂಬಳ ಹೆಚ್ಚಳ ಮಾಡಲು ನಿರ್ಣಯಿಸಲಾಗಿದೆ. ಕಳೆದ ಬಾರಿ ಅಧಿವೇಶನ ವೇಳೆ ಸಂಬಳ ಹೆಚ್ಚಳದ ಬಗ್ಗೆ ವಿಧಾನಸಭೆ ವಿಪಕ್ಷ ಉಪನಾಯಕ ಅರವಿಂದ ಬೆಲ್ಲದ್ ಮಾತನಾಡಿದ್ದರು. ಈ ವೇಳೆ ಶಾಸಕರ ವೇತನ ಹೆಚ್ಚಳಕ್ಕೆ ಆಯೋಗ ಮಾಡಿ ಎಂದೂ ಬೆಲ್ಲದ್ ಒತ್ತಾಯಿಸಿದ್ದರು.

ಶಾಸಕರ ಕ್ಲಬ್‌ಗೆ 20 ಕೋಟಿ: ಇದೀಗ ಬಿಎಸಿ ಸಭೆಯಲ್ಲಿ ಶಾಸಕರ ಸಂಬಳ ಹೆಚ್ಚಳ ಮಾಡಲು ತೀರ್ಮಾನಿಸಲಾಗಿದ್ದು ಮಾತ್ರವಲ್ಲದೆ, ಶಾಸಕರ ಕ್ಲಬ್‌ಗೆ 20 ಕೋಟಿ ಅನುದಾನ ನೀಡಲು ನಿರ್ಣಯಿಸಲಾಗಿದೆ.

ಪ್ರಸ್ತುತ ಶಾಸಕರ ಸಂಬಳ ಎಷ್ಟಿದೆ: ರಾಜ್ಯದ ಶಾಸಕರಾದವರಿಗೆ ಪ್ರಸ್ತುತ ಮಾಸಿಕ ವೇತನ 40,000 ರೂಪಾಯಿಗಳಷ್ಟಿದೆ. ಇದು ವೇತನ ಮಾತ್ರ ಆಗಿದ್ದು, ಇದರ ಹೊರತಾಗಿ ತಮ್ಮ ಕ್ಷೇತ್ರ ಪ್ರಯಾಣ ಭತ್ಯೆ ರೂಪದಲ್ಲಿ ಪ್ರತಿ ತಿಂಗಳು 60,000 ರೂಪಾಯಿ, ಸಭೆಗೆ ಹಾಜರಾದರೆ 7,000 ರೂಪಾಯಿ, ದೂರವಾಣಿ, ಮೊಬೈಲ್ ಖರ್ಚಿಗಾಗಿ 20,000 ರೂಪಾಯಿ ಭತ್ಯೆ ಸಿಗುತ್ತದೆ. ಅಷ್ಟೇ ಅಲ್ಲದೆ, ವಾರ್ಷಿಕ ಪ್ರಯಾಣ ಭತ್ಯೆ 2.50 ಲಕ್ಷ ರೂಪಾಯಿ ಸಿಗುತ್ತದೆ.

ವಿಧಾನಪರಿಷತ್ ವಿರೋಧ ಪಕ್ಷದ ಮುಖ್ಯ ಸಚೇತಕರಾಗಿ ಎನ್.ರವಿಕುಮಾರ್ ನೇಮಕ


ರವಿಕುಮಾರ್

ಬೆಂಗಳೂರು, ಮಾ.3– ವಿಧಾನ ಪರಿಷತ್ ವಿರೋಧ ಪಕ್ಷದ ಮುಖ್ಯ ಸಚೇತಕರಾಗಿ ಬಿಜೆಪಿ ಎಂಎಲ್‌ಸಿ ಎನ್.ರವಿಕುಮಾರ್ ಅವರನ್ನು ಸೋಮವಾರ ನೇಮಕ ಮಾಡಲಾಗಿದೆ ಇಂದು ವಿಧಾನ ಪರಿಷತ್ ವಿರೋಧ ಪಕ್ಷದ ನಾಯಕ ಛಲವಾದಿ ನಾರಾಯಣಸ್ವಾಮಿ ಅವರು ಸಭಾಪತಿ ಬಸವರಾಜ ಹೊರಟ್ಟಿ ಅವರಿಗೆ ಪತ್ರ ಬರೆದು ಮಾಹಿತಿ ನೀಡಿದ್ದಾರೆ.

ಛಲವಾದಿ ನಾರಾಯಣಸ್ವಾಮಿ ಅವರು ಬರೆದಿರುವ ಪತ್ರದಲ್ಲಿ ಕರ್ನಾಟಕ ವಿಧಾನಪರಿಷತ್ ಸದಸ್ಯರಾದಂತಹ ರವಿಕುಮಾರ್ ಅವರನ್ನು ವಿಧಾನಪರಿಷತ್ ವಿರೋಧ ಪಕ್ಷದ ಮುಖ್ಯ ಸಚೇತಕರಾಗಿ ನೇಮಿಸಿರುವುದಾಗಿ ತಿಳಿಸಿದ್ದಾರೆ. ವಿಧಾನ ಪರಿಷತ್ ವಿರೋಧ ಪಕ್ಷದ ಮುಖ್ಯ ಸಚೇತಕರಾಗಿ ನೇಮಕಗೊಂಡ ರವಿಕುಮಾರ್ ಅವರನ್ನು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಮತ್ತು ಬಿಜೆಪಿ ಹಿರಿಯ ನಾಯಕ, ಮಾಜಿ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ಅಭಿನಂದಿಸಿದ್ದಾರೆ.

ನೋಂದಣಿ ಇಲ್ಲದೆ ವ್ಯವಹರಿಸುವ ಮೈಕ್ರೋ ಫೈನಾನ್ಸ್ ವಿರುದ್ಧ ಕ್ರಮ: ಡಿಸಿ


ಲಕ್ಷ್ಮಿಕಾಂತ್ ರೆಡ್ಡಿ

ಮೈಸೂರು, ಮಾ.3(ಎಂಕೆ)– ಕಾಯಿದೆಯನ್ವಯ ನೋಂದಣಿ ಮಾಡಿಕೊಳ್ಳದೆ ವಹಿವಾಟು ನಡೆಸುವ ಮೈಕ್ರೋ ಫೈನಾನ್ಸ್ ಸಂಸ್ಥೆಗಳ ವಿರುದ್ಧ ಕ್ರಮ ಕೈಗೊಳ್ಳಲಾಗುವುದು ಎಂದು ಜಿಲ್ಲಾಧಿಕಾರಿ ಜಿ. ಲಕ್ಷ್ಮಿಕಾಂತ್ ರೆಡ್ಡಿ ಎಚ್ಚರಿಕೆ ನೀಡಿದರು. ಜಿಪಂ ಸಭಾಂಗಣದಲ್ಲಿ ಸೋಮವಾರ ಮೈಕ್ರೋ ಫೈನಾನ್ಸ್ ಸಂಸ್ಥೆಗಳ ಪ್ರತಿನಿಧಿಗಳ ಸಭೆ ನಡೆಸಿದ ಅವರು, ಸರ್ಕಾರದಿಂದ ಕರ್ನಾಟಕ ಕಿರು (ಮೈಕ್ರೋ)ಸಾಲ ಮತ್ತು ಸಣ್ಣ ಸಾಲ (ಬಲವಂತದ ಕ್ರಮಗಳ ಪ್ರತಿಬಂಧಕ) ಅಧ್ಯಾದೇಶ 2025ರಂತೆ ಎಲ್ಲಾ ಮೈಕ್ರೋ ಫೈನಾನ್ಸ್ ಸಂಸ್ಥೆಗಳು ಕಡ್ಡಾಯವಾಗಿ ನೋಂದಣಿ ಮಾಡಿಸಿಕೊಳ್ಳತಕ್ಕದ್ದು, ಈ ಕಾರ್ಯಕ್ಕಾಗಿ ಸಹಕಾರ ಸಂಘಗಳ ಉಪನಿಬಂಧಕರು, ಮೈಸೂರು ಜಿಲ್ಲೆ ಇವರನ್ನು ನೋಡಲ್ ಅಧಿಕಾರಿಯನ್ನಾಗಿ ನೇಮಕ ಮಾಡಲಾಗಿದೆ.

ಸದರಿಯವರ ಕಚೇರಿಯಲ್ಲಿ ನಿಗಧಿತ ನಮೂನೆಯಲ್ಲಿ ಅರ್ಜಿ ಪಡೆದು, ಭರ್ತಿ ಮಾಡಿದ ಅರ್ಜಿಯನ್ನು ದಾಖಲೆಗಳೊಂದಿಗೆ ನೋಡಲ್ ಅಧಿಕಾರಿಗಳಿಗೆ ಸಲ್ಲಿಸುವಂತೆ ಸೂಚಿಸಿದರು.

ಕಾಯಿದೆಯನ್ವಯ ನೋಂದಣಿ ಮಾಡಿಕೊಳ್ಳದೆ ವಹಿವಾಟು ನಡೆಸುವ ಸಂಸ್ಥೆಗಳ ವಿರುದ್ಧ ಕಾನೂನು ಕ್ರಮ ಜರುಗಿಸಲಾಗುವುದೆಂದು. ಹೆಚ್ಚಿನ ಮಾಹಿತಿಗಾಗಿ ಸಹಕಾರ ಸಂಘಗಳ ಉಪನಿಬಂಧಕರು, ಮೈಸೂರು ಜಿಲ್ಲೆ ಇವರನ್ನು ಸಂಪರ್ಕಿಸಲು ತಿಳಿಸಿದರು. ಜಿಪಂ ಸಿಇಓ ಎಸ್.ಹುಕೇಶ್ ಕುಮಾರ್ ಹಾಗೂ ಮೈಕ್ರೋ ಫೈನಾನ್ಸ್ ಸಂಸ್ಥೆ ಪ್ರತಿನಿಧಿಗಳು ಉಪಸ್ಥಿತರಿದ್ದರು.

ಭೂಮಾಪನ ಕಂದಾಯ ವ್ಯವಸ್ಥೆ ಮತ್ತು ಭೂ ದಾಖಲೆಗಳ ಇಲಾಖೆಯ 8 ಮಂದಿ ಉಪ ನಿರ್ದೇಶಕರಿಗೆ ಮುಂಬಡ್ತಿ

ಮೈಸೂರು, ಮಾ.3(ಎಸ್‌ಪಿಎನ್)– ಭೂಮಾಪನ ಕಂದಾಯ ವ್ಯವಸ್ಥೆ ಮತ್ತು ಭೂ ದಾಖಲೆಗಳ ಇಲಾಖೆಯ 8 ಮಂದಿ ಉಪ ನಿರ್ದೇಶಕರಿಗೆ ಭೂ ದಾಖಲೆಗಳ ಜಂಟಿ ನಿರ್ದೇಶಕರ ಹುದ್ದೆಗೆ ಮುಂಬಡ್ತಿ ನೀಡಿ, ಸ್ಥಳಕ್ಕೆ ನಿಯುಕ್ತಿಗೊಳಿಸಿ ಸರ್ಕಾರ ಆದೇಶಿಸಿದೆ. ಶಿವಮೊಗ್ಗ ಜಿಲ್ಲಾಧಿಕಾರಿಗಳ ಕಚೇರಿಯ ತಾಂತ್ರಿಕ ಸಹಾಯಕ ಹಾಗೂ ಪದನಿಮಿತ್ತ ಭೂ ದಾಖಲೆಗಳ ಉಪ ನಿರ್ದೇಶಕ ಹುದ್ದೆಯಲ್ಲಿದ್ದ ಶ್ರೀನಿವಾಸ್ ಅವರನ್ನು ಮೈಸೂರು ಭೂಮಾಪನ ಮತ್ತು ಕಂದಾಯ ನಿರ್ಣಯ ತರಬೇತಿ ಸಂಸ್ಥೆಯ ಪ್ರಾಚಾರ್ಯ ಹುದ್ದೆಗೆ ಬಡ್ತಿ ನೀಡಿ ವರ್ಗಾವಣೆಗೊಳಿಸಿದೆ. ಇವರು ಸೇರಿದಂತೆ ಒಟ್ಟು 8 ಮಂದಿಗೆ ವಿವಿಧ ಹುದ್ದೆಗಳಿಗೆ ಬಡ್ತಿ ನೀಡಿ, ವಿವಿಧ ಸ್ಥಳಗಳಿಗೆ ವರ್ಗಾವಣೆಗೊಳಿಸಿದೆ ಎಂದು ಕಂದಾಯ ಇಲಾಖೆ(ಭೂಮಾಪನ) ಅಧೀನ ಕಾರ್ಯದರ್ಶಿ ಎಸ್. ಗುರುಮೂರ್ತಿ ಆದೇಶದಲ್ಲಿ ತಿಳಿಸಿದ್ದಾರೆ.

ಇಂದು ಹನಸೋಗೆಯಲ್ಲಿ ಶ್ರೀ ಶ್ರೀನಿವಾಸ ದೇವರ ಬ್ರಹ್ಮರಥೋತ್ಸವ

ಮೈಸೂರು, ಮಾ.3– ಜಿಲ್ಲೆಯ ಸಾಲಿಗ್ರಾಮ ತಾಲೂಕು, ಹನಸೋಗೆ ಗ್ರಾಮದಲ್ಲಿ ಮಂಗಳವಾರ(ಮಾ.4) ಶ್ರೀ ಶ್ರೀನಿವಾಸ ದೇವರ ಬ್ರಹ್ಮ ರಥೋತ್ಸವ ಜರುಗಲಿದೆ. ಮಾ.1ರಿಂದ ವಿವಿಧ ಪೂಜಾ ಕೈಂಕರ್ಯಗಳು ಜರುಗಿದ್ದು, ಬ್ರಹ್ಮ ರಥೋತ್ಸವದ ಬಳಿಕ ಮಾ.7ರವರೆಗೂ ಉತ್ಸವ ಮುಂದುವರೆಯಲಿದೆ. ಶ್ರೀ ಶ್ರೀನಿವಾಸ ಸೇವಾ ಸಮಿತಿ ಹಾಗೂ ಹನಸೋಗೆ ಗ್ರಾಮಸ್ಥರ ಸಹಕಾರದೊಂದಿಗೆ ಉತ್ಸವ ಜರುಗುತ್ತಿದ್ದು, ಪ್ರತಿದಿನ ಸೇವಾರ್ಥದಾರರಿಂದ ಉತ್ಸವಾದಿಗಳು, ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ.

ಗೃಹಲಕ್ಷ್ಮಿ ಯೋಜನೆ; ಎಲ್ಲರಿಗೂ ಹಣ ಸಿಗುತ್ತೆ



ಬೆಂಗಳೂರು: ಗೃಹಲಕ್ಷ್ಮಿ ಯೋಜನೆಯಲ್ಲಿ ಯಾವುದೇ ಪರಿಷ್ಕರಣೆ ಮಾಡಲ್ಲ ಎಂದು ಮಹಿಳಾ ಮತ್ತು ಮಕ್ಕಳ ಕಲ್ಯಾಣ ಸಚಿವೆ ಲಕ್ಷ್ಮಿ ಹೆಬ್ಬಾಳ್ಕರ್ ಸ್ಪಷ್ಟಪಡಿಸಿದ್ದಾರೆ. ವಿಧಾನಸೌಧದಲ್ಲಿ ಮಾತನಾಡಿದ ಅವರು, ನಾವು ಯಾವುದೇ ಫಿಲ್ಟರ್ ಮಾಡುತ್ತಿಲ್ಲ. ಎಲ್ಲರಿಗೂ ಹಣ ಸಿಗುತ್ತದೆ. ಯಾವುದೇ ಗೊಂದಲ ಬೇಡ, ಐದು ವರ್ಷ ಮಾತಿನಂತೆ ನಡೆಯುತ್ತೇವೆ. ಗೃಹಲಕ್ಷ್ಮಿ ನಗದು ಹಾಕುವುದು ಸಲ್ಪ ವಿಳಂಬವಾಗಿತ್ತು, ಇದೀಗ ಎಲ್ಲಾ ಸರಿಯಾಗಿದೆ. ಈಗ ಎರಡು ತಿಂಗಳ ಕಂತು ಬಿಡುಗಡೆಯಾಗುತ್ತದೆ ಎಂದು ಹೇಳಿದರು. ಸಿ.ಟಿ.ರವಿ ಗಲಾಟೆ ಪ್ರಕರಣಕ್ಕೆ ಸಂಬಂಧಪಟ್ಟಂತೆ ಪ್ರತಿಕ್ರಿಯಿಸಿದ ಅವರು, ನಾನು ಇಂದು ಸದನಕ್ಕೆ ಬಂದಿದ್ದೇನೆ. ನಿಮಗೆ ಎಷ್ಟು ಮಾಹಿತಿ ಇದೆಯೋ ನನಗೂ ಅಷ್ಟೇ ಮಾಹಿತಿ ಇದೆ. ಎಥಿಕ್ಸ್ ಕಮಿಟಿಗೆ ಕೊಟ್ಟಿರೋ ವಿಚಾರದ ಬಗ್ಗೆ ಗೊತ್ತಿಲ್ಲ. ನಾನು ಆಸ್ಪತ್ರೆಯಲ್ಲಿ ಇದ್ದಾಗ ಹೊರಟ್ಟಿ ಅವರು ಆಸ್ಪತ್ರೆಗೆ ಬಂದಿದ್ದರು ಎಂದರು.

ನಿಧನ

ಷಾ ಯಾಖೂಬ್ ಮೊಹಮ್ಮದ್ ಮಸೂದ್ ಫೌಜ್‌ದಾರ್



ಮೈಸೂರು, ಮಾ.3–ಹಿರಿಯ ನಿಷ್ಠಾವಂತ ಕಾಂಗ್ರೆಸ್ ಮುಖಂಡರು, ಕರ್ನಾಟಕ ಮೈನಾರಿಟಿ ಡೆವಲಪ್‌ಮೆಂಟ್ ಕಾರ್ಪೋರೇಷನ್ ಮಾಜಿ ಅಧ್ಯಕ್ಷರು ಹಾಗೂ ಚನ್ನಪಟ್ಟಣ ನಿವಾಸಿಯಾದ ಷಾ ಯಾಖೂಬ್ ಮೊಹಮ್ಮದ್ ಮಸೂದ್ ಫೌಜ್‌ದಾರ್ ಭಾನುವಾರ (ಮಾ.2) ನಿಧನರಾದರು. ಮೃತರು ಪತ್ನಿ, ಪುತ್ರ, ಪುತ್ರಿ ಹಾಗೂ ಅಪಾರ ಬಂಧು ಮಿತ್ರರನ್ನು ಅಗಲಿದ್ದಾರೆ. ಈ ಸಂಬಂಧ ಮಾ.3ರ ಮಧ್ಯಾಹ್ನ 3 ಗಂಟೆಗೆ ಝೋಹರ್ ಪ್ರಾರ್ಥನೆಯ ನಂತರ ಚನ್ನಪಟ್ಟಣದ ಹಷ್ಮಿ ಮಸೀದಿಯಲ್ಲಿ ನಮಾಝ್–ಎ–ಜನಾಜ ನಡೆಯಿತು. ಬಳಿಕ ಚನ್ನಪಟ್ಟಣದ ಟಿ.ಕೆ. ರಸ್ತೆಯಲ್ಲಿರುವ ಚೋಟಿಾ ಖಬರಸ್ಥಾನ್‌ನಲ್ಲಿ ಅಂತ್ಯಕ್ರಿಯೆ ನೆರವೇರಿಸಲಾಯಿತು ಎಂದು ಕುಟುಂಬದ ಮೂಲಗಳು ತಿಳಿಸಿವೆ.

ನಂದಿನಮ್ಮ



ನಂಜನಗೂಡು, ಮಾ.3– ತಾಲೂಕಿನ ಹೆಮ್ಮರಗಾಲ ಗ್ರಾಮದ ಪಟೇಲ್ ಶಂಕರಪ್ಪ ಅವರ ಸಹೋದರಿ ಹಾಗೂ ದಿ.ಎನ್.ಎ. ಗುರುಸಿದ್ದಪ್ಪ ಅವರ ಪತ್ನಿ ನಂದಿನಮ್ಮ(76) ಸೋಮವಾರ ನಿಧನರಾದರು.ಮೃತರು ಅಪಾರ ಬಂಧು–ಬಳಗ ಅಗಲಿದ್ದು, ಅಂತ್ಯಕ್ರಿಯೆ ನಾಳೆ(ಮಾ.4) ಮಧ್ಯಾಹ್ನ ಸ್ವಗ್ರಾಮದಲ್ಲಿರುವ ಅವರ ಜಮೀನಿನಲ್ಲಿ ನೆರವೇರಲಿದೆ ಎಂದು ಕುಟುಂಬದ ಮೂಲಗಳು ತಿಳಿಸಿವೆ.

ಮೈಸೂರು ಹಾಗೂ ಸುತ್ತಮುತ್ತ ಇಂದು...



ಇಂದಿನ ಪಂಚಾಂಗ

04.03.2025 ಮಂಗಳವಾರ, ಮಳೆ ನಕ್ಷತ್ರ: ಪೂರ್ವಭಾದ್ರಾ 04.03.2025 ರಿಂದ 16.03.2025
ಕ್ರೋಧಿನಾಮ ಸಂವತ್ಸರ, ಉತ್ತರಾಯಣ, ಶಿಶಿರ ಋತು, ಫಾಲ್ಗುಣ ಮಾಸ, ಶುಕ್ಲ ಪಕ್ಷ,
ತಿಥಿ: ಪಂಚಮಿ, ನಕ್ಷತ್ರ: ಅಶ್ವಿನಿ, ರಾಹುಕಾಲ: ಮಧ್ಯಾಹ್ನ 3 ರಿಂದ 4.30 ರವರೆಗೆ

■ **ನಂಜನಗೂಡು ಶ್ರೀ ರಾಘವೇಂದ್ರ ಸ್ವಾಮಿಗಳವರ ಮಠ :** ಗುರು ವೈಭವೋತ್ಸವ–2025, ಬೆಳಗ್ಗೆ 7 ರಿಂದ ಅಷ್ಟದ್ರವ್ಯ ಮಹಾಗಣಪತಿ ಹೋಮ, ಸ್ಥಳ: ಮಠದ ಪ್ರಾಂಗಣ, ಸುಬ್ಬರಾಯನಕೆರೆ.

■ **ಜೆಎಸ್‌ಎಸ್ ಆಯುರ್ವೇದ ಆಸ್ಪತ್ರೆ:** ಬೆಳಗ್ಗೆ 6.30ರಿಂದ ಯೋಗ ಮಾಡಿ ಆರೋಗ್ಯವಾಗಿರಿ, ದೇಹ, ಮನಸ್ಸುಗಳ ಆರೋಗ್ಯಕ್ಕಾಗಿ ಯೋಗಾಭ್ಯಾಸ ತರಗತಿ, ಬೆಳಗ್ಗೆ 9 ರಿಂದ ಇಸುಬು ತಪಾಸಣಾ ಶಿಬಿರ, ಸ್ಥಳ: ಜೆಎಸ್‌ಎಸ್ ಆಯುರ್ವೇದ ಆಸ್ಪತ್ರೆ, ಲಲಿತಾದ್ರಿ ರಸ್ತೆ, ಆಲನಹಳ್ಳಿ.

■ **ರಾಮ್‌ಸನ್ಸ್ ಪ್ರತಿಷ್ಠಾನ:** ಬೊಂಬೆ ಮನೆ, ದಸರೆ ಬೊಂಬೆ ಪ್ರದರ್ಶನ, ಸ್ಥಳ: ರಾಮ್‌ಸನ್ಸ್ ಬೊಂಬೆ ಮನೆ, 91, ಆಮ್ರಪಾಲಿ ಸೀರೆ ಮಳಿಗೆ ಮೇಲೆ, ನಜರ್‌ಬಾದ್ ಮುಖ್ಯರಸ್ತೆ, ಬೆಳಗ್ಗೆ 10ಕ್ಕೆ.

■ **ಶ್ರೀ ರಾಘವೇಂದ್ರ ಸ್ವಾಮಿ ಸೇವಾ ಸಮಿತಿ :** ಶ್ರೀ ರಾಘವೇಂದ್ರ ಸ್ವಾಮಿಗಳ ಪಟ್ಟಾಭಿಷೇಕ ಹಾಗೂ ವರ್ಧಂತಿ ಮಹೋತ್ಸವ, ಬೆಳಗ್ಗೆ 6.30ರಿಂದ ಶ್ರೀ ವೇದವ್ಯಾಸ ಅಷ್ಟಾಕ್ಷರ ಮಂತ್ರ ಮಹಾಯಾಗ ಹಾಗೂ ಪುರುಷಸೂಕ್ತ ಹೋಮ, ಶ್ರೀ ಸೂಕ್ತ ಹೋಮ, ಸ್ಥಳ: ಮಠದ ಪ್ರಾಂಗಣ, ಜಯಲಕ್ಷ್ಮೀಪುರಂ.

■ **ಎಂಎಂಕೆ ಮತ್ತು ಎಸ್‌ಡಿಎಂ ಮಹಿಳಾ ಮಹಾವಿದ್ಯಾಲಯ, ಕನ್ನಡ ವಿಭಾಗ, ಐಕ್ಯೂಎಸಿ, ಶರಣ ಸಾಹಿತ್ಯ ಪರಿಷತ್ತು, ನಗರ ಘಟಕ :** ಬೆಳಗ್ಗೆ 10.15ಕ್ಕೆ ವಚನ ಸಾಹಿತ್ಯ ವರ್ತಮಾನದ ಸ್ಪಂದನೆ ಒಂದು ದಿನದ ಅಂತರರಾಷ್ಟ್ರೀಯ ವಿಚಾರ ಸಂಕಿರಣ, ಉದ್ಘಾಟನೆ : ಸಂದರ್ಶಕ ಪ್ರಾಧ್ಯಾಪಕ ಡಾ. ಅರವಿಂದ ಮಾಲಗತ್ತಿ, ಅಧ್ಯಕ್ಷತೆ : ಎಂಎಂಕೆ ಮತ್ತು ಎಸ್‌ಡಿಎಂ ಮಹಿಳಾ ಮಹಾವಿದ್ಯಾಲಯ ಪ್ರಿನ್ಸಿಪಾಲ್ ಪ್ರೊ. ಎನ್. ಭಾರತಿ, ಉಪಸ್ಥಿತರು : ಐಕ್ಯೂಎಸಿ ಸಂಯೋಜಕರಾದ ಶ್ರೀಮತಿ ಕೆ.ಎಸ್. ಸುಕೃತ, ಸಂಚಾಲಕರಾದ ಡಾ. ವಿನೋದ; ಸಂಜೆ 4.30ಕ್ಕೆ ಸಮಾರೋಪ ಸಮಾರಂಭ, ಸಮಾರೋಪ ನುಡಿ : ಕುವೆಂಪು ಕನ್ನಡ ಅಧ್ಯಯನ ಸಂಸ್ಥೆ ನಿರ್ದೇಶಕರಾದ ಪ್ರೊ. ಎನ್.ಕೆ. ಲೋಲಾಕ್ಷಿ, ಅಧ್ಯಕ್ಷತೆ : ಶರಣ ಸಾಹಿತ್ಯ ಪರಿಷತ್, ಮೈಸೂರು ನಗರ ಘಟಕದ ಅಧ್ಯಕ್ಷ ಮ.ಗು. ಸದಾನಂದಯ್ಯ, ಉಪಸ್ಥಿತರು : ಎಂಎಂಕೆ ಮತ್ತು ಎಸ್‌ಡಿಎಂ ಮಹಿಳಾ ಮಹಾವಿದ್ಯಾಲಯ ಪ್ರಿನ್ಸಿಪಾಲ್ ಪ್ರೊ. ಎನ್. ಭಾರತಿ, ಪ್ರಾಧ್ಯಾಪಕರಾದ ಪ್ರೊ. ಡಿ.ಎಸ್. ಸದಾಶಿವಮೂರ್ತಿ, ಪ್ರಾಂಶುಪಾಲರಾದ ಪ್ರೊ. ನಯನಕುಮಾರಿ, ಸ್ಥಳ: ಕಾಲೇಜು ಸಭಾಂಗಣ, ಕೃಷ್ಣಮೂರ್ತಿಪುರಂ.

■ **ಸರ್ಕಾರಿ ಆಯುರ್ವೇದ ವೈದ್ಯಕೀಯ ಕಾಲೇಜು ಮತ್ತು ಆಸ್ಪತ್ರೆ, ಮೈಸೂರು ವಿಶ್ವವಿದ್ಯಾನಿಲಯದ ಸಸ್ಯಶಾಸ್ತ್ರ ಅಧ್ಯಯನ ವಿಭಾಗ:** ಯಕ್ಷ್ಮ ಸಂವಾದ ಮತ್ತು ಆಯುಷ್4ಯು ಜರ್ನಲ್ ಬಿಡುಗಡೆ ಸಮಾರಂಭ, ಉದ್ಘಾಟನೆ: ಮೈಸೂರು ವಿವಿ ಕುಲಪತಿ ಪ್ರೊ. ಎನ್.ಕೆ. ಲೋಕನಾಥ್, ಕಿದ್ವಾಯಿ ನಿವೃತ್ತ ನಿರ್ದೇಶಕರಾದ ಡಾ.ವಿಜಯಲಕ್ಷ್ಮಿ ದೇಶಮನೆ ಅವರಿಂದ ಆಯುಷ್4ಯು ಜರ್ನಲ್ ಬಿಡುಗಡೆ, ಪ್ರಾಸ್ತಾವಿಕ ನುಡಿ : ಆದಿಚುಂಚನಗಿರಿ ವಿಶ್ವವಿದ್ಯಾನಿಲಯ ಕುಲಪತಿ ಡಾ.ಎಂ.ಎ.ಶೇಖರ್, ಮುಖ್ಯ ಅತಿಥಿಗಳು: ಡಾ.ಕೆ.ಮಧು, ಡಾ.ರಾಜ್‌ಕುಮಾರ್ ಹೆಚ್. ಗರಂಪಲ್ಲಿ, ಡಾ.ಎಲ್.ಎನ್.ಶೆಣೈ, ಅಧ್ಯಕ್ಷತೆ: ಕಾಲೇಜು ಪ್ರಿನ್ಸಿಪಾಲ್ ಡಾ.ಕೆ.ಎಸ್.ರಾಧಾಕೃಷ್ಣ ರಾಮರಾವ್, ಸ್ಥಳ: ವಿಜ್ಞಾನ ಭವನ, ಮೈಸೂರು ವಿವಿ, ಬೆಳಗ್ಗೆ 10ಕ್ಕೆ.

■ **ಶ್ರೀ ಕ್ಷೇತ್ರ ದಂಡಿನಮಾರಮ್ಮ ದೇವಸ್ಥಾನ:** ಶ್ರೀ ಮನೆ ಮಂಚಮ್ಮ ದಂಡಿನಮಾರಮ್ಮ ಮತ್ತು ಬಿಸಿಲುಮಾರಮ್ಮ ಜಾತ್ರಾ ಮಹೋತ್ಸವ, ಸ್ಥಳ: ದೇವಸ್ಥಾನ, ಮೈಸೂರು–ಬೆಂಗಳೂರು ರಸ್ತೆ.

■ **ದಲಿತ ಸಂಘರ್ಷ ಸಮಿತಿ:** ದಲಿತ ಚಳುವಳಿಯ ವರ್ತಮಾನದ ಸವಾಲುಗಳು ಮತ್ತು ಮಾರ್ಗೋಪಾಯಗಳು ಕುರಿತು ವಿಚಾರ ಸಂಕಿರಣ, ಮೈಸೂರು ವಿಭಾಗೀಯ ಸರ್ವ ಸದಸ್ಯರ ಸಭೆ, ಅಧ್ಯಕ್ಷತೆ: ರಾಜ್ಯ ಪ್ರಧಾನ ಸಂಚಾಲಕ ಮಾವಳ್ಳಿ ಶಂಕರ್, ಉದ್ಘಾಟನೆ: ಮೈಸೂರು ಜಿಲ್ಲಾ ಪತ್ರಕರ್ತರ ಸಂಘದ ಅಧ್ಯಕ್ಷ ಕೆ. ದೀಪಕ್, ಮುಖ್ಯ ಅತಿಥಿಗಳು: ದಲಿತ ಸಾಹಿತ್ಯ ಪರಿಷತ್ ಸಂಯೋಜಕ ಡಾ. ಚಂದ್ರಗುಪ್ತ್, ಸ್ಥಳ: ಐಡಿಯಲ್ ಜಾವಾ ರೋಟರಿ ಸಭಾಂಗಣ, ಜೆಎಲ್‌ಬಿ ರಸ್ತೆ, ಬೆಳಗ್ಗೆ 11ಕ್ಕೆ.

ಮೈಸೂರು ಆಕಾಶವಾಣಿ



ಬೆಳಗ್ಗೆ: 6.10 ಚಿಂತನ, 6.15 ಗೀತಾರಾಧನ, 6.35 ಮತ್ತು ಸಂಜೆ 6.10 ಶ್ರದ್ಧೆಯ ಶಿಲ್ಪ–ಕರ್ನಾಟಕದ ಪ್ರಾಚೀನ ದೇವಾಲಯಗಳ ಪರಿಚಯ ಮಾಲಿಕೆ, ಲೇಖನ ಮತ್ತು ಪ್ರಸ್ತುತಿ: ಟಿ. ಎಸ್. ಗೋಪಾಲ್, ಪ್ರಾಯೋಜಕರು: ಅದಮ್ಯ ಚೇತನ ಫೌಂಡೇಶನ್, ಬೆಂಗಳೂರು, 6.40 ಅರಿವಿನ ಶಿಖರ–ಸರ್ವಜ್ಞನ ತ್ರಿಪದಿಗಳನ್ನಾಧರಿಸಿದ ಬಾನುಲಿ ಸರಣಿ, ಗಾಯನ–ಎಂ. ರಾಘವೇಂದ್ರ, ನಿತಿನ್ ರಾಜಾರಾಂ ಶಾಸ್ತ್ರಿ, ಟಿ. ಎಸ್. ಸ್ನೇಹಾ, ವ್ಯಾಖ್ಯಾನ–ಡಾ. ಸಿ. ನಾಗಣ್ಣ, 6.50 ರೈತರಿಗೆ ಸಲಹೆ, 7.15 ಕಾದಂಬರಿ ವಿಹಾರ: ಎಂ. ಆರ್. ಶ್ರೀನಿವಾಸಮೂರ್ತಿಯವರ ರಂಗಣ್ಣನ ಕನಸಿನ ದಿನಗಳು ಕಾದಂಬರಿಯ ಬಾನುಲಿ ಓದು. ಪ್ರಸ್ತುತಿ : ಉಮೇಶ್. ಎಸ್.ಎಸ್., 8.30 ಕರೆಗೊಂದು ಗೀತೆ– ಶ್ರೋತೃಗಳ ಮೆಚ್ಚಿನ ಚಿತ್ರಗೀತೆಗಳ ನೇರ ಫೋನ್ ಇನ್ ಕಾರ್ಯಕ್ರಮ, 10.00 ಕರ್ನಾಟಕ ಶಾಸ್ತ್ರೀಯ ಸಂಗೀತ, 11.00 ನಿಮ್ಮೊಂದಿಗೆ ಮೈಸೂರು ಆಕಾಶವಾಣಿ–ಕಥೆಯಲ್ಲಿದೆ ಉತ್ತರ, ಪ್ರಸ್ತುತಿ : ಪ್ರಭುಸ್ವಾಮಿ ಮಳಿಮಠ್ ಹಾಗೂ ಕಾರ್ತಿಕ್. ಎಂ. ಎಸ್.

ಮಧ್ಯಾಹ್ನ: 12.05 ವನಿತಾ ವಿಹಾರ–ಲೇಖಕಿ ಹಾಗೂ ಗಮಕಿ ಪದ್ಮಿನಿ ಶ್ರೀನಿವಾಸನ್ ಅವರೊಂದಿಗೆ ಮಾತುಕತೆ, ಪ್ರಸ್ತುತಿ : ಎಂ.ಎಸ್. ಭಾರತಿ, 12.35 ದೇವರನಾಮ, 12.45 ಯಾರು ಕಾಣದ ಪ್ರವಾಸಿ ತಾಣ ಮದ್ದೂರು ತಾಲೂಕು ಅರೆತಿಪ್ಪೂರಿನ ಶ್ರವಣಪ್ಪ ಬೆಟ್ಟದ ಜೈನ ಬಸದಿಗಳನ್ನು ಪರಿಚಯಿಸುತ್ತಾರೆ ತೈಲೂರು ವೆಂಕಟಕೃಷ್ಣ, 1.00 ಪ್ರಗತಿ ಪಥ – ಕೇಂದ್ರ ಸರ್ಕಾರದ ವಿವಿಧ ಅಭಿವೃದ್ಧಿ ಯೋಜನೆಗಳ ಸರಣಿ, 1.20 ಭಾವಗೀತೆಗಳು–ರೋಹಿಣಿ ಸುಧಾಮ್, 2.40 ದುಬೈ ಅಂತರಾಷ್ಟ್ರೀಯ ಕ್ರಿಕೆಟ್ ಕ್ರೀಡಾಂಗಣದಲ್ಲಿ ನಡೆಯಲಿರುವ ಐಸಿಸಿ ಚಾಂಪಿಯನ್ಸ್ ಟ್ರೋಫಿ ಕ್ರಿಕೆಟ್ ಮೊದಲ ಸೆಮಿಫೈನಲ್ ಪಂದ್ಯದ ನೇರ ವೀಕ್ಷಕ ವಿವರಣೆ, 6.50 ಕೃಷಿರಂಗ – ಕಿಸಾನ್‌ವಾಣಿ –ಭಾರತ ಸರ್ಕಾರದ ಕೃಷಿ ಹಾಗೂ ರೈತ ಕಲ್ಯಾಣ ಸಚಿವಾಲಯ ಪ್ರಾಯೋಜಿತ ಕಾರ್ಯಕ್ರಮ, ಮೇವು ಮೆಲುಕು–ಪಶು ಸಂಪತ್ತು ಉತ್ತೇಜನಕ್ಕೆ ಹಾಲು ಒಕ್ಕೂಟದ ಯೋಜನೆಗಳು. ಈ ಕುರಿತು ಮಂಡ್ಯ ಜಿಲ್ಲಾ ಸಹಕಾರಿ ಹಾಲು ಒಕ್ಕೂಟದ ವ್ಯವಸ್ಥಾಪಕ ನಿರ್ದೇಶಕರಾದ ಡಾ.ಪಿ.ಆರ್. ಮಂಜೇಶ್ ಅವರೊಂದಿಗೆ ಸಂದರ್ಶನ. ಸಂದರ್ಶಕರು: ಎನ್. ಕೇಶವಮೂರ್ತಿ, 7.45 ದುಬೈ ಅಂತರಾಷ್ಟ್ರೀಯ ಕ್ರಿಕೆಟ್ ಕ್ರೀಡಾಂಗಣದಲ್ಲಿ ನಡೆಯಲಿರುವ ಐಸಿಸಿ ಚಾಂಪಿಯನ್ಸ್ ಟ್ರೋಫಿ ಕ್ರಿಕೆಟ್ ಮೊದಲ ಸೆಮಿಫೈನಲ್ ಪಂದ್ಯದ ನೇರ ವೀಕ್ಷಕ ವಿವರಣೆ ಮುಂದುವರೆಯಲಿದೆ, 10.00 ಚೈತ್ರವನ–ಲಕ್ಷ್ಮೀಶನ ಜೈಮಿನಿ ಭಾರತದ ಸಮಗ್ರ ವಾಚನ ಹಾಗೂ ವ್ಯಾಖ್ಯಾನ, ಪ್ರಸ್ತುತಿ–ಡಾ.ಎ.ಎಸ್. ಶಂಕರನಾರಾಯಣ, 10.30 ಸವಿನೆನಪು

■ **ಶ್ರೀ ರಾಮಕೃಷ್ಣ ಆಶ್ರಮ :** ಭಗವಾನ್ ಶ್ರೀ ರಾಮಕೃಷ್ಣ ಪರಮಹಂಸರ 190ನೇ ಜನ್ಮದಿನೋತ್ಸವ, ಆಶ್ರಮದ ವಾರ್ಷಿಕೋತ್ಸವ–2025, ಸಂಜೆ 5.30 ರಿಂದ ಸಂಧ್ಯಾರತಿ, 5.45 ರಿಂದ ಬೆಳಗಾವಿ ರಾಮಕೃಷ್ಣ ಮಿಷನ್ ಆಶ್ರಮದ ಸ್ವಾಮಿ ಮೋಕ್ಷಾತ್ಮಾನಂದಜಿ ಅವರಿಂದ ಜೀವನಶಿಲ್ಪಿ–ಶ್ರೀಮಾತೆ ಶಾರದಾದೇವಿ ಕುರಿತು ಕನ್ನಡದಲ್ಲಿ ಪ್ರವಚನ, ಸಂಜೆ 6.45 ರಿಂದ ಸುರಮಣಿ ಶ್ರೀ ದತ್ತಾತ್ರೇಯ ವೇಲಣಕರ್ ಮತ್ತು ತಂಡದಿಂದ ದಿವ್ಯತ್ರಯರು ಗಾನ ಕೀರ್ತನೆ, ಸ್ಥಳ: ಆಶ್ರಮದ ಆವರಣ, ಯಾದವಗಿರಿ.


■ **ನಾದರಂಗ, ಕನ್ನಡ ಮತ್ತು ಸಂಸ್ಕೃತಿ ನಿರ್ದೇಶನಾಲಯ:** ರಂಗ ಸಂಭ್ರಮ ನಾಟಕೋತ್ಸವ, ನಾದರಂಗ ಇವರಿಂದ ಚಿತ್ರನಟ ಹಾಗೂ ರಂಗಭೂಮಿ ಕಲಾವಿದ ರಾಜಾನಂದ್ ವಿರಚಿತ ಅಮೋಘ ಅಶ್ವತ್ಥಾಮ ಪೌರಾಣಿಕ ನಾಟಕ ಪ್ರದರ್ಶನ, ನಿರ್ದೇಶನ: ಡಿ.ನಾಗೇಂದ್ರಕುಮಾರ್, ಸ್ಥಳ: ಕಿರುರಂಗಮಂದಿರ, ಕಲಾಮಂದಿರ ಆವರಣ, ಸಂಜೆ 7ಕ್ಕೆ.

■ **ಮೈಸೂರು ವಿಶ್ವವಿದ್ಯಾನಿಲಯ, ಕುವೆಂಪು ಕನ್ನಡ ಅಧ್ಯಯನ ಸಂಸ್ಥೆ, ಶ್ರೀ ಬಸವೇಶ್ವರ ಸಾಮಾಜಿಕ ಪರಿಷ್ಕರಣೆ, ಸಂಶೋಧನೆ ಅಧ್ಯಯನ ಹಾಗೂ ವಿಸ್ತರಣಾ ಕೇಂದ್ರ :** ಸರಣಿ ಉಪನ್ಯಾಸ ಮಾಲಿಕೆ, ಡಾ. ಮೊರಬದ ಮಲ್ಲಿಕಾರ್ಜುನ ಅವರಿಂದ ಬಸವಣ್ಣನವರ ವಚನಗಳ ಚಿಂತನೆಗಳು ಕುರಿತು ಉಪನ್ಯಾಸ, ಅಧ್ಯಕ್ಷತೆ : ಸಂತ ಫಿಲೋಮಿನಾ ಪದವಿ ಕಾಲೇಜು ಪ್ರಿನ್ಸಿಪಾಲ್ ಡಾ. ರವಿ ಜೆ.ಡಿ. ಸಲ್ಡಾನ್ಹಾ, ಸ್ಥಳ: ಸಂತ ಫಿಲೋಮಿನಾ ಪದವಿ ಕಾಲೇಜು ಆವರಣ, ಬೆಳಗ್ಗೆ 11ಕ್ಕೆ.

■ **ಯುವಜನ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾನಿಲಯ, ಮೈಸೂರು ವೈದ್ಯಕೀಯ ಕಾಲೇಜು ಮತ್ತು ಸಂಶೋಧನಾ ಸಂಸ್ಥೆ, ಸರ್ಕಾರಿ ಶುಶ್ರೂಷ ಮಹಾವಿದ್ಯಾಲಯ :** ವಾರ್ಷಿಕ ವಿಶೇಷ ಶಿಬಿರ, ಬೆಳಗ್ಗೆ 6.30 ರಿಂದ ಧ್ವಜಾರೋಹಣ : ಶರಣ ಸಾಹಿತ್ಯ ಪರಿಷತ್ ಅಧ್ಯಕ್ಷ ಎಲ್. ಮಹೇಶ್ ಅವರಿಂದ, ಬೆಳಗ್ಗೆ 8 ರಿಂದ ಜಾಥಾ, ಬೆಳಗ್ಗೆ 10 ರಿಂದ ಬೆಂಕಿ ಅವಘಡ ಹಾಗೂ ಪರಿಹಾರೋಪಾಯ ಕ್ರಮಗಳು, ಸಂಜೆ 5 ರಿಂದ ಉಪನ್ಯಾಸ ಕಾರ್ಯಕ್ರಮ, ಉಪಸ್ಥಿತರು : ಎಐಡಿವೈಓ ಜಿಲ್ಲಾಧ್ಯಕ್ಷ ಟಿ.ಆರ್. ಸುನೀಲ್, ದೇವಲಾಪುರ ಎಸ್‌ಡಿಎಂಸಿ ಸದಸ್ಯ ಲಿಂಗಣ್ಣ, ಶ್ರೀಮತಿ ಸವಿತಾ, ಶ್ರೀಮತಿ ಪುಟ್ಟಿ, ನಂಜುಂಡಸ್ವಾಮಿ, ಸ್ಥಳ: ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ, ದೇವಲಾಪುರ ಗ್ರಾಮ.

ಮೈಸೂರು ಮಿತ್ರ ಮಂಗಳವಾರ 4 ಮಾರ್ಚ್ 2025

ಕಸಾಯಿಖಾನೆಗೆ ಸಾಗಿಸುತ್ತಿದ್ದ ಜಾನುವಾರುಗಳ ರಕ್ಷಣೆ



ನಂಜನಗೂಡು, ಮಾ.3– ತಾಲೂಕಿನ ಮುದ್ದಹಳ್ಳಿ ಸಮೀಪ ಗೂಡ್ಸ್ ವಾಹನದಲ್ಲಿ ಕೇರಳದ ಕಸಾಯಿಖಾನೆಗೆ ಕೊಂಡೊಯ್ಯುತ್ತಿದ್ದ ಜಾನುವಾರುಗಳನ್ನು ರಾಷ್ಟ್ರ ರಕ್ಷಣಾ ಪಡೆ ಕಾರ್ಯಕರ್ತರು ಪತ್ತೆ ಹಚ್ಚಿ ಪೊಲೀಸರ ವಶಕ್ಕೆ ಒಪ್ಪಿಸಿದ್ದಾರೆ.

ಸೋಮವಾರ ಮುಂಜಾನೆ ಮುದ್ದಹಳ್ಳಿ ಸಮೀಪ 2 ಸರಕು ಸಾಗಾಣಿಕೆ ವಾಹನಗಳಲ್ಲಿ 7 ಕರುಗಳನ್ನು ಕೊಂಡೊಯ್ಯುತ್ತಿರುವುದನ್ನು ಗಮನಿಸಿದ ರಾಷ್ಟ್ರ ರಕ್ಷಣಾ ಪಡೆ ತಾಲೂಕು ಅಧ್ಯಕ್ಷ ಮಹದೇವಸ್ವಾಮಿ ವಾಹನ ತಡೆದು ಪ್ರಶ್ನಿಸಿದ್ದಾರೆ. ಬಳಿಕ ಅವರು ಜಾನುವಾರುಗಳನ್ನು ಕಸಾಯಿಖಾನೆಗೆ ಕೊಂಡೊಯ್ಯುತ್ತಿರುವುದನ್ನು ಖಚಿತಪಡಿಸಿಕೊಂಡು ಪೊಲೀಸರಿಗೆ ಮಾಹಿತಿ ನೀಡಿದ್ದಾರೆ. ಬಳಿಕ ಸ್ಥಳಕ್ಕಾಗಮಿಸಿದ ಪೊಲೀಸರು ಜಾನುವಾರು ಸಮೇತ ವಾಹನಗಳನ್ನು ವಶಕ್ಕೆ ಪಡೆದು ನಂಜನಗೂಡು ಗ್ರಾಮಾಂತರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಿಸಿದ್ದಾರೆ.

ಪ್ರತಿದೂರು ದಾಖಲು: ಪ್ರಕರಣಕ್ಕೆ ಸಂಬಂಧಿಸಿದಂತೆ ಸಗೂರಿನ ನಿವಾಸಿ ಕಲೀಲ್ ಎಂಬುವವರು ಪ್ರತಿದೂರು ನೀಡಿದ್ದು, ತಾನು ಹಲ್ಲರೆ ಗ್ರಾಮದಲ್ಲಿ ವ್ಯವಸಾಯ ಮಾಡಿಕೊಂಡಿದ್ದು, ಕೃಷಿ ಚಟುವಟಿಕೆಗೆಂದು ಜಾನುವಾರುಗಳನ್ನು ಕೊಂಡೊಯ್ಯುತ್ತಿದ್ದ ಸಂದರ್ಭ ನಮ್ಮ ವಾಹನವನ್ನು ತಾಲೂಕಿನ ಮುದ್ದಹಳ್ಳಿ ಸಮೀಪ ತಡೆ ಹಿಡಿದ 3 ಮಂದಿ ನನ್ನ ಮೇಲೆ ಗಂಭೀರ ಹಲ್ಲೆ ನಡೆಸಿದ್ದಾರೆ. ಹೀಗಾಗಿ ಆರೋಪಿಗಳ ವಿರುದ್ಧ ಕಾನೂನು ಕ್ರಮಕೈಗೊಳ್ಳಿ ಎಂದು ದೂರಿದ್ದಾರೆ. ಈ ಸಂಬಂಧ ಎಫ್‌ಐಆರ್ ದಾಖಲಿಸಿರುವ ನಂಜನಗೂಡು ಗ್ರಾಮಾಂತರ ಠಾಣೆ ಪೊಲೀಸರು ತನಿಖೆ ಕೈಗೊಂಡಿದ್ದಾರೆ.

ಸಾಲಬಾಧೆ: ಕೆರೆಗೆ ಹಾರಿ ರೈತ ಆತ್ಮಹತ್ಯೆ

ಹುಣಸೂರು, ಮಾ.3– ಸಾಲಬಾಧೆ ತಾಳಲಾರದೆ ರೈತರೊಬ್ಬರು ಕೆರೆಗೆ ಹಾರಿ ಆತ್ಮಹತ್ಯೆ ಮಾಡಿಕೊಂಡಿರುವ ಘಟನೆ ತಾಲೂಕಿನ ಕಟ್ಟೆಮಳಲವಾಡಿ ಗ್ರಾಮದಲ್ಲಿ ಸೋಮವಾರ ನಡೆದಿದೆ. ಗ್ರಾಮದ ರೈತ ಚಂದ್ರಯ್ಯ(75) ಆತ್ಮಹತ್ಯೆ ಮಾಡಿಕೊಂಡವರು. ಈತ ತನ್ನ 2 ಎಕರೆ ಜಮೀನಿನಲ್ಲಿ ವ್ಯವಸಾಯ ಮಾಡಲು 2016ರಲ್ಲಿ ಕಟ್ಟೆಮಳಲವಾಡಿ ಐಓಬಿ ಬ್ಯಾಂಕ್‌ನಲ್ಲಿ 5.36 ಲಕ್ಷ ರೂ. ಕೃಷಿ ಸಾಲ ಮಾಡಿದ್ದರು. ಅಲ್ಲಿಂದ ಇಲ್ಲಿಯವರೆಗೆ ಉತ್ತಮ ಫಸಲು ಬಾರದ ಹಿನ್ನಲೆಯಲ್ಲಿ ಸಾಲ ಮರು ಪಾವತಿಸಲು ಸಾಧ್ಯವಾಗದೇ ಸುಸ್ತಿಗಾರರಾಗಿದ್ದರು. ಸಾಲ ತೀರಿಸುವಂತೆ 2023 ರಲ್ಲಿ ಬ್ಯಾಂಕ್‌ನಿಂದ ನೋಟಿಸ್ ಜಾರಿ ಮಾಡಿದ್ದರು ಎನ್ನಲಾಗಿದೆ. ಆದರೂ ಸಾಲ ತೀರಿಸಲು ಸಾಧ್ಯವಾಗಿರಲಿಲ್ಲ. ಅಲ್ಲದೇ ತನ್ನ ಇಬ್ಬರು ಮಕ್ಕಳು ಅನಾರೋಗ್ಯ ಪೀಡಿತರಾಗಿದ್ದರು. ಇದರಿಂದ ಮನನೊಂದ ಅವರು ಗ್ರಾಮದ ಸಿಲುಬೆ ಕೆರೆಗೆ ಹಾರಿ ಆತ್ಮಹತ್ಯೆ ಮಾಡಿಕೊಂಡಿದ್ದಾರೆ. ಈ ಸಂಬಂಧ ಹುಣಸೂರು ಗ್ರಾಮಾಂತರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಕಾರು, ಬೈಕ್ ನಡುವೆ ಡಿಕ್ಕಿ: ಸವಾರ ಸಾವು

ನಂಜನಗೂಡು, ಮಾ.3– ಕಾರು ಮತ್ತು ಬೈಕ್ ನಡುವೆ ಡಿಕ್ಕಿ ಸಂಭವಿಸಿದ ಪರಿಣಾಮ ಬೈಕ್ ಸಾವರ ಸಾವನ್ನಪ್ಪಿ, ಹಿಂಬದಿ ಸವಾರ ತೀವ್ರ ಗಾಯಗೊಂಡಿರುವ ಘಟನೆ ಮೈಸೂರು– ಊಟಿ ರಾಷ್ಟ್ರೀಯ ಹೆದ್ದಾರಿಯ ತಾಲೂಕಿನ ಕಳಲೆ ಗೇಟ್ ಬಳಿ ಜರುಗಿದೆ.

ಚಾಮರಾಜನಗರ ಜಿಲ್ಲೆ ಗುಂಡ್ಲುಪೇಟೆಯ ಮಹೇಶ (27) ಸಾವನ್ನಪ್ಪಿದವರು. ಹಿಂಬದಿ ಸವಾರ ನಂಜನಗೂಡು ತಾಲೂಕಿನ ಗೀಕಹಳ್ಳಿ ಗ್ರಾಮದ ಮಂಜುಬುದ್ದಿ (23) ಗಂಭೀರವಾಗಿ ಗಾಯಗೊಂಡು ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ.

ಭಾರತ್ ಫೈನಾನ್ಸಿಯಲ್ ಇಕ್ಲೂಯೇಷನ್ ಮೈಕ್ರೋ ಫೈನಾನ್ಸ್ ಕಂಪನಿಯಲ್ಲಿ ಕೆಲಸ ಮಾಡುತ್ತಿದ್ದ ಮಹೇಶ ಮತ್ತು ಮಂಜುಬುದ್ದಿ ಸೋಮವಾರ ಬೈಕ್‌ನಲ್ಲಿ ಕಲೆಕ್ಷನ್ ಮಾಡುವ ಸಲುವಾಗಿ ಗುಂಡ್ಲುಪೇಟೆ ತಾಲೂಕಿನ ಚಿಕ್ಕಾಟಿ ಗ್ರಾಮಕ್ಕೆ ತೆರಳುತ್ತಿದ್ದ ವೇಳೆ ತಾಲೂಕಿನ ಕಳಲೆ ಗ್ರಾಮದ ಬಳಿ ಗುಂಡ್ಲುಪೇಟೆ ಕಡೆಯಿಂದ ನಂಜನಗೂಡು ಕಡೆಗೆ ಬರುತ್ತಿದ್ದ ಕಾರು ವೇಗವಾಗಿ ಬಂದು ಬೈಕ್‌ಗೆ ಡಿಕ್ಕಿ ಹೊಡೆದಿದೆ ಪರಿಣಾಮ ಬೈಕ್ ಸವಾರರು ಗಂಭೀರ ಗಾಯಗೊಂಡಿದ್ದು ಆಸ್ಪತ್ರೆಗೆ ಸಾಗಿಸುವ ಮಾರ್ಗಮಧ್ಯ ಮಹೇಶ ಮೃತಪಟ್ಟಿದ್ದಾರೆ. ಹಿಂಬದಿ ಸವಾರ ಮಂಜುಬುದ್ದಿ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾನೆ ಎಂದು ಸಂಚಾರಿ ಪೊಲೀಸರು ತಿಳಿಸಿದ್ದಾರೆ. ಈ ಸಂಬಂಧ ನಂಜನಗೂಡು ಸಂಚಾರಿ ಪೊಲೀಸ್ ಠಾಣೆಯಲ್ಲಿ ದೂರು ದಾಖಲಾಗಿದೆ.

ಅಗಸನಹುಂಡಿ ಸರ್ಕಾರಿ ಶಾಲೆಯಲ್ಲಿ ವಿದ್ಯಾರ್ಥಿನಿಯರಿಗೆ ಲೈಂಗಿಕ ಕಿರುಕುಳ ಪ್ರಕರಣ

ಪ್ರಭಾರ ಮುಖ್ಯಶಿಕ್ಷಕನನ್ನು 24 ಗಂಟೆಯೊಳಗೆ ಬಂಧಿಸಿ

ಪೊಲೀಸ್ ಅಧಿಕಾರಿಗಳಿಗೆ ಶಾಸಕ ಅನಿಲ್ ಸೂಚನೆ



ಅಗಸನಹುಂಡಿ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಗೆ ಶಾಸಕ ಅನಿಲ್ ಭೇಟಿ ನೀಡಿ ಪರಿಶೀಲಿಸಿದರು.



ಗಿರೀಶ್

ಹೆಚ್.ಡಿ.ಕೋಟೆ, ಮಾ.3– ವಿದ್ಯಾರ್ಥಿನಿಯರಿಗೆ ಲೈಂಗಿಕ ಕಿರುಕುಳ ನೀಡಿದ ಪ್ರಭಾರ ಮುಖ್ಯ ಶಿಕ್ಷಕನನ್ನು 24 ಗಂಟೆಯೊಳಗೆ ಬಂಧಿಸುವಂತೆ ಪೊಲೀಸ್ ಅಧಿಕಾರಿಗಳಿಗೆ ಶಾಸಕ ಅನಿಲ್ ಸೂಚನೆ ನೀಡಿದರು.

ತಾಲೂಕಿನ ಅಗಸನಹುಂಡಿ ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಗೆ ಭೇಟಿ ನೀಡಿ ಪರಿಶೀಲನೆ ನಡೆಸಿ, ಘಟನೆ ಸಂಬಂಧ ಮಾಹಿತಿ ಪಡೆದು ಮಾತನಾಡಿದ ಅವರು, ಶಾಲೆಯ ವಿದ್ಯಾರ್ಥಿನಿಯರಿಗೆ ಲೈಂಗಿಕ ಕಿರುಕುಳ ನೀಡಿದ ಪ್ರಭಾರ ಮುಖ್ಯಶಿಕ್ಷಕ ಕೆ.ಹೆಚ್.ಗಿರೀಶ್ ಅವರನ್ನು 24 ಗಂಟೆಯೊಳಗೆ ಬಂಧಿಸಬೇಕು ಎಂದು ಪೊಲೀಸರಿಗೆ ಖಡಕ್ ಆದೇಶ ನೀಡಿದರು.

ಈ ವೇಳೆ ಮಾತನಾಡಿದ ಗ್ರಾಮಸ್ಥರು ಹಿಂದಿನಿಂದಲೂ ಶಾಲೆಯ ವಿದ್ಯಾರ್ಥಿನಿಯರಿಗೆ ಪ್ರಭಾರ ಮುಖ್ಯ ಶಿಕ್ಷಕರು ಲೈಂಗಿಕ ಕಿರುಕುಳ ನೀಡುತ್ತಿದ್ದರು. ಫೆ.19 ರಂದು ಸಹ ಶಾಲೆಯ ವಿದ್ಯಾರ್ಥಿನಿಗೆ ಪ್ರಭಾರ ಮುಖ್ಯ ಶಿಕ್ಷಕ ಗಿರೀಶ್ ಲೈಂಗಿಕ ಕಿರುಕುಳ ನೀಡಿದ್ದಾರೆ. ವಿಷಯ ತಿಳಿದ ಸಿಆರ್‌ಪಿ ಪಿ.ದೀಪಾ ಫೆ20 ರಂದು ಘಟನೆ ಸಂಬಂಧ ಪ್ರಭಾರ ಮುಖ್ಯ ಶಿಕ್ಷಕರ ವಿರುದ್ಧ ಕ್ರಮ ಕೈಗೊಳ್ಳುವಂತೆ ಕ್ಷೇತ್ರ ಶಿಕ್ಷಣಾಧಿಕಾರಿ ಕಾಂತರಾಜು ಅವರಿಗೆ ದೂರು ನೀಡಿದ್ದರು. ಆದರೆ ಬಿಇಓ ಯಾವುದೇ ಕ್ರಮ ಕೈಗೊಂಡಿರಲಿಲ್ಲ. ಆದರೆ ಫೆ.25ರಂದು ಬಿಇಓ ಕಾಂತರಾಜು ಹೆಚ್.ಡಿ.ಕೋಟೆ ಪೊಲೀಸ್ ಠಾಣೆಗೆ ದೂರು ನೀಡಿದ್ದು, ಬಿಇಓ ಕಾಂತರಾಜು, ಸಿಆರ್‌ಪಿ ದೀಪ, ಇಸಿಓ ಜಯರಾಮು ಕಾಮುಕ ಮುಖ್ಯ ಶಿಕ್ಷಕನನ್ನು ಪಾರು ಮಾಡಲು ಸಂಚು ಮಾಡಿದ್ದಾರೆ ಎಂದು ಆರೋಪಿಸಿ ಈ ಕೂಡಲೇ ಇವರನ್ನು ಇಲಾಖೆಯಿಂದ ವಜಾಗೊಳಿಸಬೇಕು ಎಂದು ಪಟ್ಟು ಹಿಡಿದರು.

ಗ್ರಾಮಸ್ಥರನ್ನು ಸಮಾಧಾನಗೊಳಿಸಿ ಮಾತನಾಡಿದ ಶಾಸಕ ಅನಿಲ್, ವಿದ್ಯಾರ್ಥಿನಿಯರಿಗೆ ಲೈಂಗಿಕ ಕಿರುಕುಳ ನೀಡಿದ ಪ್ರಭಾರ ಮುಖ್ಯ ಶಿಕ್ಷನನ್ನು ಬಂಧಿಸಿ ಶಿಕ್ಷೆಗೆ ಒಳಪಡಿಸಲಾಗುವುದು. ಈ ವಿಚಾರದಲ್ಲಿ ನಾನು ಹಿಂಜರಿಯುವುದಿಲ್ಲ. ಅಲ್ಲದೇ ಬಿಇಓ ಕಾಂತರಾಜು, ಸಿಆರ್‌ಪಿ ದೀಪ, ಇಸಿಓ ಜಯರಾಮು ಅವರನ್ನು ಅಮಾನತುಗೊಳಿಸಿ ತನಿಖೆಗೆ ಒಳಪಡಿಸುವಂತೆ ಡಿಡಿಪಿಐ ಜವರೇಗೌಡ ಅವರಿಗೆ ಆದೇಶಿಸಿದರು.

ಇಂತಹ ಘಟನೆ ಶಾಲೆಯಲ್ಲಿ ನಡೆಯಬಾರದಾಗಿತ್ತು. ಮುಂದಿನ ದಿನಗಳಲ್ಲಿ ಇಂತಹ ಘಟನೆ ನಡೆಯದಂತೆ ಎಚ್ಚರಿಕೆ ವಹಿಸುವಂತೆ ಅಧಿಕಾರಿಗಳಿಗೆ ಎಚ್ಚರಿಕೆ ನೀಡಿದ ಶಾಸಕರು, ಪರೀಕ್ಷೆಗಳು ಹತ್ತಿರವಾಗುತ್ತಿರುವುದರಿಂದ ಪೋಷಕರು ಶಾಲೆಗೆ ಮಕ್ಕಳನ್ನು ಕಳುಹಿಸಬೇಕು. ಯಾವುದೇ ತೊಂದರೆಯಾಗದಂತೆ ಶಾಲೆಗೆ ಉತ್ತಮ ಶಿಕ್ಷಕರನ್ನು ನೇಮಕ ಮಾಡಲಾಗುವುದು ಎಂದರು.

ಡಿಡಿಪಿಐ ಜವರೇಗೌಡ ಮಾತನಾಡಿ, ಘಟನೆ ಸಂಬಂಧ ನಿರ್ಲಕ್ಷ್ಯ ವಹಿಸಿದ ಬಿಇಓ ಕಾಂತರಾಜು, ಸಿಆರ್‌ಪಿ ದೀಪ, ಇಸಿಓ ಜಯರಾಮು ಅವರನ್ನು ಅಮಾನತುಗೊಳಿಸಲಾಗುವುದು ಎಂದರು.

ಇದೇ ವೇಳೆ ಬಿಇಓ ಕಾಂತರಾಜು ಅವರನ್ನು ವಿಚಾರಣೆಗೆಂದು ಹೆಚ್.ಡಿ.ಕೋಟೆ ಠಾಣೆ ಪೊಲೀಸರು ವಶಕ್ಕೆ ಪಡೆದು ಕರೆದೊಯ್ದರು.

ತಹಸೀಲ್ದಾರ್ ಶ್ರೀನಿವಾಸ, ವೃತ್ತ ನಿರೀಕ್ಷಕ ಶಬ್ಬೀರ್ ಹುಸೇನ್, ಎಸ್‌ಐ ಸುರೇಶ್ ನಾಯಕ, ಪೊಲೀಸ್ ಸಿಬ್ಬಂದಿಗಳಾದ ಮಹದೇವಸ್ವಾಮಿ, ಜಿಪಂ ಮಾಜಿ ಉಪಾಧ್ಯಕ್ಷೆ ನಂದಿನಿ, ಗ್ರಾಮದ ಮುಖಂಡ ಲಕ್ಷ್ಮಿನರಸಿಂಹ, ಎಸ್‌ಡಿಎಂಸಿ ಅಧ್ಯಕ್ಷ ಸಿದ್ದೇಗೌಡ, ಸದಸ್ಯರಾದ ಮಹೇಂದ್ರ, ಸ್ವಾಮಿಗೌಡ, ಧರ್ಮರಾಜ್, ವೆಂಕಟೇಶ್, ನೆಹರು ನಾಯಕ, ಲೋಕೇಶ್, ಸುರೇಶ್, ತಿರುಪತಿ ನಾಯಕ, ಗ್ರಾಪಂ ಸದಸ್ಯ ರಾಜೇಗೌಡ, ಗಿರೀಶ, ಬಾಲಶಂಕರ, ಮಹೇಶ, ಕಾಳಿಂಗೇಗೌಡ, ರಾಜು, ಚಂದ್ರ, ರಾಜೇಗೌಡ, ಮುರಳೀಧರ, ನಾಗೇಶ್, ಸತ್ಯನಾರಾಯಣ, ಬಾಲಶಂಕರ್, ನಾಗನಹಳ್ಳಿ ಪ್ರದೀಪ, ಪರಶಿವಮೂರ್ತಿ, ನಯಾಸ್, ಗಣೇಶ್, ಆಚಾರ್ ಇನ್ನಿತರರಿದ್ದರು.

ಕಳಲೆ ಪಿಎಸಿಎಸ್‌ಗೆ ಅಧ್ಯಕ್ಷ, ಉಪಾಧ್ಯಕ್ಷರ ಆಯ್ಕೆ



ಕಳಲೆ ಪಿಎಸಿಎಸ್ ನೂತನ ಅಧ್ಯಕ್ಷ, ಉಪಾಧ್ಯಕ್ಷರನ್ನು ಅಭಿನಂದಿಸಲಾಯಿತು.

ನಂಜನಗೂಡು, ಮಾ.3– ತಾಲೂಕಿನ ಕಳಲೆ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದ ನೂತನ ಅಧ್ಯಕ್ಷರಾಗಿ ಕೆ.ಎಂ.ನಾಗರಾಜು, ಉಪಾಧ್ಯಕ್ಷರಾಗಿ ಎಂ.ನಂಜುಂಡಸ್ವಾಮಿ ಅವಿರೋಧವಾಗಿ ಆಯ್ಕೆಯಾಗಿದ್ದಾರೆ.

12 ಮಂದಿ ಸದಸ್ಯ ಬಲದ ಸಹಕಾರ ಸಂಘದ ಅಧ್ಯಕ್ಷ ಸ್ಥಾನಕ್ಕೆ ಕೆ.ಎಂ.ನಾಗರಾಜು, ಉಪಾಧ್ಯಕ್ಷ ಸ್ಥಾನಕ್ಕೆ ಎಂ.ನಂಜುಂಡಸ್ವಾಮಿ ಅವರನ್ನು ಹೊರತುಪಡಿಸಿ ಬೇರೆ ಯಾರೂ ನಾಮಪತ್ರ ಸಲ್ಲಿಸದ ಕಾರಣ ಚುನಾವಣಾಧಿಕಾರಿ, ತಾಲೂಕು ಸಹಕಾರ ಇಲಾಖೆ ಅಭಿವೃದ್ಧಿ ಅಧಿಕಾರಿ ಪ್ರಸಾದ್ ಅವಿರೋಧ ಆಯ್ಕೆ ಘೋಷಿಸಿದರು. ಚುನಾವಣಾ ಪ್ರಕ್ರಿಯೆಯಲ್ಲಿ 9 ನಿರ್ದೇಶಕರು ಹಾಜರಾಗಿದ್ದರೆ ಮೂವರು ಗೈರು ಹಾಜರಾಗಿದ್ದರು. ನೂತನ ಅಧ್ಯಕ್ಷ ನಾಗರಾಜು ಮಾತನಾಡಿ, ಸಹಕಾರ ಸಂಘದಿಂದ ರೈತರಿಗೆ ಬಡ್ಡಿ ರಹಿತ ಸಾಲ ಸೌಲಭ್ಯ ದೊರಕಲಿದ್ದು, ರೈತರ ಮನೆ ಬಾಗಿಲಿಗೆ ಸೇವೆ ಒದಗಿಸುವ ಮೂಲಕ ಸಹಕಾರ ಸಂಘದ ಅಭಿವೃದ್ಧಿಗೆ ಶ್ರಮಿಸುತ್ತೇನೆ ಎಂದರು.

ಈ ವೇಳೆ ಬ್ಯಾಂಕ್ ಪ್ರತಿನಿಧಿ ನಿರಂಜನ್, ನಿರ್ದೇಶಕರಾದ ಚೋಳರಾಜ್, ಮಸಗೇರಾಜು, ಪ್ರಭಾಕರ್, ಲೋಕೇಶ್ ಕುಮಾರ್, ಲೀಲಾಕುಮಾರಿ, ದೇವಮ್ಮ ಸೇರಿದಂತೆ ಸಂಘದ ಕಾರ್ಯದರ್ಶಿ ಸಿದ್ಧನಾಯಕ, ಸಹ ಕಾರ್ಯದರ್ಶಿ ಸಾಕಮ್ಮ ಉಪಸ್ಥಿತರಿದ್ದರು.

ವಿಜೃಂಭಣೆಯ ಮಹದೇಶ್ವರಸ್ವಾಮಿ ಹುಲಿ ವಾಹನೋತ್ಸವ



ಹುಲಿ ವಾಹನೋತ್ಸವ ವಿಜೃಂಭಣೆಯಿಂದ ನಡೆಯಿತು.

ಮೈಸೂರು, ಮಾ.3– ತಾಲೂಕಿನ ಜಯಪುರ ಗ್ರಾಮದ ಪುರಾಣ ಪ್ರಸಿದ್ಧ ಜೇಡಿಕಟ್ಟೆ ಮಹದೇಶ್ವರಸ್ವಾಮಿ ಜಾತ್ರಾ ಮಹೋತ್ಸವ ಪ್ರಯುಕ್ತ ಸೋಮವಾರ ಮುಂಜಾನೆ ಹುಲಿ ವಾಹನೋತ್ಸವ ವಿಜೃಂಭಣೆಯಿಂದ ನಡೆಯಿತು.

ಸೋಮವಾರ ಸೂರ್ಯೋದಯಕ್ಕೂ ಮುನ್ನ ಬರಡನಪುರದಲ್ಲಿ ಹುಲಿವಾಹನ ಉತ್ಸವ ಮೂರ್ತಿಗೆ ಮಹಾಮಂಗಳಾರತಿ ನೆರವೇರಿಸಿ ಮೆರವಣಿಗೆಗೆ ಚಾಲನೆ ನೀಡಲಾಯಿತು. ಬಳಿಕ ಭಕ್ತರು ಉತ್ಸವ ಮೂರ್ತಿಯನ್ನು ಜಯಪುರದ ಜೇಡಿಕಟ್ಟೆ ಮಹದೇಶ್ವರ ಸ್ವಾಮಿ ದೇವಾಲಯಕ್ಕೆ ಹೊತ್ತು ತಂದರು. ಮೆರವಣಿಗೆ ಸಾಗುವ 3 ಕಿಮೀ ಉದ್ದಕ್ಕೂ ಚೆಂಡು ಮಲ್ಲಿಗೆ ಹೂವಿನ ರಾಶಿ ಹೊದಿಕೆ ಹಾಸಲಾಗಿತ್ತು. ಬೃಹತ್ ಗಾತ್ರದ ಹೂವಿನ ಹಾರಗಳನ್ನು ಭಕ್ತರು ಉತ್ಸವ ಮೂರ್ತಿಗೆ ಸಮರ್ಪಿಸಿದರು. ಜಯಪುರ, ಮಾವಿನಹಳ್ಳಿ ಹಾಗೂ ಸುತ್ತಮುತ್ತಲ ಗ್ರಾಮಗಳ ಸಾವಿರಾರು ಭಕ್ತರು ಈಡುಗಾಯಿ ಹೊಡೆದು ಭಕ್ತಿಭಾವ ಮೆರೆದರು. ಉಘೇ,,,,, ಮಾದಪ್ಪ,,,,, ಉಘೇ,,,,,,ಮಾದಪ್ಪ ಎಂಬ ಜಯಘೋಷ ಕೂಗಿ ಸಂಭ್ರಮಿಸಿದರು. ದೇವಾಲಯ ಆವರಣಕ್ಕೆ ಉತ್ಸವ ಮೂರ್ತಿ ಹೊತ್ತು ತಂದ ಸಾವಿರಾರು ಭಕ್ತರಿಗೆ ಪ್ರಸಾದ ವಿನಿಯೋಗ ಮಾಡಲಾಯಿತು.

ಅಂತರಾಷ್ಟ್ರೀಯ ಮಟ್ಟಕ್ಕೆ ಆಯ್ಕೆ



ಗೋವಾದಲ್ಲಿ ನಡೆದ 10ನೇ ರಾಷ್ಟ್ರ ಮಟ್ಟದ ನೃತ್ಯ ಸ್ಪರ್ಧೆಯಲ್ಲಿ ಪಿರಿಯಾಪಟ್ಟಣದ ಗ್ರೀನ್ ಕಿಡ್ಸ್ ಡ್ಯಾನ್ಸ್ ಸ್ಕೂಲ್ ವಿದ್ಯಾರ್ಥಿಗಳು 5 ಚಿನ್ನ, 3 ಬೆಳ್ಳಿ, 1 ಕಂಚಿನ ಪದಕ ಪಡೆದು ಸತತ 7ನೇ ಬಾರಿಗೆ ಅಂತರಾಷ್ಟ್ರೀಯ ಮಟ್ಟಕ್ಕೆ ಆಯ್ಕೆಯಾಗಿದ್ದಾರೆ. ಈ ವೇಳೆ ಸಂಸ್ಥೆ ಗೌರವಾಧ್ಯಕ್ಷ ಗಿರೀಶ್ ಸೇರಿದಂತೆ ಮಕ್ಕಳಿದ್ದರು.

ಸನ್ಮಾನ



ತಿ.ನರಸೀಪುರ ತಾಲೂಕು ಸರ್ಕಾರಿ ನೌಕರರ ಸಂಘದ ಅಧ್ಯಕ್ಷ ಎಂ.ವಿ.ಶಿವಶಂಕರಮೂರ್ತಿ ಅವರನ್ನು ತಾಲೂಕು ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷ ಕನ್ನಡ ಪುಟ್ಟಸ್ವಾಮಿ ಅಭಿನಂದಿಸಿದರು. ಈ ವೇಳೆ ಅನಾಥ ಶವಗಳ ಮುಕ್ತಿದಾತ ಎಂ.ಮಾದೇಶ್, ನೇತ್ರ ಪರಿವೀಕ್ಷಕ ಆರ್.ಉಮೇಶ್ ಕುಮಾರ್, ಮೂಗೂರು ನಾಗರಾಜು, ನಾರಾಯಣಮೂರ್ತಿ, ಪ್ರಭಾಕರ್, ಮಹದೇವಸ್ವಾಮಿ, ಪ್ರಭಾಕರ್, ವಾಟರ್ ಸಾಗರ್, ಸಂತೃಪ್ತಿ ಕುಮಾರ್, ವಾಟಾಳು ಚಿನ್ನಸ್ವಾಮಿ, ದಳವಾಯಿ ಶಿಕ್ಷಕ ಸತೀಶ್, ಮೂಗೂರು ನಾಗರಾಜು, ಮಹದೇವಸ್ವಾಮಿ, ನಾಗರಾಜ್, ಉದ್ಯಮಿ ರಾಜೇಂದ್ರ ಪ್ರಸಾದ್, ಕಾಂತರಾಜ್, ಪ್ರಭಾಕರ್ ಮೂರ್ತಿ ಹಾಜರಿದ್ದರು.

ನೆರೆಗ್ಯಾತನಹಳ್ಳಿ ಪಿಎಸಿಎಸ್‌ಗೆ ಅವಿರೋಧ ಆಯ್ಕೆ



ನೆರೆಗ್ಯಾತನಹಳ್ಳಿ ಪಿಎಸಿಎಸ್‌ಗೆ ಪಟೇಲ್ ಗುರುಸ್ವಾಮಿ ಆಯ್ಕೆಯಾದರು.

ತಿ.ನರಸೀಪುರ, ಮಾ.3– ತಾಲೂಕಿನ ನೆರೆಗ್ಯಾತನಹಳ್ಳಿ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದ ಆಡಳಿತ ಮಂಡಳಿ ನಿರ್ದೇಶಕರ ಚುನಾವಣೆಯಲ್ಲಿ ಹಾಲಿ ಅಧ್ಯಕ್ಷ ಎಂ.ಜಯಪ್ಪ ಬಣದ ಓರ್ವ ನಿರ್ದೇಶಕ ಸೋಮವಾರ ಅವಿರೋಧವಾಗಿ ಆಯ್ಕೆಯಾಗಿದ್ದಾರೆ.

ಸಂಘದ ಆಡಳಿತ ಮಂಡಳಿ ನಿರ್ದೇಶಕರ ಆಯ್ಕೆಗೆ ಮಾ.9ರಂದು ಚುನಾವಣೆ ನಡೆಯುವ ಹಿನ್ನೆಲೆಯಲ್ಲಿ ಉಮೇದುವಾರಿಕೆ ಹಿಂಪಡೆಯಲು ಸೋಮವಾರ ಕೊನೆ ದಿನವಾಗಿತ್ತು. ಸಾಲಗಾರರಲ್ಲದ ಕ್ಷೇತ್ರಕ್ಕೆ ಪಟೇಲ್ ಗುರುಸ್ವಾಮಿ, ಬೂದಹಳ್ಳಿ ಸಿದ್ದರಾಜು, ಮುಡುಕನಪುರ ನಾಗೇಶ್, ನಾಗಲಗೆರೆ ಹುಚ್ಚನ ಮಾದಯ್ಯ ಅವರು ನಾಮಪತ್ರ ಸಲ್ಲಿಸಿದರು. ಕೊನೆ ಹಂತದಲ್ಲಿ ಮೂವರು ನಾಮಪತ್ರ ವಾಪಸ್ ಹಿಂಪಡೆದರು. ಹೀಗಾಗಿ ಪಟೇಲ್ ಗುರುಸ್ವಾಮಿ ಅವರು ಅವಿರೋಧವಾಗಿ ಆಯ್ಕೆಯಾದರು.

ಈ ವೇಳೆ ಹಾಲಿ ಅಧ್ಯಕ್ಷ ಜಯಪ್ಪ, ಪಿಎಲ್‌ಡಿ ಬ್ಯಾಂಕ್ ನಿರ್ದೇಶಕ ಎನ್.ಎನ್.ಮಹದೇವಸ್ವಾಮಿ, ಗ್ರಾಪಂ ಸದಸ್ಯ ಮಹದೇವಸ್ವಾಮಿ, ಬಸವ ಬಳಗದ ಅಧ್ಯಕ್ಷ ಹಲವಾರ ಪರಮೇಶ್ ಪಟೇಲ್, ಡೈರಿ ಗುರುಮೂರ್ತಿ, ಮುಡುಕನಪುರ ಬಸವರಾಜು, ನಾಗಭೂಷಣ್, ನಾಗೇಶ್, ಕೋಣಗಳ್ಳಿ ಬಸವರಾಜು, ದುಂಡಪ್ಪ ಪಟೇಲ್ ಮಹದೇವಸ್ವಾಮಿ, ಗಿರೀಶ್, ಬೂದಳ್ಳಿ ಸಿದ್ದರಾಜು, ನಾಗಲಗೆರೆ ಹುಚ್ಚಯ್ಯನ ಮಾದಯ್ಯ, ಸ್ವಾಮಿ, ಕಳ್ಳೀಪುರ ರುದ್ರ, ಹಲವಾರ ಚಂದ್ರು ಹಾಜರಿದ್ದರು.

ಸಮಾನತೆಯ ಕರ್ನಾಟಕ ನಿರ್ಮಾಣ ಕುರಿತು ಚರ್ಚೆ



ಕಾರ್ಯಕ್ರಮದಲ್ಲಿ ಚಿತ್ರ ನಟ, ಸಾಮಾಜಿಕ ಹೋರಾಟಗಾರ ಚೇತನ್ ಅಹಿಂಸಾ ಮಾತನಾಡಿದರು.

ನಂಜನಗೂಡು, ಮಾ.3– ಉತ್ತಮ ಸಮಾಜ, ಸಮಾನತೆಯ ಕರ್ನಾಟಕ ನಿರ್ಮಾಣದ ಭವಿಷ್ಯ ಕುರಿತು ಮೈಸೂರು ಹಾಗೂ ಚಾಮರಾಜನಗರ ಜಿಲ್ಲೆಯಾದ್ಯಂತ ಪ್ರಗತಿಪರ ಸಂಘಟನೆಯ ಗೆಳೆಯರೊಡನೆ ಚರ್ಚೆ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದು ಚಿತ್ರ ನಟ, ಸಾಮಾಜಿಕ ಹೋರಾಟಗಾರ ಚೇತನ್ ಅಹಿಂಸಾ ಹೇಳಿದರು.

ನಗರದ ಪ್ರವಾಸಿ ಮಂದಿರದಲ್ಲಿ ನಡೆದ ಸಮಾನತೆಯ ಕರ್ನಾಟಕ ನಿರ್ಮಾಣದ ಭವಿಷ್ಯದ ಕುರಿತು ಚರ್ಚಾ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಉತ್ತಮ ಸಮಾಜ ನಿರ್ಮಾಣವಾಗಬೇಕು. ನಮಗಾಗಿರುವ ಅನ್ಯಾಯ ಮುಂದಿನ ಪೀಳಿಗೆಗೆ ಆಗಬಾರದು ಎಂದು ಸಮಾನತೆಯ ಚರ್ಚೆ ನಡೆಸಲಾಗುತ್ತದೆ. ರಾಜ್ಯಾದ್ಯಂತ ಈ ಅಭಿಯಾನ ಹಮ್ಮಿಕೊಳ್ಳಲಾಗಿದೆ. ಬಾಬಾ ಸಾಹೇಬ್ ಅಂಬೇಡ್ಕರ್ ಅವರ ಮಾರ್ಗದಲ್ಲಿ ನಡೆಯುತ್ತೇವೆ. ನಾವು ಎಷ್ಟೇ ಹೋರಾಟ ಮಾಡಿದರು ಕೂಡ ಆಳುವ ವರ್ಗಗಳು ನಮ್ಮನ್ನು ಹಿಮ್ಮೆಟ್ಟಿಸುತ್ತಿವೆ. ಕೋಟ್ಯಾಂತರ ರೂಪಾಯಿ ಸಾಲ ಮಾಡಿರುವವರನ್ನು ಬಿಟ್ಟು ಬಡವರನ್ನು ಸುಲಿಗೆ ಮಾಡುತ್ತಿದ್ದಾರೆ. ಒಳ್ಳೆಯ ಕೆಲಸಗಳನ್ನು ಮಾಡಲು ನಾವು ಪ್ರಾಮಾಣಿಕ ಪ್ರಯತ್ನ ಮಾಡುತ್ತೇವೆ. ಸಿನಿಮಾ ನನ್ನನ್ನು ಬೆಳೆಸಿದೆ. ಹಾಗೆಯೇ ಸಿನಿಮಾ ನನಗೆ ವೈಯಕ್ತಿಕ ಅನುಭವ ಕೊಟ್ಟಿದೆ. ಅದರಿಂದ ನಾವು ಬೆಳೆದಿದ್ದೇವೆ. ಆದರೆ, ಉತ್ತಮ ಸಮಾಜ ಕಟ್ಟಲು ಹೋರಾಟವೇ ಮುಖ್ಯ ಸಮ ಸಮಾಜದ ನಿರ್ಮಾಣಕ್ಕೆ ಜನರ ಬೆಂಬಲ ಬೇಕು. ನಾವು ಬೆಳೆಯುವುದಲ್ಲದೆ ನಮ್ಮೊಡನೆ ಜನರು ಬದಲಾಗಬೇಕು. ಸಮ ಸಮಾಜ ನಿರ್ಮಾಣವಾಗಬೇಕು ಎಂದರು. ಈ ಸಂದರ್ಭ ದಸಂಸ ಸುರೇಶ್ ಶಂಕರಪುರ, ಮಲ್ಲಹಳ್ಳಿ ನಾರಾಯಣ್, ಮಲ್ಲೇಶ್, ಛಲವಾದಿ ಮಹಾಸಭಾ ಜಿಲ್ಲಾಧ್ಯಕ್ಷ ಅಭಿನಾಗಭೂಷಣ್, ರೈತ ಸಂಘದ ಜಿಲ್ಲಾಧ್ಯಕ್ಷ ವಿದ್ಯಾಸಾಗರ್, ನಗರ್ಲೆ ವಿಜಯಕುಮಾರ್, ರೈತ ಸಂಘದ ತಾಲೂಕು ಅಧ್ಯಕ್ಷ ಸತೀಶ್ ರಾವ್ ಉಪಸ್ಥಿತರಿದ್ದರು.

ಆರ್ಯ ಈಡಿಗ ಸಮಾಜದ ಅಭಿವೃದ್ಧಿಗೆ 500 ಕೋಟಿ ಕಾಯ್ದಿರಿಸಲು ಮನವಿ

ಸರಗೂರು, ಮಾ.3– ಆರ್ಯ ಈಡಿಗ ಸಮಾಜದ ಅಭಿವೃದ್ಧಿಗೆ ಬಜೆಟ್‌ನಲ್ಲಿ 500 ಕೋಟಿ ಅನುದಾನ ಕಾಯ್ದಿರಿಸುವಂತೆ ಆರ್ಯ ಈಡಿಗ ಸಮಾಜದ ತಾಲೂಕು ಅಧ್ಯಕ್ಷ ಎಸ್.ಎನ್.ನಾಗರಾಜು ಮನವಿ ಮಾಡಿದರು.

ಈ ಸಂಬಂಧ ಪತ್ರಿಕಾ ಪ್ರಕಟಣೆ ನೀಡಿರುವ ಅವರು, ಹಿಂದುಳಿದ ವರ್ಗದ ನಮ್ಮ ಜನಾಂಗವು, ಸೇಂದಿ ತೆಗೆದು ಬದುಕು ನಡೆಸುವ ಈಡಿಗ ಸಮುದಾಯದವರು, ಸ್ವಾತಂತ್ರ್ಯ ಪೂರ್ವದಿಂದಲೂ ತುಳಿತಕ್ಕೆ ಒಳಗಾಗಿರುತ್ತಾರೆ. ಸಮುದಾಯವು ಸಾಮಾಜಿಕ, ಆರ್ಥಿಕ, ರಾಜಕೀಯ ಹಾಗೂ ಶೈಕ್ಷಣಿಕವಾಗಿ ಹಿಂದುಳಿದಿದ್ದು, ಸರ್ಕಾರದ ಎಲ್ಲಾ ಸವಲತ್ತುಗಳಿಂದ ವಂಚಿತವಾಗಿದೆ. 20ನೇ ಶತಮಾನದಲ್ಲಿ ಆಚಾರ್ಯ ಬ್ರಹ್ಮಶ್ರೀ ನಾರಾಯಣ ಗುರುಗಳು ಅಸಮಾನತೆ ವಿರುದ್ಧ ಹೋರಾಡಿ ಸಮುದಾಯಕ್ಕೆ ಶಿಕ್ಷಣ ಮತ್ತು ಉದ್ಯೋಗದ ಮೂಲಕ ಸ್ವಾಭಿಮಾನದ ಬದುಕು ಕಲಿಸಿದರು. ವಿದ್ಯೆಯಿಂದ ಸ್ವತಂತ್ರರಾಗಿ ಸಂಘಟನೆಯಿಂದ ಬಲಯುತರಾಗಿ ಬ್ರಹ್ಮಶ್ರೀ ನಾರಾಯಣ ಗುರುಗಳ ಸಂದೇಶದಂತೆ ನಮ್ಮ ಜನಾಂಗವು ಶಿಕ್ಷಣಕ್ಕೆ ಒತ್ತು ನೀಡುತ್ತಿದೆ. ಆರ್ಥಿಕವಾಗಿ ದುರ್ಬಲರಾಗಿರುವ ನಾವು ಶಿಕ್ಷಣ ಹಾಗೂ ರಾಜಕೀಯದಲ್ಲಿ ಹಿಂದುಳಿದಿದ್ದೇವೆ. ಈಡಿಗ–ಬಿಲ್ಲವ, ನಾಮಧಾರಿ, ದೀವರು, ತಿಯಾ, ನಾಡಾರ್ ಹಾಗೂ ಇತರೆ 26 ಪಂಗಡವುಳ್ಳ ನಮ್ಮ ಸಮುದಾಯದ ಸಮಗ್ರ ಅಭಿವೃದ್ಧಿಗೆ, ಸಮಾಜವನ್ನು ಮುಖ್ಯ ವಾಹಿನಿಗೆ ತರುವ ಉದ್ದೇಶದಿಂದ ಬ್ರಹ್ಮಶ್ರೀ ನಾರಾಯಣಗುರು ಈಡಿಗ ಅಭಿವೃದ್ಧಿ ನಿಗಮ ಸ್ಥಾಪಿಸಲಾಗಿದ್ದು, ಪ್ರಸಕ್ತ ಸಾಲಿನ ಬಜೆಟ್‌ನಲ್ಲಿ 500 ಕೋಟಿ ಅನುದಾನವನ್ನು ಕಾಯ್ದಿರಿಸುವಂತೆ ಅವರು ಮನವಿ ಮಾಡಿದ್ದಾರೆ.

ಮಾವತ್ತೂರಲ್ಲಿ ಡಿಜಿಟಲ್ ಗ್ರಂಥಾಲಯ ಉದ್ಘಾಟನೆ



ಕಾರ್ಯಕ್ರಮದಲ್ಲಿ ಶಾಸಕ ಡಿ.ರವಿಶಂಕರ್ ಮಾತನಾಡಿದರು.

ಕೆ.ಆರ್.ನಗರ, ಮಾ.3– ಕ್ಷೇತ್ರದ ಪ್ರತಿ ಗ್ರಾಮದಲ್ಲೂ ಗ್ರಂಥಾಲಯ ಆರಂಭಿಸಿ ಆ ಮೂಲಕ ಮನೆ ಮನಗಳಿಗೆ ಜ್ಞಾನದ ದೀವಿಗೆ ಹಚ್ಚಲು ನಿರ್ಧರಿಸಿದ್ದು, ಈ ಯೋಜನೆಯನ್ನು ಶೀಘ್ರ ಅನುಷ್ಠಾನಗೊಳಿಸುತ್ತೇನೆ ಎಂದು ಶಾಸಕ ಡಿ.ರವಿಶಂಕರ್ ತಿಳಿಸಿದರು.

ತಾಲೂಕಿನ ಮಾವತ್ತೂರು ಗ್ರಾಮದಲ್ಲಿ ಡಿಜಿಟಲ್ ಗ್ರಂಥಾಲಯ ಉದ್ಘಾಟಿಸಿ, ನಂತರ ನಡೆದ ಸಭೆಯಲ್ಲಿ ಮಾತನಾಡಿದ ಅವರು, ವಿದ್ಯಾರ್ಥಿಗಳು ಮತ್ತು ನಾಗರಿಕರು ನಿಗದಿತ ಸಮಯದಲ್ಲಿ ಗ್ರಂಥಾಲಯಗಳಿಗೆ ಭೇಟಿ ನೀಡಿ ಪುಸ್ತಕಗಳನ್ನು ಓದುವ ಹವ್ಯಾಸ ಬೆಳೆಸಿಕೊಳ್ಳಬೇಕು ಎಂದು ಸಲಹೆ ನೀಡಿದರು.

ಗ್ರಂಥಾಲಯಗಳು ಇತ್ತೀಚೆಗೆ ಅರಿವಿನ ಕೇಂದ್ರಗಳಾಗಿದ್ದು, ಅಲ್ಲಿಗೆ ಭೇಟಿ ನೀಡಿದರೆ ವ್ಯಕ್ತಿಯ ಜ್ಞಾನ ಭಂಡಾರ ಹೆಚ್ಚಲಿದೆ. ಇದನ್ನು ಅರಿತು ಪೋಷಕರು, ತಮ್ಮ ಮಕ್ಕಳು ಅಲ್ಲಿಗೆ ಹೋಗುವಂತೆ ಪ್ರೇರೇಪಣೆ ನೀಡಬೇಕು. ಅನಗತ್ಯ ಕಾರ್ಯಕ್ರಮಗಳ ಹೆಸರಲ್ಲಿ ಹಣ ಪೋಲು ಮಾಡುವ ಬದಲು ಮುಂದಿನ ದಿನಗಳಲ್ಲಿ ಗ್ರಂಥಾಲಯಗಳಿಗೆ ಪುಸ್ತಕ ನೀಡಬೇಕೆಂದು ನುಡಿದರು.

ಮಾವತ್ತೂರು ಗ್ರಾಪಂ ವ್ಯಾಪ್ತಿಯ ಗ್ರಾಮಗಳಿಗೆ ಮೂಲ ಸೌಲಭ್ಯ ಕಲ್ಪಿಸಲು ಈಗಾಗಲೇ ಅಗತ್ಯ ಅನುದಾನ ಬಿಡುಗಡೆ ಮಾಡಲಾಗಿದ್ದು, ಮುಂದಿನ ದಿನಗಳಲ್ಲಿ ಆದ್ಯತೆ ಮೇರೆಗೆ ಸರ್ಕಾರದಿಂದ ಮತ್ತಷ್ಟು ಹಣ ಕೊಡಿಸುವ ಭರವಸೆ ನೀಡಿದರಲ್ಲದೆ ಅಭಿವೃದ್ಧಿ ಕಾರ್ಯಗಳು ಯಶಸ್ವಿಯಾಗಿ ನಡೆಯಬೇಕಾದರೆ ಮತದಾರರು ಚುನಾಯಿತ ಸದಸ್ಯರೊಂದಿಗೆ ಕೈ ಜೋಡಿಸಬೇಕೆಂದರು.

ಈ ವೇಳೆ ಗ್ರಾಪಂ ಅಧ್ಯಕ್ಷೆ ಸುಕನ್ಯ, ಉಪಾಧ್ಯಕ್ಷೆ ಭವ್ಯ, ಸದಸ್ಯರಾದ ಜ್ಯೋತಿ, ದೇವಯ್ಯ, ಮಹದೇವ್, ಲೋಹಿತ್, ಜಗದೀಶ್ ರಾಜೇಅರಸ್, ಪಿಡಿಓ ಧನಂಜಯ್, ಗ್ರಂಥಾಲಯದ ರಂಗೇಶ, ಮುಖಂಡರಾದ ಮಹದೇವ ನಾಯಕ, ಮಹೇಶ್ ಅರಸ್, ಮಾಲೇಗೌಡ, ಆದರ್ಶರಾಜೇ ಅರಸ್, ರಾಮಯ್ಯ, ಹೇಮಂತ್ ಕುಮಾರ್, ವೀರರಾಜೇ ಅರಸ್, ವೆಂಕಟೇಶ್, ರಾಮು, ಸೋಮಾಚಾರ್, ಧನರಾಜ್, ಕರಿಯಯ್ಯ, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಉದಯಶಂಕರ್, ವಕ್ತಾರ ಸೈಯದ್ ಜಾಬೀರ್, ಗುತ್ತಿಗೆದಾರ ಕೃಷ್ಣೇಗೌಡ, ಇಂಜಿನಿಯರ್ ರವಿಕುಮಾರ್ ಸೇರಿದಂತೆ ಗ್ರಾಮಸ್ಥರು ಹಾಜರಿದ್ದರು.

ತಾಯಿ- ಮಗು ಆರೈಕೆ, ಹೆರಿಗೆ ಆಸ್ಪತ್ರೆ ನಿರ್ಮಾಣಕ್ಕೆ ಒತ್ತಾಯಿಸಿ

ಇಂದು ಬೃಹತ್ ಜಾಥಾ, ಸಹಿ ಸಂಗ್ರಹ ಆಂದೋಲನ



ಪೂರ್ವಭಾವಿ ಸಭೆಯಲ್ಲಿ ಮೋಹನಕುಮಾರಿ ಮಾತನಾಡಿದರು.

ತಿ.ನರಸೀಪುರ, ಮಾ.3– ಪಟ್ಟಣದಲ್ಲಿ ತಾಯಿ–ಮಗು ಆರೈಕೆ ಮತ್ತು ಹೆರಿಗೆ ಆಸ್ಪತ್ರೆ ನಿರ್ಮಾಣಕ್ಕಾಗಿ ಒತ್ತಾಯಿಸಿ ಮಾ.4ರಂದು ಬೃಹತ್ ಜಾಥಾ ಮತ್ತು ಸಹಿ ಸಂಗ್ರಹ ಆಂದೋಲನವನ್ನು ಹಮ್ಮಿಕೊಳ್ಳಲಾಗಿದೆ ಎಂದು ತಾಯಿ– ಮಗು ಆರೈಕೆ ಮತ್ತು ಹೆರಿಗೆ ಆಸ್ಪತ್ರೆ ನಿರ್ಮಾಣ ಹೋರಾಟ ಸಮಿತಿ ಅಧ್ಯಕ್ಷೆ ಮೋಹನ್ ಕುಮಾರಿ ತಿಳಿಸಿದರು.

ಪಟ್ಟಣದ ಕಬಿನಿ ಅತಿಥಿ ಗೃಹದಲ್ಲಿ ನಡೆದ ಪೂರ್ವಭಾವಿ ಸಭೆಯಲ್ಲಿ ಮಾತನಾಡಿದ ಅವರು, 'ಆರೋಗ್ಯಪೂರ್ಣ ಸಮಾಜಕ್ಕಾಗಿ ಆರೋಗ್ಯವಂತ ಮಗು' ಧ್ಯೇಯ ವಾಕ್ಯದೊಡನೆ ತಾಲೂಕಿನಲ್ಲೊಂದು ಸುಸಜ್ಜಿತ ತಾಯಿ ಮಗು ಆರೈಕೆ ಮತ್ತು ಹೆರಿಗೆ ಆಸ್ಪತ್ರೆ ನಿರ್ಮಾಣ ಮಾಡುವಂತೆ ಸರ್ಕಾರವನ್ನು ಆಗ್ರಹಿಸಲು ಮಾ.4ರಂದು ಬೆಳಗ್ಗೆ 10.30ಕ್ಕೆ ತಹಸೀಲ್ದಾರ್ ಕಚೇರಿಯಿಂದ ತಾಲೂಕು ಆರೋಗ್ಯ ಅಧಿಕಾರಿಗಳ ಕಚೇರಿಯವರೆಗೆ ಬೃಹತ್ ಜಾಥಾ ಮತ್ತು ಸಹಿ ಸಂಗ್ರಹ ಆಂದೋಲನ ನಡೆಯಲಿದೆ ಎಂದರು.

ಹೋರಾಟ ಸಮಿತಿ ಸಂಚಾಲಕ ಆಲಗೂಡು ಶಿವಕುಮಾರ್ ಮಾತನಾಡಿ, ರಾಜ್ಯದ ಆಡಳಿತಾರೂಢ ಸರ್ಕಾರದಲ್ಲಿ ಸಿಎಂ ಸಿದ್ದರಾಮಯ್ಯ ಹಾಗೂ ಜಿಲ್ಲಾ ಉಸ್ತುವಾರಿ ಸಚಿವರು ಶಾಸಕರಾಗಿ ಪ್ರತಿನಿಧಿಸುವ ನರಸೀಪುರ ತಾಲೂಕು ಕೇಂದ್ರದಲ್ಲಿ ತಾಯಿ ಮಗು ಆರೈಕೆ ಹಾಗೂ ಹೆರಿಗೆ ಆಸ್ಪತ್ರೆ ನಿರ್ಮಾಣವಾಗಲೇಬೇಕು. ಅದಕ್ಕಾಗಿ ಈಗಿನ ಬಜೆಟ್‌ನಲ್ಲಿ ಅನುದಾನ ಕಾಯ್ದಿರಿಸಬೇಕು. ಸರ್ಕಾರ ಹಾಗೂ ಜನಪ್ರತಿನಿಧಿಗಳ ಗಮನ ಸೆಳೆಯಲು ಬೃಹತ್ ಜಾಥಾ ಮತ್ತು ಸಹಿ ಸಂಗ್ರಹ ಆಂದೋಲನದ ಹೋರಾಟದ ಹೆಜ್ಜೆಯನ್ನಿಡುತ್ತಿದ್ದೇವೆ. ಜನಸಮುದಾಯಕ್ಕೆ ಅತ್ಯಗತ್ಯವಾಗಿರುವ ನಮ್ಮ ನ್ಯಾಯಯುತ ಬೇಡಿಕೆಗೆ ಸರ್ಕಾರ ಸ್ಪಂದಿಸುವ ವಿಶ್ವಾಸವಿದ್ದು, ಮುಂದಿನ ಹೋರಾಟಕ್ಕೆ ಆಸ್ಪದ ನೀಡುವುದಿಲ್ಲವೆಂಬ ನಂಬಿಕೆಯಿದೆ ಎಂದರು.

ಹೋರಾಟದ ರೂಪುರೇಷೆ ಬಗ್ಗೆ ಸಮಿತಿ ಉಪಾಧ್ಯಕ್ಷೆ ಕೋಮಲಾಕ್ಷಿ ನಾಗರಾಜ್ ಮಾಹಿತಿ ನೀಡಿದರು. ಪ್ರಧಾನ ಕಾರ್ಯದರ್ಶಿ ರೇಖಾ, ಸಂಚಾಲಕರಾದ ಸುರೇಶ್, ಮಣಿ, ಮಹದೇವಮ್ಮ, ಚಂದ್ರಮ್ಮ, ರೋಜ, ಶ್ವೇತಾ, ಆಶಾ, ಚೌಡಮ್ಮ, ನೇತ್ರಾವತಿ, ದಿವ್ಯ, ಹೊನ್ನಮ್ಮ, ನಿಂಗಮ್ಮಣ್ಣಿ ಗೌರಮ್ಮ, ದಸಂಸ ಸಂಚಾಲಕರಾದ ಯಾಚೇನಹಳ್ಳಿ ಸೋಮಶೇಖರ್, ಕುಕ್ಕೂರು ರಾಜು, ಮುಖಂಡರಾದ ಸುರೇಶ್, ಕಿರಗಸೂರು ರಜನಿ, ಬನ್ನಹಳ್ಳಿಹುಂಡಿ ಉಮೇಶ್, ಬಿಲಿಗೆರೆಹುಂಡಿ ಶಿವಕುಮಾರ್, ಶಾಂತಕುಮಾರ್ ಇತರರಿದ್ದರು.

ರಾಜ್ಯಪಾಲರ ಅಧಿಕಾರ ಮೊಟಕು

ರಾಜ್ಯ ಸರ್ಕಾರದ ವಿರುದ್ಧ ಬಿಜೆಪಿ-ಜೆಡಿಎಸ್ ಪ್ರತಿಭಟನೆ

ಬೆಂಗಳೂರು: ರಾಜ್ಯದ ಆಡಳಿತಾರೂಢ ಕಾಂಗ್ರೆಸ್ ಸರ್ಕಾರ ರಾಜ್ಯಪಾಲರ ಅಧಿಕಾರವನ್ನು ಮೊಟಕುಗೊಳಿಸಲು ಪ್ರಯತ್ನಿಸುತ್ತಿದೆ ಎಂದು ಆರೋಪಿಸಿ ಪ್ರತಿಪಕ್ಷಗಳಾದ ಬಿಜೆಪಿ ಹಾಗೂ ಜೆಡಿಎಸ್ ಸೋಮವಾರ ಪ್ರತಿಭಟನೆ ನಡೆಸಿದವು.

ಇಂದಿನಿಂದ ಬಜೆಟ್ ಅಧಿವೇಶನ ಆರಂಭವಾಗಿದ್ದು, ಇದರ ಬೆನ್ನಲ್ಲೇ ಪ್ರತಿಪಕ್ಷಗಳ ನಾಯಕರು ಶಾಸಕರ ಭವನದಿಂದ ವಿಧಾನಸೌಧಕ್ಕೆ ಪ್ರತಿಭಟನಾ ಮೆರವಣಿಗೆ ನಡೆಸಿದರು.

ಬಿಜೆಪಿ ರಾಜ್ಯಾಧ್ಯಕ್ಷ ಮತ್ತು ಶಿಕಾರಿಪುರ ಶಾಸಕ ಬಿ ವೈ ವಿಜಯೇಂದ್ರ, ಕರ್ನಾಟಕ ವಿಧಾನಸಭೆಯ ವಿರೋಧ ಪಕ್ಷದ ನಾಯಕ ಆರ್ ಅಶೋಕ, ವಿಧಾನ ಪರಿಷತ್ತಿನ ವಿರೋಧ ಪಕ್ಷದ ನಾಯಕ ಛಲವಾದಿ ನಾರಾಯಣಸ್ವಾಮಿ, ಶಾಸಕರು ಮತ್ತು ವಿಧಾನಪರಿಷತ್ತಿನ ಸದಸ್ಯರು ಶಾಸಕರ ಭವನದಿಂದ ವಿಧಾನಸೌಧಕ್ಕೆ ಮೆರವಣಿಗೆ ನಡೆಸಿದರು.

ವಿಶ್ವವಿದ್ಯಾಲಯಗಳ ಕುಲಪತಿ ಮತ್ತು ವಿವಿಧ ನೇಮಕಾತಿಗಳಲ್ಲಿ ರಾಜ್ಯಪಾಲರ ಅಧಿಕಾರವನ್ನು ಮೊಟಕುಗೊಳಿಸಲು ಸರ್ಕಾರ ಯತ್ನಿಸುತ್ತಿದೆ ಎಂದು ಆರೋಪಿಸಿದ ನಾಯಕರು, ಸಿದ್ದರಾಮಯ್ಯ ಸರ್ಕಾರವು 'ನೀಚ ರಾಜಕಾರಣದಲ್ಲಿ ತೊಡಗಿದೆ' ಎಂದು ಕಿಡಿಕಾರಿದರು.

ಈ ವೇಳೆ ಸುದ್ದಿಗಾರರೊಂದಿಗೆ ಮಾತನಾಡಿದ ವಿಪಕ್ಷ ನಾಯಕ ಆರ್.ಅಶೋಕ್ ಅವರು, ಸಂವಿಧಾನವು ರಾಜ್ಯಪಾಲರಿಗೆ ವಿಶೇಷ ಅಧಿಕಾರಗಳನ್ನು ನೀಡಿದೆ. ಆದರೆ, ಸರ್ಕಾರ ಆ ಅಧಿಕಾರವನ್ನು ಕಸಿದುಕೊಳ್ಳುವ ಮೂಲಕ 'ಪ್ರಜಾಪ್ರಭುತ್ವವನ್ನು ದುರ್ಬಲಗೊಳಿಸುತ್ತಿದೆ' ಎಂದು ವಾಗ್ದಾಳಿ ನಡೆಸಿದರು.



ಕಾಂಗ್ರೆಸ್ ಕಾನೂನುಗಳಿಗೆ ಗರಿಷ್ಠ ತಿದ್ದುಪಡಿಗಳನ್ನು ಮಾಡುವ ಮೂಲಕ ಬಾಬಾ ಸಾಹೇಬ್ ಭೀಮರಾವ್ ಅಂಬೇಡ್ಕರ್ ಅವರ ಸಂವಿಧಾನವನ್ನು ಅವಮಾನಿಸಿದೆ. ಇದೀಗ ವಿಶ್ವವಿದ್ಯಾಲಯಗಳ ಕುಲಪತಿ ಮತ್ತು ವಿವಿಧ ನೇಮಕಾತಿಗಳಲ್ಲಿ ರಾಜ್ಯಪಾಲರ ಅಧಿಕಾರವನ್ನು ಮೊಟಕುಗೊಳಿಸಲು ಯತ್ನಿಸುತ್ತಿದೆ ಎಂದು ಆರೋಪಿಸಿದರು.

ಸಾಮಾನ್ಯವಾಗಿ ರಾಜ್ಯಪಾಲರ ಭಾಷಣ ಸರ್ಕಾರದ ಒಂದು ವರ್ಷದ ಸಾಧನೆ ಮತ್ತು ಮುಂದಿನ ವರ್ಷಕ್ಕೆ ಇರಬೇಕಾದ ಮುನ್ನೋಟದ ಗುರಿಗಳನ್ನು ಒಳಗೊಂಡಿರುತ್ತದೆ. ಆದರೆ, ಈ ಕಾಂಗ್ರೆಸ್ ಸರ್ಕಾರ ಕಳೆದ ಒಂದು ವರ್ಷದಿಂದ ಏನನ್ನೂ ಮಾಡಿಲ್ಲ, ಮುಂದೆ ಏನನ್ನಾದರೂ ಮಾಡಲು ಯಾವ ದೂರದೃಷ್ಟಿಯೂ ಹೊಂದಿಲ್ಲ ಎಂಬುದಕ್ಕೆ ರಾಜ್ಯಪಾಲರ ಭಾಷಣವೇ ಸಾಕ್ಷಿ. ಕಾಂಗ್ರೆಸ್ ಸರ್ಕಾರ ರಾಜ್ಯಪಾಲರ ಭಾಷಣದ ಮೂಲಕ ಸುಳ್ಳು ಹೇಳಿಸಿ, ಅವರ ದಾರಿ ತಪ್ಪಿಸಿದ್ದಲ್ಲದೆ ನಾಡಿನ ಜನರ ದಿಕ್ಕನ್ನೂ ತಪ್ಪಿಸಿದೆ. ರಾಜ್ಯಪಾಲರ ಭಾಷಣ ಕೇಳಿದರೆ ಈ ಸರ್ಕಾರಕ್ಕೆ ಯಾವ ಗೊತ್ತು ಗುರಿಯಿಲ್ಲ ಎಂಬುದಂತು ಸ್ಪಷ್ಟ.

ಕನ್ನಡಿಗರನ್ನು ಸಾಲದ ಪ್ರಪಾತಕ್ಕೆ ತಳ್ಳಿದ್ದರ ಬಗ್ಗೆ ಇಂದಿನ ರಾಜ್ಯಪಾಲರ ಭಾಷಣದಲ್ಲಿ ಪ್ರಸ್ತಾಪವೇ ಇಲ್ಲ. ಪ್ರಧಾನಿ ಶ್ರೀ ನರೇಂದ್ರ ಮೋದಿ ಅವರ ನೇತೃತ್ವದ ಕೇಂದ್ರ ಸರ್ಕಾರದ ಕೆಲವು ಯೋಜನೆಗಳನ್ನು, ರಾಜ್ಯ ಕಾಂಗ್ರೆಸ್ ಸರ್ಕಾರ ತನ್ನ ಯೋಜನೆಗಳು ಎಂದು ಬಿಂಬಿಸಿಕೊಂಡಿರುವುದೇ ದೊಡ್ಡ ಸಾಧನೆಯಾಗಿದೆ. ಯಾವುದೇ ಸರ್ಕಾರಕ್ಕೆ ಪ್ರಮುಖವಾಗಿ ಎರಡು ಆದ್ಯತೆಗಳಿರುತ್ತವೆ. ಒಂದು ಜನಕಲ್ಯಾಣ ಮತ್ತೊಂದು ಅಭಿವೃದ್ಧಿ. ಆದರೆ, ಕಾಂಗ್ರೆಸ್ ಸರ್ಕಾರ ಇವೆರಡರ ನಡುವೆ ಸಮತೋಲನ ಸಾಧಿಸುವಲ್ಲಿ ಸಂಪೂರ್ಣವಾಗಿ ವಿಫಲವಾಗಿದೆ. ಒಟ್ಟಿನಲ್ಲಿ ನಾನು ನನ್ನ ರಾಜಕೀಯ ಜೀವನದಲ್ಲೇ ಇಷ್ಟೊಂದು ನಿಸ್ಸಾರವಾದ ರಾಜ್ಯಪಾಲರ ಭಾಷಣವನ್ನು ಎಂದೂ ಕೇಳಿರಲಿಲ್ಲ. ಏನನ್ನೂ ಮಾಡದ, ಮಾಡಲಾಗದ ಸರ್ಕಾರವನ್ನು ಆರಿಸಿ ಕಳುಹಿಸಿದ್ದು ಈ ನಾಡಿನ ದೌರ್ಭಾಗ್ಯ ಎಂಬುದು ರಾಜ್ಯಪಾಲರ ಭಾಷಣದಿಂದ ರಾಜ್ಯದ ಜನರಿಗೆ ಇಂದು ಮನವರಿಕೆಯಾಗಿದೆ ಎಂದು ಕಿಡಿಕಾರಿದರು.

ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಶ್ವವಿದ್ಯಾಲಯದ ಕುಲಪತಿ ನೇಮಕ ಸಂಬಂಧ ರಾಜ್ಯಪಾಲರಿಗೆ ಇರುವ ಅಧಿಕಾರವನ್ನು ರದ್ದುಪಡಿಸಿ, ಮುಖ್ಯಮಂತ್ರಿಗೆ ನೀಡುವ ಉದ್ದೇಶ ಹೊಂದಿರುವ 'ಕರ್ನಾಟಕ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಶ್ವವಿದ್ಯಾಲಯ ತಿದ್ದುಪಡಿ ಮಸೂದೆ-2024'ಗೆ ಬಿಜೆಪಿ ವಿರೋಧ ವ್ಯಕ್ತಪಡಿಸುತ್ತಿದೆ.

ಕಳೆದ ವರ್ಷ ಡಿಸೆಂಬರ್ ತಿಂಗಳಿನಲ್ಲಿ ನಡೆದ ಅಧಿವೇಶನದ ವೇಳೆ ವಿಪಕ್ಷಗಳು ತಿದ್ದುಪಡಿಗೆ ವಿರೋಧ ವ್ಯಕ್ತಪಡಿಸಿ, ಸದನದಿಂದ ಹೊರ ನಡೆದಿದ್ದು. ಇದರ ನಡುವೆಯೂ ಸರ್ಕಾರ ತಿದ್ದುಪಡಿಯನ್ನು ಅಂಗೀಕರಿಸಿತ್ತು ಬಳಿಕ ತಿದ್ದುಪಡಿ ಮಸೂದೆ ರಾಜ್ಯಪಾಲರ ಅಂಗಳ ತಲುಪಿತ್ತು. ಆದರೆ, ಹೆಚ್ಚಿನ ಸ್ಪಷ್ಟತೆ ಕೋರಿ ರಾಜ್ಯಪಾಲರು ಮಸೂದೆಯನ್ನು ಹಿಂದಿರುಗಿಸಿದ್ದರು.

ಮೈಸೂರು ಚಿತ್ರಮಂದಿರಗಳಲ್ಲಿ

ಪದ್ಮ ಚಿತ್ರಮಂದಿರ	**(ದೂ: 2521923)**
ಶಭಾಷ್ ಬಡ್ಡಿಮಗ್ನೆ (ಕ)	4 ಪ್ರದರ್ಶನಗಳು
ವುಡ್‌ಲ್ಯಾಂಡ್ಸ್ ಚಿತ್ರಮಂದಿರ	**(ದೂ: 2422871)**
ಡ್ರ್ಯಾಗನ್ (ತ)	4 ಪ್ರದರ್ಶನಗಳು
ಬಾಲಾಜಿ ಚಿತ್ರಮಂದಿರ	**(ದೂ: 2497199)**
ಬಡಾಸ್ ರವಿಕುಮಾರ್ (ಹಿಂ)	3 ಪ್ರದರ್ಶನಗಳು
ಮಹದೇಶ್ವರ ಚಿತ್ರಮಂದಿರ	**(ಮೊ:9900820093)**
1990's (ಕ)	4 ಪ್ರದರ್ಶನಗಳು
ಗಾಯಿತ್ರಿ	
ಛಾವಾ (ಹಿಂ)	4 ಪ್ರದರ್ಶನಗಳು
ರಾಜಕಮಲ್	
ಶಬ್ದಂ(ತ)	4 ಪ್ರದರ್ಶನಗಳು
ಸಂಗಂ	
ಅಪಾಯವಿದೆ ಎಚ್ಚರಿಕೆ + FIR (ಕ)	2+2 ಪ್ರದರ್ಶನಗಳು
ಲಿಡೋ	
1990's (ಕ)	4 ಪ್ರದರ್ಶನಗಳು
ತಿಬ್ಬಾದೇವಿ	
FORST (ಕ)	4 ಪ್ರದರ್ಶನಗಳು
ಪ್ರಭಾ	
ಭಗೀರಥ (ಕ)	4 ಪ್ರದರ್ಶನಗಳು

ಡಿಆರ್‌ಸಿ ಸಿನಿಮಾಸ್
ದೂ : 4240422/4241800

ಸ್ಕ್ರೀನ್ 1	ವಿದ್ದಾಮುಯರ್ಚಿ (ತ): ಬೆ.6.55ಕ್ಕೆ, ಬೆ.10ಕ್ಕೆ, ಮ.1.05ಕ್ಕೆ, ಸಂ.4.10ಕ್ಕೆ, ರಾ.7.15ಕ್ಕೆ, ರಾ.10.24ಕ್ಕೆ.
ಸ್ಕ್ರೀನ್ 2	ಅಧಿಪತ್ರ (ಕ): ಬೆ.10.10ಕ್ಕೆ, ನೋಡಿದವರು ಏನಂತಾರೆ (ಕ): ಮ.1.15ಕ್ಕೆ, ರುದ್ರ ಗರುಡ ಪುರಾಣ (ಕ): ಸಂ.4.10ಕ್ಕೆ, ಬಡಾಸ್ ರವಿಕುಮಾರ್ (ಹಿಂ): ರಾ.7.10ಕ್ಕೆ, ನರೇ ಅನೀಂಟೆ ಮೂನನ್‌ಮಕ್ಕಲ್ (ಮ): ರಾ.10.10ಕ್ಕೆ.
ಸ್ಕ್ರೀನ್ 3	ಮಿ.ರಾಣಿ (ಕ): ಬೆ.10.30ಕ್ಕೆ, ಲವಯಪಾ (ಹಿಂ): ಮ.1.15ಕ್ಕೆ, ರಾ.7.05ಕ್ಕೆ, ರಾ.10ಕ್ಕೆ, ಭಗೀರಥ (ಕ): ಸಂ.4.10ಕ್ಕೆ.
ಸ್ಕ್ರೀನ್ 4	ಅನ್‌ಲಾಕ್ ರಾಘವ (ಕ): ಬೆ.10.25ಕ್ಕೆ, ಸ್ಕೈಫೋರ್ಸ್ (ಹಿಂ): ಮ.1.20ಕ್ಕೆ, ಥಂಡೆಲ್ (ತೆ): ಸಂ.4.15ಕ್ಕೆ, ರಾ.7.20ಕ್ಕೆ, ರಾ.10.25ಕ್ಕೆ.

ಐನಾಕ್ಸ್ ಮೂವೀಸ್
INOX LIVE THE MOVIE
ದೂ : 2533444 / 2433456

ಸ್ಕ್ರೀನ್ 1	ಬ್ಯಾಡ್ ನ್ಯೂಸ್ (ಹಿಂ): ಬೆ.10ಕ್ಕೆ, ಮ.1ಕ್ಕೆ, ಸಂ.4ಕ್ಕೆ, ರಾ.7ಕ್ಕೆ, ರಾ.10ಕ್ಕೆ.
ಸ್ಕ್ರೀನ್ 2	ಕಲ್ಕಿ 2898 ಎಡಿ (ಕ): ಬೆ.11.40ಕ್ಕೆ, ಸಂ.6.05ಕ್ಕೆ, ಟ್ವಿಸ್ಟರ್ಸ್ (ಇಂ): ಮ.3.20ಕ್ಕೆ, ರಾ.9.45ಕ್ಕೆ.
ಸ್ಕ್ರೀನ್ 3	ಇಂಡಿಯನ್ 2 (ತ): ಬೆ.9.40ಕ್ಕೆ, ಸಂ.4.05ಕ್ಕೆ, ಟ್ವಿಸ್ಟರ್ಸ್ (ಇಂ): ಮ.1.20ಕ್ಕೆ, ರಾ.7.45ಕ್ಕೆ, ಡಾರ್ಲಿಂಗ್ ವೈ ದಿಸ್ ಕೊಲವರಿ (ತೆ): ರಾ.10.30ಕ್ಕೆ.
ಸ್ಕ್ರೀನ್ 4	ವಿದ್ಯಾರ್ಥಿ ವಿದ್ಯಾರ್ಥಿನಿಯರೇ (ಕ): ಬೆ.11.30ಕ್ಕೆ, ಕಲ್ಕಿ 2898 ಎಡಿ (3ಡಿ)(ತೆ): ಮ.2.50ಕ್ಕೆ, ಹಿರಣ್ಯ (ಕ): ಸಂ.6.30ಕ್ಕೆ, ಕಲ್ಕಿ 2898 ಎಡಿ (ಹಿಂ): ರಾ.9.30ಕ್ಕೆ.

ಮೈಸೂರು ವಿಷನ್ ಸಿನಿಮಾ
ದೂ : 0821-2973519

ಸ್ಕ್ರೀನ್ 1	ರಾಯಲ್ (ಕ): ಬೆ.10.40ಕ್ಕೆ, ರುದ್ರ ಗರುಡ ಪುರಾಣ (ಕ): ಮ.1.30ಕ್ಕೆ, ಸಂ.6.45ಕ್ಕೆ, ಮ್ಯಾಕ್ಸ್ (ಕ): ಸಂ.4.15ಕ್ಕೆ, ಕುಜಂತೈಗಲ್ ಮುನ್ನೇತ್ರ ಕಳಗಂ (ತ): ರಾ.9.30ಕ್ಕೆ.
ಸ್ಕ್ರೀನ್ 2	ಫಾರೆಸ್ಟ್ (ಕ): ಮ.1.05ಕ್ಕೆ, ಮ.3.50ಕ್ಕೆ, ರಾಯಲ್ (ಕ): ಸಂ.6.35ಕ್ಕೆ, ಸ್ಕೈ ಫೋರ್ಸ್ (ಹಿಂ): ರಾ.9.30ಕ್ಕೆ.
ಸ್ಕ್ರೀನ್ 3	ಸ್ಕೈ ಫೋರ್ಸ್ (ಹಿಂ): ಬೆ.11ಕ್ಕೆ, ರಾ.7.05ಕ್ಕೆ, ರಾಯಲ್ (ಕ): ಮ.1.25ಕ್ಕೆ, ಡೊಮಿನಿಕ್ ಅಂಡ್ ದಿ ಲೇಡಿಸ್ ಪರ್ಸ್ (ಮ): ಸಂ.4.15ಕ್ಕೆ, ರಾ.9.30ಕ್ಕೆ
ಸ್ಕ್ರೀನ್ 4	ಫಾರೆಸ್ಟ್ (ಕ): ಬೆ.10.40ಕ್ಕೆ, ರಾ.9.20ಕ್ಕೆ, ಛೂ ಮಂತರ್ (ಕ): ಮ.1.30ಕ್ಕೆ, ಸಂ.6.40ಕ್ಕೆ, ಸ್ಕೈ ಫೋರ್ಸ್ (ಹಿಂ): ಸಂ.4.15ಕ್ಕೆ.

ಪಿವಿಆರ್ ಸಿನಿಮಾಸ್
PVR CINEMAS
ನೆಕ್ಸಸ್ ಸೆಂಟರ್‌ಸಿಟಿ ಮಾಲ್, 2ನೇ ಮಹಡಿ, ಮೊ.ನಂ: 8951357139

ಕಿಂಗ್‌ಡಮ್ ಆಫ್ ದಿ ಪ್ಲಾನೆಟ್ ಆಫ್ ದಿ ಎಪಿಸ್ (ಇಂ): ಬೆ.10ಕ್ಕೆ, ಮ.1.05ಕ್ಕೆ, ಸಂ.4.10ಕ್ಕೆ, ರಾ.7.20ಕ್ಕೆ, ರಾ.10.30ಕ್ಕೆ, ಶ್ರೀಕಾಂತ್ (ಹಿಂ): ಬೆ.10ಕ್ಕೆ, ಮ.1ಕ್ಕೆ, ಸಂ.4.25ಕ್ಕೆ, ರಾ.7ಕ್ಕೆ, ರಾ.10.15ಕ್ಕೆ, ಸ್ಟಾರ್ (ತ): ಬೆ.11.45ಕ್ಕೆ, ಮ.3.05ಕ್ಕೆ, ಸಂ.6.25ಕ್ಕೆ, ರಾ.9.45ಕ್ಕೆ, ಅರಮನೈ 4 (ತ): ಮ.12.30ಕ್ಕೆ, ಪ್ರತಿನಿಧಿ 2 (ತೆ): ಮ.12.55ಕ್ಕೆ, ರಾ.9.15ಕ್ಕೆ, ರಾಮನ ಅವತಾರ (ಕ): ಮ.3.40ಕ್ಕೆ, ಅಂಜನೀಪುತ್ರ (ಕ): ಸಂ.4ಕ್ಕೆ, ಗ್ರೇ ಗೇಮ್ಸ್ (ಕ): ಸಂ.6.35ಕ್ಕೆ, ಕೃಷ್ಣಮ್ಮ (ತೆ): ರಾ.7.25ಕ್ಕೆ, ಮಾರಿವಿಲ್ಲಿನ್ ಗೋಪುರಂಗಲ್ (ಮ): ರಾ.10ಕ್ಕೆ.

ಸೂಚನೆ : ಸಿನಿಮಾ ಮಾರ್ಗದರ್ಶಿಯಲ್ಲಿ ಮಾಹಿತಿಯನ್ನು ಪರಿಪೂರ್ಣಗೊಳಿಸಲು ನಾವು ಸಾಧ್ಯವಾದಷ್ಟೂ ಪ್ರಯತ್ನಿಸುತ್ತಿದ್ದೇವೆ. ಆದರೂ ಕೆಲವೊಮ್ಮೆ ಮಾಹಿತಿ ಅಲಭ್ಯತೆಯಿಂದ ಲೋಪಗಳು ಉಂಟಾಗುವ ಸಾಧ್ಯತೆಯಿದ್ದು, ಸಾರ್ವಜನಿಕರು ಸಹಕರಿಸಬೇಕಾಗಿ ಕಳಕಳಿ ಮನವಿ.

ಇನ್ನೋವಾ ಕಾರಿಗೆ ಬೈಕ್ ಡಿಕ್ಕಿ; ಮಗು ಸೇರಿ ನಾಲ್ವರು ಸ್ಥಳದಲ್ಲೇ ಸಾವು

ಕೋಲಾರ: ಇನ್ನೋವಾ ಕಾರು ಹಾಗೂ ಬೈಕ್ ನಡುವೆ ಡಿಕ್ಕಿ ಸಂಭವಿಸಿದ ಪರಿಣಾಮ ನಾಲ್ವರು ಸ್ಥಳದಲ್ಲೇ ಮೃತಪಟ್ಟಿದ್ದು, ಉಳಿದ ನಾಲ್ವರು ಗಂಭೀರವಾಗಿ ಗಾಯಗೊಂಡಿರುವ ಘಟನೆ ಕೋಲಾರ ಜಿಲ್ಲೆ ಬಂಗಾರಪೇಟೆ ತಾಲೂಕಿನ ಕುಪ್ಪನಹಳ್ಳಿ ಬಳಿ ನಡೆದಿದೆ.

ಕೋಲಾರದ ನೂತನ ಬೆಂಗಳೂರು-ಚೆನ್ನೈ ಎಕ್ಸ್‌ಪ್ರೆಸ್‌ವೇನಲ್ಲಿ ಘಟನೆ ನಡೆದಿದೆ. ಕಾರಿನಲ್ಲಿದ್ದ ಮಹೇಶ (45), ಉದ್ವಿತ (2), ರತ್ನಮ್ಮ (60) ಹಾಗೂ ಬೈಕ್ ಸವಾರ ಸ್ಥಳದಲ್ಲೇ ಸಾವನ್ನಪ್ಪಿದ್ದಾರೆ. ಸದ್ಯ ಬೈಕ್ ಸವಾರನ ಗುರುತು ಪತ್ತೆಯಾಗಿಲ್ಲ. ಸುಶ್ಮಿತಾ, ವಿರುತ, ಸುಜಾತ, ಸುನಿಲ್ ಎಂಬುವರು ಗಂಭೀರವಾಗಿ ಗಾಯಗೊಂಡಿದ್ದಾರೆ. ಮೃತಪಟ್ಟವರು ಕೆಜಿಎಫ್ ತಾಲೂಕು ಕಮ್ಮಸಂದ್ರ ಗ್ರಾಮದವರಾಗಿದ್ದಾರೆ.

ಬೆಂಗಳೂರಿನಿಂದ ವಾಪಸ್ ಗ್ರಾಮಕ್ಕೆ ತೆರಳುವ ವೇಳೆ ಘಟನೆ ನಡೆದಿದೆ. ಬಂಗಾರಪೇಟೆ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ದುರಂತ ಸಂಭವಿಸಿದೆ.

ಗೋವುಗಳ ರಕ್ಷಣೆಗೆ ಎಲ್ಲರೂ ಸಹಕರಿಸಬೇಕು

ಕೆ.ರಘುರಾಮ್ ವಾಜಪೇಯಿ ಮನವಿ

ಮೈಸೂರು,ಮಾ.3(ಎಂಟಿವೈ)- ಭಾರತೀಯ ಸಂಸ್ಕೃತಿಯಲ್ಲಿ ಮಹತ್ವದ ಸ್ಥಾನ ಹೊಂದಿರುವ ಗೋವುಗಳ ಸಂರಕ್ಷಣೆಗೆ ಎಲ್ಲರೂ ಸಹಕರಿಸಬೇಕು ಎಂದು ಸಮಾಜ ಸೇವಕ ಕೆ.ರಘುರಾಮ್ ವಾಜಪೇಯಿ ಮನವಿ ಮಾಡಿದ್ದಾರೆ.

ಮೈಸೂರಿನ ನಾರಾಯಣ ಶಾಸ್ತ್ರಿ ರಸ್ತೆಯಲ್ಲಿರುವ ಶ್ರೀ ವೇಣುಗೋಪಾಲ ಸ್ವಾಮಿ ದೇವಸ್ಥಾನದ ಮುಂಭಾಗ ಅರಿವು ಸಂಸ್ಥೆಯ 13ನೇ ವರ್ಷದ ವಾರ್ಷಿಕೋತ್ಸವದ ಅಂಗವಾಗಿ ಗೋವುಗಳಿಗೆ ಪೂಜೆ ಸಲ್ಲಿಸಿ, ಗೋ ಸಂರಕ್ಷಣಾ ಜಾಗೃತಿ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದ ಅವರು, ದೇಶದಲ್ಲಿ ಗೋ ಸಂತತಿ ಹೆಚ್ಚಾಗಿದ್ದು, ಬೇರೆ ದೇಶಕ್ಕೆ ಹೋಲಿಸಿದರೆ ಭಾರತದಲ್ಲಿ ಹೆಚ್ಚಿನ ಗೋವುಗಳಿವೆ. ದೇಶದಲ್ಲಿ 30 ಸಾವಿರ ಕೋಟಿ ಗೋವುಗಳಿವೆ. ಅವುಗಳ ಸಂರಕ್ಷಣೆ ಮೊದಲ ಕರ್ತವ್ಯ ಆಗಬೇಕು. ಗೋ ಸಂರಕ್ಷಣೆ ನಮ್ಮ ಸಂಸ್ಕೃತಿಯಾಗಿರುವ ಕಾರಣ ಭಾರತದ ಸಂಸ್ಕೃತಿ ವಿಶ್ವ ಮಟ್ಟದಲ್ಲಿ ಗುರುತಿಸಿಕೊಂಡಿದೆ. ಗೋವು ಉಳಿದರೆ ಭಾರತೀಯ ಸಂಸ್ಕೃತಿ ಉಳಿದಂತೆ. ಈ ನಿಟ್ಟಿನಲ್ಲಿ ಗೋ ವನ್ನು ರಾಷ್ಟ್ರೀಯ ಪ್ರಾಣಿ ಎಂದು ಘೋಷಿಸಬೇಕು. ಗೋಪೂಜೆ ಮಾಡುವ ಏಕೈಕ ದೇಶ ಭಾರತ, ಇಲ್ಲಿ ಗೋಹತ್ಯೆ ನಿಲ್ಲಬೇಕು ಎಂದು ಒತ್ತಾಯಿಸಿದರು.



ಮೈಸೂರಿನ ನಾರಾಯಣ ಶಾಸ್ತ್ರಿ ರಸ್ತೆಯಲ್ಲಿ ಅರಿವು ಸಂಸ್ಥೆ ವತಿಯಿಂದ ಆಯೋಜಿಸಿದ್ದ ಗೋ ಸಂರಕ್ಷಣಾ ಅಭಿಯಾನದಲ್ಲಿ ಗೋವುಗಳಿಗೆ ಹುಲ್ಲನ್ನು ತಿನ್ನಿಸುತ್ತಿರುವುದು.

ಪಾಲಿಕೆ ಮಾಜಿ ಸದಸ್ಯ ಮ.ವಿ.ರಾಮಪ್ರಸಾದ್ ಮಾತನಾಡಿ, ಗೋವಿನ ಹಾಲು ಸೇರಿದಂತೆ ಗೋ ಉತ್ಪನ್ನಗಳು ನಮ್ಮ ಶರೀರಕ್ಕೆ ರೋಗ ನಿರೋಧಕ ಶಕ್ತಿಯನ್ನು ಒದಗಿಸುತ್ತದೆ. ಆದ್ದರಿಂದ ಗೋವುಗಳಿಗೆ ನಾವು ವಿಶೇಷ ಆದ್ಯತೆ ನೀಡಬೇಕು ಎಂದು ಹೇಳಿದರು

ಅರಿವು ಸಂಸ್ಥೆಯ ಅಧ್ಯಕ್ಷ ಶ್ರೀಕಾಂತ್ ಕಶ್ಯಪ್ ಮಾತನಾಡಿ, ಭಾರತದ ಸನಾತನ ಮೌಲ್ಯಗಳಿಗೆ ವಿಶ್ವದಲ್ಲಿ ಮನ್ನಣೆ ದೊರೆಯುತ್ತಿದೆ. ವಿಶ್ವಕ್ಕೆ ಭಾರತವು ಅತಿದೊಡ್ಡ ಆಧ್ಯಾತ್ಮಿಕ ಶಕ್ತಿ ಕೇಂದ್ರವಾಗಿದೆ. ದೇಶದ ಅಳಿವು ಉಳಿವು ಆಧ್ಯಾತ್ಮಿಕ ಶಕ್ತಿಯಲ್ಲಿ ಅಡಗಿದೆ. ದೇಶದ ಸನಾತನ ಮೌಲ್ಯಗಳಿಗೆ ಮತ್ತೆ ಜೀವ ಬಂದಿದೆ ಎಂದರು. ಕಾರ್ಯಕ್ರಮದಲ್ಲಿ ಜೆಡಿಎಸ್ ನಗರ ಕಾರ್ಯಾಧ್ಯಕ್ಷ ಎಸ್ ಪ್ರಕಾಶ್ ಪ್ರಿಯದರ್ಶನ್, ಜತ್ತಿ ಪ್ರಸಾದ್, ಶಿವು, ನಂದೀಶ್, ಅರುಣ್ ಕುಮಾರ್, ಕಿರಣ್, ರಾಕೇಶ್, ವಿನಯ್ ಹಾಗೂ ಇನ್ನಿತರರು ಉಪಸ್ಥಿತರಿದ್ದರು.

ರಾಜ್ಯಪಾಲರ ಬಾಯಲ್ಲಿ ಹಸಿಸುಳ್ಳು ಹೇಳಿಸಿದ ಸರ್ಕಾರ: ಬಿಜೆಪಿ ಟೀಕೆ

ಬೆಂಗಳೂರು: ರಾಜ್ಯಪಾಲರಿಗೆ ಅಪಮಾನ ಮಾಡಿರುವ ಕಾಂಗ್ರೆಸ್ ಸರ್ಕಾರ ಕೊನೆಗೆ ಅವರಿಂದಲೇ ಹೊಗಳಿಸಿಕೊಳ್ಳಬೇಕಾಯಿತು. ರಾಜ್ಯಪಾಲರಿಂದ ಸರ್ಕಾರ ಸುಳ್ಳು ಭಾಷಣ ಮಾಡಿಸಿದೆ ಎಂದು ಬಿಜೆಪಿ ನಾಯಕರು ಟೀಕಿಸಿದರು.

ರಾಜ್ಯಪಾಲರ ಭಾಷಣದ ಬಳಿಕ ಮಾತನಾಡಿದ ಬಿಜೆಪಿ ರಾಜ್ಯಾಧ್ಯಕ್ಷ ವಿಜಯೇಂದ್ರ, ಈ ಸರ್ಕಾರ್ ನಟ್ ಮತ್ತು ಬೋಲ್ಟ್ ಎರಡೂ ಸಡಿಲ ಆಗಿದೆ ಎಂಬುದು ಸ್ಪಷ್ಟ. ಅಭಿವೃದ್ಧಿ ವಿಷಯದಲ್ಲಿ ಈ ಸರಕಾರದ ನಟ್ ಮತ್ತು ಬೋಲ್ಟ್ ಲೂಸ್ ಆಗಿದೆ. ಇದು ರಾಜ್ಯಪಾಲರ ಭಾಷಣದಲ್ಲಿ ಸ್ಪಷ್ಟವಾಗಿ ಗೋಚರಿಸುತ್ತದೆ ಎಂದು ಕಿಡಿ ಕಾರಿದರು.

ಒಂದು ಕಡೆ ಹೈನುಗಾರಿಕೆಗೆ ಪ್ರೋತ್ಸಾಹಧನದ ಪ್ರಸ್ತಾಪ ಮಾಡಿದ್ದಾರೆ. ಸಾವಿರಾರು ಕೋಟಿ ಹಳೆಯ ಪ್ರೋತ್ಸಾಹಧನ ಹಾಗೇ ಬಾಕಿ ಉಳಿಸಿಕೊಂಡಿದ್ದಾರೆ. ಪ್ರಾದೇಶಿಕ ಅಸಮಾನತೆ ಹೋಗಲಾಡಿಸಲು 90 ಸಾವಿರ ಕೋಟಿ ರೂ. ಖರ್ಚು ಮಾಡುವುದಾಗಿ ಹೇಳಿದ್ದಾರೆ. ಕಳೆದೆರಡು ವರ್ಷಗಳಲ್ಲಿ ಎಷ್ಟು ಮೀಸಲಿಟ್ಟಿದ್ದಾರೆ? ಎಷ್ಟು ಖರ್ಚಾಗಿದೆ? ಎಂದು ಪ್ರಶ್ನಿಸಿದರು.

ರಾಜ್ಯಪಾಲರ ಭಾಷಣ ಕೇಳಿಸಿಕೊಂಡರೆ ರಾಜ್ಯಪಾಲರ ಸಮಯವನ್ನು ಕೂಡ ಈ ಸರ್ಕಾರ ವ್ಯರ್ಥ ಮಾಡಿದೆ. ಅಭಿವೃದ್ಧಿಯ ವೇಗವನ್ನು ಚುರುಕುಗೊಳಿಸುವುದರಲ್ಲಿ ಮತ್ತು ಸರಕಾರದ ಹಣಕಾಸಿನ ವ್ಯವಸ್ಥೆಯನ್ನು ಇನ್ನಷ್ಟು ಸದೃಢಗೊಳಿಸುವಲ್ಲಿ ಯಶಸ್ವಿಯಾಗಿದೆ ಎಂಬ ಹಸಿಸುಳ್ಳನ್ನು ಈ ಕಾಂಗ್ರೆಸ್ ಸರಕಾರವು ರಾಜ್ಯಪಾಲರ ಬಾಯಲ್ಲಿ ಹೇಳಿಸಿದೆ ಎಂದು ವಿಜಯೇಂದ್ರ ಟೀಕಿಸಿದರು.

ವಿರೋಧ ಪಕ್ಷದ ನಾಯಕ ಆರ್. ಅಶೋಕ್ ಅವರು ಮಾತನಾಡಿ, ಕರ್ನಾಟಕದ ಇತಿಹಾಸದಲ್ಲಿ ಅತ್ಯಂತ ಕಳಪೆ ಸಾಧನೆ ಮಾಡಿದ ಸರಕಾರ ಇದೆಂದು ದೂರಿದರು. ಆದರೆ, ಮಾನ್ಯ ಗವರ್ನರ್ ಕೈಯಲ್ಲಿ ತಾವೇನೋ ಚಾಂಪಿಯನ್ ಎಂಬಂತೆ ಹೇಳಿಸಿಕೊಂಡಿದ್ದಾರೆ. ಇದಕ್ಕೆ ಕಾಂಗ್ರೆಸ್ ಸರಕಾರಕ್ಕೆ ನಾಚಿಕೆ ಆಗಬೇಕು ಎಂದು ನುಡಿದರು.

ಒಂದು ರೀತಿಯ ಪಾಪರ್ ಚೀಟಿ ಎತ್ತಿಕೊಂಡ ಈ ಸರಕಾರವು ಕೇವಲ ಸುಳ್ಳುಗಳನ್ನು ಪಟ್ಟಿ ಮಾಡಿ ಗೌರವಾನ್ವಿತ ರಾಜ್ಯಪಾಲರ ಕಡೆಯಿಂದ ಹೇಳಿಸಿದೆ ಎಂದು ವಿಧಾನಪರಿಷತ್ ವಿಪಕ್ಷ ನಾಯಕ ಛಲವಾದಿ ನಾರಾಯಣಸ್ವಾಮಿ ಅವರು ಆಕ್ಷೇಪಿಸಿದರು.

ನಟ್ಟು ಬೋಲ್ಟ್ ಟೈಟ್: ಫಿಲಂ ಇಂಡಸ್ಟ್ರಿ ಅಧ್ಯಕ್ಷರಿಗೆ ವಾರ್ನಿಂಗ್ ನೀಡಿದ ರವಿ ಗಣಿಗ!

ಬೆಂಗಳೂರು: 16ನೇ ಬೆಂಗಳೂರು ಅಂತಾರಾಷ್ಟ್ರೀಯ ಚಲನಚಿತ್ರೋತ್ಸವ ಉದ್ಘಾಟನೆ ವೇಳೆಯಲ್ಲಿ ಉಪ ಮುಖ್ಯಮಂತ್ರಿ ಡಿಕೆ ಶಿವಕುಮಾರ್ ನೀಡಿರುವ 'ನಟ್ಟು ಬೋಲ್ಟ್ ಟೈಟ್ 'ಮಾಡುವೆ ಹೇಳಿಕೆ ಸರಿಯಿಲ್ಲ ಎಂಬ ಕರ್ನಾಟಕ ಚಲನಚಿತ್ರ ವಾಣಿಜ್ಯ ಮಂಡಳಿ ಅಧ್ಯಕ್ಷ ಎಂ.ನರಸಿಂಹಲು ವಿರುದ್ಧ ಶಾಸಕ ರವಿ ಗಣಿಗ ತೀವ್ರ ಆಕ್ರೋಶ ವ್ಯಕ್ತಪಡಿಸಿದ್ದಾರೆ.



ವಿಧಾನಸೌಧದಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ರವಿ ಗಣಿಗ, ಆಂಧ್ರ ಮೂಲದ ನರಸಿಂಹಲು ಡಿಸಿಎಂ ಮಾತು ಸರಿ ಇಲ್ಲ ಎಂದಿದ್ದಾರೆ. ಅವರಿಗೆ ಇದೇ ಲಾಸ್ಟ್ ವಾರ್ನಿಂಗ್, ಸಿನಿಮಾಗಳಿಗೆ ಸಬ್ಸಿಡಿ ನೀಡಬೇಡಿ, ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಹೇಳುತ್ತೇನೆ ಎಂದರು.

ಕಳೆದ ಬಾರಿಯ ಫಿಲಂ ಫೆಸ್ಟಿವಲ್ ಸಂದರ್ಭದಲ್ಲಿ ರಶ್ಮಿಕಾ ಮಂದಣ್ಣ ಅವರನ್ನು ಶಾಸಕರು ಕರೆಯಲು ಹೋದಾಗ ಟೈಮ್ ಇಲ್ಲ ಅಂತ ಹೇಳಿದ್ದರು. ಅಂಥವರಿಗೆ ಏನು ಮಾಡಬೇಕು? ಎಂದು ಕೇಳುವ ಮೂಲಕ ಡಿಸಿಎಂ ಡಿಕೆ ಶಿವಕುಮಾರ್ ಅವರ ಹೇಳಿಕೆಯನ್ನು ಸಮರ್ಥಿಸಿಕೊಂಡರು.

ನೆನ್ನೆಯೂ ಮೈಸೂರಿನಲ್ಲಿ ಈ ವಿಚಾರ ಕುರಿತು ಮಾತನಾಡಿದ ರವಿ ಗಣಿಗ, ಕನ್ನಡಿಗರಿಂದಲೇ ಇವರೆಲ್ಲ ಸ್ಟಾರ್ ಆಗಿರುವುದು, ಸಿನಿಮಾಗಳಿಗೆ ಸಬ್ಸಿಡಿ ಬೇಕು ಅಂದಾಗ ಸರ್ಕಾರದ ಬಳಿಗೆ ಬರುತ್ತಾರೆ. ಆದರೆ, ಕನ್ನಡದ ನೆಲ, ಜಲ, ಭಾಷೆ ಬೇಡವೇ? ಆಹ್ವಾನ ಕಳುಹಿಸಿದ್ದರೆ ಏಕೆ ಬರುವುದಿಲ್ಲ? ಎಂದು ಪ್ರಶ್ನಿಸಿದರು.

ಡಾ. ರಾಜ್‌ಕುಮಾರ್, ಅಂಬರೀಶ್, ವಿಷ್ಣುವರ್ಧನ್ ಅವರೆಲ್ಲ ರಾಜ್ಯೋತ್ಸವ ಸಮಾರಂಭಗಳಿಗೆ ಬರುತ್ತಿದ್ದರು. ಅಭಿಮಾನಿಗಳು ಅವರನ್ನು ಹೊತ್ತು ಮೆರೆಸಿದ್ದಕ್ಕೆ ಅವರು ಸ್ಟಾರ್‌ಗಳಾಗಿದ್ದು, ಈಗಿನ ನಟರಲ್ಲಿ ದರ್ಶನ್ ಹೊರತುಪಡಿಸಿ ಬೇರೆ ಯಾರು ಬರುವುದಿಲ್ಲ. ಇದೆಲ್ಲವನ್ನೂ ನಾವು ಪ್ರಶ್ನೆ ಮಾಡಬಾರದ ಎಂದು ವಾಗ್ದಾಳಿ ನಡೆಸಿದರು.

ಇದೇ ವೇಳೆ ಡಿಕೆ ಶಿವಕುಮಾರ್ ಅವರ ಹೇಳಿಕೆ ಕುರಿತು ಪ್ರತಿಕ್ರಿಯಿಸಿದ ವಿಧಾನಪರಿಷತ್ ಸದಸ್ಯ ಸಿ.ಟಿ. ರವಿ, ಕಲಾವಿದರನ್ನು ಅಪಮಾನ ಮಾಡುವ ಕೆಲಸ ಮಾಡಿರುವ ಡಿಕೆ ಶಿವಕುಮಾರ್ ಮೊದಲು ಕಾಂಗ್ರೆಸ್‌ನಲ್ಲಿ ನಟ್ಟು ಬೋಲ್ಟ್ ಟೈಟ್ ಮಾಡಲಿ. ಹೀಗೆ ಹುಚ್ಚು ಹುಚ್ಚಾಗಿ ಮಾತನಾಡುವುದನ್ನು ನಿಲ್ಲಿಸಲಿ ಎಂದು ತಾಕೀತು ಮಾಡಿದರು.

ಚಿತ್ರರಂಗ ಗೋಕಾಕ್ ಚಳವಳಿ ಮಾಡಿ ಸರ್ಕಾರವನ್ನೇ ಬೀಳಿಸಿತ್ತು

ಸಾರಾ ಗೋವಿಂದು ಎಚ್ಚರಿಕೆ

ಬೆಂಗಳೂರು: ಡಿಸಿಎಂ ವಾರ್ನಿಂಗ್ ಮಾಡೋದು ಸರಿಯಲ್ಲ. ಗೋಕಾಕ್ ಚಳುವಳಿ ಮಾಡಿ ಚಿತ್ರರಂಗ ಸರ್ಕಾರವನ್ನೇ ಬೀಳಿಸಿತ್ತು ಎಂದು ನಿರ್ಮಾಪಕ ಸಾರಾ ಗೋವಿಂದು ಹೇಳಿದರು.



ಮಾಧ್ಯಮದವರೊಂದಿಗೆ ಮಾತ ನಾಡಿದ ಅವರು, ಭಾಷೆಗೆ ಅನ್ಯಾಯವಾದಾಗ ಸ್ಪಂದಿಸುವುದು ನಮ್ಮ ಕರ್ತವ್ಯವಾಗಿದೆ. ಮಾತು ಅತಿರೇಕಕ್ಕೆ ಹೋಗಬಾರದು. ಕಲಾವಿದರಿಗೆ ಗೌರವ ಕೊಡಬೇಕು. ನಿಮ್ಮ ಮಾತಿನ ನೋವು ನಮಗೆ ಅರ್ಥವಾಗುತ್ತದೆ. ಆದರೆ ನಾವು ಹೋರಾಟ ಮಾಡಿಕೊಂಡು ಬಂದಿದ್ದೇವೆ. ಮಹದಾಯಿ, ಕಳಸ ಬಂಡೂರಿ ವಿಚಾರಕ್ಕೆ ಬಂದಾಗ ನಾವು ಹೋರಾಟ ಮಾಡಿದ್ದೇವೆ ಎಂದರು.

ಕನ್ನಡ ಪರ ಸಂಘಟನೆಗಳು ರಾಜಭವನಕ್ಕೆ ಮುತ್ತಿಗೆ ಹಾಕಲು ಯತ್ನಿಸಿತ್ತು. ರಾಜಭವನ ಮುಂಭಾಗ ಬಿಗಿ ಪೊಲೀಸ್ ಬಂದೋಬಸ್ತ್ ಹಿನ್ನೆಲೆ ರಾಜಭವನಕ್ಕೆ ಮುತ್ತಿಗೆ ಹಾಕಲು ಬಂದ ಕನ್ನಡಪರ ಸಂಘಟನೆಗಳಿಗೆ ಪೊಲೀಸರು ಅವಕಾಶ ನೀಡಲಿಲ್ಲ.

ಈ ವೇಳೆ ಕನ್ನಡ ಹೋರಾಟಗಾರ ವಾಟಾಳ್ ನಾಗರಾಜ್ ಪ್ರತಿಕ್ರಿಯಿಸಿ, ಎಂಇಎಸ್ ನಿಷೇಧ, ಮೇಕೆದಾಟು, ಕಳಸಬಂಡೂರಿ ಯೋಜನೆ ಅನುಷ್ಠಾನ, ಕನ್ನಡಿಗರಿಗೆ ಉದ್ಯೋಗ, ಬೆಳಗಾವಿಯಲ್ಲಿ ಹಲ್ಲೆ ಪ್ರಕರಣ ಇವೆಲ್ಲದರ ವಿರುದ್ಧ ಕನ್ನಡಿಗರ ಸಮರ. ಹೀಗಾಗಿಯೇ ಅಖಂಡ ಕರ್ನಾಟಕ ಬಂದ್ ಕರೆದಿದ್ದೇವೆ. ಮೆಟ್ರೋ ದರ ಏರಿಕೆಯನ್ನು ಸೇರಿಸಿದ್ದೇವೆ. ಬಂದ್ ದಿನ ಮೆಟ್ರೋ ಓಡಬಾರದು. ಗ್ರೇಟರ್ ಬೆಂಗಳೂರು ಮಾಡಿ ತಮಿಳು, ತೆಲುಗು, ಪಂಜಾಬಿಗೊಂದು ಬೆಂಗಳೂರನ್ನು ಕೊಡಲು ನಿರ್ಧರಿಸಿದ್ದಾರೆ ಎಂದು ಕಿಡಿಕಾರಿದರು.

ಮಾರ್ಚ್ 22 ರಂದು ಬಂದ್ ಆಗೇ ಆಗುತ್ತದೆ. ಬಂದ್ ದಿನಾಂಕ ಬದಲಾವಣೆ ಮಾಡಲ್ಲ. ಒಂದು ದಿನ ಕರ್ನಾಟಕಕ್ಕೆ ತ್ಯಾಗ ಮಾಡಿ. ಸಾರಿಗೆ ಸಚಿವರೇ ನೀವಾಗಿ ನೀವೇ ಬಸ್ ನಿಲ್ಲಿಸಬೇಕು. ಪರೀಕ್ಷೆ, ದೇವಸ್ಥಾನ ಅಂತೆಲ್ಲ ನೋಡೋಕೆ ಆಗಲ್ಲ. ಪರೀಕ್ಷೆಯನ್ನು ಮುಂದೂಡಲಿ ಅದು ಅವರ ಕರ್ತವ್ಯ ಎಂದರು.

9 ವಿವಿ ಮುಚ್ಚುವ ಸರ್ಕಾರದ ಕ್ರಮಕ್ಕೆ ವಿರೋಧ

ಮೈಸೂರು, ಮಾ.3(ಜಿಎ)- ಶಿಕ್ಷಣ ತಜ್ಞರೊಂದಿಗೆ ಸಮಾಲೋಚನೆ ನಡೆಸದೇ ಆರ್ಥಿಕ ಸಂಪನ್ಮೂಲ ಕೊರತೆ ಎಂಬ ಕಾರಣಕ್ಕೆ ರಾಜ್ಯದ 9 ವಿಶ್ವವಿದ್ಯಾನಿಲಯಗಳನ್ನು ಮುಚ್ಚುತ್ತಿರುವುದು ಸರಿಯಲ್ಲ ಎಂದು ಮೈಸೂರು ವಿವಿಯ ನಿವೃತ್ತ ಪ್ರಾಧ್ಯಾಪಕರಾದ ಡಾ.ಮಹದೇವ್ ತಿಳಿಸಿದರು.

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಅಂದಿನ ರಾಜ್ಯ ಸರ್ಕಾರ ಶಿಕ್ಷಣ ತಜ್ಞರೊಂದಿಗೆ ಸಮಾಲೋಚನೆ ನಡೆಸದೇ, ಆರ್ಥಿಕ ಸಂಪನ್ಮೂಲ ಸಿದ್ಧಪಡಿಸಿಕೊಳ್ಳದೇ ರಾಜಕೀಯ ಲಾಭಕ್ಕಾಗಿ 10 ಹೊಸ ವಿವಿಗಳನ್ನು ಆರಂಭಿಸಿದು ತಪ್ಪು. ಆದರೆ ಈಗ ಅವನ್ನು ಈಗಿನ ಸರ್ಕಾರ ಮುಚ್ಚ ಹೊರಟಿರುವುದು ಅವೆಲ್ಲವನ್ನೂ ಮೀರಿದ ತಪ್ಪಾಗಿದೆ ಎಂದರು.

ಹೊಸದಾಗಿ ತೆರೆದಿರುವ ವಿವಿಗಳನ್ನು ನಿರ್ವಹಣೆ ಮಾಡಲು ಅಗತ್ಯವಾಗಿರುವುದು 342 ಕೋಟಿ ಮಾತ್ರ. ಇದು ರಾಜ್ಯ ಸರ್ಕಾರಕ್ಕೆ ಹೊರೆ ಆಗಬಾರದು. ಆರ್ಥಿಕ ವಿಷಯವನ್ನು ಹೊರತು ಪಡಿಸಿ ಶೈಕ್ಷಣಿಕ, ಸಾಮಾಜಿಕ ಮತ್ತು ರಾಜ್ಯದ ಪ್ರಗತಿಯ ದೃಷ್ಟಿಕೋನಗಳಿಂದಲೂ ಈ ವಿಷಯವನ್ನು ಗಂಭೀರವಾಗಿ ಪರಿಗಣಿಸಬೇಕಾಗಿದೆ. ರಾಜ್ಯದಲ್ಲಿ ಸುಮಾರು 68 ವಿವಿಗಳಿವೆ. ಇವುಗಳಲ್ಲಿ 27 ಖಾಸಗಿಯವು. ಸರ್ಕಾರಿ ವಿವಿ ಕೇವಲ 42 ಮಾತ್ರ. ಬೆಂಗಳೂರೊಂದರಲ್ಲೇ 17 ಖಾಸಗಿ ವಿವಿ ಇವೆ. ಈ ವಿವಿಗಳಿಂದ ಗ್ರಾಮೀಣ ಪ್ರದೇಶದ ವಿದ್ಯಾರ್ಥಿಗಳಿಗೆ, ಸಾಮಾಜಿಕ, ಆರ್ಥಿಕ, ಹಿಂದುಳಿದ ಪ್ರದೇಶದ ವಿದ್ಯಾರ್ಥಿಗಳಿಗೆ ಯಾವುದೇ ಪ್ರಯೋಜನವಿಲ್ಲ. ಹೀಗಾಗಿ ಸರ್ಕಾರ ಹೊಸ ವಿವಿ ಮುಚ್ಚುವ ನಿರ್ಧಾರ ಪುನರ್ ಪರಿಶೀಲಿಸಬೇಕೆಂದು ಮನವಿ ಮಾಡಿದರು. ಸುದ್ದಿಗೋಷ್ಠಿಯಲ್ಲಿ ಎಸ್.ಆರ್. ರಮೇಶ್, ಕೆ.ಪಿ.ವಾಸುದೇವ್ ಉಪಸ್ಥಿತರಿದ್ದರು.

ರಾಜ್ಯದ ವಿವಿಧೆಡೆ ಹಕ್ಕಿಜ್ವರ: ಮೈಸೂರು ಜಿಲ್ಲೆಯಲ್ಲಿ ತೀವ್ರ ಕಟ್ಟೆಚ್ಚರ

- ಕರ್ನಾಟಕ-ಕೇರಳ ಗಡಿ ಬಾವಲಿ ಚೆಕ್‌ಪೋಸ್ಟ್‌ನಲ್ಲಿ ತೀವ್ರ ತಪಾಸಣೆ
- ಕೋಳಿ ಸಾಕಾಣಿಕೆ ಕೇಂದ್ರ, ರೈತರಲ್ಲಿ ಜಾಗೃತಿ

ಮೈಸೂರು,ಮಾ.3(ಎಂಟಿವೈ)- ರಾಜ್ಯದ ವಿವಿಧೆಡೆ ಹಕ್ಕಿಜ್ವರ ಕಾಣಿಸಿಕೊಂಡಿರುವ ಹಿನ್ನೆಲೆಯಲ್ಲಿ ಮೈಸೂರು ಜಿಲ್ಲೆಯಲ್ಲಿ ಇದುವರೆಗೂ ಯಾವುದೇ ಪ್ರಕರಣ ವರದಿಯಾಗಿಲ್ಲದೇ ಇದ್ದರೂ ತೀವ್ರ ಕಟ್ಟೆಚ್ಚರ ವಹಿಸಲಾಗಿದೆ

ಜಿಲ್ಲೆಯಲ್ಲಿ ಆರೋಗ್ಯ ಇಲಾಖೆ, ಪಶುಸಂಗೋಪನಾ ಇಲಾಖೆ ಹಕ್ಕಿಜ್ವರ ಹರಡುವಿಕೆ ತಡೆಗೆ ಸೂಕ್ತ ಕ್ರಮ ಕೈಗೊಂಡಿದೆ. ಪ್ರತಿ ವರ್ಷದಂತೆ ಕೇರಳದಲ್ಲಿ ಹಕ್ಕಿಜ್ವರ ಭೀತಿ ಹೆಚ್ಚಾಗುತ್ತಿರುವ ಹಿನ್ನೆಲೆಯಲ್ಲಿ ಕರ್ನಾಟಕ-ಕೇರಳ ಗಡಿ ಹೆಚ್.ಡಿ.ಕೋಟೆ ತಾಲೂಕಿನ ಬಾವಲಿ ಚೆಕ್‌ಪೋಸ್ಟ್‌ನಲ್ಲಿ ಕೋಳಿ ಸಾಗಾಣಿಕೆ ವಾಹನಗಳ ತಪಾಸಣೆ ನಡೆಸಲಾಗುತ್ತಿದೆ. ಈಗಾಗಲೇ ಪಶುಸಂಗೋಪನಾ ಇಲಾಖೆ ಜಾಗೃತ ತಂಡ ರಚಿಸಿದ್ದು, ಕೋಳಿ ಸಾಕಣೆದಾರರಿಗೆ ಅರಿವು ಮೂಡಿಸುತ್ತಿದೆ. ಎಲ್ಲಾ ಕೋಳಿ ಸಾಕಣೆ ಕೇಂದ್ರಗಳು, ರೈತರ ಮನೆಗಳು, ಗ್ರಾಮಗಳಿಗೆ ಭೇಟಿ ನೀಡಿ ಕರಪತ್ರ ಹಂಚಿ ಮುನ್ನೆಚ್ಚರಿಕಾ ಕ್ರಮ ಕೈಗೊಳ್ಳುವಂತೆ ಜಾಗೃತಿ ಮೂಡಿಸಲಾಗುತ್ತಿದೆ.



ಕರ್ನಾಟಕ-ಕೇರಳ ಗಡಿ ಹೆಚ್.ಡಿ.ಕೋಟೆ ತಾಲೂಕಿನ ಬಾವಲಿ ಚೆಕ್‌ಪೋಸ್ಟ್‌ನಲ್ಲಿ ಕೋಳಿ ಸಾಗಾಣಿಕೆ ವಾಹನ ತಪಾಸಣೆಗೆ ನಿಯೋಜಿಸಿರುವ ಪಶುಸಂಗೋಪನೆ, ವೈದ್ಯಕೀಯ, ಅರಣ್ಯ ಹಾಗೂ ಪೊಲೀಸ್ ಸಿಬ್ಬಂದಿಗಳ ತಂಡ.

ಯಾವುದೇ ಪಕ್ಷಿ ಅಥವಾ ಕೋಳಿಗಳು ಅನುಮಾನಾಸ್ಪದವಾಗಿ ಮೃತಪಟ್ಟಿರುವುದು ಗಮನಕ್ಕೆ ಬಂದರೆ ಪಶುಸಂಗೋಪನಾ ಇಲಾಖೆಯ ಗಮನಕ್ಕೆ ತರುವಂತೆ ರೈತರಿಗೆ ಮಾಹಿತಿ ನೀಡಲಾಗುತ್ತಿದೆ. ಕೋಳಿ ಸಾಕಣೆ ಕೇಂದ್ರ ಮತ್ತು ಮಾಂಸ ಸಂಸ್ಕರಣೆ ಘಟಕಗಳಲ್ಲಿ ಕೆಲಸ ಮಾಡುವವರಿಗೆ ಹಕ್ಕಿಜ್ವರದ ಸೋಂಕು ತಗಲುವ ಸಾಧ್ಯತೆ ಇರುವುದರಿಂದ ಜಾಗೃತರಾಗಿರುವಂತೆ ತಿಳಿಸಲಾಗುತ್ತಿದೆ. ಕೋಳಿ ಸಾಗಣೆ ಮಾಡುವ ವಾಹನಗಳಿಗೆ ಔಷಧಿ ಸಿಂಪಡಿಸಿ ಶುಚಿಗೊಳಿಸಲು ಸೂಚನೆ ನೀಡಲಾಗಿದೆ.

ರೋಗದ ಲಕ್ಷಣಗಳು: ಮನುಷ್ಯರಲ್ಲಿ ಸಾಮಾನ್ಯ ಜ್ವರದ ಲಕ್ಷಣ ಕಾಣಿಸಿಕೊಳ್ಳುತ್ತವೆ. ತೀವ್ರ ಜ್ವರ, ಭೇದಿ, ಹೊಟ್ಟೆನೋವು, ಮೂಗು, ವಸಡಿನಲ್ಲಿ ರಕ್ತ ಸ್ರಾವ, ಚಳಿಯ ಅನುಭವ, ತಲೆ ನೋವು, ಮೈ-ಕೈ ನೋವು, ಕೆಮ್ಮು, ಉಸಿರಾಟ ತೊಂದರೆ, ಗಂಟಲು ನೋವು, ಕೆಂಗಣ್ಣು ಬಾಧಿಸುತ್ತದೆ. ಈ ಬಗ್ಗೆ ಜನರು ಎಚ್ಚರಿಕೆ ವಹಿಸಬೇಕು.

ಕೋಳಿಗಳಲ್ಲಿ ಸೋಂಕಿನ ಲಕ್ಷಣಗಳು ತಕ್ಷಣಕ್ಕೆ ಕಾಣಿಸಿಕೊಳ್ಳುವುದಿಲ್ಲ. ಅವು ಬಹುಬೇಗ ಹರಡುವುದರಿಂದ ರೋಗ ಪತ್ತೆ ಕಷ್ಟ. ಸಾಮಾನ್ಯವಾಗಿ ಸೋಂಕಿತ ಕೋಳಿಗಳು ಆಹಾರ ತಿನ್ನುವುದಿಲ್ಲ. ಮೊಟ್ಟೆ ಉತ್ಪಾದನೆ ಕಡಿಮೆಯಾಗುತ್ತದೆ. ಹೆಚ್ಚು ಓಡಾಡುವುದಿಲ್ಲ. ಕಣ್ಣುಗಳು ತೇವಗೊಂಡಿರುತ್ತವೆ. ರೆಕ್ಕೆಗಳು ಕೆದರಿರುತ್ತವೆ. ತಲೆ ಭಾಗ ಊದಿಕೊಳ್ಳುತ್ತದೆ. ಕಾಲಿನ ಚರ್ಮದ ಅಡಿಯಲ್ಲಿ ರಕ್ತಸ್ರಾವವೂ ಕಾಣಿಸಿಕೊಳ್ಳಬಹುದು. ದಿಢೀರ್ ಸಾವು ಸಂಭವಿಸುತ್ತದೆ.

ಹಕ್ಕಿ ಜ್ವರ ಹೇಗೆ ಹರಡುತ್ತದೆ: ಹಕ್ಕಿ ಜ್ವರದ ವೈರಸ್ ಪಕ್ಷಿಗಳಿಂದ ಪಕ್ಷಿಗಳಿಗೆ ಹರಡುತ್ತದೆ. ಪಕ್ಷಿಗಳು ವಲಸೆ ಹೋದಾಗ, ಗುಂಪಿನಲ್ಲಿ ಸೋಂಕಿತ ಪಕ್ಷಿ ಇದ್ದರೆ ಹೋದ ಸ್ಥಳದಲ್ಲಿರುವ ಎಲ್ಲಾ ಪಕ್ಷಿಗಳಿಗೂ ಸುಲಭವಾಗಿ ಹರಡುತ್ತದೆ. ಸೋಂಕಿತ ಕೋಳಿ ಅಥವಾ ಪಕ್ಷಿಗಳೊಂದಿಗೆ ನೇರ ಸಂಪರ್ಕಕ್ಕೆ ಬಂದ ಜನರು ಮತ್ತು ಪ್ರಾಣಿಗಳಿಗೂ ಸೋಂಕು ಹರಡುವ ಸಾಧ್ಯತೆ ಇದೆ. ಈ ವೈರಸ್ ತೇವ ಅಥವಾ ಒಣಗಿದ ಗೊಬ್ಬರದಲ್ಲಿ 8 ವಾರಗಳವರೆಗೂ ಜೀವಿಸುವ ಸಾಮರ್ಥ್ಯ ಹೊಂದಿದೆ. ಸೋಂಕಿತ ಪಕ್ಷಿ, ಪ್ರಾಣಿಗಳ ನೇರ ಸಂಪರ್ಕಕ್ಕೆ ಬಂದರೆ, ಕೈಯನ್ನು ಸಾಬೂನಿನಿಂದ ತೊಳೆದು ಸ್ವಚ್ಛಗೊಳಿಸುವುದರ ಮೂಲಕ ಈ ವೈರಸ್ ಮನುಷ್ಯನಿಗೆ ಹರಡುವುದನ್ನು ತಡೆಯಬಹುದು.

ಖರ್ಗೆ ಮಾತಿಗೆ ನಾನು ಬದ್ಧನಾಗಿದ್ದೇನೆ: ಡಿಕೆಶಿ



ಬೆಂಗಳೂರು: ಅಧಿಕಾರ ಹಂಚಿಕೆ ವಿಚಾರವಾಗಿ ಚರ್ಚೆ ಮಾಡದಂತೆ ಎಐಸಿಸಿ ಅಧ್ಯಕ್ಷರಾದ ಮಲ್ಲಿಕಾರ್ಜುನ ಖರ್ಗೆ ಅವರು ಸೂಚನೆ ನೀಡಿದ್ದು, ನಾನು ಅವರ ಮಾತಿಗೆ ಬದ್ಧನಾಗಿದ್ದೇನೆ ಎಂದು ಡಿಸಿಎಂ ಡಿ.ಕೆ ಶಿವಕುಮಾರ್ ತಿಳಿಸಿದರು. ವೀರಪ್ಪ ಮೊಯ್ಲಿ ಅವರು ತಮ್ಮ ಅಭಿಪ್ರಾಯ ಹೇಳಿದ್ದಾರೆ. ನಾನು ಅದರ ಬಗ್ಗೆ ಚರ್ಚೆ ಮಾಡುವುದಿಲ್ಲ. ನಾನು ಕಾರ್ಯಕರ್ತರ ಸಭೆ ಮಾಡಲು ಹೋಗಿದ್ದೆ. ಮೊಯ್ಲಿ ಅವರ ಹೇಳಿಕೆಗೆ ನಾನು ಪ್ರತಿಕ್ರಿಯೆ ಕೊಡಲ್ಲ. ಮಲ್ಲಿಕಾರ್ಜುನ ಖರ್ಗೆ ಅವರು ಮಾತನಾಡಬಾರದು ಅಂತ ಹೇಳಿದ್ದಾರೆ. ನಾನು ಅದಕ್ಕೆ ಬದ್ಧವಾಗಿದ್ದೇನೆ ಅಂತ ತಿಳಿಸಿದರು.

ವಿವಿಧೆಡೆ ಇಂದು ವಿದ್ಯುತ್ ವ್ಯತ್ಯಯ

ಮೈಸೂರು, ಮಾ.3-ಮಾರ್ಚ್ 4 ರಂದು ಬೆಳಗ್ಗೆ 10 ಗಂಟೆಯಿಂದ ಸಂಜೆ 06 ಗಂಟೆಯವರೆಗೆ ಜನತಾನಗರ, ಬೋಗಾದಿ 2ನೇ ಹಂತದ North & South, ಗಂಗೋತ್ರಿ ಕ್ಯಾಂಪಸ್, ಗಂಗೋತ್ರಿ ಕ್ವಾಟ್ರಸ್, ದಾಸನಕೊಪ್ಪಲು, ಮರಟಿಕ್ಯಾತನಹಳ್ಳಿ, ರೂಪನಗರ, ದೀಪಾನಗರ, ಬೋಗಾದಿ ಗ್ರಾಮ, ಪ್ರೀತಿ ಲೇಔಟ್, ಆರ್.ಎಂ.ಪಿ ಲೇಔಟ್, ವಿಜಯನಗರ 3ನೇ ಹಂತ, ಹಿನಕಲ್, ವಿಜಯನಗರ 4ನೇ ಹಂತ, ವಿಜಯಶ್ರೀಪುರ, ಸುಧಾ ಲೇಔಟ್, ರೈಲ್ವೆ ಲೇಔಟ್, ಎಸ್.ಬಿ.ಎಂ ಲೇಔಟ್, ವಾಗ್ದೇವಿನಗರ, ಸಿ.ಎಫ್.ಟಿ.ಆರ್.ಐ ಲೇಔಟ್, ಯುನಿವರ್ಸಿಟಿ ಹಾಗೂ ಸುತ್ತಮುತ್ತಲಿನ ಪ್ರದೇಶಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದೆ ಎಂದು ಚೆಸ್ಕಾಂ ಪ್ರಕಟಣೆ ತಿಳಿಸಿದೆ.


ಮೈಸೂರು ನಗರ ಬಿ.ಜೆ.ಪಿ ಯುವ ಮೋರ್ಚಾ ಅಧ್ಯಕ್ಷರಾದ
ಆರ್. ರಾಕೇಶ್‌ಗೌಡ
ರವರಿಗೆ
ಹುಟ್ಟು ಹಬ್ಬದ ಶುಭಾಶಯಗಳು
ಕನ್ನೇಗೌಡ ಟೈಗರ್ಸ್
ಕೆ.ಜಿ.ಕೊಪ್ಪಲ್, ಜಯನಗರ, ಮೈಸೂರು
ಶ್ರೀಯುತ
ಆರ್. ರಾಕೇಶ್ ಗೌಡ
ಅಧ್ಯಕ್ಷರು, ಮೈಸೂರು ನಗರ ಬಿ.ಜೆ.ಪಿ ಯುವ ಮೋರ್ಚಾ
VISMAYA